ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಫೆಬ್ರವರಿ 10 ಮಂಗಳವಾರ 2026

46

ಸಂಪುಟ: 46 | ಸಂಚಿಕೆ: 292 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಬೋಧ್‌ಗಯಾ ಬೌದ್ಧರ ವಶಕ್ಕೆ ನೀಡುವಂತೆ ಆಗ್ರಹಿಸಿ ದೆಹಲಿಯಲ್ಲಿ ಧರಣಿ: ರಾಜ್ಯದಿಂದ 25 ಸಾವಿರಕ್ಕೂ ಅಧಿಕ ಮಂದಿ ಭಾಗಿ

ದೆಹಲಿಗೆ ತೆರಳಲಾಗದವರು ಫೆ.12ರಂದು ಮೈಸೂರು ಪಾದಯಾತ್ರೆಯಲ್ಲಿ ಪಾಲ್ಗೊಳ್ಳಬಹುದು

ಮೈಸೂರು,ಫೆ.9(ಎಂಟಿವೈ)-ಬಿಹಾರದಲ್ಲಿರುವ ಬೋಧ್‌ಗಯಾ ಬೌದ್ಧರ ಸುಪರ್ದಿಗೆ ಸೇರಬೇಕೆಂದು ಆಗ್ರಹಿಸಿ ಫೆ.12ರಿಂದ 14ರವರೆಗೆ ದೆಹಲಿಯ ಜಂತರ್ ಮಂತರ್ ಹಾಗೂ ರಾಮಲೀಲಾ ಮೈದಾನದಲ್ಲಿ ನಡೆಯಲಿರುವ ಬೃಹತ್ ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲು ಮೈಸೂರಿನಿಂದ ಸಾವಿರಾರು ಬೌದ್ಧ ಧರ್ಮದ ಅನುಯಾಯಿಗಳು ಪ್ರಯಾಣ ಬೆಳೆಸಿದ್ದು, ದೆಹಲಿಗೆ ಹೋಗಲು ಸಾಧ್ಯವಾಗದವರು ದೆಹಲಿ ಪ್ರತಿಭಟನೆ ಬೆಂಬಲಿಸಿ ಫೆ.12ರಂದು ಬೆಳಗ್ಗೆ ಮೈಸೂರಲ್ಲಿ ಪಾದಯಾತ್ರೆ ನಡೆಸಲಿದ್ದಾರೆ ಎಂದು ಮಾಜಿ ಮೇಯರ್ ಪುರುಷೋತ್ತಮ್ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೆಹಲಿಯಲ್ಲಿ ನಡೆಯುವ ಹೋರಾಟದಲ್ಲಿ ಪಾಲ್ಗೊಳ್ಳಲು ಈಗಾಗಲೇ ಬೌದ್ಧ ಧರ್ಮದ ಅನುಯಾಯಿಗಳು ಪ್ರಯಾಣ ಬೆಳೆಸಿದ್ದಾರೆ. ಕರ್ನಾಟಕದಿಂದ 25 ಸಾವಿರಕ್ಕೂ ಹೆಚ್ಚು ಮಂದಿ ಪಾಲ್ಗೊಳ್ಳುತ್ತಿದ್ದಾರೆ. ದೆಹಲಿಗೆ ಬರಲು ಸಾಧ್ಯವಾಗದೆ ಇರುವ ಸಾವಿರಾರು ಮಂದಿ ಫೆ.12ರಂದು ಬೆಳಗ್ಗೆ 8 ಗಂಟೆಗೆ ಮೈಸೂರಿನ ಪುರಭವನದ ಆವರಣದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆ ಮುಂಭಾಗದಿಂದ ಅಶೋಕ ವೃತ್ತ (ಬಲ್ಲಾಳ್ ವೃತ್ತ)ದ ಬಳಿಯಿರುವ ವಿಶ್ವಮೈತ್ರಿ ಬುದ್ಧ ವಿಹಾರದವರೆಗೆ ಪಾದಯಾತ್ರೆ ನಡೆಸಲಿದ್ದಾರೆ ಎಂದರು.

ಚರಿತ್ರೆ ಅನಾವರಣದ ಗೀತೆ ರಚನೆ: ಬೋಧ್‌ಗಯಾ ದುರಂತ ಚರಿತ್ರೆ ಕುರಿತ ಧಮ್ಮ ಜಾಗೃತಿ ಗೀತೆಗಳನ್ನು ಭಾರತೀಯ ವಿದ್ಯಾರ್ಥಿ ಪರಿಷತ್, ಪದ್ಮಪಾಣಿ ಲಲಿತ ಕಲಾ ಅಕಾಡೆಮಿಗಳ ವತಿಯಿಂದ ಹೊರ ತಂದಿದ್ದು, ಇದನ್ನು ಯೂಟ್ಯೂಬ್‌ನಲ್ಲಿ ಅಪ್‌ಲೋಡ್ ಮಾಡಲಾಗಿದೆ. ಸೋಸಲೆ ಗಂಗಾಧರ್, ಶಿವಕುಮಾರ್ ಇವುಗಳನ್ನು ರಚಿಸಿದ್ದಾರೆ. ಪದ್ಮಪಾಣಿ ಮ್ಯೂಸಿಕ್ ಹೆಸರಿನಲ್ಲಿ ಯೂಟ್ಯೂಬ್‌ನಲ್ಲಿ ಹಾಡುಗಳನ್ನು ಅಪ್‌ಲೋಡ್ ಮಾಡಲಾಗಿದೆ ಎಂದು ತಿಳಿಸಿದರು.



ಪುರುಷೋತ್ತಮ್

ದೇವಸ್ಥಾನ ಹಿಂದೂಗಳ ಕೈಯ್ಯಲ್ಲಿ, ಮಸೀದಿ ಮುಸ್ಲಿಮರ ಕೈಯ್ಯಲ್ಲಿ, ಚರ್ಚ್ ಕ್ರೈಸ್ತರ ಕೈಯ್ಯಲ್ಲಿ ಇವೆ. ಆದರೆ ಬೋಧ್‌ಗಯಾ ಮಾತ್ರ ಬೌದ್ಧರ ಕೈಗೆ ದೊರಕದಂತೆ ನೋಡಿಕೊಳ್ಳಲಾಗಿದೆ. ಅದು ಮನುವಾದಿಗಳ ಹಿಡಿತದಲ್ಲಿದೆ. ಹೀಗಾಗಿ ದೆಹಲಿಯಲ್ಲಿ ಇದನ್ನು ವಿರೋಧಿಸಿ ಹಾಗೂ ಬೌದ್ಧರಿಗೇ ಬೋಧ್‌ಗಯಾ ವಹಿಸಬೇಕೆಂದು ಆಗ್ರಹಿಸಿ ಹೋರಾಟ ನಡೆಯುತ್ತಿದೆ ಎಂದರು. ಗೋಷ್ಠಿಯಲ್ಲಿ ಸೋಸಲೆ ಸಿದ್ದರಾಜು, ಸೋಸಲೆ ಗಂಗಾಧರ್, ಶಿವಕುಮಾರ್, ಜಯಲಕ್ಷ್ಮೀ ಇದ್ದರು.

ಕೆಎಸ್‌ಓಯು ಕೇಂದ್ರದಲ್ಲಿ ಐಎಎಸ್, ಕೆಎಎಸ್ ಪರೀಕ್ಷೆ ತರಬೇತಿ ಶಿಬಿರಕ್ಕೆ ಚಾಲನೆ

ಸಮಗ್ರ ಅಧ್ಯಯನವೇ ಸಾಧನೆಯ ಅಸ್ತ್ರ

ಮೈಸೂರು ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ ಕಿವಿಮಾತು

ಮೈಸೂರು, ಫೆ.9- ಯುಪಿಎಸ್‌ಸಿ ಮತ್ತು ಕೆಪಿಎಸ್‌ಸಿ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ವಿಯಾಗಲು ಸಮಗ್ರ ಅಧ್ಯಯನ ಅಗತ್ಯ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಸಲಹೆ ನೀಡಿದರು.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ(ಕೆಎಸ್‌ಓಯು)ದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ ಏರ್ಪಡಿಸಿರುವ ಐಎಎಸ್ ಮತ್ತು ಕೆಎಎಸ್ ಪರೀಕ್ಷೆಗಳ ತರಬೇತಿ ಶಿಬಿರವನ್ನು ಸೋಮವಾರ ಉದ್ಘಾಟಿಸಿ ಮಾತನಾಡಿದ ಅವರು, ಯುಪಿಎಸ್‌ಸಿ ಹಾಗೂ ಕೆಪಿಎಸ್‌ಸಿ ಪರೀಕ್ಷೆಗಳಂತಹ ಕಠಿಣ ಸವಾಲುಗಳನ್ನು ಎದುರಿಸಲು ಒಂದೇ ವಿಷಯದ ಕಡೆ ಗಮನ ಹರಿಸದೆ, ಸಮಗ್ರ ಅಧ್ಯಯನಕ್ಕೆ ಒತ್ತು ನೀಡಿ ಎಂದು ಕಿವಿಮಾತು ಹೇಳಿದರು.

ಇಂದಿನ ಡಿಜಿಟಲ್ ಯುಗದಲ್ಲಿ ಇಂಟರ್‌ನೆಟ್ ಮೂಲಕ ಬೆರಳಂಚಿನಲ್ಲೇ ಎಲ್ಲಾ ಮಾಹಿತಿ ಸುಲಭವಾಗಿ ಲಭ್ಯವಾಗುತ್ತವೆ. ಆದರೂ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಸಾಧಿಸಲು ಕಠಿಣ ಪರಿಶ್ರಮ, ತಾಳ್ಮೆ ಮತ್ತು ನಿರಂತರ ಪ್ರಯತ್ನ ಬಹಳ ಮುಖ್ಯ. ಎಷ್ಟೇ ಬುದ್ಧಿವಂತಿಕೆ ಇದ್ದರೂ ನಿರಂತರ ಓದು ಇರಲೇಬೇಕು. ಯುವ ಜನರು ಮನಸ್ಸಿನಲ್ಲಿ ಸಂಕಲ್ಪ ಮಾಡಿ ಕೊಂಡು ಪ್ರಯತ್ನ ಮುಂದುವರೆಸಿದರೆ ಯಾವ ಹುದ್ದೆಯನ್ನಾದರೂ ಪಡೆಯಲು ಸಾಧ್ಯವಿದೆ. ಯಾವುದೇ ಕಾರಣಕ್ಕೂ ನಿಮ್ಮ ಅಮೂಲ್ಯವಾದ ಸಮಯವನ್ನು ವ್ಯರ್ಥ ಮಾಡಿಕೊಳ್ಳಬೇಡಿ ಎಂದು ಕಿವಿಮಾತು ಹೇಳಿದರು.

ಪ್ರಸ್ತುತದ ಸ್ಪರ್ಧಾತ್ಮಕ ಯುಗದಲ್ಲಿ ಒಂದು ಹುದ್ದೆಗೆ ನೂರಾರು-ಸಾವಿರಾರು ಅಭ್ಯರ್ಥಿಗಳು ಅರ್ಜಿ ಹಾಕುತ್ತಾರೆ. ಒಳಮೀಸಲಾತಿ ಗೊಂದಲಗಳು ಬಹುತೇಕ ಪರಿಹಾರವಾಗಿದ್ದು, ರಾಜ್ಯ ಸರ್ಕಾರ ಹಲವು ಪರೀಕ್ಷೆಗಳನ್ನು ನಡೆಸಲು ತೀರ್ಮಾನಿಸಿದೆ. ಅಭ್ಯರ್ಥಿಗಳು ಸಾಮಾಜಿಕ ಮಾಧ್ಯಮ ಮತ್ತು ಮೊಬೈಲ್ ಬಳಕೆ ಕಡಿಮೆ ಮಾಡಿ, ಓದಿನತ್ತ ಹೆಚ್ಚು ಗಮನ ಹರಿಸಬೇಕು. ಪ್ರಭಾವಿಗಳು ಅಥವಾ ಹಣವಂತರಿಗೆ ಮಾತ್ರ ಸರ್ಕಾರಿ ಕೆಲಸ ಸಿಗುತ್ತದೆ ಎಂಬ ನಕಾರಾತ್ಮಕ ಚಿಂತನೆ ಇರಬಾರದು. ಕಡು ಬಡತನವಿದ್ದರೂ ಯುಪಿಎಸ್‌ಸಿ ಪರೀಕ್ಷೆಯಲ್ಲಿ ಯಶಸ್ವಿಯಾಗಿ ಉನ್ನತ ಹುದ್ದೆಯಲ್ಲಿರುವವರಿಂದ ಪ್ರೇರಣೆ ಪಡೆಯಬೇಕು ಎಂದು ತಿಳಿಸಿದರು.

ಆಡಳಿತ ತರಬೇತಿ ಸಂಸ್ಥೆಯ ಜಂಟಿ ನಿರ್ದೇಶಕಿ ಸಾಧನಾ ಎ.ಪೋಟೆ ಮಾತನಾಡಿ, ಯುಪಿಎಸ್‌ಸಿ ಅಂತಹ ಪರೀಕ್ಷೆಗಳಲ್ಲಿ ಕನ್ನಡದ ಯುವಕ-ಯುವತಿಯರು ಹೆಚ್ಚು ಸಂಖ್ಯೆಯಲ್ಲಿ ಪಾಲ್ಗೊಂಡು, ಉತ್ತಮ ರ‍್ಯಾಂಕ್ ಗಳಿಸುವ ಮೂಲಕ ರಾಜ್ಯದ ಹಿರಿಮೆ ಹೆಚ್ಚಿಸಬೇಕು. ಸಾರ್ವಜನಿಕ ವಲಯ, ಖಾಸಗಿ ವಲಯ ಮತ್ತು ಸ್ವಯಂ ಉದ್ಯೋಗಗಳು ಯುವಕರನ್ನು ಕೈಬೀಸಿ ಕರೆಯುತ್ತಿವೆ. ಆದರೂ ಸರ್ಕಾರಿ ಉದ್ಯೋಗದಲ್ಲಿ ಸೇವಾ ಭದ್ರತೆ, ಉತ್ತಮ ವೇತನ, ಭತ್ಯೆಗಳು, ವೈದ್ಯಕೀಯ ಸೌಲಭ್ಯಗಳು ಸಿಗುತ್ತವೆ. ಪಿಂಚಣಿ ಸೌಲಭ್ಯದ ಜೊತೆಗೆ ಕುಟುಂಬಕ್ಕೂ ಜೀವನ ಭದ್ರತೆ ಸಿಗಲಿದೆ ಎಂದರು. ಮುಕ್ತ ವಿವಿ ಪರೀಕ್ಷಾಂಗ ಕುಲಸಚಿವ ಪ್ರೊ.ಸಿ.ಎಸ್. ಆನಂದ್ ಕುಮಾರ್, ಹಣಕಾಸು ಅಧಿಕಾರಿ ಡಾ.ಎಸ್. ನಿರಂಜನ್‌ರಾಜ್, ಅಧ್ಯಯನ ಕೇಂದ್ರದ ಡೀನ್ ಡಾ.ಎನ್.ಆರ್.ಚಂದ್ರೇಗೌಡ, ಸಂಯೋಜನಾಧಿಕಾರಿ ಜೈನಹಳ್ಳಿ ಸತ್ಯನಾರಾಯಣಗೌಡ, ಸಿದ್ದೇಶ್ ಹೊನ್ನೂರ್, ಗಣೇಶ್ ಕೆ.ಜಿ.ಕೊಪ್ಪಲ್ ಮತ್ತಿತರರಿದ್ದರು.



ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ ಏರ್ಪಡಿಸಿರುವ ಐಎಎಸ್ ಮತ್ತು ಕೆಎಎಸ್ ಪರೀಕ್ಷೆಗಳ ತರಬೇತಿ ಶಿಬಿರವನ್ನು ಗಿಡಕ್ಕೆ ನೀರೆರೆಯುವ ಮೂಲಕ ಗಣ್ಯರು ಸೋಮವಾರ ಉದ್ಘಾಟಿಸಿದರು.

> ಮೊದಲಿಗೆ ನಿಮ್ಮ ಮೇಲೆ ನಂಬಿಕೆಯಿಡಿ. ನೀವು ಯಾವ ಹುದ್ದೆ ಪಡೆಯಬೇಕೆಂಬ ಗುರಿ ಹೊಂದಿದ್ದೀರೋ ಅದರತ್ತ ಮಾತ್ರ ಹೆಚ್ಚು ಗಮನ ಹರಿಸಿ. ಇಲ್ಲಿ ತರಬೇತಿ ಪಡೆದವರು ಪರೀಕ್ಷೆಗಳಲ್ಲಿ ಯಶಸ್ವಿಯಾಗಬೇಕು ಎಂಬುದೇ ನಮ್ಮ ವಿವಿಯ ಪ್ರಮುಖ ಆಶಯ.
>
> -ಪ್ರೊ.ಶರಣಪ್ಪ ವಿ.ಹಲಸೆ, ಕುಲಪತಿ, ಕರ್ನಾಟಕ ರಾಜ್ಯ ಮುಕ್ತ ವಿವಿ

ಯಾತ್ರಿಕರಿಂದ ಸ್ವಚ್ಛತೆಗೆ ಧಕ್ಕೆ ಆಗದಂತೆ ಕ್ರಮಕ್ಕೆ ಮನವಿ

ಮೈಸೂರು: ಶಿವರಾತ್ರಿ ಪಾದಯಾತ್ರೆ ವೇಳೆ ಯಾತ್ರಿಕರಿಂದ ಸ್ವಚ್ಛತೆಗೆ ಧಕ್ಕೆ ಆಗದಂತೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸಾಮಾಜಿಕ ಹೋರಾಟಗಾರ ವಿಕ್ರಮ ಅಯ್ಯಂಗಾರ್ ಮನವಿ ಮಾಡಿದ್ದಾರೆ.

ಶಿವರಾತ್ರಿ ಸಮಯದಲ್ಲಿ ಧರ್ಮಸ್ಥಳಕ್ಕೆ ಸಾವಿರಾರು ಸಂಖ್ಯೆಯಲ್ಲಿ ಯಾತ್ರಿಕರು ಸಾಗುತ್ತಾರೆ. ಈ ದಾರಿಯಲ್ಲಿ ಅನೇಕ ದಾನಿಗಳು ಊಟ, ತಿಂಡಿ, ನೀರು, ಪಾನೀಯ ಇತ್ಯಾದಿಗಳ ವ್ಯವಸ್ಥೆಯನ್ನು ಮಾಡುವುದು ಸಹಜ. ಅದರಂತೆ ಸ್ವಚ್ಛತೆ ಕಾಪಾಡಬೇಕು.

ಪಾದಯಾತ್ರೆ ವೇಳೆ ಆಹಾರ ಪದಾರ್ಥ ಸ್ವೀಕರಿಸಿದ ನಂತರ ಕೆಲವರು ದಾರಿಯಲ್ಲೇ ನೀರಿನ ಬಾಟಲ್, ಪ್ಲೇಟ್, ಲೋಟ ಇತ್ಯಾದಿಗಳನ್ನು ಬಿಸಾಡದಂತೆ ತಿಳುವಳಿಕೆ ಹೇಳಬೇಕು. ಜಿಲ್ಲಾಡಳಿತ ಯಾತ್ರಿಕರು ಸಾಗುವ ಅಲ್ಲಲ್ಲಿ ಒಂದು ಕಸದ ತೊಟ್ಟಿ ವ್ಯವಸ್ಥೆ ಮಾಡಬೇಕು ಎಂದು ಮನವಿ ಮಾಡಿದರು.

ಮಾರ್ಗಮಧ್ಯೆ ಆಯಾ ಗ್ರಾಮ ಪಂಚಾಯಿತಿ ಆಡಳಿತವು ಕಸದ ತೊಟ್ಟಿಗಳನ್ನು ನಿರ್ಮಿಸಿ ಕಸ ಶೇಖರಿಸಬೇಕು. ಈ ನಿಟ್ಟಿನಲ್ಲಿ ಹೋಂಗಾರ್ಡ್ ಸಿಬ್ಬಂದಿ ನೇಮಿಸಬೇಕು. ಪಾದಯಾತ್ರಿಗಳು, ದಾನಿಗಳು ಸ್ವಚ್ಛತೆ ಪಾಲಿಸುವಂತೆ ಸಾರ್ವಜನಿಕರಿಗೆ ಮತ್ತು ದಾನಿಗಳಲ್ಲಿ ಅರಿವು ಮೂಡಿಸಲು ಜಿಲ್ಲಾಡಳಿತ ಆದೇಶ ಹೊರಡಿಸುವ ಮೂಲಕ ಗ್ರಾಪಂಗಳಿಗೆ ನಿರ್ದೇಶನ ನೀಡಿ, ಪರಿಸರದ ಸ್ವಚ್ಛತೆ ಕಾಪಾಡಬೇಕು ಎಂದರು.

ಕ್ಯಾನ್ಸರ್ ತಪಾಸಣಾ ಶಿಬಿರ

ಮೈಸೂರು: ಮೈಸೂರಿನ ಪ್ರೀತಿ ಕ್ಯಾನ್ಸರ್ ಸೆಂಟರ್‌ನಲ್ಲಿ ಫೆ.12ರಂದು ಬೆಳಗ್ಗೆ 10 ರಿಂದ ರಾತ್ರಿ 8 ರವರೆಗೆ ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ದೂ. 0821-4259259 ಸಂಪರ್ಕಿಸಬಹುದು.

ಎಸ್‌ಬಿಎಂ ಮಂಜುಗೆ ಅಭಿನಂದನೆ



ನೂತನ ಜೆಡಿಎಸ್ ನಗರಾಧ್ಯಕ್ಷ ಎಸ್.ಬಿ.ಎಂ. ಮಂಜು ಅವರನ್ನು ಬಿಜೆಪಿ ಮುಖಂಡ ಮೋಹಿತ್‌ಗೌಡ, ಜೆಡಿಎಸ್ ಮುಖಂಡರಾದ ವಿನಯ್‌ಗೌಡ, ದೀಪು ರಾಮೇಗೌಡ, ವಿಜಯ್, ಅಭಿಷೇಕ್‌ಗೌಡ, ಅರ್ಜುನ್ ಅಭಿನಂದಿಸಿದರು.

ಎಸ್‌ಐಆರ್: ಯಾರಿಗೂ ಅಡ್ಡಿಪಡಿಸಲು ಬಿಡಲ್ಲ

ರಾಜ್ಯಗಳಿಗೆ ಸುಪ್ರೀಂಕೋರ್ಟ್ ಎಚ್ಚರಿಕೆ

ನವದೆಹಲಿ: ರಾಜ್ಯಗಳಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಪೂರ್ಣಗೊಳಿಸಲು ಯಾರಿಗೂ ಅಡ್ಡಿಪಡಿಸಲು ಅವಕಾಶ ನೀಡುವುದಿಲ್ಲ ಎಂದು ಸುಪ್ರೀಂಕೋರ್ಟ್ ತಿಳಿಸಿದೆ.

ಮತದಾರರಿಗೆ ನೀಡಿದ್ದ ನೋಟಿಸ್ ಹರಿದು ಹಾಕಿದ ಪ್ರಕರಣದ ಕುರಿತು ಪ್ರಮಾಣಪತ್ರ ಸಲ್ಲಿಸುವಂತೆ ಪಶ್ಚಿಮ ಬಂಗಾಳ ಡಿಜಿಪಿಗೂ ಇದೇ ಸಂದರ್ಭದಲ್ಲಿ ನಿರ್ದೇಶನ ನೀಡಿದೆ.

ಮತದಾರರನ್ನು ಸಾಮೂಹಿಕವಾಗಿ ಹೊರಗಿಡುತ್ತಿರುವ ಕುರಿತು ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರ ಕಳವಳದ ನಡುವೆಯೇ, ಸುಪ್ರೀಂಕೋರ್ಟ್ ಈ ಎಚ್ಚರಿಕೆ ನೀಡಿದೆ.

ಈ ವಿಷಯದಲ್ಲಿ ಯಾವುದೇ ಸ್ಪಷ್ಟನೆ ಅಗತ್ಯವಿದ್ದರೆ, ಈ ಕುರಿತು ಆದೇಶವನ್ನು ಹೊರಡಿಸಲಾಗುತ್ತದೆ ಎಂದು ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾ.ಜಾಯ್‌ಮಾಲ್ಯ ಬಾಗ್ಚಿ, ನ್ಯಾ.ಅಂಜಾರಿಯಾ ಅವರನ್ನೊಳಗೊಂಡ ಪೀಠವು ಸೋಮವಾರ ತಿಳಿಸಿದೆ.

ಎಸ್‌ಐಆರ್ ಪ್ರಕ್ರಿಯೆಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಹಾಗೂ ಇತರರು ಸಲ್ಲಿಸಿರುವ ಅರ್ಜಿಗಳ ವಿಚಾರಣೆ ನಡೆಸಿದ ಪೀಠವು, ಎಸ್‌ಐಆರ್ ಪ್ರಕ್ರಿಯೆಯಲ್ಲಿ ಯಾರಿಗೂ ಅಡಚಣೆ ಉಂಟು ಮಾಡಲು ನಾವು ಅವಕಾಶ ನೀಡುವುದಿಲ್ಲ. ಈ ವಿಚಾರದಲ್ಲಿ ರಾಜ್ಯಗಳಿಗೂ ಸ್ಪಷ್ಟಪಡಿಸುತ್ತಿದ್ದೇವೆ ಎಂದು ತಿಳಿಸಿತು.

ಕೆಲವು ದುಷ್ಕರ್ಮಿಗಳು ನಮ್ಮ ನೋಟಿಸ್‌ಗಳನ್ನು ಹರಿದುಹಾಕಿದ್ದಾರೆ. ಇದುವರೆಗೂ ಯಾವುದೇ ಎಫ್‌ಐಆರ್ ಕೂಡ ದಾಖಲಾಗಿಲ್ಲ ಎಂದು ಚುನಾವಣಾ ಆಯೋಗವು ಸಲ್ಲಿಸಿದ ಪ್ರಮಾಣಪತ್ರವನ್ನು ಗಂಭೀರವಾಗಿ ಪರಿಗಣಿಸಿದ ಸುಪ್ರೀಂ ಕೋರ್ಟ್, ಈ ವಿಚಾರದ ಕುರಿತು ಪ್ರಮಾಣ ಪತ್ರ ಸಲ್ಲಿಸಬೇಕು ಎಂದು ಪಶ್ಚಿಮ ಬಂಗಾಳದ ಡಿಜಿಪಿಗೆ ಸೂಚನೆ ನೀಡಿದೆ.



ಈ ವಿಚಾರದಲ್ಲಿ ರಾಜ್ಯ ಸರ್ಕಾರದ ಯಾವುದೇ ಪಾತ್ರವಿಲ್ಲ ಎಂದು ರಾಜ್ಯದ ಪರ ಹಾಜರಾದ ವಕೀಲರು ತಿಳಿಸಿದರು.

ದೇಶದ ಎಲ್ಲಾ ರಾಜ್ಯಗಳಿಗೂ ಭಾರತದ ಸಂವಿಧಾನವು ಅನ್ವಯವಾಗುತ್ತದೆ ಎಂಬ ಸಂದೇಶ ತಲುಪಬೇಕು ಎಂದು ಕೇಂದ್ರ ಸರ್ಕಾರದ ಪರ ಹಾಜರಾದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರು ಪೀಠದ ಗಮನಸೆಳೆದರು.

ಇಡೀ ಪ್ರಕ್ರಿಯೆಯನ್ನು ಸರಾಗವಾಗಿ ನಡೆಯಲು ಜಿಲ್ಲಾಧಿಕಾರಿಗಳು ನಿಗಾ ವಹಿಸುವ ಜೊತೆಗೆ ಜಿಲ್ಲೆಗಳ ವ್ಯಾಪ್ತಿಯಲ್ಲಿ ಕಾನೂನು- ಸುವ್ಯವಸ್ಥೆ ಸಮಸ್ಯೆ ಉಂಟಾಗದಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಕ್ರಮ ವಹಿಸಬೇಕು ಎಂದು ನ್ಯಾಯಪೀಠ ಸೂಚನೆ ನೀಡಿದೆ.

ವಿಚಾರಣೆ ವೇಳೆ ಮಮತಾ ಬ್ಯಾನರ್ಜಿ ಪರ ಹಾಜರಾದ ಶ್ಯಾಮ್ ದಿವಾನ್ ವಾದ ಆಲಿಸಿದ ನ್ಯಾಯಪೀಠ, ಎಸ್‌ಐಆರ್ ಪ್ರಕ್ರಿಯೆಯಲ್ಲಿ ಮೈಕ್ರೋ ಅಬ್ಸರ್ವರ್ ನೇಮಕಾತಿ ಹಾಗೂ ಮತದಾರರನ್ನು ಸಾಮೂಹಿಕವಾಗಿ ಹೊರಗಿಡುವಿಕೆ ಕುರಿತು ಆತಂಕ ವ್ಯಕ್ತಪಡಿಸಿದರು. ಸಾಮೂಹಿಕವಾಗಿ ತೆಗೆದು ಹಾಕುವುದನ್ನು ನಾವು ಬಯಸುವುದಿಲ್ಲ ದಿವಾನ್ ಸ್ಪಷ್ಟಪಡಿಸಿದರು.

ನಿಯೋಜನೆ ಆಯೋಗವೇ ನಿರ್ಧರಿಸಲಿ: ಎಸ್‌ಐಆರ್‌ಗೆ 8505 'ಬಿ' ಗ್ರೂಪ್ ಅಧಿಕಾರಿಗಳನ್ನು ನಿಯೋಜಿಸುವುದಾಗಿ ಪಶ್ಚಿಮ ಬಂಗಾಳ ಸರ್ಕಾರ ತಿಳಿಸಿದೆ. ಇವರಿಗೆ ತರಬೇತಿ ನೀಡಿ ಎಸ್‌ಐಆರ್ ಪ್ರಕ್ರಿಯೆಯಲ್ಲಿ ತೊಡಗಿಸಿಕೊಳ್ಳಬಹುದು ಉದ್ಯೋಗ ಹಾಗೂ ಕೆಲಸದ ನಿಯೋಜನೆಯನ್ನು ಚುನಾವಣಾ ಆಯೋಗವೇ ನಿರ್ಧರಿಸಲಿದೆ. ಎಸ್‌ಐಆರ್‌ನಿಂದ ಸಮಸ್ಯೆ ಎದುರಿಸಿದ ವ್ಯಕ್ತಿಗಳು ಸಲ್ಲಿಸುವ ದಾಖಲೆಗಳ ಪರಿಶೀಲನೆಗೆ ಫೆಬ್ರುವರಿ 14ರವರೆಗೆ ವಿಧಿಸಿದ ಗಡುವನ್ನು ಒಂದು ವಾರ ವಿಸ್ತರಿಸಿದೆ. ಈ ಕುರಿತು ಮತದಾರರ ನೋಂದಣಾಧಿಕಾರಿಗಳು (ಇಆರ್‌ಓ) ಸೂಕ್ತ ನಿರ್ಧಾರ ತೆಗೆದುಕೊಳ್ಳಬೇಕು ಎಂದು ನ್ಯಾಯಪೀಠ ತಿಳಿಸಿದೆ.

'8505 'ಬಿ' ಗ್ರೂಪ್ ಅಧಿಕಾರಿಗಳು ಮಂಗಳವಾರ ಸಂಜೆ 5 ಗಂಟೆ ಒಳಗಾಗಿ ಜಿಲ್ಲಾ ಚುನಾವಣಾ ಅಧಿಕಾರಿ ಹಾಗೂ ಇಆರ್‌ಓ ಮುಂದೆ ಕರ್ತವ್ಯಕ್ಕೆ ಹಾಜರಾಗಬೇಕು ಎಂದು ಸ್ಪಷ್ಟಪಡಿಸಿದೆ.

ಈಗಾಗಲೇ ಕರ್ತವ್ಯದಲ್ಲಿರುವ ಇಆರ್‌ಓಗಳ ಬದಲಾವಣೆ ಹಾಗೂ ನೋಂದಣಿ ಅಧಿಕಾರಿಗಳನ್ನು ಅಗತ್ಯ ಸ್ಥಳಗಳಿಗೆ ನಿಯೋಜಿಸುವ ಸಂಪೂರ್ಣ ಅಧಿಕಾರ ಆಯೋಗಕ್ಕಿದೆ. ಮತದಾರರ ಪಟ್ಟಿಯ ಪರಿಷ್ಕರಣೆಯ ಅಂತಿಮ ನಿರ್ಧಾರವನ್ನು ಚುನಾವಣಾ ಅಧಿಕಾರಿಗಳೇ ತೆಗೆದುಕೊಳ್ಳಲಿದ್ದಾರೆ ಎಂದು ನ್ಯಾಯಪೀಠ ಸ್ಪಷ್ಟಪಡಿಸಿದೆ.

ಕಾವೇರಿ ಫೆಸ್ಟ್: ಸಂತ ಜೋಸೆಫರ ಕಾಲೇಜಿಗೆ ದ್ವಿತೀಯ ಸ್ಥಾನ



ಮೈಸೂರಲ್ಲಿ ಇತ್ತೀಚೆಗೆ ನಡೆದ ಶ್ರೀ ಕಾವೇರಿ ಫೆಸ್ಟ್‌ನಲ್ಲಿ, ಜಯಲಕ್ಷ್ಮೀಪುರಂ ಸಂತ ಜೋಸೆಫರ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿಗಳು ರನ್ನರ್ ಅಪ್ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿದ್ದಾರೆ. ಪ್ರಶಸ್ತಿ ವಿಜೇತರಿಗೆ ಎಂಡಿಇಎಸ್‌ನ ಕಾರ್ಯದರ್ಶಿ ರೆವೆರೆಂಡ್ ಫಾದರ್ ಎಡ್ವರ್ಡ್ ವಿಲಿಯಂ ಸಲ್ಡಾನ್ಹಾ, ಎಂಡಿಇಎಸ್‌ನ ಖಜಾಂಚಿ ರೆವೆರೆಂಡ್ ಫಾದರ್ ನವೀನ್ ಕುಮಾರ್, ಕಾಲೇಜಿನ ಪ್ರಾಂಶುಪಾಲ ಡಾ.ಚಂದ್ರಶೇಖರ ಹೆಚ್.ಎನ್., ಸಾಂಸ್ಕೃತಿಕ ಸಮಿತಿ ಸಂಚಾಲಕಿ ಸುಹಾಸಿನಿ ನೆಲ್ಸನ್, ಕಾಲೇಜಿನ ಬೋಧಕ-ಬೋಧಕೇತರ ಸಿಬ್ಬಂದಿ ಅಭಿನಂದಿಸಿದ್ದಾರೆ.

ಅಭಿನಂದನೆ...



ತೊಣಚಿಕೊಪ್ಪಲು ಗ್ರಾಮದೇವತೆ ಬಿಸಿಲು ಮಾರಮ್ಮನವರ ಜಾತ್ರಾ ಮಹೋತ್ಸವದಲ್ಲಿ ಭಾಗವಹಿಸಿದ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಅವರನ್ನು ಗ್ರಾಮಸ್ಥರು ಅಭಿನಂದಿಸಿದರು. ಈ ವೇಳೆ ಯಜಮಾನ್ ಜವರಪ್ಪ, ಮಾಜಿ ಮೇಯರ್ ಟಿ.ಬಿ. ಚಿಕ್ಕಣ್ಣ, ಮಾಜಿ ಕಾರ್ಪೋರೇಟರ್ ಜೆ.ಗೋಪಿ, ಮಹೇಶ್ ಇನ್ನಿತರರು ಉಪಸ್ಥಿತರಿದ್ದರು.

ನಿಧನ



ಎಂ.ಎನ್.ರಾಜು

ಮೈಸೂರು,ಫೆ9- ನಾರದ ಶಿವರಾಂಪೇಟೆ ನಿವಾಸಿ ಎಂ.ಎನ್.ರಾಜು(55) ಅವರು ಸೋಮವಾರ ರಾತ್ರಿ ಅನಾರೋಗ್ಯದಿಂದ ನಿಧನರಾದರು. ಇವರು ಪತ್ನಿ ಎಸ್.ಬಿ.ಮಮತಾ ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಫೆ.10ರ ಮಂಗಳವಾರ ಮಧ್ಯಾಹ್ನ ವಿದ್ಯಾರಣ್ಯಪುರಂ ವೀರಶೈವ ರುದ್ರಭೂಮಿಯಲ್ಲಿ ಅಂತ್ಯಸಂಸ್ಕಾರ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಎಂ.ಹೆಚ್.ನಾಸಿರ್ ಉಲ್ಲಾ



ಮೈಸೂರು,ಫೆ.9-ಮೈಸೂರಿನ ಬನ್ನಿಮಂಟಪದ ನಿವಾಸಿ, ಹಿರಿಯ ವಕೀಲ ಎಂ.ಹೆಚ್.ನಾಸಿರ್ ಉಲ್ಲಾ (80) ಭಾನುವಾರ (ಫೆ.8) ನಿಧನರಾದರು. ಮೃತರು ಇಬ್ಬರು ಪುತ್ರರು, ಇಬ್ಬರು ಪುತ್ರಿಯರು, ಇಬ್ಬರು ಸಹೋದರಿಯರು, ಇಬ್ಬರು ಸಹೋದರರು ಮತ್ತು ಅಪಾರ ಬಂಧು-ಮಿತ್ರರ ಅಗಲಿದ್ದಾರೆ. ಈ ಸಂಬಂಧ ಸೋಮವಾರ ಸಂಜೆ 5.15 ಗಂಟೆಗೆ ನಮಾಜ್-ಎ-ಜನಾಜಾ (ಅಂತ್ಯಕ್ರಿಯೆಯ ಪ್ರಾರ್ಥನೆ) ನೆರವೇರಿಸಿದ ಬಳಿಕ ಮೈಸೂರಿನ ಟಿಪ್ಪು ಸರ್ಕಲ್ ಹಿಂಭಾಗ ಇರುವ ಮುಸ್ಲಿಮರ ರುದ್ರಭೂಮಿಯಲ್ಲಿ ಮೃತರ ಅಂತ್ಯ ಸಂಸ್ಕಾರ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

10.2.2026 ಮಂಗಳವಾರ, ಮಳೆ ನಕ್ಷತ್ರ: ಧನಿಷ್ಠ 6.02.2026ರಿಂದ 18.02.2026 ವಿಶ್ವಾವಸು ನಾಮ ಸಂವತ್ಸರ, ಉತ್ತರಾಯಣ, ಶಿಶಿರ ಋತು, ಮಾಘ ಮಾಸ, ಕೃಷ್ಣ ಪಕ್ಷ, ತಿಥಿ: ಅಷ್ಟಮಿ, ನಕ್ಷತ್ರ: ವಿಶಾಖ, ರಾಹುಕಾಲ: ಮಧ್ಯಾಹ್ನ 3ರಿಂದ 4.30ರವರೆಗೆ

- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಕೊಲೆಸ್ಟ್ರಾಲ್ ಚಿಕಿತ್ಸಾ ಶಿಬಿರ, ಪಾರ್ಕಿನ್‌ಸನ್ಸ್ ಕಾಯಿಲೆ, ಮೈಗ್ರೇನ್ ಹಾಗೂ ಕಣ್ಣು-ಮೂಗಿನ ಅಲರ್ಜಿಗೆ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿಪುರ ರಸ್ತೆ, ಆಲನಹಳ್ಳಿ, ಬೆಳಗ್ಗೆ 9 ರಿಂದ.
- **ಎಂಎಂಕೆ ಮತ್ತು ಎಸ್‌ಡಿಎಂ ಮಹಿಳಾ ಮಹಾವಿದ್ಯಾಲಯ :** ಎಂಪವರ್‌ಮೆಂಟ್ ಆಫ್ ವುಮೆನ್ ಟು ಫೇಸ್ ದಿ ಗ್ಲೋಬಲ್ ಚಾಲೆಂಜಸ್ ಕುರಿತು ವಿಚಾರ ಸಂಕಿರಣ, ಉಪಸ್ಥಿತರು : ಡಾ. ಜಿಬಿ ಜೋಸ್, ಡಾ. ಎಸ್. ಶ್ರೀಕಾಂತ್, ಡಾ. ಯೋಗಿತಾ ಶೆಟ್ಟಿ, ಉದ್ಘಾಟನೆ : ಡಾ. ಸುಶ್ಯಂತ್ ನಿಮಾವತ್, ಪ್ರಾಸ್ತಾವಿಕ ನುಡಿ : ಡಾ. ಆರತಿ ನಿರ್ಮಲ್, ಅಧ್ಯಕ್ಷತೆ : ಮಹಾವಿದ್ಯಾಲಯ ಪ್ರಿನ್ಸಿಪಾಲ್ ಪ್ರೊ. ಎನ್. ಭಾರತಿ, ಸ್ಥಳ:ಮಹಾವಿದ್ಯಾಲಯ, ಬೆಳಗ್ಗೆ 9.30ಕ್ಕೆ.
- **ಮಹಾರಾಜ ಕಾಲೇಜು ಜಾನಪದ ವಿಭಾಗ :** ಮಂಟೇಸ್ವಾಮಿ ಮಾದೇಶ್ವರ ಮಹಾಕಾವ್ಯ ಪರಿಕಲ್ಪನೆ, ರೂಸಾ ಪ್ರಾಯೋಜಿತ ಒಂದು ದಿನದ ಪ್ರಾತ್ಯಕ್ಷಿಕೆ ಮತ್ತು ಉಪನ್ಯಾಸ, ಉಪಸ್ಥಿತರು : ಕಾಲೇಜು ಪ್ರಿನ್ಸಿಪಾಲ್ ಪ್ರೊ. ವಿ. ಷಣ್ಮುಗಂ, ಡಾ. ಹೆಚ್.ಆರ್. ಚೇತನ, ಪ್ರಾಧ್ಯಾಪಕರಾದ ಡಾ. ವಿಜಯಲಕ್ಷ್ಮಿ ಮನಾಪುರ, ಸ್ಥಳ: ಜೂನಿಯರ್ ಬಿ.ಎ. ಹಾಲ್, ಬೆಳಗ್ಗೆ 10ಕ್ಕೆ
- **ಮೈಸೂರು ವಿಶ್ವವಿದ್ಯಾನಿಲಯ, ಸಮಾಜ ಕಾರ್ಯ ಅಧ್ಯಯನ ವಿಭಾಗ :** ರೂಸಾ 2.0 ಪ್ರಾಯೋಜಿತ ಸಮಾಜ ಕಾರ್ಯ ಮತ್ತು ಸಮಾಜಶಾಸ್ತ್ರ ಪುನಶ್ಚೇತನ ಶಿಬಿರ, ಉದ್ಘಾಟನೆ : ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿವಿ ಕುಲಪತಿ ಪ್ರೊ.ಬಿ. ರಮೇಶ್, ಅಧ್ಯಕ್ಷತೆ : ಸಮಾಜ ಕಾರ್ಯ ಅಧ್ಯಯನ ವಿಭಾಗದ ಅಧ್ಯಕ್ಷ ಪ್ರೊ. ಆರ್. ಶಿವಪ್ಪ, ಉಪಸ್ಥಿತರು : ಪ್ರೊ. ಹೆಚ್.ಪಿ. ಜ್ಯೋತಿ, ಪ್ರೊ. ಚಂದ್ರಮೌಳಿ, ಸ್ಥಳ: ಇಎಂಎಂಆರ್‌ಸಿ ಸಭಾಂಗಣ, ಮಾನಸಗಂಗೋತ್ರಿ, ಬೆಳಗ್ಗೆ 10ಕ್ಕೆ.
- **ಕಾವೇರಿ ಆಯುರ್ವೇದ ಆಸ್ಪತ್ರೆ:** ಮಂಡಿ ನೋವು, ಮೂಲವ್ಯಾಧಿ ಕುರಿತು ತಪಾಸಣೆ, ಚಿಕಿತ್ಸಾ ಶಿಬಿರ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್, ಬೆಳಗ್ಗೆ 10 ರಿಂದ.
- **ಮೈಸೂರು ಜಿಲ್ಲಾ ಭಗೀರಥ ಉಪ್ಪಾರ ಸಂಘ :** ಶ್ರೀ ಪುರುಷೋತ್ತಮಾನಂದಪುರಿ ಸ್ವಾಮಿಗಳ 27ನೇ ವರ್ಷದ ಪೀಠಾರೋಹಣ ಮಹೋತ್ಸವ, ರಾಜ್ಯ ಮಟ್ಟದ ಭಜನಾ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಣಾ ಕಾರ್ಯಕ್ರಮ, ಸ್ಥಳ: ಸಂಘದ ಆವರಣ, ಸುಣ್ಣದಕೇರಿ.
- **ಶ್ರೀ ಬಸವೇಶ್ವರ ಸಾಮಾಜಿಕ ಪರಿಷ್ಕರಣೆ ಸಂಶೋಧನೆ ಮತ್ತು ವಿಸ್ತರಣಾ ಕೇಂದ್ರ, ಕುವೆಂಪು ಕನ್ನಡ ಅಧ್ಯಯನ ಕೇಂದ್ರ :** ಬಸವಣ್ಣ-ಮೌಖಿಕ ಕಾವ್ಯ ಗಾಯನ ಕಾರ್ಯಕ್ರಮ, ಅಧ್ಯಕ್ಷತೆ : ಪ್ರಾಧ್ಯಾಪಕರಾದ ಪ್ರೊ ಎನ್.ಕೆ. ಲೋಲಾಕ್ಷಿ, ಉಪಸ್ಥಿತರು : ಸಂದರ್ಶಕ ಪ್ರಾಧ್ಯಾಪಕ ಪ್ರೊ.ಕೆ. ಕೇಶವನ್ ಪ್ರಸಾದ್, ಸ್ಥಳ: ಮಹಾಮನೆ ಶ್ರೀ ಬಸವೇಶ್ವರ ಸಾಮಾಜಿಕ ಪರಿಷ್ಕರಣೆ, ಸಂಶೋಧನೆ ಮತ್ತು ವಿಸ್ತರಣಾ ಕೇಂದ್ರ, ಬೆಳಗ್ಗೆ 11ಕ್ಕೆ.
- **ಜಿಲ್ಲಾಡಳಿತ, ಕನ್ನಡ-ಸಂಸ್ಕೃತಿ ಇಲಾಖೆ, ಮೈಸೂರು ಮಹಾನಗರ ಪಾಲಿಕೆ:** ಕಾಯಕ ಶರಣರ ಜಯಂತಿ, ಘನ ಉಪಸ್ಥಿತರು : ಮುಖ್ಯಮಂತ್ರಿ ಸಿದ್ದರಾಮಯ್ಯ, ಉಕ್ಕು-ಕೈಗಾರಿಕಾ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಉದ್ಘಾಟನೆ : ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ, ಅಧ್ಯಕ್ಷತೆ : ಶಾಸಕ ಕೆ. ಹರೀಶ್‌ಗೌಡ, ಉಪಸ್ಥಿತರು : ಸಚಿವ ಕೆ.ವೆಂಕಟೇಶ್, ಅರಣ್ಯ ವಸತಿ-ವಿಹಾರ ಧಾಮಗಳ ನಿಗಮದ ಅಧ್ಯಕ್ಷರು ಹಾಗೂ ಹೆಚ್.ಡಿ ಕೋಟೆ ವಿಧಾನಸಭಾ ಕ್ಷೇತ್ರದ ಶಾಸಕ ಅನಿಲ್‌ಕುಮಾರ್, ಹಾಗೂ ಚಾಮುಂಡೇಶ್ವರಿ ವಿದ್ಯುತ್ ನಿಗಮ ನಿಯಮಿತದ ಅಧ್ಯಕ್ಷ ಎ.ಬಿ.ರಮೇಶ್ ಬಂಡಿಸಿದ್ದೇಗೌಡ, ಸ್ಥಳ: ಕಲಾಮಂದಿರ ಆವರಣ, ಬೆಳಗ್ಗೆ 11.30ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಸಾಧಕರ ಸೋಪಾನ - ಲೇಖನ ಮತ್ತು ಪ್ರಸ್ತುತಿ: ಟಿ. ಎಸ್. ಗೋಪಾಲ್, ಪ್ರಾಯೋಜಕರು: ಸಹಬಾಳ್ವೆ, ಬೆಂಗಳೂರು, 6.40 ಅರಿವಿನ ಶಿಖರ-ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ : ಎ.ಎಸ್. ನಾಗಲಕ್ಷ್ಮಿ, ವ್ಯಾಖ್ಯಾನ: ಮೊರಬದ ಮಲ್ಲಿಕಾರ್ಜುನ, 6.50 ರೈತರಿಗೆ ಸಲಹೆ, 7.15 ಮತ್ತು ಸಂಜೆ 5.40 - ಪ್ರಾಯೋಜಿತ ಕಾರ್ಯಕ್ರಮ ಕೆ.ಎಸ್.ಓ.ಯು. ಮುಕ್ತವಾಣಿ, ಪ್ರಾಯೋಜಕರು : ಪ್ರಸಾರಾಂಗ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮೈಸೂರು. ಸಂದರ್ಶಕರು:ಲಕ್ಷ್ಮೀನಾರಾಯಣ ಎಸ್., ನಿರ್ಮಾಣ: ಎನ್.ಕೇಶವಮೂರ್ತಿ, 8.30 ಕರೆಗೊಂದು ಗೀತೆ-ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 9.05 ಗರ್ಭಕಂಠದ ಕ್ಯಾನ್ಸರ್ ಕುರಿತ ಜಾಗೃತಿ ಕಾರ್ಯಕ್ರಮ, ಪ್ರಾಯೋಜಕರು : ಇಂಡಿಯನ್ ಕ್ಯಾನ್ಸರ್ ಸೊಸೈಟಿ, ಕರ್ನಾಟಕ ಛಾಪ್ಟರ್, 9.10 ಕರೆಗೊಂದು ಗೀತೆ-ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಕೆ.ಎಸ್. ಗೋಪಾಲಕೃಷ್ಣನ್-ಕೊಳಲು ವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹೊಂಗಿರಣ ವಿಕಸಿತ ಹಾದಿಗೊಂದು ಸೋಪಾನ, ಪ್ರಸ್ತುತಿ: ಆರ್.ಲೋಕೇಶ್ವರಿ . ಬಿ.ಜಿ.ಕವಿತಾ ಹಾಗೂ ಲಕ್ಷ್ಮೀನಾರಾಯಣ

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ-ಶುಭ ರಾಘವೇಂದ್ರ, 12.45 ಕನ್ನಡದಲ್ಲಿ ಭಾಷಣ, 1.00 ಪ್ರಗತಿ ಪಥ-ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಕುರಿತು ಸರಣಿ, 1.20 ಭಾವಗೀತೆಗಳು-ವಿದ್ಯಾಶ್ರೀ ಸಾಲಿಮಠ್, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ: ಪಿ. ಸುಬ್ರಹ್ಮಣ್ಯಂ-ಕ್ಲ್ಯಾರಿಯೋನೆಟ್ ವಾದನ, 3.30 ರಾಷ್ಟ್ರೀಯ ಶೈಕ್ಷಣಿಕ ಕಾರ್ಯಕ್ರಮ-ಉಮಂಗ್, 4.00 ಕಥಾಕಾಲಕ್ಷೇಪ ಸತ್ಯವಾನ ಸಾವಿತ್ರಿ. ಪ್ರಸ್ತುತಿ-ವಿದ್ವಾನ್ ಆರ್. ಗುರುರಾಜುಲು ನಾಯ್ಡು, 5.00 ಪ್ರಾಯೋಜಿತ ಕಾರ್ಯಕ್ರಮ : ನಿರಾಮಯ ನಿಮ್ಮ ಆರೋಗ್ಯ ನಮ್ಮ ಮಾತು, ಪ್ರಾಯೋಜಕರು : ನಿರಾಮಯ ಹೆಲ್ತ್ ಕೇರ್, ಸರಸ್ವತಿಪುರಂ, ಮೈಸೂರು. ಭಾಗವಹಿಸುತ್ತಾರೆ-ಡಾ. ರವಿ .ಎಸ್, ವಿಷಯ-ಸೋರಿಯಾಸಿಸ್ ಲಕ್ಷಣಗಳು ಮತ್ತು ಚಿಕಿತ್ಸೆ, ಪ್ರಸ್ತುತಿ-ಡಾ.ಕುಲದೀಪ್.ಎನ್ ಹಾಗೂ ತೇಜಸ್ವಿನಿ ಗಿರೀಶ್, 5.35 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ- ಕಿಸಾನ್‌ವಾಣಿ, ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ. ಮತ್ಸ್ಯ ತರಂಗ ಮೀನು ಸಾಕಾಣಿಕೆ ತಾಂತ್ರಿಕತೆಗಳನ್ನು ಕುರಿತ ಬಾನುಲಿ ಸರಣಿ ಸಹಕಾರಿ ವ್ಯವಸ್ಥೆಯಲ್ಲಿ ಮೀನು ಉತ್ಪಾದನೆ ಹಾಗೂ ಮಾರಾಟ ಈ ಕುರಿತು ಟಿ. ನರಸೀಪುರ ತಾಲೂಕು, ಬೀಡನಹಳ್ಳಿಯ ಚಾಮುಂಡೇಶ್ವರಿ ಮೀನುಗಾರರ ಸಹಕಾರ ಸಂಘದ ಅಧ್ಯಕ್ಷರಾದ ಬಿ. ಬಸವೇಗೌಡ ಅವರೊಂದಿಗೆ ಸಂದರ್ಶನ. ಸಂದರ್ಶಕರು : ಎನ್.ಕೇಶವಮೂರ್ತಿ, 7.45 ಮೈಸೂರು ಜಂಕ್ಷನ್-ಸಾಪ್ತಾಹಿಕ ಸಂಚಿಕೆ. ಪ್ರಸ್ತುತಿ-ದಿಗ್ವಿಜಯ್ ಬಿ., 8.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ, ಹರಿಪ್ರಸಾದ್ ಚೌರಾಸಿಯಾ - ಬಾನ್ಸುರಿ ವಾದನ, 8.30 ಹಿಂದಿ ಚಿತ್ರಗೀತೆಗಳು, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ, ಯು.ಪಿ. ರಾಜು - ಮ್ಯಾಂಡೋಲಿನ್ ವಾದನ, 10.00 ಆಕಾಶವಾಣಿ ಸಂಗೀತ ಸಮ್ಮೇಳನ, ಎನ್. ಶಿವಾಜಿ - ಜನಪದ ಸಂಗೀತ, ಡಾ. ನಾಜಿಯಾ ಸಯ್ಯದ್ - ಭಾವಗೀತೆ

- **ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು :** 18ನೇ ಪದವೀಧರರ ದಿನಾಚರಣೆ, ಸಾನ್ನಿಧ್ಯ: ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಮುಖ್ಯ ಅತಿಥಿಗಳು : ಶೇಷಾದ್ರಿಪುರಂ ಶಿಕ್ಷಣ ಸಂಸ್ಥೆಗಳ ಗೌರವ ಪ್ರಧಾನ ಕಾರ್ಯದರ್ಶಿ ವೂಡೇ ಪಿ. ಕೃಷ್ಣ, ಅಧ್ಯಕ್ಷತೆ : ಜೆಎಸ್‌ಎಸ್ ವಿದ್ಯಾಪೀಠದ ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ.ಸಿ.ಜಿ. ಬೆಟಸೂರ ಮಠ, ಸ್ಥಳ: ಕಾಲೇಜಿನ ಸುವರ್ಣ ಮಹೋತ್ಸವ ಸಭಾಂಗಣ, ಬೆಳಗ್ಗೆ 11.30ಕ್ಕೆ.
- **ಶ್ರೀ ಘನ ನೀಲಿ ಸಿದ್ದಪ್ಪಾಜಿ ದೇವಸ್ಥಾನ:** 5ನೇ ವರ್ಷದ ಜಾತ್ರಾ ಮಹೋತ್ಸವ, ಮಧ್ಯಾಹ್ನ 12ಕ್ಕೆ ಅನ್ನ ಸಂತರ್ಪಣೆ, ಸ್ಥಳ: ದೇವಸ್ಥಾನದ ಪ್ರಾಂಗಣ, ಅಭಿಷೇಕ್ ಸರ್ಕಲ್, ಮಂಚೇಗೌಡನಕೊಪ್ಪಲು (ಹೆಬ್ಬಾಳು).
- **ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯ:** ಸಂಸ್ಥೆಯ 90ನೇ ವಾರ್ಷಿಕೋತ್ಸವ ಹಾಗೂ ಮಹಾಶಿವರಾತ್ರಿ ಪ್ರಯುಕ್ತ ಗುಜರಾತಿನ ಸುಪ್ರಸಿದ್ಧ ಶ್ರೀ ಸೋಮನಾಥ ದಿವ್ಯ ದರ್ಶನ, ಸಂಜೆ 5.15ಕ್ಕೆ ಲಘು ಸಂಗೀತ, ಸಂಜೆ 6.15 ರಿಂದ ಬಿ.ಕೆ. ವೀಣಾ ಅವರಿಂದ ಧ್ಯಾನವೆಂಬ ದಿವ್ಯೌಷಧ ಕುರಿತು ಪ್ರವಚನ, ಸಂಜೆ 7 ರಿಂದ ಎಂ.ವಿ. ಅಮರನಾಥ್ ಅವರಿಂದ ಜೀವನ ಮೌಲ್ಯಗಳು ಕುರಿತು ಪ್ರವಚನ, ರಾತ್ರಿ 8 ರಿಂದ ಡಾ. ಅಮ್ಮರಾಮಚಂದ್ರ ಮತ್ತು ತಂಡದಿಂದ ಜನಪದ ಗೀತೆ, ಸ್ಥಳ: ವಿದ್ಯಾಲಯದ ಆವರಣ, ಹುಣಸೂರು ರಸ್ತೆ, ಐಶ್ವರ್ಯ ಪೆಟ್ರೋಲ್ ಬಂಕ್ ಎದುರು.

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ
ಬೆಳಗಿನ ಪ್ರಾದೇಶಿಕ ದಿನಪತ್ರಿಕೆ
ಫೆಬ್ರವರಿ 10 ಮಂಗಳವಾರ 2026
ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871
ಸಂಪುಟ: 46 | ಸಂಚಿಕೆ: 292 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com
₹4

ಕೆನಡಾದಲ್ಲಿ ಬೆಂಗಳೂರು ಮೂಲದ ಯುವಕನ ಹತ್ಯೆ

ಬೆಂಗಳೂರು: ಕೆನಡಾದಲ್ಲಿ ನಡೆದ ಗುಂಡಿನ ದಾಳಿಯಲ್ಲಿ ಕರ್ನಾಟಕ ಮೂಲದ ಯುವಕನೊಬ್ಬ ಬಲಿಯಾದ ಆಘಾತಕಾರಿ ಘಟನೆ ನಡೆದಿದೆ.



ಮೃತರನ್ನು ಬೆಂಗಳೂರಿನ ನೆಲಮಂಗಲ ಮೂಲದ ಚಂದನ್ ಕುಮಾರ್(37) ಎಂದು ಗುರುತಿಸಲಾಗಿದೆ. ಚಂದನ್ ಕುಮಾರ್, ನೆಲಮಂಗಲ ಮೂಲದ ತ್ಯಾಮಗೊಂಡ್ಲುವಿನ ನಿವಾಸಿ. ಕಳೆದ 6 ವರ್ಷಗಳಿಂದ ಕೆನಡಾದ ಖಾಸಗಿ ಕಂಪನಿಯೊಂದರಲ್ಲಿ ಕೆಲಸ ಮಾಡುತ್ತಿದ್ದರು. ಭಾನುವಾರ ರಾತ್ರಿ 9 ಗಂಟೆಗೆ ಕಾರಿನಲ್ಲಿ ತೆರಳುತ್ತಿದ್ದ ವೇಳೆ ಚಂದನ್ ಕುಮಾರ್ ಮೇಲೆ ■6ನೇ ಪುಟಕ್ಕೆ

ಹೆಡ್‌ಫೋನ್ ಹಾಕಿಕೊಂಡು ಪಬ್‌ಜಿ ಆಟ: ಬಿಪಿ ಹೆಚ್ಚಾಗಿ ಯುವಕ ಸಾವು!

ಲಖನೌ: ಕೊರಿಯನ್ ಲವ್ ಗೇಮ್‌ಗೆ ಗಾಜಿಯಾಬಾದ್‌ನ ಮೂವರು ಸಹೋದರಿಯರು ಬಲಿಯಾಗಿರುವ ಘಟನೆ ಮಾಸುವ ಮುನ್ನವೇ ಮತ್ತೊಂದು ದುರಂತ ಸಂಭವಿಸಿದೆ. ಪಬ್‌ಜಿ ಗೇಮ್ ಆಡುತ್ತಿರುವಾಗಲೇ ರಕ್ತದೊತ್ತಡ ಹೆಚ್ಚಾಗಿ ಯುವಕನೊಬ್ಬ ಸಾವನ್ನಪ್ಪಿರುವ ಘಟನೆ ಉತ್ತರ ಪ್ರದೇಶದ ಮೀರತ್‌ನಲ್ಲಿ ನಡೆದಿದೆ.



ಮೃತ ಯುವಕನನ್ನು ಮೊಹಮ್ಮದ್ ಕೈಫ್ (22) ಎಂದು ಗುರ್ತಿಸಲಾಗಿದೆ. ಈತ ಖೈರ್‌ನಗರದ ಗುಲಾರ್ ವಾಲಿ ಗಾಲಿಯ ■6ನೇ ಪುಟಕ್ಕೆ

ಡಿಕೆಶಿಗೆ ಸಿಎಂ ಸ್ಥಾನ ಬಿಟ್ಟುಕೊಡಿ

■ ಮುಖ್ಯಮಂತ್ರಿ ಸಿದ್ದರಾಮಯ್ಯರಿಗೆ ರಾಮನಗರದ ಕಾಂಗ್ರೆಸ್ ಶಾಸಕ ಇಕ್ಬಾಲ್ ಹುಸೇನ್ ಒತ್ತಾಯ ■ ಡಿಕೆಶಿ ಅವರಿಗೆ 80–90 ಶಾಸಕರ ಬೆಂಬಲವಿದೆ ■ ನಾಯಕತ್ವದ ಬಗ್ಗೆ ಡಾ. ಯತೀಂದ್ರ ಮಾತನಾಡುವುದ ಸಹಿಸಲಾಗದು

ಬೆಂಗಳೂರು, ಫೆ.9(ಕೆಎಂಶಿ)– ಮುಖ್ಯಮಂತ್ರಿ ಸ್ಥಾನವನ್ನು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಬಿಟ್ಟುಕೊಡುವಂತೆ ಸಿದ್ದರಾಮಯ್ಯ ಅವರಿಗೆ ಕಾಂಗ್ರೆಸ್ ಶಾಸಕ ಇಕ್ಬಾಲ್ ಹುಸೇನ್ ನೇರವಾಗಿ ಒತ್ತಾಯಿಸಿದ್ದಾರೆ.


ಇಕ್ಬಾಲ್ ಹುಸೇನ್

ಶಿವಕುಮಾರ್ ನಿನ್ನೆ ತಡರಾತ್ರಿ ಕೇರಳದ ಅಂತರರಾಷ್ಟ್ರೀಯ ವಿಮಾನ ನಿಲ್ದಾಣವೊಂದರಲ್ಲಿ ಕೆ.ಸಿ.ವೇಣುಗೋಪಾಲ್ ಅವ ರನ್ನು ಭೇಟಿ ಮಾಡಿ ಮಾತುಕತೆ ನಡೆಸಿರುವ ಬೆನ್ನಲ್ಲೇ ಹುಸೇನ್ ಇಂದು ವಿಧಾನಸೌಧದ ಅಂಗಳದಲ್ಲೇ ಈ ಒತ್ತಾಯ ಮಾಡಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಿವಕುಮಾರ್ ಅವರಿಗೆ 80 ರಿಂದ 89 ಶಾಸಕರ ಬೆಂಬಲವಿದೆ. ಪಕ್ಷದ ಬಹುಪಾಲು ಜನಪ್ರತಿನಿಧಿಗಳ ಒಲವು ಇರುವಾಗ ಕೊಟ್ಟ ಮಾತಿನಂತೆ ಮುಖ್ಯ ಮಂತ್ರಿಗಳು ನಡೆದುಕೊಳ್ಳಬೇಕು.

ಎರಡೂವರೆ ವರ್ಷ ನೀವು ಆಡಳಿತ ನಡೆಸಿದ ಮೇಲೆ ಸಾಕಷ್ಟು ಶಾಸಕರು ಒಬ್ಬ ನಿಷ್ಠಾವಂತ ಸಂಘಟನ ಕಾರ ಆಡಳಿತಕ್ಕೆ ಬರಬೇಕು ಎಂಬುದಕ್ಕೆ ಶಿವಕುಮಾರ್ ಪರ ನಿಂತಿದ್ದೇವೆ. ಅವರ ಹೋರಾಟ, ಶ್ರಮಕ್ಕೆ ಬೆಲೆ ಸಿಗಬೇಕು ಎಂಬ ಉದ್ದೇಶದಿಂದಲೇ ನಾವು ಅವರನ್ನು ಬೆಂಬಲಿಸಿ ಮುಖ್ಯಮಂತ್ರಿ ಸ್ಥಾನಕ್ಕಾಗಿ ಹೋರಾಟ ಮಾಡುತ್ತಿದ್ದೇವೆ.

ದೇವರಾಜ ಅರಸ್ ಬಳಿಕ ದಲಿತರು, ಶೋಷಿತರ ಪರವಾಗಿ ಸಿದ್ದರಾಮಯ್ಯ ಅಳಿಲು ಸೇವೆ ಮಾಡಿದ್ದಾರೆ. ಇಷ್ಟು ವರ್ಷ ಅವರು ಆಡಳಿತ ಮಾಡಿದ್ದಾರೆ. ಸಾಮಾಜಿಕ ನ್ಯಾಯ ಅಂತಾ ಹೇಳುವವರು ಇನ್ನು ಶಿವಕುಮಾರ್ ಅವರಿಗೆ ಅಧಿಕಾರ ಬಿಟ್ಟು ಕೊಡಬೇಕು.

ನಾವು ಸಹಿಸಲ್ಲ: ಸಿದ್ದರಾಮಯ್ಯ ಪುತ್ರ ಯತೀಂದ್ರ ನಾಯಕತ್ವದ ಬಗ್ಗೆ ಮಾತನಾಡುತ್ತಿರುವುದನ್ನು ನಾವು ಸಹಿಸುವುದಿಲ್ಲ. ಅವರಿಗೆ ಕೊನೆ ಬಾರಿಗೆ ಎಚ್ಚರಿಕೆ ನೀಡುತ್ತಿದ್ದೇವೆ. ನಮ್ಮನ್ನು ಪ್ರಚೋದಿಸುವುದು ಬೇಡ.

ನಮ್ಮದು ಶಿಸ್ತಿನ ಪಕ್ಷ, ತಂದೆ ಪರವಾಗಿ ಈ ರೀತಿ ಪದೇ ಪದೆ ಮಾತನಾಡುವುದು ಅಸಹ್ಯವಾಗಿ ಕಾಣುತ್ತಿದೆ. ಬೇರೆ ನಾಯಕರು ಮಾತನಾಡಿದರೆ ಬೆಲೆ ಇರುತ್ತದೆ. ಅಪ್ಪನ ಪರವಾಗಿ ಮಗನೇ ಮಾತನಾಡುತ್ತಿದ್ದರೆ, ಅದಕ್ಕೆ ಯಾವುದೇ ವ್ಯಾಲ್ಯೂ ಇರುವುದಿಲ್ಲ.

ನಾನು ವಿಧಾನಸಭಾ ಸದಸ್ಯ, ನಾನು ಮಾತನಾಡಿದರೆ ನೋಟಿಸ್ ಕೊಡುತ್ತಾರೆ. ಪರಿಷತ್ ಸದಸ್ಯರೊಬ್ಬರು ಮಾತನಾಡಿದರೆ ಅವರ ಮೇಲೆ ಯಾವ ಶಿಸ್ತು ಕ್ರಮವೂ ಇಲ್ಲ. ಇದು ಯಾವ ನ್ಯಾಯ ಎಂದು ಪ್ರಶ್ನಿಸಿದರು.

ಪಿಣರಾಯಿ ಜೊತೆ ಡಿಕೆಶಿ: ಕೇರಳದ ಕಾಸರಗೋಡಿನಲ್ಲಿ ಭಾನುವಾರ ರಾತ್ರಿ ನಡೆದ ಅಲ್ಪಸಂಖ್ಯಾತ ಸಂಘಟನೆಯ ಶತಮಾನೋತ್ಸವ ಸಮಾರಂಭದಲ್ಲಿ ಶಿವಕುಮಾರ್ ಭಾಗವಹಿಸಿದ್ದರು.

ಈ ಸಮಾರಂಭದಲ್ಲಿ ಅಲ್ಲಿನ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಜೊತೆ ವೇದಿಕೆ ಹಂಚಿಕೊಂಡಿದ್ದರು. ಕೇರಳ ವಿಧಾನಸಭಾ ಚುನಾವಣೆ ವೇಳೆ ಶಿವಕುಮಾರ್ ಅಲ್ಲಿನ ಮುಖ್ಯಮಂತ್ರಿ ಜೊತೆ ವೇದಿಕೆ ಹಂಚಿಕೊಂಡಿರುವುದೇ ಕಾಂಗ್ರೆಸ್‌ನಲ್ಲಿ ಭಾರೀ ಚರ್ಚೆಗೆ ಗ್ರಾಸವಾಗಿದೆ. ಸಮಾರಂಭ ಮುಗಿಯುತ್ತಿದ್ದಂತೆ ಶಿವಕುಮಾರ್ ಅವರನ್ನು ವಿಮಾನ ನಿಲ್ದಾಣಕ್ಕೆ ಕರೆಸಿಕೊಂಡ ವೇಣು ಗೋಪಾಲ್ ಮಾತುಕತೆ ನಡೆಸಿದರು. ಈ ಭೇಟಿ ಸಂದರ್ಭದಲ್ಲಿ ಅಧಿಕಾರ ಹಂಚಿಕೆ ಸೂತ್ರ ಜಾರಿಗೆ ತರಬೇಕು. ನಾವು ತಾಳ್ಮೆ ಕಳೆದುಕೊಳ್ಳುವಂತೆ ಮಾಡಬೇಡಿ ಎಂದು ವೇಣುಗೋಪಾಲ್ ಅವರಿಗೆ ಶಿವಕುಮಾರ್ ನೇರವಾಗಿ ತಿಳಿಸಿದ್ದಾರಂತೆ. ಮಾತುಕತೆಯ ಪೂರ್ಣ ಮಾಹಿತಿ ಇಲ್ಲವಾದರೂ, ಇಂದು ಹುಸೇನ್ ಸುದ್ದಿಗಾರರೊಂದಿಗೆ ಮಾತನಾಡಿ, ಸಿದ್ದರಾಮಯ್ಯ ಅಧಿಕಾರ ಬಿಟ್ಟುಕೊಡಬೇಕು ಎಂದಿರುವುದು ಪರಿಸ್ಥಿತಿಯ ಗಂಭೀರತೆಯನ್ನು ಬಿಂಬಿಸುತ್ತದೆ.

ನನ್ನನ್ನು ದೆಹಲಿಗೆ ಕರೆದಿರುವ ಕಾಂಗ್ರೆಸ್ ನಾಯಕರನ್ನು ಭೇಟಿ ಮಾಡುತ್ತಿದ್ದೇನೆ

● ಭೇಟಿ ಮಾಡುತ್ತಿರುವ ನಾಯಕರ ಹೆಸರು ಹೇಳಲು ಆಗುವುದಿಲ್ಲ ● ನಾನು ಡಿಸಿಎಂ ಅಷ್ಟೇ ಅಲ್ಲ, ಕೆಪಿಸಿಸಿ ಅಧ್ಯಕ್ಷನಾಗಿ ಭೇಟಿ ● ದೆಹಲಿ ಭೇಟಿ ಬಗ್ಗೆ ಸಿಎಂ ಅನುಮತಿ ಪಡೆಯುವೆ

ಬೆಂಗಳೂರು, ಫೆ.9– ನನ್ನನ್ನು ದೆಹಲಿಗೆ ಕರೆದಿರುವ ಕಾಂಗ್ರೆಸ್ ನಾಯಕರನ್ನು ಭೇಟಿ ಮಾಡುತ್ತಿದ್ದೇನೆ. ದೆಹಲಿ ಪ್ರವಾಸದಲ್ಲಿ ರಾಜಕಾರಣ ಜೊತೆಗೆ ಕೇಂದ್ರ ಜಲಶಕ್ತಿ ಸಚಿವರು, ಕಾನೂನು ತಜ್ಞರನ್ನು ಭೇಟಿ ಮಾಡುತ್ತಿರುವೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.


ಡಿ.ಕೆ. ಶಿವಕುಮಾರ್

ವಿಧಾನಸೌಧದಲ್ಲಿ ಮಾಧ್ಯಮಗಳನ್ನು ಉದ್ದೇಶಿಸಿ ಮಾತನಾಡುವಾಗ ದೆಹಲಿ ಪ್ರವಾಸದ ಬಗ್ಗೆ ಕೇಳಿದ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಸೋಮವಾರ ಪ್ರತಿಕ್ರಿಯೆ ನೀಡಿದರು. ಬಜೆಟ್ ಸಭೆಯ ನಡುವೆ ದೆಹಲಿ ಭೇಟಿ ಬಗ್ಗೆ ಕೇಳಿದಾಗ ಹಾಗೂ ರಾಹುಲ್ ಗಾಂಧಿ ನಿಮ್ಮನ್ನು ಕರೆಯುತ್ತಿದ್ದಾರೆಯೇ ಎಂದಾಗ, 'ಭೇಟಿ ಮಾಡುವ ಎಲ್ಲಾ ಹೆಸರನ್ನು ಹೇಳಲು ಆಗುವುದಿಲ್ಲ. ನಿಮಗೆ ಏಕೆ ಇಷ್ಟು ಕುತೂಹಲ. ನಾನು ಉಪ ಮುಖ್ಯಮಂತ್ರಿ ಅಷ್ಟೇ ಅಲ್ಲ, ಕೆಪಿಸಿಸಿ ಅಧ್ಯಕ್ಷ ಕೂಡ. ನಾನು ಕೆಪಿಸಿಸಿ ಅಧ್ಯಕ್ಷನಾಗಿ ಮಾರ್ಚ್ 10 ಕ್ಕೆ 6 ವರ್ಷವಾಗುತ್ತದೆ. ನಮ್ಮ ಸಂಸದರನ್ನು, ನಾಯಕ ರನ್ನು ಭೇಟಿ ಮಾಡುವುದು ನನ್ನ ಕರ್ತವ್ಯ. ನಾನು ಭೇಟಿ ಮಾಡುತ್ತಾ ಇರುತ್ತೇನೆ, ಆಗ ನನ್ನ ಕಷ್ಟ, ■6ನೇ ಪುಟಕ್ಕೆ

ಸಾಮಾಜಿಕ ಮಾಧ್ಯಮ ಪೋಸ್ಟ್‌ಗಳ ವಿರುದ್ಧ ಏಕಾಏಕಿ ಎಫ್‌ಐಆರ್, ಬಂಧನಕ್ಕೆ ಬ್ರೇಕ್

ಡಿಜಿಪಿಯಿಂದ ಹೊಸ ಮಾರ್ಗಸೂಚಿ ಪ್ರಕಟ

ಬೆಂಗಳೂರು: ಸಾಮಾಜಿಕ ಮಾಧ್ಯಮ ಪೋಸ್ಟ್‌ಗಳಿಗೆ ಸಂಬಂಧಿಸಿದಂತೆ ಪ್ರಾಥಮಿಕ ವಿಚಾರಣೆ ನಡೆಸದೆ ಏಕಾಏಕಿ ಎಫ್‌ಐಆರ್‌ಗಳನ್ನು ದಾಖಲಿಸಲಾಗುತ್ತಿದೆ ಎಂಬುದನ್ನು ಗಮನಿಸಿದ ನಂತರ ರಾಜ್ಯ ಪೊಲೀಸ್ ಮಹಾನಿರ್ದೇಶಕ ಎಂ.ಎ. ಸಲೀಮ್ ಅವರು ಸೋಮವಾರ ಹೊಸ ಮಾರ್ಗಸೂಚಿಗಳನ್ನು ಪ್ರಕಟಿಸಿದ್ದಾರೆ.


ಎಂ.ಎ. ಸಲೀಮ್

ಈ ಸಂಬಂಧ ಫೆಬ್ರವರಿ 7 ರಂದು ಪೊಲೀಸ್ ಮಹಾನಿರ್ದೇಶಕರ ಕಚೇರಿ ಸುತ್ತೋಲೆ ಹೊರಡಿಸಿದ್ದು, ರಾಜ್ಯದ ಎಲ್ಲಾ ಪೊಲೀಸ್ ಠಾಣೆಗಳಲ್ಲಿಯೂ ಇದನ್ನು ಪಾಲನೆ ಮಾಡಬೇಕು ಎಂದು ಸೂಚನೆ ನೀಡಲಾಗಿದೆ. ಮಾರ್ಚ್ 28, 2025 ರಂದು ಸುಪ್ರೀಂಕೋರ್ಟ್, ಪ್ರಕರಣವೊಂದರಲ್ಲಿ ನೀಡಿದ ನಿರ್ದೇಶನಗಳನ್ನು ಪಾಲಿಸುವಂತೆ ರಾಜ್ಯದ ಎಲ್ಲ ಪೊಲೀಸ್ ಅಧಿಕಾರಿಗಳಿಗೆ ಸುತ್ತೋಲೆಯಲ್ಲಿ ಸೂಚಿಸಲಾಗಿದೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ಗಳಿಗೆ ಸಂಬಂಧಿಸಿದ ಎಫ್‌ಐಆರ್‌ಗಳನ್ನು ಏಕಾಏಕಿ ದಾಖಲಿಸುವುದು ಮತ್ತು ಬಂಧನಗಳನ್ನು ತಪ್ಪಿಸಲು ರಾಜ್ಯದ ಪೊಲೀಸ್ ಅಧಿಕಾರಿಗಳಿಗೆ ಈ ಮಾರ್ಗಸೂಚಿಗಳನ್ನು ಪಾಲಿಸಲು ಸೂಚಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಸುತ್ತೋಲೆಯ ಪ್ರಕಾರ, ಸಾಮಾಜಿಕ ಮಾಧ್ಯಮ ಪೋಸ್ಟ್‌ಗಳಿಗೆ ಸಂಬಂಧಿಸಿದಂತೆ ಯಾವುದೇ ದೂರು ಅಥವಾ ಮಾಹಿತಿಯನ್ನು ಸ್ವೀಕರಿಸಿದಾಗ, ಪೊಲೀಸರು ಪ್ರಾಥಮಿಕ ತನಿಖೆ ನಡೆಸಬೇಕು. ಮಾನ ಹಾನಿ ಅಥವಾ ಅಂತಹುದೇ ಪ್ರಕರಣ ಗಳಲ್ಲಿ ದೂರು ನೀಡುವವರು ಕಾನೂನಿನ ಪ್ರಕಾರ 'ನೊಂದ ವ್ಯಕ್ತಿ' ■6ನೇ ಪುಟಕ್ಕೆ

ಇಂದಿನಿಂದ 2 ವರ್ಷ ತಮನ್ನಾ ಮೈಸೂರು ಸ್ಯಾಂಡಲ್ ರಾಯಭಾರಿ

ಬೆಂಗಳೂರು: ಸರ್ಕಾರಿ ಸ್ವಾಮ್ಯದ ಕರ್ನಾಟಕ ಸಾಬೂನು ಮತ್ತು ಮಾರ್ಜಕಗಳ ನಿಯಮಿತ ತಯಾರಿಸುವ ಉತ್ಪನ್ನಗಳ ಮಾರುಕಟ್ಟೆ ಬಲವರ್ಧನೆಯ ಅಂಗವಾಗಿ ಬಹುಭಾಷಾ ನಟಿ ತಮನ್ನಾ ಭಾಟಿಯಾ ಅವರನ್ನು 2 ವರ್ಷಗಳ ಅವಧಿಗೆ ಪ್ರಚಾರ ರಾಯಭಾರಿಯನ್ನಾಗಿ ನೇಮಿಸಿಕೊಳ್ಳಲಾಗಿದೆ.



ಅವರ ಈ ಕೆಲಸವು ಮಂಗಳವಾರದಿಂದ (ಫೆ.10) ವಿಧ್ಯುಕ್ತವಾಗಿ ಆರಂಭವಾಗಲಿದೆ. ಇದೇ ಸಂದರ್ಭದಲ್ಲಿ ಪಾರಂಪರಿಕ ಹೆಮ್ಮೆಯ ಉತ್ಪನ್ನವಾಗಿರುವ ಮೈಸೂರು ಸ್ಯಾಂಡಲ್ ಸೋಪನ್ನು ನವನವೀನ ರೂಪದೊಂದಿಗೆ ಬಿಡುಗಡೆ ಮಾಡಲಾಗುವುದು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ ಪಾಟೀಲ್ ತಿಳಿಸಿದ್ದಾರೆ.

ಈ ಬಗ್ಗೆ ಮಾತನಾಡಿರುವ ಸಚಿವರು, 'ಕೆಎಸ್‌ಡಿಎಲ್ ಸಂಸ್ಥೆಯ ವಾರ್ಷಿಕ ವಹಿವಾಟನ್ನು 2030 ರ ಹೊತ್ತಿಗೆ 5,000 ಕೋಟಿ ರೂ. ಗಳಿಗೆ ಹೆಚ್ಚಿಸುವ ಗುರಿ ಇಟ್ಟುಕೊಳ್ಳಲಾಗಿದೆ. ಇದಕ್ಕೆ ಪೂರಕವಾಗಿ ಯುವಜನಾಂಗವನ್ನ ■6ನೇ ಪುಟಕ್ಕೆ

ಹಳೆ ಕೆಸರೆ ಬಳಿ ಗುಜರಿ ಗೋಡೌನ್‌ಗಳಿಗೆ ಬೆಂಕಿ

12 ಗೋಡೌನ್‌ಗಳಲ್ಲಿದ್ದ ಲಕ್ಷಾಂತರ ರೂ. ಮೌಲ್ಯದ ಕಾಪರ್ ವೈರ್ ಸೇರಿದಂತೆ ಇನ್ನಿತರೆ ಪದಾರ್ಥ ಭಸ್ಮ


ಹಳೆ ಕೆಸರೆಯಲ್ಲಿ ಬೆಳಗಿನ ಜಾವ ಸಂಭವಿಸಿದ ಬೆಂಕಿ ಅವಘಡದಲ್ಲಿ ಗುಜರಿ ಅಂಗಡಿಗಳು ಸುಟ್ಟು ಭಸ್ಮವಾಗಿವೆ.

ಮೈಸೂರು, ಫೆ. 9(ಆರ್‌ಕೆ)–ಮೈಸೂರಿನ ಹಳೆ ಕೆಸರೆ ಬಳಿ ಸ್ಕ್ರ್ಯಾಪ್ (ಗುಜರಿ) ಗೋಡೌನ್‌ಗಳಿಗೆ ಆಕಸ್ಮಿಕ ಬೆಂಕಿ ಬಿದ್ದು ಲಕ್ಷಾಂತರ ರೂ. ಮೌಲ್ಯದ ಕಾಪರ್ ವೈರ್ ಹಾಗೂ ಇನ್ನಿತರ ವಸ್ತುಗಳು ಸುಟ್ಟು ಭಸ್ಮವಾಗಿರುವ ಘಟನೆ ಇಂದು ಮುಂಜಾನೆ ಸಂಭವಿಸಿದೆ.



ರಿಂಗ್ ರಸ್ತೆ ಸಮೀಪ ವರುಣಾ ನಾಲೆ ಬಳಿ ಇರುವ ಈ ಗುಜರಿ ಗೋಡೌನ್‌ಗಳಲ್ಲಿ ಮುಂಜಾನೆ ಸುಮಾರು 3 ಗಂಟೆ ಸಮಯದಲ್ಲಿ ಇದ್ದಕ್ಕಿದ್ದಂತೆ ಬೆಂಕಿ ಕಾಣಿಸಿಕೊಂಡಿದೆ. ನೋಡು–ನೋಡುತ್ತಿದ್ದಂತೆಯೇ ಬೆಂಕಿ ಜ್ವಾಲೆ ಇತರೆಡೆಗೂ ಹರಡಿ ಒಟ್ಟು 12 ಗೋಡೌನ್‌ಗಳು ಹೊತ್ತಿ ಉರಿದಿವೆ.

ಸ್ಥಳೀಯರು ಮಾಹಿತಿ ನೀಡಿದ ಹಿನ್ನೆಲೆಯಲ್ಲಿ ತಕ್ಷಣ ಸ್ಥಳಕ್ಕೆ ಧಾವಿಸಿದ ಎನ್.ಆರ್. ಠಾಣೆ ಪೊಲೀಸ್ ಪ್ರಭಾರ ಇನ್ಸ್‌ಪೆಕ್ಟರ್ ಕುಮಾರ್ ಹಾಗೂ ಸಿಬ್ಬಂದಿ, ಅಗ್ನಿಶಾಮಕ ಠಾಣೆ ಸಿಬ್ಬಂದಿಗಳನ್ನು ಕರೆಸಿಕೊಂಡು ಸುಮಾರು 3 ಗಂಟೆ ಕಾರ್ಯಾಚರಣೆ ನಡೆಸಿ, ಬೆಂಕಿ ನಂದಿಸಿದರು. ಬನ್ನಿಮಂಟಪದ ಅಗ್ನಿಶಾಮಕ ಠಾಣೆಯ 3 ವಾಹನಗಳು 50ಕ್ಕೂ ಹೆಚ್ಚು ಸಿಬ್ಬಂದಿ ಗೋಡೌನ್‌ಗಳಲ್ಲಿ ಧಗಧಗಿಸುತ್ತಿದ್ದ ಬೆಂಕಿ ನಂದಿಸುವ ಕಾರ್ಯದಲ್ಲಿ ನಿರತರಾಗಿದ್ದರು. ಈ ಸಂದರ್ಭ ಸ್ಥಳದಲ್ಲಿ ದಟ್ಟ ಹೊಗೆ ಕಾಣಿಸಿಕೊಂಡು, ಮುಂಜಾನೆ ಹಳೆ ಕೆಸರೆ ಗ್ರಾಮದ ನಿವಾಸಿಗಳಲ್ಲಿ ಕೆಲಕಾಲ ಆತಂಕ ಮೂಡಿಸಿತ್ತು. ■6ನೇ ಪುಟಕ್ಕೆ

ಬೊಮ್ಮೇನಹಳ್ಳಿ ಬಳಿ 2 ಸಾವಿರ ಎಕರೆ ಪ್ರದೇಶದಲ್ಲಿ ಟೌನ್‌ಶಿಪ್; 1200 ಎಕರೆಯ ಮೊದಲ ಹಂತಕ್ಕೆ ಶೀಘ್ರ ಬೇಡಿಕೆ ಸಮೀಕ್ಷೆ

ಮೈಸೂರು,ಫೆ.9(ಆರ್‌ಕೆ)– ಮೈಸೂರು ತಾಲೂಕು, ಇಲವಾಲ ಹೋಬಳಿ, ಬೊಮ್ಮೇನಹಳ್ಳಿ ಗ್ರಾಮದ ಬಳಿ ಸುಮಾರು 2 ಸಾವಿರ ಎಕರೆ ಪ್ರದೇಶದಲ್ಲಿ ಟೌನ್‌ಶಿಪ್ ನಿರ್ಮಿಸಲು ಮುಂದಾಗಿರುವ ಮೈಸೂರು ಅಭಿವೃದ್ಧಿ ಪ್ರಾಧಿಕಾರ (ಎಂಡಿಎ)ವು ಅದಕ್ಕಾಗಿ ನಿವೇಶನಾಕಾಂಕ್ಷಿಗಳಿಂದ ಬೇಡಿಕೆ ಸಮೀಕ್ಷೆಗೆ ಸಿದ್ಧತೆ ಮಾಡಿಕೊಂಡಿದೆ.


ಕೆ.ಆರ್.ರಕ್ಷಿತ್

ಟೌನ್‌ಶಿಪ್ ಯೋಜನೆಗಾಗಿ ಪ್ರಾಧಿಕಾರವು ಶೇಕಡಾ 50:50ರ ಅನುಪಾತ ದಲ್ಲಿ ರೈತರಿಂದ ಭೂಮಿ ಪಡೆಯಲು ಈಗಾಗಲೇ ಪ್ರಕ್ರಿಯೆ ಆರಂಭಿಸಿರುವ ಪ್ರಾಧಿಕಾರದ ಆಯುಕ್ತ ಕೆ.ಆರ್. ರಕ್ಷಿತ್, ಒಟ್ಟು 2 ಸಾವಿರ ಎಕರೆ ಪ್ರದೇಶದಲ್ಲಿ ಬೊಮ್ಮೇನಹಳ್ಳಿ ವಸತಿ ಬಡಾವಣೆ ನಿರ್ಮಿಸಲು ಯೋಜನೆ ರೂಪಿಸಿದ್ದು, ಅದರಲ್ಲಿ 1200 ಎಕರೆ ಭೂಮಿಯಲ್ಲಿ ಮೊದಲನೇ ಹಂತದ ಯೋಜನೆ ಅನುಷ್ಠಾನಕ್ಕೆ ನಿವೇಶನಾಕಾಂಕ್ಷಿಗಳಿಂದ ಬೇಡಿಕೆ ಸಮೀಕ್ಷೆಗಾಗಿ ಸಿದ್ಧತೆ ನಡೆಸಿದ್ದಾರೆ. ಈ ಕುರಿತು 'ಮೈಸೂರು ಮಿತ್ರ'ನಿಗೆ ಮಾಹಿತಿ ನೀಡಿರುವ ರಕ್ಷಿತ್, ವಸತಿ ಬಡಾವಣೆಯಲ್ಲಿ 20X30, 30X40, 40X60, 50X80 ಅಡಿ ■6ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ಚಿನ್ನ : ಯಾಕೋ ಪರೀಕ್ಷೆ ಬರೆಯೋದು ಬಿಟ್ಟು ಡ್ಯಾನ್ಸ್ ಮಾಡ್ತಿದ್ದೀಯಾ?

ಗುಂಡ : ಟೀಚರ್ ಹೇಳಿದ್ರು, ಗಣಿತ ಪರೀಕ್ಷೆಯಲ್ಲಿ ಪ್ರತಿ ಸ್ಟೆಪ್‌ಗೂ ಅಂಕ ಇದೆ ಅಂತಾ !!

ಮೈಸೂರು ಮಿತ್ರ

ಮಂಗಳವಾರ, ಫೆಬ್ರವರಿ 10, 2026

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ

(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ..........

ನಮ್ಮನ್ನು ಪ್ರೀತಿ ಮಾಡೋರೂ ಬೈದ್ರೂ ಏನೂ ಆಗಲ್ಲ. ಕಷ್ಟ ಕೊಟ್ರು ಏನೂ ಅನ್ಸಲ್ಲ. ಆದರೆ ಮಾತನಾಡದೆ ಮೌನವಾದಾಗ ಜೀವ ಹೋದಂತೆ ಆಗುತ್ತೆ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು	ಸಾಲ್ಗಾರ ಸುಮ್ಮನಿದ್ರು ಸಾಕ್ಷೀಗಾರ ಸುಮ್ಮನಿರ.

ನಿಮ್ಮ ಪತ್ರಗಳು

ಸಾಂವಿಧಾನಿಕ ಮೌಲ್ಯಗಳನ್ನು ಗೌರವಿಸೋಣ

ಮಾನ್ಯರೆ,

ನಮ್ಮದು ವಿಶ್ವದ ಅತಿ ದೊಡ್ಡ ಪ್ರಜಾಪ್ರಭುತ್ವ ಭೌಗೋಳಿಕ, ಸಾಮಾಜಿಕ, ಆರ್ಥಿಕ, ಸಾಂಸ್ಕೃತಿಕ ವೈವಿಧ್ಯತೆಗಳ ದೇಶವಾಗಿದೆ. ಪ್ರಪಂಚದ ಯಾವ ದೇಶವು ಹೊಂದಿರದ ಇಷ್ಟೊಂದು ವಿಭಿನ್ನತೆಯ ದೇಶಕ್ಕೆ ಅಷ್ಟೆ ಬಲಿಷ್ಠವಾದ ಸಂವಿಧಾನವನ್ನು ರೂಪಿಸಿ ದೇಶದ ಸಮಗ್ರತೆ ಮತ್ತು ಏಕತೆಯನ್ನು ಸಾಮಾಜಿಕ, ಆರ್ಥಿಕ ಅಭಿವೃದ್ಧಿಯನ್ನು ಸಾಧಿಸಿ ವಿಶ್ವಶಾಂತಿಗೆ ಕೊಡುಗೆಯನ್ನು ನೀಡುತ್ತಾ ಬಂದಿರುವುದು ಸಹ ನಮ್ಮ ದೇಶದ ಹೆಮ್ಮೆಯ ಸಂಗತಿಯಾಗಿದೆ. ವಿಪರ್ಯಾಸವೆಂದರೆ ಇತ್ತೀಚಿನ ದಿನಮಾನಗಳಲ್ಲಿ ಸಾಂವಿಧಾನಿಕ ಪ್ರಮುಖರಿಂದಲೇ ಸಾಂವಿಧಾನಿಕ ಹುದ್ದೆಗಳ ಮಾನ ಹರಾಜಾಗುತ್ತಿರುವುದನ್ನು ನೋಡಿದರೆ ನಮ್ಮ ನೆರೆಯ ದೇಶಗಳು ಎದುರಿಸುತ್ತಿರುವ ವಿಷಮ ರಾಜಕೀಯ ಅಸ್ಥಿರತೆಯನ್ನೆ ಭಾರತ ಅನುಭವಿಸಬೇಕಾದ ಪರಿಸ್ಥಿತಿ ಎದುರಾಗುವ ದಿನಗಳು ದೂರವಿಲ್ಲವೇನೋ ಎನಿಸುತ್ತಿದೆ.

ರಾಜಕಾರಣಿಗಳು, ಧಾರ್ಮಿಕ ನಾಯಕರು, ಶಿಕ್ಷಿತರು ಸಾಂವಿಧಾನಿಕ ಮೌಲ್ಯಗಳಿಗೆ ಕಿಂಚಿತ್ತು ಬೆಲೆ ಕೊಡದೆ ಸಂವಿಧಾನವನ್ನು ತಮ್ಮ ಅನುಕೂಲಕ್ಕೆ ತಕ್ಕಂತೆ ವ್ಯಾಖ್ಯಾನಿಸಿ ಕೋಲಾಹಲವೆಬ್ಬಿಸುತ್ತಿದ್ದಾರೆ. ಸಂಸತ್ತು ಮತ್ತು ವಿಧಾನಮಂಡಲಗಳಲ್ಲಿ ಕಿರುಚಾಟ, ಬಡಿದಾಟ, ಅಸಾಂವಿಧಾನಿಕ ವರ್ತನೆಯೇ ಮೇಲುಗೈ ಸಾಧಿಸುತ್ತಿದೆ. ಸೈದ್ಧಾಂತಿಕ ಮತ್ತು ಅಭಿವೃದ್ಧಿ ರಾಜಕಾರಣ ಹಳ್ಳ ಹಿಡಿದು ಹಣ ಮತ್ತು ಜಾತಿ ಬಲದ ರಾಜಕೀಯ ಮತ್ತು ಅಧಿಕಾರ ಸಂವಿಧಾನವನ್ನು ಹಿಂಸೆಗೀಡುಮಾಡಿದೆ. ಜನಪರ ಪ್ರಜಾಪ್ರಭುತ್ವ ಮರೆಯಾಗಿ ನಿರಂಕುಶ ರಾಜಕೀಯ ಪ್ರಭುತ್ವವನ್ನು ವಾಟ್ಸಾಪ್ ಯೂನಿವರ್ಸಿಟಿ ಮತ್ತು ಸಾಮಾಜಿಕ ಜಾಲತಾಣಗಳ ಮೂಲಕ ಸಾಂಸ್ಥಿಕರಣಗೊಳಿಸಲಾಗುತ್ತಿದೆ. ಬೌದ್ಧಿಕ ಮತ್ತು ಮಾನಸಿಕ ದಿವಾಳಿತನದ ನಾಯಕರು ಆಳುತ್ತಿರುವ ಸಂದರ್ಭದಲ್ಲಿ ದೇಶದ ಯುವಕರಲ್ಲಿ ಸಂವಿಧಾನವೊಂದೇ ಭರವಸೆಯಾಗಿದೆ ಎಂಬುದನ್ನು ಶಿಕ್ಷಣದ ಮೂಲಕ ಅರಿವಿನ ಪ್ರಜ್ಞೆಯನ್ನು ಮೂಡಿಸಿ ಸಂವಿಧಾನವನ್ನು ಉಳಿಸಿಕೊಳ್ಳಬೇಕಾದ ಸಂಕಲ್ಪವನ್ನು ನಾವಿಂದು ಮಾಡಬೇಕಿದೆ.

– ಬ್ಯಾ.ರಾ. ಪ್ರಸನ್ನಕುಮಾರ್, ಬ್ಯಾಡರಹಳ್ಳಿ, ಮೈಸೂರು ಜಿಲ್ಲೆ

ಆತ್ಮಹತ್ಯೆಗಳ ಬಗ್ಗೆ ಕೌನ್ಸಿಲಿಂಗ್ ನಡೆಯಲಿ

ಮಾನ್ಯರೆ,

ಇಂದಿನ ಆಧುನಿಕ ಜೀವನ ಶೈಲಿಯ ಬದುಕಿನಲ್ಲಿ ಸಿಲುಕಿ ಆಧುನಿಕ ಆಹಾರ ಪದ್ಧತಿಗೆ ಮಾರುಹೋಗಿ ಕೆಲವರಲ್ಲಿ ಅನಾರೋಗ್ಯವು ಕಿರಿಯರಿಂದ ಹಿಡಿದು ಹಿರಿಯರವರೆಗೂ ಎದ್ದು ಕಾಣುವ ಸ್ಥಿತಿ ನಿರ್ಮಾಣವಾಗಿದೆ.

ಈ ಜೀವನ ಶೈಲಿ ಒತ್ತಡವಲ್ಲದೆ ಇನ್ನು ಕೆಲವರು ಬೇರೆ ಬೇರೆ ಕಾರಣಗಳ ಒತ್ತಡಕ್ಕೊಳಗಾಗಿ ಆತ್ಮಹತ್ಯೆಗಳು ಕೆಲವು ಕಡೆ ನಡೆಯುತ್ತಿಲ್ಲವೇ? ರೈತ ಸಾಲದಿಂದ ಆತ್ಮಹತ್ಯೆ, ಉದ್ದಮಿಗಳು ನಷ್ಟಗಳ ಒತ್ತಡಕ್ಕೆ ಆತ್ಮಹತ್ಯೆ, ಮೇಲಧಿಕಾರಿಗಳ ಕಿರುಕುಳದಿಂದ ಆತ್ಮಹತ್ಯೆ, ಕಾಲೇಜಿನ ಕ್ಯಾಂಪಸ್‌ನಲ್ಲಿ ನಡೆಯುವ ರ್‍ಯಾಗಿಂಗ್‌ಗಳಿಂದ ಆತ್ಮಹತ್ಯೆ, ಕುಟುಂಬ ಕಲಹದಿಂದ ಬೇಸತ್ತು ಆತ್ಮಹತ್ಯೆ, ಹೀಗೆ ನಾನಾ ತರದ ಆತ್ಮಹತ್ಯೆಗಳ ಸರಮಾಲೆಗಳೇ ನಡೆಯುತ್ತಿವೆ. ಇಂತಹ ಆತ್ಮಹತ್ಯೆ ತಡೆಯುವ ದೃಷ್ಟಿಯಿಂದ ಸೂಕ್ತ ಮನಸಿನ ಕೌನ್ಸಿಲಿಂಗ್ ನಡೆಯಲಿ.

–ಪಿ.ಸಿ.ಕಂಗಾಣಿಸೋಮ, ಕ್ಯಾತಮಾರನಹಳ್ಳಿ, ಮೈಸೂರು.

ಸರ್ಕಾರ ಕಂದಾಯ ಅದಾಲತ್ ನಡೆಸಲಿ

ಮಾನ್ಯರೆ,

ಕಳೆದ ವರ್ಷಗಳಲ್ಲಿ ಸರ್ಕಾರ ಗ್ರಾಮ ಲೆಕ್ಕಾಧಿಕಾರಿಗಳ ವೃತ್ತ ಮತ್ತು ಹೋಬಳಿ ಕೇಂದ್ರಗಳಲ್ಲಿ ಕಂದಾಯ ಅದಾಲತ್ ಕಾರ್ಯಕ್ರಮ ಆಯೋಜಿಸುವ ಮೂಲಕ ಸಾರ್ವಜನಿಕರಿಗೆ ಹಲವಾರು ಅನುಕೂಲ ಮಾಡಿಕೊಟ್ಟಿತ್ತು. ಈ ಕಾರ್ಯಕ್ರಮವು ಮೊದಲಿಗೆ ಗ್ರಾಮ ಆಡಳಿತಾಧಿಕಾರಿಗಳ ವೃತ್ತ ಮಟ್ಟದಲ್ಲಿ ನಡೆದು ಅನಂತರ ಹೋಬಳಿ ಮಟ್ಟದಲ್ಲಿ ನಡೆಯುತಿತ್ತು. ವೃತ್ತ ಮಟ್ಟದಲ್ಲಿ ಸಲ್ಲಿಕೆಯಾದ ಅರ್ಜಿಗಳನ್ನು ಹೋಬಳಿ ಮಟ್ಟದಲ್ಲಿ ಸಾಧ್ಯವಾದಷ್ಟು ಇತ್ಯರ್ಥ ಪಡಿಸಲಾಗುತ್ತಿತ್ತು ಮತ್ತು ಸ್ಥಳದಲ್ಲೇ ಇತ್ಯರ್ಥ ಪಡಿಸಬಹುದಾದ ಸಮಸ್ಯೆಗಳಿಗೆ ಅಲ್ಲೆ ಪರಿಹಾರ ನೀಡುತ್ತಿದ್ದರು. ಈ ಅದಾಲತ್‌ನಲ್ಲಿ ತಹಶೀಲ್ದಾರರು, ಶಿರಸ್ತೇದಾರರು, ಉಪ ತಹಶೀಲ್ದಾರ್ ಗ್ರಾಮಲೆಕ್ಕಾಧಿಕಾರಿಗಳು, ರಾಜಸ್ವ ನಿರೀಕ್ಷಕರು ಭಾಗವಹಿಸುತ್ತಾರೆ. ಕಂದಾಯ ಇಲಾಖೆಯು ನಡೆಸುವ ಈ ಕಾರ್ಯಕ್ರಮದಲ್ಲಿ ಜಾತಿ ಆದಾಯ ಪ್ರಮಾಣ ಪತ್ರ, ವಂಶವೃಕ್ಷ, ಖಾತೆ ಬದಲಾವಣೆ, ನಿರ್ಗತಿಕ ವಿಧವ ವೇತನ, ಮನಸ್ವಿನಿ, ವೃದ್ಧಾಪ್ಯ ವೇತನ ಇಂತಹ ಹಲವು ಸಮಸ್ಯೆಗಳನ್ನು ಪರಿಹರಿಸಲು ಸೂಕ್ತವಾದ ವೇದಿಕೆಯಾಗಿತ್ತು ಆದ್ದರಿಂದ ಕಂದಾಯ ಸಚಿವರಾದ ಕೃಷ್ಣಬೈರೇಗೌಡ ರವರು ಇದನ್ನು ಜಾರಿಗೆ ತಂದರೆ ಸಾರ್ವಜನಿಕರಿಗೆ ಉಪಯೋಗವಾಗುತ್ತದೆ.

–ದಡದಹಳ್ಳಿ ರಮೇಶ್, ಚಂದಕವಾಡಿ ಹೋಬಳಿ, ಚಾಮರಾಜನಗರ ಜಿಲ್ಲೆ

ಕೇಂದ್ರದ ನೇಮಕಾತಿಗಳಲ್ಲಿ ಕನ್ನಡ ಕಡ್ಡಾಯವಾಗಲಿ

ಮಾನ್ಯರೆ,

ಕೇಂದ್ರ ಸರ್ಕಾರದ ವಿವಿಧ ಇಲಾಖೆಗಳ ನೇಮಕಾತಿ ಪರೀಕ್ಷೆಗಳಲ್ಲಿ ಕನ್ನಡ ಭಾಷೆಯನ್ನು ಕಡೆಗಣಿಸುತ್ತಿರುವುದು ಕನ್ನಡಿಗರ ಉದ್ಯೋಗದ ಹಕ್ಕಿನ ಮೇಲಿನ ನೇರ ದಾಳಿಯಾಗಿದೆ. ರೈಲ್ವೆ ಇಲಾಖೆ ಮಾತ್ರವಲ್ಲದೆ ಬ್ಯಾಂಕಿಂಗ್, ಎಸ್‌ಎಸ್‌ಸಿ ಮತ್ತು ಅಂಚೆ ಇಲಾಖೆ ಪರೀಕ್ಷೆಗಳಲ್ಲಿ ಕನ್ನಡಕ್ಕೆ ಅವಕಾಶ ನೀಡದಿರುವುದು ಶೋಚನೀಯ.

ಅಂಕಿ–ಅಂಶಗಳ ಪ್ರಕಾರ ಪರೀಕ್ಷೆಗಳು ಕೇವಲ ಹಿಂದಿ ಅಥವಾ ಇಂಗ್ಲಿಷ್‌ನಲ್ಲಿ ಇರುವುದರಿಂದ ಗ್ರಾಮೀಣ ಭಾಗದ ಸುಮಾರು ಶೇ.65 ರಷ್ಟು ಪ್ರತಿಭಾವಂತ ಕನ್ನಡಿಗರು ಸ್ಪರ್ಧೆಯಿಂದ ಹೊರಗುಳಿಯುವಂತಾಗಿದೆ. ಇದು ಕೇವಲ ಭಾಷೆಯ ಪ್ರಶ್ನೆಯಲ್ಲ ಬದಲಿಗೆ ಸ್ಥಳೀಯರ ಆರ್ಥಿಕ ಸಬಲೀಕರಣದ ಪ್ರಶ್ನೆಯಾಗಿದೆ. ಪ್ರಾದೇಶಿಕ ಭಾಷೆಗಳಿಗೆ ಆದ್ಯತೆ ನೀಡದಿದ್ದರೆ ಒಕ್ಕೂಟ ವ್ಯವಸ್ಥೆಯ ಆಶಯಕ್ಕೆ ಧಕ್ಕೆಯಾಗುತ್ತದೆ. ಆದ್ದರಿಂದ ಸಂವಿಧಾನದ 8ನೇ ಅನುಸೂಚಿಯಲ್ಲಿರುವ ಕನ್ನಡ ಸೇರಿದಂತೆ ಎಲ್ಲಾ ಪ್ರಾದೇಶಿಕ ಭಾಷೆಗಳಲ್ಲಿ ಪರೀಕ್ಷೆ ಬರೆಯಲು ಮುಕ್ತ ಅವಕಾಶ ನೀಡಬೇಕು ಮತ್ತು ಸ್ಥಳೀಯ ಭಾಷಾ ಜ್ಞಾನವನ್ನು ಕಡ್ಡಾಯ ಮಾನದಂಡವನ್ನಾಗಿ ಮಾಡಬೇಕು. ಇಲ್ಲದಿದ್ದರೆ ನಮ್ಮ ನೆಲದ ಉದ್ಯೋಗಗಳು ಪರಭಾಷಿಗರ ಪಾಲಾಗುವುದನ್ನು ತಡೆಯಲು ಸಾಧ್ಯವಿಲ್ಲ.

–ಡಾ.ವಿಜಯಕುಮಾರ ಎಚ್.ಕೆ., ಮೈಸೂರು.

ಚಿಂತನೆ



ಡಾ. ವಿ. ರಂಗನಾಥ್

ಲೇಖಕರು ಹಾಗೂ ನಿವೃತ್ತ ತಹಸೀಲ್ದಾರರು

ಮೊ: 94482 08746/ 97421 79000

ಸಮಸ್ಯೆಯ ಕಾರಣ ಅರಿತರೆ ಅದೇ ಅರ್ಧ ಪರಿಹಾರ!

ನಾವು ನಮ್ಮ ಜೀವನದಲ್ಲಿ ನೂರಾರು ಸಮಸ್ಯೆಗಳನ್ನು ಎದುರಿಸುತ್ತೇವೆ. ಅದರಲ್ಲಿ ಕೆಲವು ತಾನಾಗೇ ಬರುವಂತಹುದಾದರೆ, ಕೆಲವು ನಮ್ಮ ತಪ್ಪುಗಳಿಂದಲೇ ಬರುವಂತಹುದು. ಸಮಸ್ಯೆ ಎಂದು ಬಂದಾಗ ಅದನ್ನು ನಾವು ಎದುರಿಸಿ ನಿಲ್ಲಬೇಕು. ಅಂತಹ ಸಮಯದಲ್ಲಿ ಮೊದಲು ಸಮಸ್ಯೆ ಆರಂಭವಾಗಿದ್ದು, ಎಲ್ಲಿಂದ ಎಂಬುದನ್ನು ಹುಡುಕಬೇಕು. ಸಾಮಾನ್ಯವಾಗಿ ನುರಿತ ವೈದ್ಯರು ತಮ್ಮ ಬಳಿಗೆ ಬರುವ ರೋಗಿಗಳ ರೋಗಕ್ಕೆ ನೇರವಾದ ಚಿಕಿತ್ಸೆ ನೀಡುವುದಿಲ್ಲ.

ಬದಲಾಗಿ ಆ ರೀತಿ ಅನಾರೋಗ್ಯಕ್ಕೆ ಕಾರಣ ಏನು ಎಂದು ಕಂಡುಹಿಡಿಯಲು ಪ್ರಯತ್ನಿಸುತ್ತಾರೆ. ಆ ಕಾರಣ ಕಂಡುಹಿಡಿದ ನಂತರ ಚಿಕಿತ್ಸೆ ನೀಡಿದರೆ, ಆ ರೋಗಿಗೆ ಮತ್ತೆ ಆ ಖಾಯಿಲೆ ಬರುವುದಿಲ್ಲ. ಬದಲಾಗಿ ಆತುರಕ್ಕೆ ರೋಗಿ ಹೇಳಿದ ಖಾಯಿಲೆಗೆ ಚಿಕಿತ್ಸೆ ನೀಡಿದರೆ ಅದು ತಾತ್ಕಾಲಿಕ ಉಪಶಮನವಾಗುವುದೇ ವಿನಃ ಶಾಶ್ವತ ಪರಿಹಾರವಾಗದೆ ಮತ್ತೆ ಅದೇ ರೀತಿಯ ಅಥವಾ ಅದಕ್ಕಿಂತ ಗಂಭೀರವಾದ ಖಾಯಿಲೆ ಬರಬಹುದು. ಒಬ್ಬ ರೋಗಿ ತನಗೆ ಹೊಟ್ಟೆ ನೋವು ಎಂದಾಗ ಹೊಟ್ಟೆ ನೋವಿನ ಉಪಶಮನಕ್ಕೆ ಔಷಧಿ ನೀಡಬಾರದು. ಬದಲಿಗೆ ಆ ಹೊಟ್ಟೆನೋವು ಬರಲು ಕಾರಣವೇನು ಎಂಬುದನ್ನು ಕಂಡುಕೊಳ್ಳಬೇಕು. ಆತನು ತನಗೆ ಒಗ್ಗದ ಆಹಾರ ಸೇವಿಸಿರಬಹುದು, ಇಲ್ಲ ಅತೀ ಹೆಚ್ಚು ಆಹಾರ ಸೇವನೆಯೂ ಕಾರಣವಾಗಿರಬಹುದು, ಅದನ್ನು ಮೊದಲು ಗುರುತಿಸಬೇಕು. ನಂತರ ಚಿಕಿತ್ಸೆ ನೀಡಬೇಕು. ಹಾಗಾದಾಗ ಹೊಟ್ಟೆನೋವಿಗೆ ಒಂದು ಶಾಶ್ವತ ಪರಿಹಾರ ಸಾಧ್ಯ.

ಹಾಗೆಯೇ ನಮಗೆ ತೊಂದರೆ ಬಂದಿದೆ ಎಂದರೆ ಅದು ಏಕೆ ಬಂದಿತು ಎಂಬುದನ್ನು ಮೊದಲು ವಿಶ್ಲೇಷಿಸಬೇಕು. ಆರ್ಥಿಕ ಸಂಬಂಧದ ಸಮಸ್ಯೆಯಾದರೆ ವ್ಯಕ್ತಿಯ ಆದಾಯ ಹಾಗೂ ಖರ್ಚಿನ ವಿಶ್ಲೇಷಣೆ ಮಾಡಬೇಕಾಗುತ್ತದೆ. ಆತನಿಗೆ ಸಂಪಾದನೆಗಿಂತ ಖರ್ಚಿನ ಬಗ್ಗೆ ಒಲವಿದ್ದರೆ ಆರ್ಥಿಕ ಮುಗ್ಗಟ್ಟು ಬಂದಿರುತ್ತದೆ. ಆಗ ಆತನಿಗೆ ಆದಾಯಕ್ಕಿಂತ ಖರ್ಚನ್ನು ಹೇಗೆ ಮಿತಿಗೊಳಿಸಬೇಕು ಎಂಬುದರ ಬಗ್ಗೆ ತಿಳುವಳಿಕೆ ನೀಡಬೇಕು ಹಾಗೂ ಅದರಿಂದ ಬಂದಿರುವ ಸಮಸ್ಯೆಯ ಬಗ್ಗೆ ತಿಳಿಸಬೇಕು. ಆಗ ಆತ ಎಚ್ಚೆತ್ತರೆ ಆತನಿಗೆ ಮುಂದೆ ಆರ್ಥಿಕ ಸಮಸ್ಯೆ ಉದ್ಭವಿಸುವುದಿಲ್ಲ.

ಅದೇ ರೀತಿ ನಾವು ಒತ್ತಡದಲ್ಲಿ ಬಳಲುತ್ತಿದ್ದರೆ, ಯಾವುದರಿಂದ ಒತ್ತಡವಾಗುತ್ತಿದೆ ಎಂದು ತಿಳಿಯಬೇಕು. ಬದಲಾಗಿ ಒತ್ತಡ ಕಡಿಮೆ ಮಾಡಬೇಕೆಂದರೆ ನಿದ್ರೆ ಗುಳಿಗೆ ಸೇವಿಸಿ ಮಲಗಬೇಕು ಎಂದು ಪರಿಹಾರ ಸೂಚಿಸಬಾರದು. ಆತ ನಿದ್ರೆಯಿಂದ ಎಚ್ಚರವಾದ ಮೇಲೆ ಒತ್ತಡ ದ್ವಿಗುಣವಾಗಿರುತ್ತದೆ. ಮೊದಲನೆಯದು ಹಿಂದಿನ ಒತ್ತಡ, ಚಿಂತೆ ದೂರ ಹೋಗಿರುವುದಿಲ್ಲ ಹಾಗೂ ಸೇವಿಸಿದ ನಿದ್ರೆಯ ಮಾತ್ರೆ ಮತ್ತಷ್ಟು ಆರೋಗ್ಯದ ಸಮಸ್ಯೆ ತಂದಿಡಬಹುದು. ಈ ಬಗ್ಗೆ ನಮಗೆ ಗೊತ್ತಾಗಬೇಕು.

ಸಾಮಾನ್ಯವಾಗಿ ನಮ್ಮ ಸಮಸ್ಯೆಗಳು ನಮ್ಮ ನಡವಳಿಕೆಯಿಂದಲೇ ಬಂದಿರುತ್ತವೆ. ನಮ್ಮ ಕೈಮೀರಿದ ಕೆಲಸಗಳಿಗೆ ಕೈಹಾಕಿ ಸಮಸ್ಯೆ ತಂದಿಟ್ಟುಕೊಳ್ಳುತ್ತೇವೆ. ಇತ್ತೀಚೆಗೆ ಸ್ವತಃ ಗುಂಡು ಹಾರಿಸಿಕೊಂಡು ಅಸುನೀಗಿದ ಖ್ಯಾತ ಉದ್ಯಮಿ ಸಿ.ಜೆ.ರಾಯ್ ಪ್ರಕರಣವನ್ನೇ ನೋಡಿ ಅವರು ಬಹುದೊಡ್ಡ ಉದ್ಯಮಿ ಹಾಗೂ ಸಾವಿರಾರು ಕೋಟಿ ರೂಪಾಯಿ ಆಸ್ತಿ ಹೊಂದಿದ್ದರು. ಆದರೂ ಅವರು ಆದಾಯ ತೆರಿಗೆ ಸರಿಯಾಗಿ ಉತ್ತರ ನೀಡಲಾಗದೆ ಆತ್ಮಹತ್ಯೆ ಮಾಡಿಕೊಂಡರು. ಈ ಹಿಂದೆ ಕೆಫೆ ಕಾಫಿ ಡೇ ಮಾಲೀಕ ಸಿದ್ಧಾರ್ಥ ಅವರು ಇದೇ ರೀತಿ ಸಾವಿರಾರು ಕೋಟಿ ಆಸ್ತಿ ಇದ್ದರೂ ಆತ್ಮಹತ್ಯೆಗೆ ಶರಣಾಗಿದ್ದರು. ಸಾಮಾನ್ಯವಾಗಿ ಕೈಯ್ಯಲ್ಲಿ ಹಣವಿಲ್ಲದೆ ಆತ್ಮಹತ್ಯೆಗೆ ಶರಣಾಗುವ ಹಲವಾರು ಉದಾಹರಣೆಗಳು ನಮಗೆ ಗೊತ್ತು.

ಆದರೆ, ಕೈಯ್ಯಲ್ಲಿ ಸಾವಿರಾರು ಕೋಟಿ ಹಣವಿದ್ದರೂ ಆತ್ಮಹತ್ಯೆ ಮಾಡಿಕೊಳ್ಳುತ್ತಾರೆ ಎಂದರೆ ಅದಕ್ಕೆ ಕಾರಣ ಸಾಮಾನ್ಯ ಜನರಿಗೆ ಅರ್ಥವಾಗುವುದಿಲ್ಲ. ಇಲ್ಲಿಯೂ ಸಮಸ್ಯೆಗೆ ಹಲವಾರು ಕಾರಣಗಳಿವೆ. ಅದನ್ನು ಆತ್ಮಹತ್ಯೆ ಮಾಡಿಕೊಳ್ಳುವ ಮುಂಚೆಯೇ ಶಾಂತವಾಗಿ ಯೋಚಿಸಿ ಪರಿಹರಿಸಿಕೊಂಡಿದ್ದರೆ ಆತ್ಮಹತ್ಯೆಯಂತಹ ವಿಪರೀತದ ಯೋಚನೆ ಅವರಿಗೆ ಬರುತ್ತಿರಲಿಲ್ಲ. ಹಣ ಮಾಡುವ ಧಾವಂತದಲ್ಲಿ, ಅದಕ್ಕೆ ಪಾವತಿಸಬೇಕಾದ ತೆರಿಗೆ ಪಾವತಿಸಿದರೆ ಇಂತಹ ಪರಿಸ್ಥಿತಿ ಬರುವುದಿಲ್ಲ. ಇಲ್ಲಿ ಸಮಸ್ಯೆಗೆ ಪರಿಹಾರ ತೆರಿಗೆ ಪಾವತಿಯೇ ಆಗಿರುತ್ತದೆ. ಅದನ್ನು ಪಾವತಿಸಿದ್ದಲ್ಲಿ ಇಂತಹ ಪರಿಸ್ಥಿತಿ ಬರುತ್ತಿರಲಿಲ್ಲ. ಈ ಬಗ್ಗೆ ಅವರು ಶಾಂತವಾಗಿ ಯೋಚಿಸಬೇಕಿತ್ತು ಹಾಗೂ ಅದಕ್ಕೆ ಸೂಕ್ತ ಪರಿಹಾರ ನೀಡಬಲ್ಲಂತಹವರೊಡನೆ ಸಲಹೆ ಪಡೆಯಬೇಕಿತ್ತು.



> ಸಮಸ್ಯೆಯೊಂದಿಗೆ ಸಾಮಾನ್ಯವಾಗಿ ಪರಿಹಾರವೂ ಜೊತೆಗೇ ಇರುತ್ತದೆ. ಆದರೆ ನಮಗೆ ಸಮಸ್ಯೆ ದೊಡ್ಡದಾಗಿ ಕಾಣಿಸಿಕೊಂಡಾಗ ಪರಿಹಾರವೇ ಇಲ್ಲವೇನೋ ಎಂಬಂತೆ ಆಗಿಬಿಡುತ್ತದೆ. ಅಂತಹ ಸಮಯದಲ್ಲಿ ನಮ್ಮ ಹಿತೈಷಿಗಳೊಂದಿಗೆ ಸಮಾಲೋಚನೆ ಮಾಡಬೇಕಾಗುತ್ತದೆ. ನಾವು ಸಮಸ್ಯೆ ಬಂದಾಗ ಅದರ ಮೂಲ ಎಲ್ಲಿದೆ ಎಂಬುದನ್ನು ಕಂಡುಕೊಳ್ಳಬೇಕು. ಇದಕ್ಕೆ ಮರವನ್ನು ಉದಾಹರಣೆಯಾಗಿ ತೆಗೆದುಕೊಳ್ಳಬಹುದು. ಮರದ ಎಲೆಗಳು ವಿನಾಕಾರಣ ಉದುರುತ್ತಿವೆ. ಕಾಂಡ ಒಣಗುತ್ತಿದೆ ಎಂದರೆ ಅದಕ್ಕೆ ಹೊರಕಾಣುವ ಮರ ಕಾರಣವಾಗಿರುವುದಿಲ್ಲ. ಅದಕ್ಕೆ ಕಾರಣ ಬೇರು ಆಗಿರುತ್ತದೆ. ಅಂತಹ ಸಮಯದಲ್ಲಿ ಕೊಂಬೆಗೆ, ಎಲೆಗಳಿಗೆ ಚಿಕಿತ್ಸೆ ನೀಡಿದರೆ ಮರ ಉಳಿಯುವುದಿಲ್ಲ.

ಆದರೆ ಅವರು ಅದನ್ನು ಬಿಟ್ಟು ಆತ್ಮಹತ್ಯೆಗೆ ಶರಣಾಗಿದ್ದು ಸರಿ ಎನ್ನಿಸುವುದಿಲ್ಲ.

ಸಮಸ್ಯೆಯೊಂದಿಗೆ ಸಾಮಾನ್ಯವಾಗಿ ಪರಿಹಾರವೂ ಜೊತಗೇ ಇರುತ್ತದೆ. ಆದರೆ ನಮಗೆ ಸಮಸ್ಯೆ ದೊಡ್ಡದಾಗಿ ಕಾಣಿಸಿಕೊಂಡಾಗ ಪರಿಹಾರವೇ ಇಲ್ಲವೇನೋ ಎಂಬಂತೆ ಆಗಿಬಿಡುತ್ತದೆ. ಅಂತಹ ಸಮಯದಲ್ಲಿ ನಮ್ಮ ಹಿತೈಷಿಗಳೊಂದಿಗೆ ಸಮಾಲೋಚನೆ ಮಾಡಬೇಕಾಗುತ್ತದೆ. ನಾವು ಸಮಸ್ಯೆ ಬಂದಾಗ ಅದರ ಮೂಲ ಎಲ್ಲಿದೆ ಎಂಬುದನ್ನು ಕಂಡುಕೊಳ್ಳಬೇಕು. ಇದಕ್ಕೆ ಮರವನ್ನು ಉದಾಹರಣೆಯಾಗಿ ತೆಗೆದುಕೊಳ್ಳಬಹುದು.

ಮರದ ಎಲೆಗಳು ವಿನಾಕಾರಣ ಉದುರುತ್ತಿವೆ. ಕಾಂಡ ಒಣಗುತ್ತಿದೆ ಎಂದರೆ ಅದಕ್ಕೆ ಹೊರಕಾಣುವ ಮರ ಕಾರಣವಾಗಿರುವುದಿಲ್ಲ. ಅದಕ್ಕೆ ಕಾರಣ ಬೇರು ಆಗಿರುತ್ತದೆ. ಅಂತಹ ಸಮಯದಲ್ಲಿ ಕೊಂಬೆಗೆ, ಎಲೆಗಳಿಗೆ ಚಿಕಿತ್ಸೆ ನೀಡಿದರೆ ಮರ ಉಳಿಯುವುದಿಲ್ಲ.

ಒಂದು ಮರವು ಸಮೃದ್ಧವಾಗಿದೆ ಎಂದರೆ ಅದರ ಬೇರು ಗಟ್ಟಿಯಾಗಿದೆ ಎಂಬುದನ್ನು ಗಮನಿಸಬೇಕು. ಮರವನ್ನು ಬೆಳೆಸುವುದೂ ಒಂದು ಕಲೆಯೇ, ಅದು ನಮ್ಮ ಜೀವನದಂತೆ. ಮರವನ್ನು ಬೆಳೆಸುವಾಗ ಅದರ ಬೇರಿನ ಕಡೆಗೆ ನಮ್ಮ ಗಮನವಿರಬೇಕು. ಮರಕ್ಕೆ ನೀರು ಬೇಕು ಎಂದಾದಾಗ ಕೊಂಬೆಗೆ ಅಥವಾ ಎಲೆಗಳಿಗೆ ನೀರು ಹಾಕಿದರೆ ಪ್ರಯೋಜನವಾಗುವುದಿಲ್ಲ. ನೀರು ಹಾಕಬೇಕಾದದ್ದು ಬೇರಿಗೆ, ಅಂದರೆ ಮರದ ಬುಡಕ್ಕೆ. ಅಲ್ಲಿಂದ ಅದರ ನಾಳಗಳು ನೀರನ್ನು ಹೀರಿ ಕೊಂಬೆಕೊಂಬೆಗೆ ತಲುಪಿಸುತ್ತದೆ. ನಮ್ಮ ಜೀವನವೂ ಹಾಗೆಯೇ ನಮ್ಮ ಬೇರನ್ನು ಮೊದಲು ಗಟ್ಟಿ ಮಾಡಿಕೊಳ್ಳಬೇಕು. ಹಾಗೆಂದರೆ ನಮ್ಮ ಜೀವನವಿಧಾನ ಸರಿಯಾಗಿಸಿಕೊಳ್ಳಬೇಕು. ತಪ್ಪುಗಳನ್ನು ಮಾಡಿ ಸಮಸ್ಯೆ ಬರಬಾರದು ಎಂದು ಬಯಸುವುದು ಮೂರ್ಖತನವಾಗುತ್ತದೆ. ನನ್ನ ದೇಹ, ನನ್ನ ಸಮಾಜ, ನನ್ನ ಕುಟುಂಬ ಸಮೃದ್ಧವಾಗಬೇಕಾದರೆ ಅದಕ್ಕೆ ತಕ್ಕ ಜೀವನ ಶೈಲಿ ರೂಪಿಸಿಕೊಳ್ಳಬೇಕು. ಅದನ್ನು ಬೇರು ಎಂದು ಭಾವಿಸಬೇಕು. ಅದಕ್ಕೆ ವಿರುದ್ಧವಾದ ಜೀವನ ಶೈಲಿ ಅಳವಡಿಸಿಕೊಂಡಾಗ ಸಮಸ್ಯೆ ಬಂದೇ ಬರುತ್ತದೆ. ಸಾಮಾನ್ಯವಾಗಿ ನಮ್ಮ ಅಗತ್ಯಗಳಿಗಿಂತ ಹೆಚ್ಚಿನದನ್ನು ಹೆಚ್ಚಾಗಿ ಸಂಗ್ರಹಿಸುವುದು ಸಮಸ್ಯೆಗಳಿಗೆ ಮೂಲವಾಗುತ್ತದೆ. ಅದು ಹಣವಾಗಬಹುದು, ಆಸ್ತಿಯಾಗಬಹುದು, ಆಹಾರವೇ ಆಗಬಹುದು. ಇವೆಲ್ಲಾ ಅತಿಯಾದಾಗ ಸಮಸ್ಯೆ ಬಂದೇಬರುತ್ತದೆ. ಅಷ್ಟೊಂದು ಗಳಿಸುವಾಗ ಸಮಸ್ಯೆ ಬಂದೇ ಬರುತ್ತದೆ ಎಂಬುದು ನಮಗೆ ಗೊತ್ತಿರಬೇಕು. ಅದನ್ನು ವಿವೇಚನೆ ಎಂದು ಕರೆಯುತ್ತಾರೆ.

ನಮ್ಮ ನಾಗರಿಕತೆ ಬೆಳೆದಂತೆ ನಮ್ಮ ಬೇಡಿಕೆಗಳು ಬದಲಾಗ ತೊಡಗಿವೆ. ನಾವು ಯಾವುದಕ್ಕೆ ಹೆಚ್ಚು ಮಹತ್ವ ಕೊಡಬೇಕೋ ಅದನ್ನು ಬಿಟ್ಟು ಅನವಶ್ಯಕತೆಗಳ ಕಡೆಗೆ ಗಮನ ಕೊಡಲು ಪ್ರಾರಂಭಿಸಿದ್ದೇವೆ. ಹೊಟ್ಟೆಗೆ ಹಿಟ್ಟಿಲ್ಲದಿದ್ದರೂ ಜುಟ್ಟಿಗೆ ಮಲ್ಲಿಗೆ ಹೂವು ಎಂಬಂತಹ ಪರಿಸ್ಥಿತಿಗೆ ತಲುಪಿದ್ದೇವೆ. ಇದರಿಂದಾಗಿ ನಮ್ಮ ಆದ್ಯತಾ ವಲಯ ಬದಲಾಗುತ್ತಿದೆ. ಈಗ್ಗೆ ಎರಡು ಮೂರು ದಶಕಗಳ ಹಿಂದಿನ ಜೀವನ ನೆನಸಿಕೊಂಡರೆ ಇಂದಿನ ಜೀವನ ಬೂಟಾಟಿಕೆ ಎನ್ನಿಸುತ್ತಿದೆ. ಇದಕ್ಕೆ ಬಹುಶಃ ನಮ್ಮಲ್ಲಿನ ಹಣದ ಶಕ್ತಿ ಕಾರಣವಿರಬಹುದು. ಇಂದು ಬಹುತೇಕರಲ್ಲಿ ಅಗತ್ಯಕ್ಕಿಂತ ಹೆಚ್ಚಿನ ಹಣವಿದೆ. ಇಂತಹವರು ಅದನ್ನು ಹೇಗೆ ಖರ್ಚು ಮಾಡಬೇಕು ಎಂದು ತಿಳಿಯದೆ ಸಮಸ್ಯೆ ತಂದುಕೊಳ್ಳುತ್ತಾರೆ.

ಮನುಷ್ಯರನ್ನು ಪ್ರಾಣಿಗಳಿಗೆ, ಪಕ್ಷಿಗಳಿಗೆ ಹೋಲಿಸಿ ಇವರಲ್ಲಿ ಯಾರು ಸುಖಿಗಳು? ಯಾರು ಸಮಸ್ಯಾರಹಿತರು ಎಂದು ಕೇಳಿದಾಗ ಮನುಷ್ಯನಿಗಿಂತ ಪಕ್ಷಿ, ಪ್ರಾಣಿಗಳೇ ಮೇಲು ಎಂಬುದು ಸಾಬೀತಾಗುತ್ತದೆ. ಮನುಷ್ಯನ ಮುಖ್ಯವಾದ ಲೋಪ ಎಂದರೆ ಕೂಡಿಡುವ ಮನೋಭಾವ. ಅವನಿಗೆ ಇಂದಿಗಿಂತ ನಾಳೆಯ ಬಗ್ಗೆಯೇ ಹೆಚ್ಚು ಗಮನ. ಇಂದು ಎಲ್ಲಾ ಇದೆ, ನಾಳೆ ಏನಾಗುವುದೋ ಏನೋ ಎಂಬ ಹೆದರಿಕೆಯಿಂದ ನಾವು ಇಂದಿನ ಜೀವನವನ್ನು ಹಾಳು ಮಾಡಿಕೊಳ್ಳುತ್ತಿದ್ದೇವೆ. ಆದರೆ ಈ ಬಗ್ಗೆ ಪ್ರಾಣಿ, ಪಕ್ಷಿಗಳಿಗೆ ಆತಂಕವಿಲ್ಲ. ಇಂದು ಸಿಕ್ಕಿದರೆ ಅಷ್ಟೇ ಸಾಕು, ನಾಳೆಯದನ್ನು ನಾಳೆ ನೋಡಿಕೊಂಡರಾಯಿತು ಎಂಬ ಮನೋಭಾವ ಕಾಣುತ್ತವೆ. ಹಾಗಾಗಿ ಅಲ್ಲಿ ಸಮಸ್ಯೆಗಳು ಕಂಡುಬರುವುದಿಲ್ಲ. ನಮಗೆ ಬರುವ ಅನಿರೀಕ್ಷಿತ ಹಣ, ಆಸ್ತಿಪಾಸ್ತಿಗಳಿಂದಲೂ ನಾವು ಸಮಸ್ಯೆ ಎದುರಿಸಬೇಕಾಗುತ್ತದೆ.

ಹಿಂದೆ ಕಂಡ ಒಂದು ಘಟನೆ ಎಂದರೆ, ಒಬ್ಬ ಬಡ ಹುಡುಗಿಗೆ ಶ್ರೀಮಂತರ ಮನೆಯ ಹುಡುಗನೊಂದಿಗೆ ವಿವಾಹವಾಯಿತು. ಅವರು ಆಕೆಗೆ ಸಾಕಷ್ಟು ಆಭರಣ ನೀಡಿ ಧರಿಸಲು ಹೇಳಿದರು. ಆಕೆ ಹಾಗೇ ಮಾಡಿದಳು. ಕೆಲವು ಸಮಯದ ನಂತರ ಆಕೆಗೆ ತಲೆನೋವು ಆರಂಭವಾಯಿತು. ಏನೇ ಚಿಕಿತ್ಸೆ ಮಾಡಿದರೂ ತಲೆ ನೋವು ಕಡಿಮೆಯಾಗಲಿಲ್ಲ. ಕೊನೆಗೆ ಒಬ್ಬ ಸಾಧುವಿನ ಬಳಿ ಸಮಸ್ಯೆ ಹೇಳಿಕೊಂಡರು. ಆತ ಸಮಸ್ಯೆಯನ್ನು ಅವಲೋಕಿಸಿದ. ಕೊನೆಗೆ ಆಕೆ ಧರಿಸಿದ್ದ ವಜ್ರದ ಮೂಗುತಿ ತೆಗೆದಿಟ್ಟು ಒಂದೆರಡು ದಿನದ ನಂತರ ಬಂದು ಕಾಣಲು ಹೇಳಿದ. ಆಶ್ಚರ್ಯ ಎಂದರೆ ಮುಂದಿನ ಎರಡು ದಿನಗಳಲ್ಲಿ ತಲೆನೋವು ಸಂಪೂರ್ಣ ಗುಣವಾಗಿತ್ತು. ತಲೆನೋವಿಗೆ ಕಾರಣ ವೆಂದರೆ ಆಕೆ ಧರಿಸುತ್ತಿದ್ದ ಆ ವಜ್ರದ ಮೂಗುತಿಯಾಗಿತ್ತು. ಅದರ ಮೇಲೆ ಬೆಳಕಿನ ಕಿರಣ ಬಿದ್ದು ಅದು ಆಕೆಯ ಕಣ್ಣಿನ ಮೇಲೆ ಪರಿಣಾಮ ಬೀರುತ್ತಿತ್ತು. ಅದನ್ನು ತೆಗೆದ ನಂತರ ಸರಿಯಾಯಿತು. ನಮಗೆ ಮೊದಲಿನಿಂದಲೂ ಅಭ್ಯಾಸವಿಲ್ಲದ ಅಭ್ಯಾಸಗಳನ್ನು ಮಾಡಿಕೊಂಡಾಗ ಇಂತಹ ಸಮಸ್ಯೆ ಎದುರಾಗೇ ಆಗುತ್ತದೆ.

ಹಿಂದೆ ಓದಿದ ಒಂದು ಕಥೆ ಎಂದರೆ ಒಬ್ಬ ಧನಿಕ ತನಗೆ ನೂರಾರು ಚಿಂತೆ, ಸಮಸ್ಯೆ ಇದೆ. ಇದರಿಂದ ಪಾರಾಗೋದು ಹೇಗೆ ಎಂದು ಒಬ್ಬ ಸಂತರಲ್ಲಿ ಕೇಳಿದ. ಆ ಸಂತರು ತಮ್ಮ ಮುಂದೆ ನೀರು ತುಂಬಿಟ್ಟಿದ್ದ ಸಣ್ಣ ಪಾತ್ರೆಯನ್ನು ತೋರಿಸಿ ಧನಿಕನಿಗೆ ಇದನ್ನು ಒಂದೆರಡು ನಿಮಿಷ ಹಿಡಿದುಕೊಂಡರೆ ಏನಾಗುತ್ತದೆ? ಎಂದು ಕೇಳಿದರು. ಧನಿಕ ಏನೂ ಆಗುವುದಿಲ್ಲ ಎಂದ. ಇದನ್ನು ಒಂದೆರಡು ಗಂಟೆ ಹಿಡಿದುಕೊಂಡರೆ ಏನಾಗುತ್ತದೆ ಎಂದಾಗ, ಕೈ ನೋವು ಬರುತ್ತದೆ ಎಂದ. ಹಾಗಾದರೆ ಇದನ್ನು ದಿನವಿಡೀ ಹಿಡಿದು ನಿಂತರೆ ಏನಾಗುತ್ತದೆ ಎಂದು ಕೇಳಿದಾಗ ಆತ ಕೈಯಲ್ಲಿ ರಕ್ತಸಂಚಾರ ಕಡಿಮೆಯಾಗುತ್ತದೆ. ಪಾರ್ಶ್ವವಾಯು ಬಡಿಯುತ್ತದೆ. ಅದರಿಂದ ಪ್ರಾಣಕ್ಕೇ ಕುತ್ತು ಆಗಬಹುದು ಎಂದ.

ಹಾಗಾದರೆ ಇದಕ್ಕೆ ಪರಿಹಾರ ಏನು ಎಂದಾಗ ಆ ಧನಿಕ ಪಾತ್ರೆಯನ್ನು ಕೆಳಗಿಡುವುದು ಎಂದ. ಆಗ ಸಂತರು ನಿನ್ನ ಸಮಸ್ಯೆಗಳಿಗೂ ಇದೇ ಪರಿಹಾರ. ನೀನು ನಿನ್ನ ಸಮಸ್ಯೆ ದೊಡ್ಡದು, ಅದು ಭಾರ ಎಂದುಕೊಂಡು ದಿನವಿಡೀ ಅದನ್ನು ಹೊತ್ತು ತಿರುಗುತ್ತಾ ಸಮಸ್ಯೆ ಎಂದುಕೊಂಡರೆ ಹೇಗೆ, ಮೊದಲು ಅದನ್ನು ಕೆಳಗಿಡು ಎಂದರಂತೆ. ನಮ್ಮ ಬಹುತೇಕ ಸಮಸ್ಯೆಗಳ ಮೂಲವೂ ಇದೇ ಅಲ್ಲವೇ? ನಮ್ಮ ಸಮಸ್ಯೆಯೇ ದೊಡ್ಡದು ಎಂದುಕೊಂಡಿರುತ್ತೇವೆ. ಅದನ್ನು ಸ್ವಲ್ಪ ಬದಿಗಿರಿಸಿ ಅದಕ್ಕೆ ಕಾರಣ ಏನು ಎಂದು ವಿಶ್ಲೇಷಿಸಿದಾಗ ಪರಿಹಾರ ದೊರಕಿಯೇ ದೊರಕುತ್ತದೆ.

ನಾಳೆ ಲೋಕಾಯುಕ್ತರಿಂದ ದೂರು ಸ್ವೀಕಾರ

ಮೈಸೂರು,ಫೆ.9–ಕರ್ನಾಟಕ ಲೋಕಾಯುಕ್ತ ಮೈಸೂರು ವಿಭಾಗ ಅಧಿಕಾರಿಗಳಿಂದ ಫೆ.11ರಂದು ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 1ರವರೆಗೆ ಮೈಸೂರು ಜಿಲ್ಲೆ, ಪಿರಿಯಾಪಟ್ಟಣ ತಾಲೂಕಿನ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ದೂರು ಸ್ವೀಕರಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ಅಧಿಕೃತ ಕೆಲಸಗಳ ಅನಗತ್ಯ ವಿಳಂಬ, ಲಂಚದ ಹಣದ ಬೇಡಿಕೆ ಇತ್ಯಾದಿ ತೊಂದರೆಗಳನ್ನು ನೀಡುತ್ತಿರುವ ಸಾರ್ವಜನಿಕ, ಸರ್ಕಾರಿ ಅಧಿಕಾರಿ, ನೌಕರರ ವಿರುದ್ಧ ಅಗತ್ಯ ದಾಖಲಾತಿಗಳೊಡನೆ ಸಾರ್ವಜನಿಕರು ದೂರು ನೀಡಬಹುದು ಎಂದು ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಉದೇಶ್ ತಿಳಿಸಿದ್ದಾರೆ.

ಇಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

ಮೈಸೂರು,ಫೆ.9–ವಿ.ವಿ.ಮೊಹಲ್ಲಾ ವಿಭಾಗ ವ್ಯಾಪ್ತಿಯಲ್ಲಿ ತುರ್ತು ಕಾರ್ಯ ನಿಮಿತ್ತ ಫೆ.10 ರಂದು ಬೆಳಗ್ಗೆ 10ರಿಂದ ಸಂಜೆ 5ರವರೆಗೆ ಕರಕನಹಳ್ಳಿ, ನಾಗನಹಳ್ಳಿ, ಆರ್.ಎಂ.ಪಿ, ಯಾಚೇಗೌಡನಹಳ್ಳಿ, ದಡದ ಕಲ್ಲಹಳ್ಳಿ, ಈರಪ್ಪನಕೊಪ್ಪಲು, ಗುಂಗ್ರಾಲ್‌ಛತ್ರ, ಯಲಚನಹಳ್ಳಿ, ಭದ್ರೇಗೌಡನಕೊಪ್ಪಲು, ಮೇಗಳಾಪುರ, ರಟ್ನಹಳ್ಳಿ, ಹೊಸಕೋಟೆ, ರಾಮೇನಹಳ್ಳಿ, ಇಲವಾಲ, ಯಡಹಳ್ಳಿ, ಕಲ್ಲೂರು, ಕಾಮನಕೊಪ್ಪಲು, ಪ್ರಗತಿನಗರ ಮತ್ತು ಸುತ್ತಮುತ್ತ. ಯಾದವಗಿರಿ, ಪರಮ ಹಂಸರಸ್ತೆ (1ರಿಂದ 5ನೇ ಮೇನ್), ಯಾದವಗಿರಿ ಚರ್ಚ್ ರಸ್ತೆ, ರೈಲ್ವೇ ಆಸ್ಪತ್ರೆ, ದಾಸಪ್ರಕಾಶ್ ಹೋಟೆಲ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ಸಂಸದ ತೇಜಸ್ವಿ ಸೂರ್ಯ ಪ್ರಧಾನಿ ಮೋದಿ ಮುಂದೆ ಖಾಲಿ ಟ್ರಂಕ್ ಹಿಡಿದು ಪ್ರತಿಭಟಿಸಲಿ

● ಮಾಜಿ ಸಂಸದ ಡಿ.ಕೆ.ಸುರೇಶ್ ವ್ಯಂಗ್ಯ ● ಮೆಟ್ರೋ ದರ ಏರಿಕೆ ವಿಷಯದಲ್ಲಿ ಜಟಾಪಟಿ

ಬೆಂಗಳೂರು, ಫೆ.9(ಕೆಎಂಶಿ)–ಕಳೆದ 12 ವರ್ಷಗಳಿಂದ ಕೇಂದ್ರ ಸರ್ಕಾರ ಕರ್ನಾಟಕಕ್ಕೆ ಕೊಟ್ಟಿರುವ ಖಾಲಿ ಟ್ರಂಕ್ ಅನ್ನು ಸಂಸದ ತೇಜಸ್ವಿ ಸೂರ್ಯ ಹಿಡಿದಿದ್ದಾರೆ ಎಂದು ಮಾಜಿ ಸಂಸದ ಹಾಗೂ ಬಮೂಲ್ ಅಧ್ಯಕ್ಷ ಡಿ.ಕೆ.ಸುರೇಶ್ ಇಂದಿಲ್ಲಿ ವ್ಯಂಗ್ಯವಾಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೆಟ್ರೋ ಪ್ರಯಾಣ ದರ ಏರಿಕೆ ವಿಚಾರವಾಗಿ ತೇಜಸ್ವಿ ಸೂರ್ಯ ಮೆಟ್ರೋ ನಿಲ್ದಾಣದ ಬಳಿ ಖಾಲಿ ಟ್ರಂಕ್ ಹಿಡಿದು ಪ್ರತಿಭಟನೆ ಮಾಡುವ ಬದಲಿಗೆ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ಮುಂದೆ ಮಾತನಾಡಲಿ ಎಂದು ತಿರುಗೇಟು ನೀಡಿದರು.

ಮೆಟ್ರೋ ಯೋಜನೆ ಕೇಂದ್ರದ ಕೊಡುಗೆ ರಾಜ್ಯ ಸರ್ಕಾರದ್ದಲ್ಲ ಎಂಬುದಾಗಿ ಪ್ರಚಾರ ಪಡೆಯುತ್ತಾರೆ. ಮೆಟ್ರೋ ಪ್ರಯಾಣದರ ಏರಿಕೆ ಕೇಂದ್ರ ಸರ್ಕಾರದ ಸಮಿತಿ ಕೈಯ್ಯಲ್ಲಿದೆ. ಸಮಿತಿ ತೀರ್ಮಾನದಂತೆ ಮೆಟ್ರೋ ದರ ಏರಿಕೆ ಮಾಡಲಾಗುತ್ತದೆ. ದರ ಏರಿಕೆ ಆಗಬಾರದು ಎಂಬುದು ನಮ್ಮ ಇಚ್ಛೆ, ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರ ಕೇಂದ್ರದಲ್ಲಿ ಅಧಿಕಾರದಲ್ಲಿದೆ. ಜನರಿಗೆ ಅನುಕೂಲ ಆಗುವಂತೆ ತೀರ್ಮಾನ ಮಾಡಲಿ ಎಂದರು.



ಡಿ.ಕೆ.ಸುರೇಶ್

ತೇಜಸ್ವಿ ಸೂರ್ಯ ಖಾಲಿ ಟ್ರಂಕ್ ಹಿಡಿದಿರುವುದು. ಕರ್ನಾಟಕದ 4.5ರಿಂದ 5 ಲಕ್ಷ ಕೋಟಿ ರೂ. ತೆರಿಗೆ ಹಣ ಲೂಟಿ ಮಾಡಿಕೊಂಡು ಹೋಗುವುದನ್ನು ತೋರಿಸುತ್ತದೆ. ಕೇಂದ್ರ ಸರ್ಕಾರ ಕಳೆದ 12 ವರ್ಷಗಳಿಂದ ಕರ್ನಾಟಕಕ್ಕೆ ಕೊಟ್ಟಿರುವ ಕೊಡುಗೆಯ ಪಟ್ಟಿ ನೀಡಲಿ, ಬೆಂಗಳೂರಿಗೆ ಅವರದು ಖಾಲಿ ಡಬ್ಬದ ಕೊಡುಗೆ.

ದರ ಇಳಿಕೆ ಕುರಿತು ಕೇಂದ್ರ ಸಮಿತಿ ಮುಂದೆ ಪ್ರಸ್ತಾವನೆ ನೀಡಲಾಗಿದೆ. ತಾಂತ್ರಿಕ ಸಲಹಾ ಸಮಿತಿ ನಿರ್ದೇಶನದ ಮೇರೆಗೆ ತೀರ್ಮಾನ ಮಾಡಿದ್ದಾರೆ. ತೇಜಸ್ವಿ ಸೂರ್ಯ ತಮ್ಮ ಬದ್ಧತೆಯನ್ನು ಕೇಂದ್ರ ಸರ್ಕಾರದ ಮುಂದೆ ಪ್ರದರ್ಶಿಸಲಿ ಎಂದರು.

ನಮ್ಮ ಮೆಟ್ರೋ ಯೋಜನೆಗಳಿಗೆ ಕೇಂದ್ರ ಸರ್ಕಾರ ಶೇ.10ರಷ್ಟು ಹಣ ನೀಡುತ್ತದೆ. ರಾಜ್ಯ ಸರ್ಕಾರ ಶೇ.10ರಷ್ಟು ಅನುದಾನದ ಜೊತೆಗೆ ಯೋಜನೆ ಜಾರಿಗೆ ಅಗತ್ಯವಿರುವ ಭೂಸ್ವಾಧೀನ ಪರಿಹಾರ ಮೊತ್ತವನ್ನೂ ಭರಿಸಬೇಕು. ಇದರಿಂದ ರಾಜ್ಯ ಸರ್ಕಾರದ ಪಾಲು ಸುಮಾರು ಶೇ.17ರಷ್ಟು ಆಗುತ್ತದೆ. ಉಳಿದ ಹಣ ಸಾಲದ ರೂಪದಲ್ಲಿ ಪಡೆಯಲಾಗುವುದು, ಅದರ ಹೊರೆ ಪ್ರಯಾಣಿಕರ ಮೇಲೆ ಬೀಳುತ್ತದೆ. ಸಮಯ ಸಿಕ್ಕಾಗಲೆಲ್ಲಾ ಮೆಟ್ರೋ ನಮ್ಮದು ಎಂಬ ಶೋ ಕೊಟ್ಟು, ಈಗ ಖಾಲಿ ಡಬ್ಬ ತೋರಿಸುತ್ತಿದ್ದಾರೆ. ಬೆಂಗಳೂರಿನ ವಾಹನ ದಟ್ಟಣೆಗೆ ಕೇಂದ್ರ ಸರ್ಕಾರ ಕಾರಣ. ನಮ್ಮ ಐಟಿ–ಬಿಟಿ ತೆರಿಗೆ ಹಾಗೂ ಬೆಂಗಳೂರಿನ ಜಿಎಸ್‌ಟಿ ಸೇರಿ ವಾರ್ಷಿಕ 5 ಲಕ್ಷ ಕೋಟಿ ರೂ. ಕೇಂದ್ರ ಸರ್ಕಾರ ಪಡೆಯುತ್ತಿದೆ.

ಇದರಲ್ಲಿ ನಮಗೆ ವಾಪಸ್ ನೀಡುತ್ತಿರುವುದು ಕೇವಲ ಶೇಕಡ 10, ಅಂದರೆ, 50,000 ಕೋಟಿ ರೂ. ಮಾತ್ರ. ಉಳಿದ ಹಣ ಗುಜರಾತ್, ಉತ್ತರ ಪ್ರದೇಶ, ಬಿಹಾರ ರಾಜ್ಯಗಳಿಗೆ ಹೋಗುತ್ತದೆ. ತೇಜಸ್ವಿ ಸೂರ್ಯ ಪ್ರಧಾನಿ ಮುಂದೆ ಭಾಷಣ ಮಾಡಿ ತಮ್ಮ ಎದೆಗಾರಿಕೆ ತೋರಿಸಿ ರಾಜ್ಯಕ್ಕೆ ಹಣ ತರಲಿ. ಕೇಂದ್ರ ಸರ್ಕಾರ ಅಹಮದಾ ಬಾದ್ ಮೆಟ್ರೋಗೆ ಶೇ.20ರಷ್ಟು ಅನುದಾನ ನೀಡುತ್ತಿದೆ. ಅವರಿಗೊಂದು ನ್ಯಾಯ, ನಮಗೊಂದು ನ್ಯಾಯವೇ. ಕರ್ನಾಟಕಕ್ಕೂ ಶೇ.20ರಷ್ಟು ಅನುದಾನ ಕೊಟ್ಟರೆ, ಸಾರ್ವಜನಿಕರ ಮೇಲೆ ಹೊರೆ ಕಡಿಮೆ ಆಗುತ್ತದೆ. ಈ ಕುರಿತು ಮಾಧ್ಯಮಗಳು ಸಾರ್ವಜನಿಕರನ್ನು ಜಾಗೃತಿಗೊಳಿಸಬೇಕು ಎಂದರು.

ಪ್ರಾಣಿಬಲಿ ನಿಷೇಧ: ಹೈಕೋರ್ಟ್ ತೀರ್ಪು ಎತ್ತಿಹಿಡಿದ ಸುಪ್ರೀಂ



ನವದೆಹಲಿ: ನ್ಯಾಯಮೂರ್ತಿ ಅರವಿಂದ್‌ಕುಮಾರ್ ಮತ್ತು ಪಿ.ಬಿ ವರಾಳೆ ನೇತೃತ್ವದ ಸುಪ್ರೀಂ ಕೋರ್ಟ್ ಪೀಠವು, 2025ರ ಅಕ್ಟೋಬರ್‌ನಲ್ಲಿ ಮದ್ರಾಸ್ ಹೈಕೋರ್ಟ್ ನೀಡಿದ ತೀರ್ಪಿನಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ ಎಂದು ಹೇಳಿತಲ್ಲದೆ, ಹೈಕೋರ್ಟ್ ತೀರ್ಪು ಸಮತೋಲಿತವಾಗಿದೆ ಎಂದು ಅಭಿಪ್ರಾಯಪಟ್ಟಿತು.

ಅರ್ಜಿದಾರ ಎಂ.ಇಮಾಮ್ ಹುಸೇನ್ ಪರವಾಗಿ ಹಾಜರಾದ ವಕೀಲ ಪ್ರಶಾಂತ್ ಭೂಷಣ್, ತಿರುಪರನ್‌ಕುಂದ್ರಂ ಬೆಟ್ಟದಲ್ಲಿ ಯಾವತ್ತೂ ಕಾನೂನು ಸುವ್ಯವಸ್ಥೆ ಸಮಸ್ಯೆ ಉಂಟಾಗಿಲ್ಲ ಎಂದು ಪೀಠದ ಗಮನಕ್ಕೆ ತಂದರು. ಬೆಟ್ಟದ ಮೇಲಿರುವ ಸುಬ್ರಹ್ಮಣ್ಯ ಸ್ವಾಮಿ ದೇವಸ್ಥಾನದ ಸಾಂಪ್ರದಾಯಿಕ ಆಚರಣೆಗಳಿಗೆ ಧಕ್ಕೆ ಆಗದಂತೆ ಬಕ್ರೀದ್ ಮತ್ತು ರಂಜಾನ್ ಮಾಸದಲ್ಲಿ ನೆಲ್ಲಿತೊಪ್ಪು ಪ್ರದೇಶದಲ್ಲಿ ಪ್ರಾರ್ಥನೆಗೆ ಮತ್ತು ಸಭೆ ಸೇರಲು ಹೈಕೋರ್ಟ್ ಇತ್ತೀಚೆಗೆ ಅನುಮತಿ ನೀಡಿತ್ತು. ಈ ತೀರ್ಪನ್ನು ಎತ್ತಿಹಿಡಿಯುವುದಾಗಿ ನ್ಯಾಯಪೀಠ ಹೇಳಿತು.

ಬೆಟ್ಟದಲ್ಲಿ ಪ್ರಾಣಿಬಲಿ ನಿಷೇಧಿಸಲಾಗಿದೆ. ಮಾಂಸಾಹಾರ ತಯಾರಿಸುವುದು, ಭಕ್ತರಿಗೆ ಬಡಿಸುವುದನ್ನೂ ನ್ಯಾಯಾಲಯದ ಅಂತಿಮ ಆದೇಶದವರೆಗೆ ಅನುಮತಿಸಲಾಗುವುದಿಲ್ಲ ಎಂದು ಕೋರ್ಟ್ ಹೇಳಿದೆ.

ತಿರುಪರನ್‌ಕುಂದ್ರಂ ಬೆಟ್ಟದಲ್ಲಿರುವ ದೀಪ ಸ್ತಂಭದಲ್ಲಿ ದೀಪ ಹಚ್ಚಲು ಹೈಕೋರ್ಟ್ ಇತ್ತೀಚೆಗೆ ಅನುಮತಿ ನೀಡಿತ್ತು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಯಾವುದು ನಿಜ...! ಯಾವುದು ಸತ್ಯವಯ್ಯಾ...!!

ಮೆಟ್ರೊ ದರ ಏರಿಕೆಯು ಕೇಂದ್ರ ಸರ್ಕಾರದ ತೀರ್ಮಾನ





ಹರಿಹರ (ದಾವಣಗೆರೆ): ನಮ್ಮ ಮೆಟ್ರೊ ದರ ಏರಿಕೆ ಮಾಡುವ ತೀರ್ಮಾನವನ್ನು ಕೇಂದ್ರ ಸರ್ಕಾರ ನಿಯೋಜಿಸಿದ ಬಿಎಂಆರ್‌ಸಿಎಲ್ ಅಧ್ಯಕ್ಷರು ಕೈಗೊಳ್ಳುತ್ತಾರೆ. ದರ ಏರಿಕೆ ಮಾಡುವಂತೆ ರಾಜ್ಯ ಸರ್ಕಾರ ಯಾವುದೇ ಶಿಫಾರಸು ಮಾಡಿರಲಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ತಾಲೂಕಿನ ರಾಜನಹಳ್ಳಿ ವಾಲ್ಮೀಕಿ ಗುರು ಪೀಠದಲ್ಲಿ ಸೋಮವಾರ ನಡೆದ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು. ಮೆಟ್ರೊ ದರ ಏರಿಕೆಯಲ್ಲಿ ರಾಜ್ಯ ಸರ್ಕಾರದ ಪಾತ್ರವಿಲ್ಲ. ಸಂಸದ ತೇಜಸ್ವಿ ಸೂರ್ಯ ಮಾಡಿದ ಆರೋಪಗಳಲ್ಲಿ ಹುರುಳಿಲ್ಲ ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯೆ ನೀಡಿದರು.

ಭಾರತ ಮತ್ತು ಅಮೆರಿಕ ನಡುವೆ ಆಗಿರುವ ಒಪ್ಪಂದದಿಂದ ರೈತರಿಗೆ ಅನ್ಯಾಯವಾಗಲಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಅಮೆರಿಕಾದ ಒತ್ತಡಕ್ಕೆ ಮಣಿದಿದ್ದಾರೆ ಎಂದು ದೂರಿದರು. ವಾಲ್ಮೀಕಿ ಸಮುದಾಯದ ಇಬ್ಬರು ಸಚಿವರು ಕಾರಣಾಂತರಗಳಿಂದ ರಾಜೀನಾಮೆ ಕೊಡುವ ಪರಿಸ್ಥಿತಿ ಸೃಷ್ಟಿಯಾಯಿತು. ಸಚಿವ ಸ್ಥಾನ ನೀಡುವಂತೆ ಸಮುದಾಯ ಬೇಡಿಕೆ ಇಟ್ಟಿದೆ. ಸಚಿವ ಸಂಪುಟ ವಿಸ್ತರಣೆ ಮಾಡುವಾಗ ಪರಿಗಣಿಸಲಾಗುವುದು' ಎಂದರು.

ಗಣಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ ರಾಜೀನಾಮೆ ಸಲ್ಲಿಸಿದ್ದಾರೆ ಎಂಬುದು ಸತ್ಯಕ್ಕೆ ದೂರವಾದ ಸಂಗತಿ. ಅವರು ನನ್ನನ್ನು ಭೇಟಿ ಮಾಡಿಲ್ಲ. ಬಜೆಟ್ ಮಂಡನೆಗೆ ಶೀಘ್ರವೇ ದಿನ ನಿಗದಿಪಡಿಸಲಾಗುವುದು ಎಂದು ತಿಳಿಸಿದರು. ಅಧಿಕಾರ ಹಂಚಿಕೆಗೆ ಸಂಬಂಧಿಸಿದಂತೆ ಮಾಧ್ಯಮ ಪ್ರತಿನಿಧಿಗಳು ಕೇಳಿದ ಪ್ರಶ್ನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸಿಡಿಮಿಡಿಗೊಂಡರು.

ಮೆಟ್ರೊ ಪ್ರಯಾಣ ದರ ಏರಿಕೆ ಸ್ಥಗಿತಗೊಳಿಸಿದ್ದು ರಾಜ್ಯ ಸರ್ಕಾರ, ಕೇಂದ್ರವಲ್ಲ



ಬೆಂಗಳೂರು: ಮೆಟ್ರೊ ಪ್ರಯಾಣ ದರ ಏರಿಕೆ ಸ್ಥಗಿತಗೊಳಿಸಿದ್ದು ರಾಜ್ಯ ಸರ್ಕಾರ, ಇದರಲ್ಲಿ ಕೇಂದ್ರ ಸರ್ಕಾರದ ಪಾತ್ರವಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಹೇಳಿದರು.

ಕಾರ್ಯಾಚರಣೆ ಹಾಗೂ ನಿರ್ವಹಣಾ ವೆಚ್ಚ, ಗ್ರಾಹಕ ಬೆಲೆ ಸೂಚ್ಯಂಕದನ್ವಯ ಈಗಿರುವ ದರ, ಇಂಧನ ವೆಚ್ಚ ಮುಂತಾವುಗಳನ್ನು ಪರಿಗಣನೆಗೆ ತೆಗೆದುಕೊಂಡು ಬಿಎಂಆರ್ ಸಿಎಲ್ ದರ ಏರಿಕೆ ಮಾಡುತ್ತದೆ. ಪರಿಷ್ಕೃತ ದರದೊಂದಿಗೆ ಬನ್ನಿ ಎಂದು ನಾನು ಅವರಿಗೆ ಸೂಚಿಸಿದ್ದೇನೆ ಎಂದು ಅವರು ಹೇಳಿದರು.

ದೆಹಲಿಯಲ್ಲಿ ಭದ್ರತೆ ಹಾಗೂ ಇನ್ನಿತರ ವಿಷಯಗಳನ್ನು ಕೇಂದ್ರ ಸರ್ಕಾರ ನೋಡಿಕೊಳ್ಳುತ್ತದೆ. ಅದರ ವೆಚ್ಚ ಅಧಿಕ. ಹೀಗಾಗಿ ದರವನ್ನು ಮತ್ತೊಮ್ಮೆ ಲೆಕ್ಕ ಹಾಕಿ ಎಂದು ತಿಳಿಸಿದ್ದೇನೆ ಎಂದರು. ಪ್ರಯಾಣ ದರ ಏರಿಕೆ ಸ್ಥಗಿತಗೊಳಿಸಿದ್ದು ರಾಜ್ಯ ಸರ್ಕಾರ, ಇದರಲ್ಲಿ ಕೇಂದ್ರ ಸರ್ಕಾರದ ಪಾತ್ರ ಏನೂ ಇಲ್ಲ. ನಿಯಮಗಳ ಅನ್ವಯ ದರ ನಿಗದಿ ಸಮಿತಿ ಎಲ್ಲಾ ಖರ್ಚು ಹಾಗೂ ಇತರ ವಿಷಯಗಳನ್ನು ಪರಿಗಣಿಸಿ ದರ ಏರಿಕೆ ಮಾಡುತ್ತದೆ ಎಂದು ತಿಳಿಸಿದರು.

ಮೆಟ್ರೋ ನಿಲ್ದಾಣದಲ್ಲಿ ಪ್ರತಿಭಟನೆ; ಸಂಸದ ತೇಜಸ್ವಿ ಸೂರ್ಯ ಪೊಲೀಸ್ ವಶಕ್ಕೆ



ಬೆಂಗಳೂರು: ಆರ್‌ವಿ ರಸ್ತೆ ಮೆಟ್ರೋ ನಿಲ್ದಾಣಕ್ಕೆ ಕೈಯಲ್ಲಿ 'ಖಾಲಿ ಟ್ರಂಕ್' ಹಿಡಿದುಕೊಂಡು ಬಂದ ಸಂಸದ ತೇಜಸ್ವಿ ಸೂರ್ಯ ರಾಜ್ಯ ಸರ್ಕಾರದ ಆರ್ಥಿಕ ಸ್ಥಿತಿಯನ್ನು ಟೀಕಿಸಿ ವಿನೂತನ ರೀತಿಯಲ್ಲಿ ಪ್ರತಿಭಟನೆ ನಡೆಸಿದರು.

ಆರ್‌ವಿ ರಸ್ತೆಯಿಂದ ನ್ಯಾಷನಲ್ ಕಾಲೇಜಿಗೆ ಟಿಕೆಟ್ ಪಡೆದು ಟ್ರಂಕ್ ಜೊತೆ ಮೆಟ್ರೋದಲ್ಲಿ ಪ್ರಯಾಣಿಸಲು ಮುಂದಾದ ಸಂಸದರನ್ನು ಪೊಲೀಸರು ತಡೆದರು. ಮೆಟ್ರೋದಲ್ಲಿ ಪ್ರಯಾಣಿಸುವ ಮುನ್ನವೇ ಸಂಸದರನ್ನು ಹಾಗೂ ಅವರ ಕೈನಲ್ಲಿದ್ದ ಟ್ರಂಕ್ ಅನ್ನು ಪೊಲೀಸರು ವಶಕ್ಕೆ ಪಡೆದರು.

ಈ ವೇಳೆ ಮಾತನಾಡಿದ ತೇಜಸ್ವಿ ಸೂರ್ಯ, ನಾನು ಮುಷ್ಕರ ಮಾಡುತ್ತಿಲ್ಲ, ಪ್ರತಿಭಟನೆಯನ್ನೂ ಮಾಡುತ್ತಿಲ್ಲ. ಟಿಕೆಟ್ ಪಡೆದು ಪ್ರಯಾಣಿಕನಾಗಿ ಮೆಟ್ರೋ ಏರಲು ಬಂದಿದ್ದೇನೆ. ನನ್ನ ಕೈಯಲ್ಲಿರುವುದು ಬರೀ ಖಾಲಿ ಟ್ರಂಕ್ ಅಲ್ಲ, ಇದು ರಾಜ್ಯ ಸರ್ಕಾರದ ಪ್ರತೀಕ. ಸರ್ಕಾರವೇ ಹೇಳಿಕೊಂಡಂತೆ ಅವರ ಬಳಿ ಶ್ಯಾಡೋ ಕ್ಯಾಶ್ ಸಪೋರ್ಟ್' ಕೊಡಲು ಹಣವಿಲ್ಲ, ಖಜಾನೆ ಖಾಲಿಯಾಗಿದೆ. ಅದನ್ನೇ ಈ ಟ್ರಂಕ್ ಸೂಚಿಸುತ್ತಿದೆ ಎಂದು ವ್ಯಂಗ್ಯವಾಡಿದರು.

ಮೆಟ್ರೋಗೆ ಹಣಕಾಸಿನ ನೆರವು ನೀಡಲು ದುಡ್ಡಿಲ್ಲ ಎನ್ನುತ್ತೀರಿ, ಇನ್ನೊಂದೆಡೆ ಕೋಟಿ ಕೋಟಿ ಖರ್ಚು ಮಾಡಿ ಟನಲ್ ಮಾಡುತ್ತೇವೆ ಎನ್ನುತ್ತೀರಿ. ರಾಜ್ಯದ ನಿಜವಾದ ಆರ್ಥಿಕ ಪರಿಸ್ಥಿತಿ ಏನು ಎಂಬುದು ಜನರಿಗೆ ತಿಳಿಯಬೇಕು. ಈ ಬಜೆಟ್ ಅಧಿವೇಶನದಲ್ಲಿ ರಾಜ್ಯ ಸರ್ಕಾರ ತನ್ನ ಆರ್ಥಿಕ ಸ್ಥಿತಿಗತಿಯ ಬಗ್ಗೆ ಶ್ವೇತ ಪತ್ರ ಹೊರಡಿಸಬೇಕು ಎಂದು ತೇಜಸ್ವಿ ಸೂರ್ಯ ರಾಜ್ಯ ಸರ್ಕಾರವನ್ನು ಆಗ್ರಹಿಸಿದರು.

ಜನಾಕ್ರೋಶದ ಬಳಿಕ ಮೆಟ್ರೋ ದರ ಏರಿಕೆಯನ್ನು ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ ಕೊನೆಗೂ ಕೈಬಿಟ್ಟಿದೆ. ಮೆಟ್ರೋ ಪ್ರಯಾಣ ದರ ಏರಿಕೆ ಮಾಡಲು ಬಿಡಲ್ಲ ಎಂದಿದ್ದ ಬಿಜೆಪಿ ಸಂಸದ ತೇಜಸ್ವಿ ಸೂರ್ಯ, ಇದು ರಾಜಧಾನಿ ಜನರ ಹೋರಾಟಕ್ಕೆ ಸಂದ ಜಯ ಎಂದಿದ್ದಾರೆ ಅಲ್ಲದೇ ದರ ಏರಿಕೆ ತಡೆಯುವಲ್ಲಿ ಕೇಂದ್ರ ಸರ್ಕಾರದ ಪಾತ್ರವಿದೆ ಎಂದು ಹೇಳಿದ್ದಾರೆ.

ಮಾಜಿ ಸೈನಿಕರ ಹತ್ತು ಹಲವು ಕುಂದು ಕೊರತೆ ಆಲಿಸಿದ ಜಿಲ್ಲಾಧಿಕಾರಿ ಲಕ್ಷ್ಮೀ ಕಾಂತರೆಡ್ಡಿ

ಹಾಲಿ ವಾಸಸ್ಥಳ ಪರಿಗಣಿಸಿ ನಿವೃತ್ತ ಯೋಧರಿಗೆ ನಿವೇಶನ; ಜಮೀನು ನೀಡುವಂತೆ ಸರ್ಕಾರಕ್ಕೆ ಒಕ್ಕೊರಲಿನ ಆಗ್ರಹ

ಮೈಸೂರು, ಫೆ.9(ಬಿಎಲ್‌ಯು)– ನಿವೃತ್ತ ಯೋಧರ ಹಾಲಿ ವಾಸಸ್ಥಳವನ್ನು ಪರಿಗಣಿಸಿ ನಿವೇಶನ ಹಾಗೂ ಜಮೀನು ಮಂಜೂರು ಮಾಡಬೇಕೆಂದು ನಿವೃತ್ತ ಯೋಧರು ಒಕ್ಕೊರಲಿನಿಂದ ಸರ್ಕಾರವನ್ನು ಆಗ್ರಹಿಸಿದ್ದಾರೆ.

ಮೈಸೂರು ಜಿಲ್ಲಾ ಪಂಚಾಯತ್‌ನ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಇಂದು ಮಾಜಿ ಸೈನಿಕರೊಂದಿಗೆ ಕುಂದು ಕೊರತೆ ಆಲಿಸುವ ಸಭೆಯಲ್ಲಿ ಜಿಲ್ಲಾಧಿಕಾರಿ ಜಿ.ಲಕ್ಷ್ಮೀ ಕಾಂತರೆಡ್ಡಿ ಬಳಿ ಮಾಜಿ ಸೈನಿಕರಾದ ರಾಜಶೇಖರ್ ಹಾಗೂ ನಾಣಯ್ಯ ಆಗ್ರಹಿಸಿದರು.

ಮೈಸೂರಿನಲ್ಲಿ ಎರಡು ಸಾವಿರಕ್ಕೂ ಹೆಚ್ಚು ನಿವೃತ್ತ ಯೋಧರಿದ್ದಾರೆ. ಸರ್ಕಾರದ ನಿಯಮದಂತೆ ಮೂಲ ವಾಸಸ್ಥಳದಲ್ಲಿ ನಿವೇಶನ ಹಾಗೂ ಜಮೀನು ಮಂಜೂರು ಮಾಡಲಾಗುತ್ತಿದೆ. ಈ ಮೂಲಕ ನಿವೇಶನ ಇಲ್ಲವೇ ಜಮೀನು ಹಂಚಿಕೆಗೆ ಹಾಲಿ ವಾಸಸ್ಥಳವನ್ನು ಪರಿಗಣಿಸುತ್ತಿಲ್ಲ ಎಂದು ದೂರಿದರು.

ಉದಾಹರಣೆಗೆ ಕೊಡಗು ಜಿಲ್ಲೆ ಬಿಟ್ಟು ಮೈಸೂರಿನಲ್ಲಿ ನಾವು ಕಳೆದ 25ವರ್ಷಗಳಿಂದ ವಾಸವಾಗಿದ್ದೇವೆ. ಕೊಡಗಿನಲ್ಲಿ ನನಗೆ ಮನೆ, ಜಮೀನು ಏನೂ ಇಲ್ಲ. ಆದರೆ ನಾನು ಹಾಲಿ ಇರುವ ವಾಸ ಸ್ಥಳ ಮೈಸೂರು ಬಿಟ್ಟು, ಮೂಲ ಸ್ಥಳವಾದ ಕೊಡಗಿನಲ್ಲಿ ನಿವೇಶನ ಹಾಗೂ ಜಮೀನು ನೀಡಲು ಮುಂದಾಗಿದ್ದಾರೆ. ಕೂಡಲೇ ಈ ಕಾನೂನು ಬದಲಾವಣೆ ಮಾಡಬೇಕೆಂದು ಮನವಿ ಸಲ್ಲಿಸಿದರು.

ಸರ್ಕಾರದ ನಿಯಮ: ಹಾಲಿ ವಾಸಸ್ಥಾನ ಪರಿಗಣಿಸಿ ನಿವೇಶನ ಹಾಗೂ ಜಮೀನು ನೀಡುವ ಅಧಿಕಾರ ಜಿಲ್ಲಾಡಳಿತಕ್ಕೆ ಇಲ್ಲ. ಇದು ಸರ್ಕಾರದ ಮಟ್ಟದಲ್ಲಿ ಆಗಬೇಕಿದ್ದು, ಕಾಯ್ದೆಗೆ ತಿದ್ದುಪಡಿ ತರಬೇಕಿದೆ. ಈ ಸಂಬಂಧ ನೀವು ನೀಡಿದ ಮನವಿಯನ್ನು ಸರ್ಕಾರಕ್ಕೆ ಸಲ್ಲಿಸುತ್ತೇವೆ ಎಂದು ಅಪರ ಜಿಲ್ಲಾಧಿಕಾರಿ ಡಾ.ಶಿವರಾಜ್ ಭರವಸೆ ನೀಡಿದರು.

ನನ್ನ ಪತಿ ದೇಶ ಸೇವೆ ಮಾಡಿ ಹುತಾತ್ಮರಾಗಿದ್ದಾರೆ. ಅವರ ಜೀವಿತಾವಧಿಯಲ್ಲಿ ಆಸ್ತಿ ವಿಲ್ ಮಾಡಿದ್ದಾರೆ. ಆದರೆ ಈ ತನಕ ಆ ಜಮೀನು ನೀಡಿಲ್ಲ ಎಂದು ಚಂದ್ರಾಂಬಿಕೆ ಆರೋಪಿಸಿದರು.


ಇವರ ಸಮಸ್ಯೆ ಪರಿಹಾರಕ್ಕೆ ಸಕರಾತ್ಮಕವಾಗಿ ಸ್ಪಂದಿಸಿದ ಜಿಲ್ಲಾಧಿಕಾರಿ ಲಕ್ಷ್ಮೀ ಕಾಂತರೆಡ್ಡಿ, ಇವರ ದಾಖಲಾತಿಗಳನ್ನು ಪರಿಶೀಲನೆ ನಡೆಸಿ ಶೀಘ್ರವೇ ಪೌತಿ ಖಾತೆ ಮಾಡಿಕೊಡಿ ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.

ನನ್ನದು ತಬರನ ಕಥೆ: ಹತ್ತಾರು ವರ್ಷ ಗಡಿಯಲ್ಲಿ ದೇಶ ಕಾದಿದ್ದೇವೆ. ನಿವೃತ್ತರಾದ ನಂತರ ಮೈಸೂರಿನಲ್ಲಿ ನೆಲೆಸಿದ್ದು, ಈ ತನಕ ನನಗೆ ಸೂರು ಇಲ್ಲ. ನಿವೇಶನಕ್ಕಾಗಿ ಮುಡಾಗೆ ಅಲೆದು ಅಲೆದು ನನ್ನ ಬದುಕು ತಬರನ ಕಥೆಯಂತಾಗಿದೆ. ಹಲವು ವರ್ಷಗಳಿಂದ ಮುಡಾಗೆ ಎಡತಾಕಿ ನನ್ನ ಚಪ್ಪಲಿ ಸವೆಯಿತೇ ಹೊರತು ನಿವೇಶನ ಸಿಗಲಿಲ್ಲ. ಈಗಲಾದರೂ ನನಗೊಂದು ನಿವೇಶನ ದೊರಕಿಸಿ ಕೊಡಿ ಎಂದು ನಿವೃತ್ತ ಯೋಧ ರಾಜಶೇಖರ್ ಮನವಿ ಮಾಡಿದರು.

ನಿವೃತ್ತನಾದ ನನಗೆ ಹುಣಸೂರಿನಲ್ಲಿ ಸರ್ಕಾರ ಜಮೀನು ಮಂಜೂರು ಮಾಡಿದೆ. ಆದರೆ ನನ್ನ ಜಾಗವನ್ನು ಅತಿಕ್ರಮಿಸಿಕೊಂಡಿರುವ ಖಾಸಗಿ ವ್ಯಕ್ತಿಗಳು ಅಲ್ಲಿ ಮನೆಗಳನ್ನು ನಿರ್ಮಾಣ ಮಾಡಿದ್ದು, ಆಸ್ತಿ ನನ್ನ ಕೈ ತಪ್ಪಿದೆ ಎಂದು ಸುರೇಶ್ ಎಂಬ ಯೋಧ ಅಸಹಾಯಕತೆ ವ್ಯಕ್ತಪಡಿಸಿದರು.

ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸಾ ಸೌಕರ್ಯ: ನಿವೃತ್ತ ಯೋಧರಿಗೆ ಉಚಿತ ಚಿಕಿತ್ಸಾ ಸೌಲಭ್ಯ ಪಡೆಯಲು ಕೆ.ಆರ್.ಆಸ್ಪತ್ರೆ ಹಾಗೂ ಜೆಎಸ್‌ಎಸ್ ಆಸ್ಪತ್ರೆಯಲ್ಲಿ ಅವಕಾಶ ಕಲ್ಪಿಸಲಾಗಿದೆ. ಆದರೆ ಮಣಿಪಾಲ್ ಆಸ್ಪತ್ರೆ, ಅಪೋಲೊ ಆಸ್ಪತ್ರೆ, ನಾರಾಯಣ ಹೃದಯಾಲಯ ಸೇರಿದಂತೆ ಇತರೆ ಖಾಸಗಿ ಆಸ್ಪತ್ರೆಗಳಲ್ಲಿ ಕೂಡ ಅವಕಾಶ ಕಲ್ಪಿಸಬೇಕು ಎಂದು ಹಲವು ನಿವೃತ್ತ ಯೋಧರು ಆಗ್ರಹಿಸಿದರು.

ಕಾನೂನು ನೆರವು: ಈ ವೇಳೆ ಮಾತನಾಡಿದ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ವಕೀಲ ಜಿ.ಎಸ್. ಶಿವಸ್ವಾಮಿ, ಹಿರಿಯರು ಹಾಗೂ ಅಶಕ್ತರ ಪರವಾಗಿ ವಾದ ಮಾಡಲು ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ಹಾಗೂ ತಾಲೂಕು ಮಟ್ಟದಲ್ಲಿ ವಕೀಲರನ್ನು ನೇಮಕ ಮಾಡಿದೆ. ವೈಯಕ್ತಿಕವಾದ ಸಮಸ್ಯೆಯಿಂದ ಹಿಡಿದು ಸರ್ಕಾರದ ಮಟ್ಟದ ಸಮಸ್ಯೆವರೆಗೆ ಏನೇ ತೊಂದರೆ ಇದ್ದರೂ ಅಲ್ಲಿ ಲಿಖಿತ ಮನವಿ ಸಲ್ಲಿಸಿದರೆ ನಿಮ್ಮ ಪರವಾಗಿ ಅವರು ಕಾನೂನಾತ್ಮಕ ಹೋರಾಟ ಮಾಡುತ್ತಾರೆ ಎಂದು ಭರವಸೆ ನೀಡಿದರು.



ಮೈಸೂರು ಜಿಲ್ಲಾ ಪಂಚಾಯತ್‌ನ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಸೋಮವಾರ ಮಾಜಿ ಸೈನಿಕರೊಂದಿಗೆ ಕುಂದು ಕೊರತೆ ಆಲಿಸುವ ಸಭೆ ನಡೆಯಿತು.

ಕುವೆಂಪು ನಿವಾಸ 'ಉದಯರವಿ' ಮ್ಯೂಸಿಯಂ ಮಾಡುವ ಪ್ರಸ್ತಾಪ

ಶಾಸಕ ಹರೀಶ್‌ಗೌಡರ ಜೊತೆ ಕುವೆಂಪು ಪುತ್ರಿ ತಾರಿಣಿ, ಅಳಿಯ ಪ್ರೊ.ಚಿದಾನಂದಗೌಡ ಚರ್ಚೆ



ಮೈಸೂರಿನ ವಾಣಿವಿಲಾಸ ಮೊಹಲ್ಲಾದಲ್ಲಿರುವ ಕುವೆಂಪು ನಿವಾಸ ಉದಯರವಿಯನ್ನು ಮ್ಯೂಜಿಯಂ ಮಾಡುವ ಸಂಬಂಧ ಶಾಸಕ ಕೆ.ಹರೀಶ್‌ಗೌಡರು ಕುವೆಂಪು ಅವರ ಮಗಳು ತಾರಿಣಿ, ಅಳಿಯ ಪ್ರೊ.ಚಿದಾನಂದಗೌಡ ಅವರೊಂದಿಗೆ ಸಮಾಲೋಚನೆ ನಡೆಸಿದರು.

ಮೈಸೂರು, ಫೆ.9(ಬಿಎಲ್‌ಯು)– ಮೈಸೂರಿನ ವಾಣಿ ವಿಲಾಸ ಮೊಹಲ್ಲಾದ ಕುವೆಂಪು ಅವರ ನಿವಾಸ 'ಉದಯರವಿ'ಯನ್ನು ಮ್ಯೂಸಿಯಂ ಮಾಡುವ ಸಂಬಂಧ ಶಾಸಕ ಕೆ.ಹರೀಶ್‌ಗೌಡ ಅವರ ಜೊತೆ ಕುವೆಂಪು ಅವರ ಪುತ್ರಿ ತಾರಿಣಿ ಹಾಗೂ ಅಳಿಯ ಪ್ರೊ.ಚಿದಾನಂದಗೌಡ ಅವರು ಚರ್ಚೆ ನಡೆಸಿದರು.

ಕುವೆಂಪು ಅವರು ನೆಲೆಸಿದ್ದ ಮನೆಯನ್ನು ಮ್ಯೂಸಿಯಂ ಮಾಡುವ ಸಂಬಂಧ ಸರ್ಕಾರದ ಜೊತೆ ಹಲವು ವರ್ಷಗಳಿಂದ ಮಾತುಕತೆ ನಡೆದಿದೆ. ಆದರೆ ಈ ತನಕ ಇದು ಸಾಕಾರಗೊಂಡಿಲ್ಲ ಎಂದು ತಾರಿಣಿ ಅವರು ಅಸಮಾಧಾನ ವ್ಯಕ್ತಪಡಿಸಿದರು. 'ಉದಯರವಿ'ಯನ್ನು ಮ್ಯೂಸಿಯಂ ಮಾಡುವುದಾದರೆ ಹಿಂದೆ ನಿರ್ಮಾಣ ವಾಗುತ್ತಿರುವ ಮನೆಗೆ ನಾವು ಸ್ಥಳಾಂತರಗೊಳ್ಳುತ್ತೇವೆ ಎಂದು ತಾರಿಣಿ ಅವರು ಭರವಸೆ ನೀಡಿದರು.

ಈ ವೇಳೆ ಮಾತನಾಡಿದ ಹರೀಶ್ ಗೌಡರು, ಮಾರ್ಚ್ 6ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಜೆಟ್ ಮಂಡಿಸುತ್ತಿದ್ದಾರೆ. ತರುವಾಯ ನಡೆಯುವ ವಿಧಾನ ಮಂಡಲ ಅಧಿವೇಶನದ ನಂತರ ಈ ಕುರಿತಂತೆ ಸಿದ್ದರಾಮಯ್ಯರ ಜೊತೆ ಮಾತುಕತೆ ನಡೆಸುತ್ತೇನೆ ಎಂದರು.

'ಉದಯರವಿ'ಯನ್ನು ಮ್ಯೂಸಿಯಂ ಮಾಡುವುದಾದರೆ ಅದು ಯಾವ ರೀತಿಯಲ್ಲಿರಬೇಕು, ಟ್ರಸ್ಟ್ ರಚನೆಯ ಸ್ವರೂಪ ಹೇಗಿರಬೇಕು ಎಂಬ ಬಗ್ಗೆ ನೀವು ವ್ಯಕ್ತಪಡಿಸಿರುವ ಅಭಿಪ್ರಾಯವನ್ನು ಸಿದ್ದರಾಮಯ್ಯ ಅವರಿಗೆ ವಿವರಿಸುತ್ತೇನೆ ಎಂದು ಹರೀಶ್‌ಗೌಡ ತಿಳಿಸಿದರು.

ಈ ಸಂದರ್ಭದಲ್ಲಿ ಲೆಗೆಸಿ ಕ್ಲಬ್ ಆಫ್ ಮೈಸೂರು ಅಧ್ಯಕ್ಷ ಡಿ.ವಿ.ಸದಾನಂದ ಸಾಗರ್, ಪತ್ರಕರ್ತೆ ರಶ್ಮಿ ಕೋಟಿ, ಸಿಂಡಿಕೇಟ್ ಸದಸ್ಯ ಮಾದೇಶ್ ಅವರು ಹಾಜರಿದ್ದರು.

ಅಭಿನಂದನೆ



ಭಗೀರಥ ಚಲನಚಿತ್ರ ಬಿಡುಗಡೆಯಾಗಿ ವರ್ಷ ತುಂಬಿದ ಹಿನ್ನೆಲೆಯಲ್ಲಿ ಸೋಮವಾರ ಚಲನಚಿತ್ರದ ನಾಯಕ ನಟ ಡೇರಿಂಗ್ ಸ್ಟಾರ್ ಎಸ್.ಜಯಪ್ರಕಾಶ್ ಅವರನ್ನು ವಿವಿಧ ಸಂಘ ಸಂಸ್ಥೆಗಳ ಪರವಾಗಿ ಹಿರಿಯ ಸಮಾಜ ಸೇವಕ ಡಾ.ರಘುರಾಂ ಕೆ.ವಾಜಪೇಯಿ ಅಭಿನಂದಿಸಿದರು. ಈ ವೇಳೆ ತೇಜೇಶ್ ಲೋಕೇಶ್‌ಗೌಡ, ಪ್ರಭಾಕರ್, ಬೋಗಾದಿ ಸಿದ್ದೇಗೌಡ, ಕೃಷ್ಣಪ್ಪ, ಹನುಮಂತಯ್ಯ, ಸಿಂಧುವಳ್ಳಿ ಶಿವಕುಮಾರ್, ನೇಹಾ, ಭಾಗ್ಯಮ್ಮ, ಜ್ಯೋತಿ, ಸುಜಾತ, ನಾರಾಯಣಗೌಡ, ಅಶೋಕ್‌ಕುಮಾರ್, ರಘು ಅರಸ್, ಇಂದಿರಾ, ವಾಣಿ, ಗೀತಾ, ರವೀಶ್, ರವಿ ನಾಯಕ್, ಗಣೇಶ್‌ಪ್ರಸಾದ್, ಶಿವರಾಂ, ಪ್ರದೀಪ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಕರ್ನಾಟಕ ಪಬ್ಲಿಕ್ ಶಾಲೆಯ ವಿದ್ಯಾರ್ಥಿಗಳಿಗೆ ಅಭಿನಂದನೆ



ಮೈಸೂರಿನ ಕುವೆಂಪುನಗರದ ಕರ್ನಾಟಕ ಪಬ್ಲಿಕ್ ಶಾಲೆಯ ಪ್ರಾಥಮಿಕ ಶಾಲಾ ವಿಭಾಗದ ವಿದ್ಯಾರ್ಥಿಗಳು Youth for seva ಸಂಸ್ಥೆ ವತಿಯಿಂದ ನಡೆಸಲಾದ ಚಿಗುರು ಕಾರ್ಯಕ್ರಮದ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿ ಹಲವು ಬಹುಮಾನಗಳನ್ನು ಪಡೆದು, ಸಮಗ್ರ ಪ್ರಶಸ್ತಿಯಲ್ಲಿ ದ್ವಿತೀಯ ಸ್ಥಾನವನ್ನು ಪಡೆದುಕೊಂಡು ಶಾಲೆಗೆ ಕೀರ್ತಿ ತಂದಂತಹ ವಿದ್ಯಾರ್ಥಿಗಳು ಹಾಗೂ F.K. ಇರಾನಿಯವರ ಸ್ಮರಣಾರ್ಥವಾಗಿ ನಡೆದ ಖೋ–ಖೋ ಹಾಗೂ ವಾಲಿಬಾಲ್ ಕ್ರೀಡಾಕೂಟದಲ್ಲಿ ನಮ್ಮ ಶಾಲೆಯ ಬಾಲಕಿಯರ ತಂಡ ಖೋ–ಖೋ ಆಟದಲ್ಲಿ ಪ್ರಥಮ ಬಹುಮಾನವನ್ನು ಪಡೆದುಕೊಂಡ ವಿದ್ಯಾರ್ಥಿಗಳಿಗೂ ಪ್ರಾಂಶುಪಾಲರಾದ ಗುಬ್ಬಿಗೂಡು ರಮೇಶ್ ಬಹುಮಾನ ವಿತರಿಸಿ, ಅಭಿನಂದಿಸಿದರು. ಈ ವೇಳೆ ಉಪನ್ಯಾಸಕರಾದ ಕ್ಯಾತಮಾರನಹಳ್ಳಿ ಮಹೇಶ, ಮುಖ್ಯೋಪಾಧ್ಯಾಯರಾದ ಹೇಮಾವತಿ, ರೂಪ, ಭಾಗ್ಯಲಕ್ಷ್ಮಿ, ಶೋಭರಾಣಿ, ರೇಣು, ಮಂಜು ಪ್ರಭ, ಮುರುಳೀಧರ್, ಶಿವಕುಮಾರ್ ಇದ್ದರು.

ಗೋಪಾಲ ಸಮುದಾಯದ ಕುಲಶಾಸ್ತ್ರೀಯ ಅಧ್ಯಯನದ ವರದಿ



ಡಾ.ರೇಖಾ ಜಾಧವ್

ಮೈಸೂರು,ಫೆ.9– ಗೋಪಾಲ ಸಮುದಾಯದ ಕುಲಶಾಸ್ತ್ರೀಯ ಅಧ್ಯಯನ ಆರಂಭವಾಗಿ ಸರಿಸುಮಾರು 6 ತಿಂಗಳು ಆಗಿದೆ. ಈ ಸಮುದಾಯಕ್ಕೆ ಸಂಬಂಧಿಸಿದಂತೆ ನಾವು ಕರ್ನಾಟಕದಲ್ಲಿ ಪ್ರಾದೇಶಿಕವಾಗಿ ಎಲ್ಲೆಲ್ಲಿ ವಾಸವಿರುವರು ಎಂಬುದರ ಬಗ್ಗೆ ಹಲವಾರು ಹಿರಿಯ ಮಾನವಶಾಸ್ತ್ರಜ್ಞರು, ಸಮಾಜಶಾಸ್ತ್ರ ಹಿರಿಯ ಪ್ರಾಧ್ಯಾಪಕರು ಸಮಾಜದ ಹಿರಿಯ ಮುಖಂಡರು, ಸ್ಥಳೀಯ ಜನಪ್ರತಿನಿಧಿಗಳು ಸರ್ಕಾರದ ವಿವಿಧ ಸಂಶೋಧನಾ ಸಂಸ್ಥೆಗಳಿಂದ ಮಾಹಿತಿಯನ್ನು ಸಂಗ್ರಹಿಸಲಾಗಿದ್ದು, ಇಲ್ಲಿಯವರೆಗೂ ಗೋಪಾಲ ಸಮುದಾಯದ ಜನರ ಪ್ರಾದೇಶಿಕ ಮಾಹಿತಿ ಮತ್ತು ಅವರ ವಾಸಸ್ಥಳ ಕಂಡು ಬಂದಿರುವುದಿಲ್ಲ.

ರಾಜ್ಯ ಸರ್ಕಾರ ಡಿ.ದೇವರಾಜ ಅರಸು ಸಂಶೋಧನಾ ಸಂಸ್ಥೆಯ ಪ್ರಾಯೋಜಕತ್ವದಲ್ಲಿ ಮಹಾರಾಜ ಕಾಲೇಜಿನ ಸಮಾಜಶಾಸ್ತ್ರ ವಿಭಾಗದ ಪ್ರಾಧ್ಯಾಪಕರು ಮತ್ತು ಯೋಜನ ನಿರ್ದೇಶಕರು ಡಾ. ರೇಖಾ.ಕೆ.ಜಾಧವ್ ಅವರ ನೇತೃತ್ವದಲ್ಲಿ ಅಧ್ಯಯನಕ್ಕಾಗಿ ಸಂಶೋಧನ ತಂಡವನ್ನು ರಚಿಸಲಾಗಿದೆ.

ಈ ತಂಡದಿಂದ ಗೋಪಾಲ ಸಮುದಾಯ ಅಧ್ಯಯನ ಕುಲಶಾಸ್ತ್ರೀಯ ವಿಷಯಕ್ಕೆ ಸಂಬಂಧಿಸಿದಂತೆ ಕರ್ನಾಟಕ ರಾಜ್ಯಾದ್ಯಂತ ಪ್ರಾದೇಶಿಕವಾಗಿ ಜಿಲ್ಲಾವಾರು ಗೋಪಾಲ ಸಮುದಾಯದ ಮಾಹಿತಿಯನ್ನು ಪಡೆಯಲು ಜಿಲ್ಲಾವಾರು ಪ್ರವಾಸವನ್ನು ಕೈಗೊಳ್ಳಲಾಗುತ್ತಿದೆ. ಸಮುದಾಯದ ಮುಖಂಡರ ಅಧಿಕಾರಿ ವರ್ಗ, ಸಂಶೋಧಕರು, ಹಿರಿಯ, ರಾಜಕೀಯ ಮುಖಂಡರು, ಹಿರಿಯ ಮಾನವಶಾಸ್ತ್ರಜ್ಞರು ಮತ್ತು ಸಮಾಜಶಾಸ್ತ್ರಜ್ಞರು ಈ ತಂಡಕ್ಕೆ ಮಾಹಿತಿ ನೀಡಿ ಗೋಪಾಲ ಸಮುದಾಯದ ಕುಲಶಾಸ್ತ್ರೀಯ ಅಧ್ಯಯನವನ್ನು ಮಾಡಿ ಸರ್ಕಾರಕ್ಕೆ ವರದಿ ಸಲ್ಲಿಸಲು ಎಲ್ಲರೂ ಸಹಕರಿಸಬೇಕೆಂದು ತಿಳಿಸಿದ್ದಾರೆ.

ಗೋಪಾಲ ಸಮುದಾಯಕ್ಕೆ ಸಂಬಂಧಿಸಿದಂತೆ ಮಾಹಿತಿಯುಳ್ಳವರು ಮಹಾರಾಜ ಕಾಲೇಜಿನ ಕಚೇರಿಯ ಮೊ.ನಂ. 9986723964, 7829977572 ಇವರನ್ನು ಸಂಪರ್ಕಿಸಬಹುದು ಎಂದು ಯೋಜನ ನಿರ್ದೇಶಕರು ಪ್ರೊ. ರೇಖಾ ಕೆ. ಜಾಧವ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

ನಾಳೆ ವಿದ್ಯುತ್ ವ್ಯತ್ಯಯ

ಮೈಸೂರು,ಫೆ.9– ದ್ವಿಮುಖ ವಿದ್ಯುತ್ ಮಾರ್ಗವನ್ನು ನಿರ್ಮಾಣ ಮಾಡುವ ಕಾಮಗಾರಿ ಕೆಲಸದ ನಿಮಿತ್ತ ಫೆ.11 ರಂದು ಬೆಳಿಗ್ಗೆ 10ರಿಂದ ಸಂಜೆ 5.30 ರವರೆಗೆ ರಾಜೀವ್‌ನಗರ ವಿ.ವಿ ಕೇಂದ್ರದ ವ್ಯಾಪ್ತಿಯ ರಾಜೀವನಗರ 2ನೇ ಹಂತ, ಕ್ರಿಶ್ಚಿಯನ್ ಕಾಲೋನಿ, ಯಾಸಿನ್ ಮಸ್ಜಿದ್, ಎಸ್.ಬಡಾವಣೆ, ಸೂರ್ಯನಾರಾಯಣ ದೇವಸ್ಥಾನ ರಸ್ತೆ, ಆಲ್ ಬಜಾರ್ ಮಸ್ಜಿದ್ ವೃತ್ತ, ಅಂಬೇಡ್ಕರ್ ಭವನ ರಸ್ತೆ, ಕ್ಯೂಬಾ ಮಸ್ಜಿದ್ ವೃತ್ತ, ನಾರಾಯಣ ಹೃದಯಾಲಯ ಆಸ್ಪತ್ರೆ, ಕಾಮನಕೆರೆಹುಂಡಿ, ಕೆ.ಹೆಚ್.ಬಿ. ಬಡಾವಣೆ, ಆರ್‌ಟಿಓ–55, ಆಸೀನಾ ಬಡಾವಣೆ, ರಾಜೀವನಗರ 3ನೇ ಹಂತ ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳು.

ದೇವನೂರು ವಿ.ವಿ ಕೇಂದ್ರದ ವ್ಯಾಪ್ತಿಯ ಬೀಡಿ ಕಾಲೋನಿ, ಅಜೀಜ್ ಸೇಠ್ ನಗರ, 320 ಮನೆ, ಕೆಸರೆ ಕಾಲೋನಿ, ಮಹದೇವಪುರ ಮುಖ್ಯ ರಸ್ತೆ, ಶಕ್ತಿನಗರ, ರಾಜ್‌ಕುಮಾರ್ ರಸ್ತೆ, ಕಲ್ಯಾಣಗಿರಿ, ಅಕ್ಷಯ ಭಂಡಾರ್, ರಮ್ಮನಹಳ್ಳಿ, ಕಾಳಿಸಿದ್ದನಹುಂಡಿ, ಹಂಚ್ಯ, ಸಾತಗಳ್ಳಿ, ಗಳಿಗರಹುಂಡಿ, ನೆಹರು ನಗರ, ಸಾತಗಳ್ಳಿ, ಡಿ.ಟಿ.ಎಸ್ ರಾವ್‌ನಗರ, ಭಾರತ್ ನಗರ ಹಾಗೂ ಸುತ್ತ–ಮುತ್ತ ವಿದ್ಯುತ್ ವ್ಯತ್ಯಯವಾಗಲಿದೆ.

ಮೈಸೂರಿನ ಮೊದಲ ಬೋನ್ ಮ್ಯಾರೋ ಟ್ರಾನ್ಸ್‌ಪ್ಲಾಂಟ್ ಘಟಕ ಉದ್ಘಾಟನೆ

ಕ್ಯಾನ್ಸರ್ ಚಿಕಿತ್ಸೆಯಲ್ಲಿ ಭಾರತ್ ಆಸ್ಪತ್ರೆ, ಆಂಕಾಲಜಿ ಸಂಸ್ಥೆ ವಿನೂತನ ಹೆಜ್ಜೆ



ಭಾರತ್ ಆಸ್ಪತ್ರೆ ಮತ್ತು ಆಂಕಾಲಜಿ ಸಂಸ್ಥೆ (ಬಿಎಚ್‌ಐಒ)ಯಲ್ಲಿ ಸೋಮವಾರ ಮೈಸೂರಿನ ಮೊದಲ ಬೋನ್ ಮ್ಯಾರೋ ಟ್ರಾನ್ಸ್‌ಪ್ಲಾಂಟ್ (BMT) ಘಟಕವನ್ನು ಆರಂಭಿಸಲಾಗಿದೆ.

ಮೈಸೂರು: ಈ ಭಾಗದ ಕ್ಯಾನ್ಸರ್ ಚಿಕಿತ್ಸಾ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ಐತಿಹಾಸಿಕ ಹೆಜ್ಜೆಯಾಗಿ, ಭಾರತ್ ಆಸ್ಪತ್ರೆ ಮತ್ತು ಆಂಕಾಲಜಿ ಸಂಸ್ಥೆ (ಬಿಎಚ್‌ಐಒ)ಯಲ್ಲಿ ಸೋಮವಾರ ಮೈಸೂರಿನ ಮೊದಲ ಬೋನ್ ಮ್ಯಾರೋ ಟ್ರಾನ್ಸ್‌ಪ್ಲಾಂಟ್ (BMT) ಘಟಕವನ್ನು ಆರಂಭಿಸಲಾಗಿದೆ. ಹೆಬ್ಬಾಳ್‌ನಲ್ಲಿರುವ ಬಿಎಚ್‌ಐಒ ಆವರಣದಲ್ಲಿ ಸ್ಥಾಪಿಸಲಾದ ಈ ಅತ್ಯಾಧುನಿಕ ಸೌಲಭ್ಯಕ್ಕೆ ಭಾರತೀಯ ರಿಸರ್ವ್ ಬ್ಯಾಂಕ್ ನೋಟ್ ಮುದ್ರಣ್ ಪ್ರೈವೇಟ್ ಲಿಮಿಟೆಡ್ (ಬಿಆರ್‌ಬಿಎನ್‌ಎಂಪಿಎಲ್), ಮೈಸೂರು ಸಂಸ್ಥೆ ಸಿಎಸ್‌ಆರ್ ನಿಧಿಯಡಿ ಪ್ರಾಯೋಜಕತ್ವ ನೀಡಿದೆ.

ಈ ಘಟಕವನ್ನು ಬಿಆರ್‌ಬಿಎನ್‌ಎಂಪಿಎಲ್‌ನ ಹಿರಿಯ ಮಹಾಪ್ರಬಂಧಕ ಕುಮಾರ್ ರಾಕೇಶ್ ಗುಪ್ತಾ ಹಾಗೂ ಬಿಎಚ್‌ಐಒ ಅಧ್ಯಕ್ಷರಾದ ಡಾ. ಬಿ.ಎಸ್. ಅಜಯ್‌ಕುಮಾರ್ ಅಧಿಕೃತವಾಗಿ ಉದ್ಘಾಟಿಸಿದರು. ಇದರಿಂದ ಮೈಸೂರಿನ ಆರೋಗ್ಯ ಸೇವಾ ಕ್ಷೇತ್ರದಲ್ಲಿ ಮಹತ್ವದ ಮೈಲಿಗಲ್ಲು ನಿರ್ಮಾಣವಾಗಿದೆ. ಇದುವರೆಗೆ ಮೈಸೂರು ಮತ್ತು ಸುತ್ತಮುತ್ತಲಿನ ಜಿಲ್ಲೆಗಳ ರೋಗಿಗಳು ಬೋನ್ ಮ್ಯಾರೋ ಟ್ರಾನ್ಸ್‌ಪ್ಲಾಂಟ್ ಚಿಕಿತ್ಸೆಗೆ ಬೆಂಗಳೂರಿಗೆ ಪ್ರಯಾಣಿಸಬೇಕಾಗುತ್ತಿದ್ದು, ಹೆಚ್ಚಿನ ಚಿಕಿತ್ಸೆ ವೆಚ್ಚ, ದೀರ್ಘ ನಿರೀಕ್ಷಾ ಅವಧಿ ಹಾಗೂ ಮಾನಸಿಕ–ಆರ್ಥಿಕ ಒತ್ತಡವನ್ನು ಎದುರಿಸಬೇಕಾಗುತ್ತಿತ್ತು. ಬೋನ್ ಮ್ಯಾರೋ ಟ್ರಾನ್ಸ್‌ಪ್ಲಾಂಟ್ ಎನ್ನುವುದು ಅತ್ಯಂತ ವಿಶೇಷ ಮತ್ತು ಜೀವ ಉಳಿಸುವ ಚಿಕಿತ್ಸಾ ವಿಧಾನವಾಗಿದ್ದು, ಹಾನಿಗೊಳಗಾದ ಅಥವಾ ರೋಗಗ್ರಸ್ತ ರಕ್ತ ಉತ್ಪಾದಕ ಸ್ಟೆಮ್ ಸೆಲ್‌ಗಳನ್ನು, ರೋಗಿಯದೇ ಅಥವಾ ಹೊಂದಾಣಿಕೆಯ ದಾನಿಯಿಂದ ಪಡೆದ ಆರೋಗ್ಯಕರ ಕೋಶಗಳಿಂದ ಬದಲಾಯಿಸಲಾಗುತ್ತದೆ. ಇದು ಲ್ಯೂಕೇಮಿಯಾ, ಲಿಂಫೋಮಾ, ಮಲ್ಟಿಪಲ್ ಮೈಯೆಲೋಮಾ ಸೇರಿದಂತೆ ವಿವಿಧ ರಕ್ತ ಕ್ಯಾನ್ಸರ್‌ಗಳು ಹಾಗೂ ಕೆಲವು ಜನ್ಯ ಮತ್ತು ರೋಗನಿರೋಧಕ ಸಂಬಂಧಿತ ಕಾಯಿಲೆಗಳಿಗೆ ಅತ್ಯಗತ್ಯವಾದ ಚಿಕಿತ್ಸೆ ಆಗಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಡಾ. ಬಿ.ಎಸ್.ಅಜಯ್‌ಕುಮಾರ್, ಈ ಘಟಕದ ಉದ್ಘಾಟನೆಯನ್ನು ಮೈಸೂರಿನ ಕ್ಯಾನ್ಸರ್ ಚಿಕಿತ್ಸೆಗೆ ನಿರ್ಣಾಯಕ ಕ್ಷಣವೆಂದು ಬಣ್ಣಿಸಿದರು. ಹೊಸ ಘಟಕವು ಅಂತರರಾಷ್ಟ್ರೀಯ ಮಟ್ಟದ ಶುಚಿತ್ವ, ಸೋಂಕು ನಿಯಂತ್ರಣ ಹಾಗೂ ರೋಗಿ ಸುರಕ್ಷತಾ ಮಾನದಂಡಗಳನ್ನು ಕಟ್ಟುನಿಟ್ಟಾಗಿ ಪಾಲಿಸುತ್ತಿದ್ದು, ಅತ್ಯುತ್ತಮ ಚಿಕಿತ್ಸಾ ಫಲಿತಾಂಶಗಳನ್ನು ಖಚಿತಪಡಿಸುತ್ತದೆ ಎಂದು ತಿಳಿಸಿದರು.

ಬಿಆರ್‌ಬಿಎನ್‌ಎಂಪಿಎಲ್‌ನ ಹಿರಿಯ ಮಹಾಪ್ರಬಂಧಕ ಕುಮಾರ್ ರಾಕೇಶ್ ಗುಪ್ತಾ ಮಾತನಾಡಿ, ಸಂಸ್ಥೆಯ ಸಿಎಸ್‌ಆರ್ ತತ್ವಶಾಸ್ತ್ರವು ದಾನಕ್ಕಿಂತಲೂ ದೀರ್ಘಕಾಲೀನ ಹಾಗೂ ಸುಸ್ಥಿರ ಸಾಮಾಜಿಕ ಪರಿಣಾಮ ಸೃಷ್ಟಿಸುವುದರ ಮೇಲೆ ಕೇಂದ್ರೀಕೃತವಾಗಿದೆ ಎಂದು ಹೇಳಿದರು.

ಭಾರತ್ ಕ್ಯಾನ್ಸರ್ ಆಸ್ಪತ್ರೆಯನ್ನು ಅದರ ವಿಶ್ವಾಸಾರ್ಹತೆ, ಸಾಬೀತಾದ ಸಾಮರ್ಥ್ಯ ಮತ್ತು ಸಮಾಜದಲ್ಲಿ ಗಳಿಸಿರುವ ನಂಬಿಕೆ ಆಧಾರದ ಮೇಲೆ ಆಯ್ಕೆ ಮಾಡಲಾಗಿದೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಕಿರಣ ಚಿಕಿತ್ಸಾ ತಜ್ಞರು ಹಾಗೂ ವೈದ್ಯಕೀಯ ಅಧೀಕ್ಷಕಿ ಡಾ. ವೈ.ಎಸ್. ಮಾಧವಿ, ಬಿಎಚ್‌ಐಒ ಮುಖ್ಯ ವೈದ್ಯಕೀಯ ಆಂಕೊಲಾಜಿಸ್ಟ್ ಡಾ. ಅವಿನಾಶ್ ಸಿ.ಬಿ., ಹಿಮಾಟೋ ಆಂಕೊಲಾಜಿಸ್ಟ್ ಹಾಗೂ ಬೋನ್ ಮ್ಯಾರೋ ಟ್ರಾನ್ಸ್‌ಪ್ಲಾಂಟ್ ವೈದ್ಯರಾದ ಡಾ. ನಟರಾಜ್ ಮತ್ತು ಡಾ. ಸಂತೋಷ್‌ಕುಮಾರ್ ಕೆ.ಎನ್., ಹಿರಿಯ ವೈದ್ಯಕೀಯ ಆಂಕೊಲಾಜಿಸ್ಟ್ ಡಾ. ಅಭಿಲಾಶ್ ಜಿ.ಹೆಚ್., ಮಕ್ಕಳ ಹಿಮಾಟಾಲಜಿಸ್ಟ್ ಮತ್ತು ಆಂಕೊಲಾಜಿಸ್ಟ್ ಡಾ. ಸೌಮ್ಯ, ಬಿಎಚ್‌ಐಒ ಸಿಒಒ ಗೌತಮ್ ಧರ್ಮೇಲ್ಕರ್, ಬಿಆರ್‌ಬಿಎನ್‌ಎಂಪಿಎಲ್‌ನ ಜನರಲ್ ಮ್ಯಾನೇಜರ್‌ಗಳಾದ ಕೆ. ದಿನಕರ ಹಾಗೂ ದಿನೇಶ್ ಕುಮಾರ್ ಆನಂದ್, ಮ್ಯಾನೇಜರ್ ಮೋಹಿತ್ ಅಗರ್ವಾಲ್ ಮತ್ತು ಪ್ರೊಸೆಸ್ ಅಸಿಸ್ಟೆಂಟ್ ಎಂ.ಪಿ. ರವಿ ಇತರರು ಉಪಸ್ಥಿತರಿದ್ದರು.

ಕೇಂದ್ರ ಬಜೆಟ್ ದೇಶದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ

ಮಾಜಿ ಉಪ ಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವತ್ಥನಾರಾಯಣ್



ಸುದ್ದಿಗೋಷ್ಠಿಯಲ್ಲಿ ಮಾಜಿ ಡಿಸಿಎಂ ಡಾ.ಸಿ.ಎನ್.ಅಶ್ವತ್ಥನಾರಾಯಣ್ ಮಾತನಾಡಿದರು.

ಮಂಡ್ಯ, ಫೆ.9– ಆಡಳಿತದಲ್ಲಿ ಸುಧಾರಣೆಗೆ ಹೆಚ್ಚಿನ ಒತ್ತು ನೀಡಿ ಸ್ವಾವಲಂಬಿ ಮತ್ತು ಆತ್ಮನಿರ್ಭರ ಭಾರತ ಗುರಿಯಾಗಿ ಸಿಕೊಂಡು, ಉದ್ಯೋಗ, ಕೃಷಿ ಉತ್ಪಾದನೆ, ನಾಗರಿಕರು ಕೊಳ್ಳುವ ಶಕ್ತಿ ಹೆಚ್ಚಿಸಲು ಕೇಂದ್ರ ಬಜೆಟ್ ಮಂಡಿಸಲಾಗಿದ್ದು, ಇದು ದೇಶದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕವಾಗಿದೆ ಎಂದು ಮಾಜಿ ಉಪ ಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವತ್ಥ ನಾರಾಯಣ್ ತಿಳಿಸಿದರು.

ನಗರದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಜೆಟ್ ಅನ್ನು 3 ಕರ್ತವ್ಯ ಭಾಗವಾಗಿ ವಿಂಗಡಿಸಲಾಗಿದ್ದು, ಆರ್ಥಿಕ ಕ್ಷೇತ್ರಕ್ಕೆ ವೇಗ ಹೆಚ್ಚಿಸುವುದು, ನಾಗರಿಕರ ಆಶಯಗಳನ್ನು ಈಡೇರಿಸುವುದು ಮತ್ತು ಆಡಳಿತದಲ್ಲಿ ತಂತ್ರಜ್ಞಾನ ಅಳವಡಿಸಿಕೊಂಡು ಹೆಚ್ಚಿನ ಸುಧಾರಣೆಗೆ ಪ್ರಾಧಾನ್ಯತೆ ನೀಡಲಾಗಿದೆ ಎಂದು ವಿವರಿಸಿದರು.

350ಕ್ಕೂ ಹೆಚ್ಚಿನ ಸುಧಾರಣೆಗಳನ್ನು ತರಲಾಗಿದೆ. ಅಲ್ಲದೇ ಸ್ಥಿರ ಅಭಿವೃದ್ಧಿ, ಅಸ್ಥಿರ ಜಾಗತಿಕ ಪರಿಸ್ಥಿತಿಯಲ್ಲೂ ಮೋದಿ ಸರ್ಕಾರ ಶೇ.7ರಷ್ಟು ಆರ್ಥಿಕ ಬೆಳವಣಿಗೆ ಸಾಧಿಸಿದೆ. ಕಳೆದ ಬಾರಿ ಇದ್ದ ಶೇ.4.5ರ ಜಿಡಿಪಿಯನ್ನು ಪ್ರಸಕ್ತ ಸಾಲಿನಲ್ಲಿ ಶೇ. 4.3ಕ್ಕೆ ಇಳಿಸಲಾಗಿದೆ. ಜಿಡಿಪಿ ಅನುಪಾತವನ್ನು ಈ ಬಾರಿ ಶೇ.55.6ಕ್ಕೆ ಇಳಿಸಲಾಗಿದ್ದು, ಮುಂದಿನ 2031ರ ವೇಳೆಗೆ ಶೇ.50ಕ್ಕೆ ತರುವ ಗುರಿ ಹೊಂದಲಾಗಿದೆ. ರಾಜ್ಯಗಳಿಗೆ 16ನೇ ಹಣಕಾಸು ಆಯೋಗದ ಶಿಫಾರಸ್ಸಿನಂತೆ ಶೇ.41 ತೆರಿಗೆ ಪಾಲು ಮತ್ತು 1.4 ಲಕ್ಷ ಕೋಟಿ ಅನುದಾನವನ್ನು ನೀಡಲಾಗಿದೆ ಎಂದರು.

ಮಧ್ಯಮ ವರ್ಗದವರಿಗೆ ವಾರ್ಷಿಕ 12 ಲಕ್ಷದವರೆಗೆ ಶೂನ್ಯ ಆದಾಯ ತೆರಿಗೆ ಸೌಲಭ್ಯ ಮುಂದುವರಿಸಲಾಗಿದೆ. ಕ್ಯಾನ್ಸರ್ ಸೇರಿದಂತೆ 17 ಔಷಧಗಳ ಮೇಲಿನ ಕಸ್ಟಮ್ಸ್ ಸುಂಕವನ್ನು ರದ್ದುಗೊಳಿಸಲಾಗಿದೆ. 7 ಅಪರೂಪದ ಕಾಯಿಲೆಗಳ ಔಷಧಗಳ ಮೇಲಿನ ಆಮದು ಸುಂಕ ವಿನಾಯಿತಿಯನ್ನು ವಿಸ್ತರಿಸಲಾಗಿದೆ ಎಂದರು.

ಸೇವಾ ವಲಯದಲ್ಲಿ ಭಾರತದ ಪಾಲನ್ನು 2047ರ ವೇಳೆಗೆ ಶೇ.10ರಷ್ಟು ಏರಿಸಲು ಉನ್ನತ ಮಟ್ಟದ ಸಮಿತಿ ರಚಿಸಲಾಗಿದೆ. ಪ್ರಮುಖ ಕೈಗಾರಿಕಾ ಕಾರಿಡಾರ್‌ಗಳ ಬಳಿ 5 ಹೊಸ ವಿವಿ ಟೌನ್‌ಶಿಪ್‌ಗಳನ್ನು ಅಭಿವೃದ್ಧಿಪಡಿಸುವುದು. ಮುಂದಿನ 5 ವರ್ಷಗಳಲ್ಲಿ ಆರೋಗ್ಯ ಕ್ಷೇತ್ರದಲ್ಲಿ 1 ಲಕ್ಷ ಸಹಾಯಕ ಆರೋಗ್ಯ ವೃತ್ತಿಪರರನ್ನು ಸಿದ್ಧಪಡಿಸಲು ಹೊಸ ಸಂಸ್ಥೆಗಳನ್ನು ಸ್ಥಾಪಿಸಲು ಪ್ರಸ್ತಾಪಿಸಲಾಗಿದೆ ಎಂದರು.

ಗುಣಮಟ್ಟದ ಶಿಕ್ಷಣದ ಮೂಲಕ ಯುವಶಕ್ತಿ ಸಬಲೀಕರಣ, ಎಂಎಸ್‌ಎಂಇ ಸಾಮರ್ಥ್ಯ ಹೆಚ್ಚಿಸುವುದು, ಬೃಹತ್ ಪ್ರಮಾಣದ ಉತ್ಪಾದನೆ ವಿಸ್ತರಣೆ ಮಾಡಲು ಯೋಜನೆ, ಮೂಲ ಸೌಕರ್ಯ ಆಧಾರಿತ ಬೆಳವಣಿಗೆಯಲ್ಲಿ ಸಾರ್ವಜನಿಕ ಬಂಡವಾಳವನ್ನು 11.2 ಲಕ್ಷ ಕೋಟಿಯಿಂದ 12.2 ಲಕ್ಷ ಕೋಟಿಗೆ ಏರಿಸುವುದು, 5 ವರ್ಷಗಳಲ್ಲಿ 20 ಹೊಸ ರಾಷ್ಟ್ರೀಯ ಜಲ ಮಾರ್ಗಗಳ ಕಾರ್ಯಗತಗೊಳಿಸುವುದು, ಪ್ರವಾಸೋದ್ಯಮ ಅಭಿವೃದ್ಧಿಗೆ ಸೀಪ್ಲೇನ್ ಉತ್ಪಾದನೆ ಮತ್ತು ಕಾರ್ಯಾಚರಣೆಗೆ ವಿಶೇಷ ರಿಯಾಯಿತಿ. ದೊಡ್ಡ ನಗರಗಳಲ್ಲಿ ಜಾಗತಿಕ ಸಾಮರ್ಥ್ಯ ಕೇಂದ್ರಗಳನ್ನು ಸ್ಥಾಪಿಸಲು ರಾಜ್ಯ ಸರ್ಕಾರಗಳಿಗೆ ಕೇಂದ್ರ ಮಾರ್ಗದರ್ಶನ ನೀಡಲಿದೆ ಎಂದು ಹೇಳಿದರು.

ಗ್ರಾಮೀಣ ಭಾರತದ ಜೀವನಾಡಿಗಳ ಪುನಶ್ಚೇತನ, 7 ಹೊಸ ಹೈಸ್ಪೀಡ್ ರೈಲು, ಸೆಮಿಕಂಡಕ್ಟರ್ ವ್ಯವಸ್ಥೆಯ ಬಲವರ್ಧನೆ, ರೈತರ ಸಮಗ್ರ ಕಲ್ಯಾಣ, ಉನ್ನತ ಶಿಕ್ಷಣ ಪಡೆಯುವ ಹೆಣ್ಣು ಮಕ್ಕಳಿಗೆ ಸುರಕ್ಷಿತ ವಸತಿ ಕಲ್ಪಿಸಲು ಪ್ರತಿ ಜಿಲ್ಲೆಯಲ್ಲೂ ಗರ್ಲ್ಸ್ ಹಾಸ್ಟೆಲ್ ಸ್ಥಾಪನೆ, ಸಾಮಾಜಿಕ ನ್ಯಾಯ ಮತ್ತು ಕಲ್ಯಾಣ ಕಾರ್ಯಕ್ರಮದಡಿ ದೇವಾಂಗರ ಉದ್ಯಮಕ್ಕೆ ಪೂರಕ ತರಬೇತಿ, ಹವಾಮಾನ ಸ್ಥಿತಿ ಸ್ಥಾಪಕತ್ವ ಮತ್ತು ಇಂಧನ ಸ್ವಾವಲಂಬನೆ, ಪರಂಪರೆ, ಪ್ರವಾಸೋದ್ಯಮ ಮತ್ತು ವನ್ಯಜೀವಿ ಸಂರಕ್ಷಣೆಗೆ ಒತ್ತು ನೀಡಲಾಗಿದೆ ಎಂದು ವಿವರಿಸಿದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಡಾ.ಎನ್.ಎಸ್.ಇಂದ್ರೇಶ್, ಮುಖಂಡರಾದ ಡಾ.ಸಿದ್ದರಾಮಯ್ಯ, ಎಸ್.ಸಚ್ಚಿದಾನಂದ, ಅಶೋಕ್ ಜಯರಾಂ, ವಸಂತ್ ಕುಮಾರ್, ಹೆಚ್.ಆರ್.ಅಶೋಕ್ ಕುಮಾರ್, ಎಸ್.ಪಿ.ಸ್ವಾಮಿ, ಶ್ರೀಧರ್ ಇದ್ದರು.

ಮದ್ದೂರು ನಗರಸಭೆಗೆ ಗೆಜ್ಜಲಗೆರೆ ಸೇರ್ಪಡೆ ಖಂಡಿಸಿ

ಬೆಂಗಳೂರು–ಮೈಸೂರು ಹೆದ್ದಾರಿ ತಡೆ: ಪ್ರತಿಭಟನಾಕಾರರ ಬಂಧನ



ಪ್ರತಿಭಟನಾಕಾರರನ್ನು ಪೊಲೀಸರು ಬಂಧಿಸಿದರು.

ಮದ್ದೂರು: ಮದ್ದೂರು ನಗರಸಭೆಗೆ ಗೆಜ್ಜಲಗೆರೆ ಗ್ರಾಮ ಸೇರ್ಪಡೆ ಖಂಡಿಸಿ ಸೋಮವಾರ ಬೆಂಗಳೂರು– ಮೈಸೂರು ಹೆದ್ದಾರಿಯ ಸರ್ವಿಸ್ ರಸ್ತೆ ತಡೆದ 80ಕ್ಕೂ ಹೆಚ್ಚು ಪ್ರತಿಭಟನಾಕಾರರನ್ನು ಪೊಲೀಸರು ಬಂಧಿಸಿದರು.

ಮದ್ದೂರು ನಗರಸಭೆಗೆ ಗೆಜ್ಜಲಗೆರೆ ಗ್ರಾಮ ಸೇರ್ಪಡೆ ವಿರೋಧಿಸಿ ಗೆಜ್ಜಲಗೆರೆ ಗ್ರಾಮ ಎದುರು ಗ್ರಾಮಸ್ಥರು ಹಾಗೂ ರೈತ ಸಂಘದ ಕಾರ್ಯಕರ್ತರು ಅನಿರ್ದಿಷ್ಟಾವಧಿ ಧರಣಿ ನಡೆಸುತ್ತಿದ್ದರು. ಧರಣಿ 50 ದಿನ ಪೂರೈಸಿದ ಹಿನ್ನೆಲೆಯಲ್ಲಿ ಸೋಮವಾರ ರೈತಪರ ಹೋರಾಟಗಾರ್ತಿ ಸುನಂದಾ ಜಯರಾಮ್ ನೇತೃತ್ವದಲ್ಲಿ ಸುಮಾರು 300ಕ್ಕೂ ಹೆಚ್ಚು ಗ್ರಾಮಸ್ಥರು ಮೈಸೂರು–ಬೆಂಗಳೂರು ಹೆದ್ದಾರಿಯ ಸರ್ವಿಸ್ ರಸ್ತೆ ಸಂಚಾರ ತಡೆದು ಪ್ರತಿಭಟನೆ ನಡೆಸುತ್ತಿದ್ದರು.

ಎತ್ತಿನಗಾಡಿ ಹಾಗೂ ಜಾನುವಾರುಗಳೊಂದಿಗೆ ಗ್ರಾಮಸ್ಥರು ಆಗಮಿಸಿ ಮಹಾತ್ಮ ಗಾಂಧೀಜಿ ಭಾವಚಿತ್ರದೊಂದಿಗೆ ಹೆದ್ದಾರಿಯಲ್ಲೇ ಕುಳಿತು ರಾಜ್ಯ ಸರ್ಕಾರ, ಜಿಲ್ಲಾಡಳಿತ ಹಾಗೂ ತಾಲೂಕು ಆಡಳಿತ ಹಾಗೂ ಶಾಸಕರ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಇದಕ್ಕೂ ಮೊದಲು ತಹಸೀಲ್ದಾರ್ ಪರಶುರಾಮ್ ಸತ್ತಿಗೇರಿರವರು ಹೆದ್ದಾರಿ ತಡೆ ಕೈಬಿಡಲು ಪ್ರತಿಭಟನಾಕಾರರನ್ನು ಮನವೊಲಿಸಲು ಪ್ರಯತ್ನಿಸಿದರಾದರೂ ಪ್ರಯೋಜನವಾಗಲಿಲ್ಲ. ಹೀಗಾಗಿ ಪೊಲೀಸರು ರೈತಪರ ಹೋರಾಟಗಾರ್ತಿ ಸುನಂದಾ ಜಯರಾಮು, ಲಿಂಗಪ್ಪಾಜಿ, ಶಂಕರ್, ಜಿ.ಪಿ.ಯೋಗೇಶ್, ವೀರಪ್ಪ, ಚಂದ್ರಶೇಖರ, ಗೌರಮ್ಮ, ಜಯಮ್ಮ ಸೇರಿದಂತೆ ಸುಮಾರು 80ಕ್ಕೂ ಹೆಚ್ಚು ಪ್ರತಿಭಟನಾಕಾರರನ್ನು ವಶಕ್ಕೆ ಪಡೆದು 3 ವಾಹನಗಳಲ್ಲಿ ಮಂಡ್ಯದ ಠಾಣೆಗೆ ಕರೆದೊಯ್ದರು. ಪ್ರತಿಭಟನೆಯ ಹಿನ್ನೆಲೆಯಲ್ಲಿ ಕೆಲಕಾಲ ರಸ್ತೆ ಸಂಚಾರ ಅಸ್ತವ್ಯಸ್ತಗೊಂಡಿತ್ತು.

ರೈತಪರ ಹೋರಾಟಗಾರ್ತಿ ಸುನಂದಾ ಜಯರಾಮ್ ಮಾತನಾಡಿ, ನಗರಸಭೆಗೆ ಗೆಜ್ಜಲಗೆರೆ ಗ್ರಾಮವನ್ನು ಸೇರ್ಪಡೆ ಮಾಡಿರುವ ಕ್ರಮ ಖಂಡಿಸಿ ಗ್ರಾಮಸ್ಥರು ನಿರಂತರವಾಗಿ 50 ದಿನಗಳ ಹೋರಾಟ ನಡೆಸುತ್ತಿದ್ದರೂ, ಸರ್ಕಾರದ ಜನಪ್ರತಿನಿಧಿಗಳು, ಅಧಿಕಾರಿಗಳು ರೈತರ, ಗ್ರಾಮಸ್ಥರ ಆಶೋತ್ತರಗಳಿಗೆ ಸ್ಪಂದಿಸದೆ ನಿರ್ಲಕ್ಷ ಮಾಡಿದ್ದಾರೆ ಎಂದು ಆರೋಪಿಸಿದರು.

ಇದರ ವಿರುದ್ಧವಾಗಿ ಗೆಜ್ಜಲಗೆರೆ ಹೆದ್ದಾರಿಯ ಸರ್ವಿಸ್ ರಸ್ತೆ ತಡೆಯಲು ಗ್ರಾಮಸ್ಥರು ಒಗ್ಗಟ್ಟಿನಿಂದ ಹೋರಾಟ ಮಾಡಲು ಹೊರಟಾಗ ತಾಲೂಕು ಆಡಳಿತ ಮತ್ತು ಜಿಲ್ಲಾಡಳಿತ ಅವಕಾಶ ಮಾಡಿಕೊಡದೆ ರೈತರ ಹೋರಾಟವನ್ನು ದಿಕ್ಕು ತಪ್ಪಿಸುವ ಸಲುವಾಗಿ ರೈತರನ್ನು, ಮಹಿಳೆಯರು ಮತ್ತು ಗ್ರಾಮಸ್ಥರನ್ನು ಭಯಭೀತರನ್ನಾಗಿ ಮಾಡುವ ಉದ್ದೇಶದಿಂದ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಸುಮಾರು 80ಕ್ಕೂ ಹೆಚ್ಚು ಗ್ರಾಮಸ್ಥರನ್ನು ಬಂಧಿಸಿರುವುದು ಖಂಡನೀಯವೆಂದು ಆಕ್ರೋಶ ವ್ಯಕ್ತಪಡಿಸಿದರು.

ಎಎಸ್ಪಿ ತಿಮ್ಮಯ್ಯ, ಡಿವೈಎಸ್‌ಪಿ ಯಶವಂತ ಕುಮಾರ್, ಸಿಪಿಐ ನವೀನ್ ಕುಮಾರ್ ನೇತೃತ್ವ ಬಂದೋಬಸ್ತ್‌ನಲ್ಲಿ ಭಾಗವಹಿಸಿದರು. ಪ್ರತಿಭಟನೆಯಲ್ಲಿ ರೈತ ಮುಖಂಡರಾದ ಚಂದ್ರಶೇಖರ್, ಲಿಂಗಪ್ಪಾಜಿ, ಮುದ್ದೇಗೌಡ್ರು, ಕೆ.ಬೋರೇಗೌಡ, ವಿರೇಶ್, ಗುರುಮೂರ್ತಿ, ಮಂಜಣ್ಣ ಜಗದೀಶ್, ರಾಮಲಿಂಗಯ್ಯ ಇದ್ದರು.

ಮೂರನೇ ಪುಟದಿಂದ

ಮೊದಲ ಹಂತಕ್ಕೆ ಶೀಘ್ರ ಬೇಡಿಕೆ ಸಮೀಕ್ಷೆ

ಅಳತೆಯ ನಿವೇಶನಗಳನ್ನು ರಚಿಸಲಿದ್ದು ಅವುಗಳಿಗೆ ತಗಲುವ ವೆಚ್ಚದ ಬಗ್ಗೆಯೂ ಈಗಾಗಲೇ ನಾವು ಲೆಕ್ಕಾಚಾರ ಮಾಡಿದ್ದು, ಬೇಡಿಕೆ ಸಮೀಕ್ಷೆಗಾಗಿ ಅರ್ಜಿ ಕರೆದಾಗ ಅದರೊಟ್ಟಿಗೆ ನಿವೇಶನಗಳ ಅಂದಾಜು ಬೆಲೆ ಪ್ರಕಟಿಸಲಾಗುವುದು ಎಂದರು.

ಮೊದಲ ಹಂತದ ಯೋಜನೆಗಾಗಿ ಈಗಾಗಲೇ ಡಿಪಿಆರ್ ಸಿದ್ಧಪಡಿಸುತ್ತಿದ್ದು, ಪ್ರಾಧಿಕಾರದ ಸಭೆಯಲ್ಲಿ ಮಂಡಿಸಿ ಒಪ್ಪಿಗೆ ಪಡೆದ ಬಳಿಕ ಅನುಮೋದನೆ ಗಾಗಿ ಸರ್ಕಾರಕ್ಕೆ ಪ್ರಸ್ತಾವಣೆ ಸಲ್ಲಿಸಲಾಗುವುದು. ಈ ಯೋಜನೆಗಾಗಿ ಅಧಿಕಾರಿಗಳು ನಡೆಸಿದ ಪ್ರಯತ್ನ ಹಾಗೂ ರೈತರನ್ನು ಮನವೊಲಿಸಿದ ಫಲವಾಗಿ ಬೊಮ್ಮೇನಹಳ್ಳಿ ದೊಡ್ಡಮರ ಗೌಡನಹಳ್ಳಿ, ಕುಮರಳ್ಳಿ ಹಾಗೂ ನಾಗವಾಲ ಗ್ರಾಮದ ರೈತರು ಭೂಮಿ ನೀಡಲು ಲಿಖಿತ ಸಮ್ಮತಿ ನೀಡಿದ್ದು, ಶೇ.50:50ರ ಅನುಪಾತಕ್ಕೆ ಒಪ್ಪಿಗೆ ಕೊಟ್ಟಿದ್ದಾರೆಂದು ಆಯುಕ್ತರು ತಿಳಿಸಿದರು.

ಆ ಪ್ರದೇಶದಲ್ಲಿ ನಮಗೆ ಸುಮಾರು 400 ಎಕರೆಯಷ್ಟು ಸರ್ಕಾರಿ ಭೂಮಿಯೂ ಲಭ್ಯವಾಗುವ ಕಾರಣ ರೈತರಿಂದ ಪಡೆದ ಭೂಮಿಯೂ ಸೇರಿದಂತೆ ಮೊದಲ ಹಂತದಲ್ಲಿ ಸುಮಾರು 1,200 ಎಕರೆ ಪ್ರದೇಶದಲ್ಲಿ ಟೌನ್‌ಶಿಪ್ ಮಾಡಲು ಶೀಘ್ರ ಬೇಡಿಕೆ ಸಮೀಕ್ಷೆ ನಡೆಸಲಾಗುವುದು. ಈ ಹಿಂದೆ ನಿವೇಶನಕ್ಕಾಗಿ ಅರ್ಜಿ ಸಲ್ಲಿಸಿ ಸುಮಾರು 35 ವರ್ಷಗಳಿಂದ ಕಾಯು ತ್ತಿರುವ 80,000 ಮಂದಿ ಆಕಾಂಕ್ಷಿಗಳಿಗೆ ಜೇಷ್ಠತೆ ಪ್ರಕಾರ ನಿವೇಶನ ಮಂಜೂರು ಮಾಡುವುದು ಪ್ರಾಧಿಕಾರದ ಉದ್ದೇಶವಾಗಿದೆ ಎಂದು ರಕ್ಷಿತ್ ತಿಳಿಸಿದ್ದಾರೆ.

ಭೂಮಿ ಲಭ್ಯತೆ ಆಧರಿಸಿ ಮೊದಲ ಹಂತದ ಯೋಜನೆಯನ್ನು ಪೂರ್ಣ ಗೊಳಿಸಿದ ಬಳಿಕ ಎರಡನೇ ಹಂತದ ವಸತಿ ಬಡಾವಣೆಗೆ ಡಿಪಿಆರ್ ತಯಾರಿಸಿ ಅಗತ್ಯ ಮೂಲ ಸೌಕರ್ಯಗಳೊಂದಿಗೆ ಬಡಾವಣೆ ಅಭಿವೃದ್ಧಿಪಡಿಸಿ ಬೇಡಿಕೆಯನುಸಾರ ಕಾನೂನು ಬದ್ಧವಾಗಿ ಅರ್ಜಿ ಕರೆದು ಅರ್ಹ ಆಕಾಂಕ್ಷಿಗಳಿಗೆ ನಿವೇಶನ ಕೊಡುವ ನಿಟ್ಟಿನಲ್ಲಿ ಪ್ರಾಧಿಕಾರವು ಪ್ರಯತ್ನ ನಿರತವಾಗಿದೆ ಎಂದರು.

ಕಾಂಗ್ರೆಸ್ ನಾಯಕರನ್ನು ಭೇಟಿ ಮಾಡುತ್ತಿದ್ದೇನೆ

ದುಃಖ, ದುಮ್ಮಾನ, ನಿಮ್ಮ ಸಂತೋಷ, ಬಯಕೆ ಎಲ್ಲಾ ಹೇಳುತ್ತಾ ಇರುತ್ತೇನೆ' ಎಂದರು.

ನನಗಿಂತ ನೀರಾವರಿ ಬಗ್ಗೆ ಸಿಎಂಗೆ ಗೊತ್ತಿದೆ ನಿಮ್ಮ ಇಲಾಖೆಗೆ ಸಂಬಂಧಿಸಿ ದಂತೆ ಬಜೆಟ್ ಪೂರ್ವಸಿದ್ಧತಾ ಸಭೆ ಕರೆದಿದ್ದು, ನೀವು ದೆಹಲಿಗೆ ಹೋಗುತ್ತಿ ದ್ದೀರಿ ಎಂದು ಕೇಳಿದಾಗ, ನಾನು ಸಿಎಂ ಅನುಮತಿ ಪಡೆದುಕೊಳ್ಳುತ್ತಿದ್ದೇನೆ. ನೀರಾವರಿ ಇಲಾಖೆಗೆ ಮುಖ್ಯಮಂತ್ರಿಗಳೇ ಅಧ್ಯಕ್ಷರಾಗಿದ್ದು, ಮಂಗಳವಾರದ ಸಭೆಯಲ್ಲಿ ಅಧಿಕಾರಿಗಳು ಭಾಗವಹಿಸಲಿದ್ದಾರೆ ನನಗಿಂತ ಸಿಎಂ ಅವರಿಗೆ ನೀರಾವರಿ ಯೋಜನೆಗಳ ಬಗ್ಗೆ ಹೆಚ್ಚು ಗೊತ್ತಿದೆ. ಮೇಕೆದಾಟು ಯೋಜನೆ ಬಗ್ಗೆ ಅಧಿಕಾರಿಗಳು ಭೇಟಿ ಮಾಡಿದ್ದಾರೆ ಎಂದರು.

ಗುಜರಿ ಗೋಡೌನ್‌ಗಳಿಗೆ ಬೆಂಕಿ

ಎನ್.ಆರ್. ಠಾಣೆ ಪೊಲೀಸರು ಪ್ರಕರಣ ದಾಖಲಿಸಿ ಕೊಂಡು ಸ್ಥಳ ಮಹಜರು ನಡೆಸಿದರು. ಚೆಸ್ಕಾಂ ಅಧಿಕಾರಿಗಳೂ ಘಟನಾ ಸ್ಥಳಕ್ಕೆ ಧಾವಿಸಿ ಬೆಂಕಿಗೆ ಕಾರಣ ವೇನೆಂಬುದನ್ನು ತಿಳಿಯಲು ಪ್ರಯತ್ನಿಸಿದರು. ಹಳೆ ಕೆಸರೆಯಲ್ಲಿ ಸುಮಾರು 30 ರಿಂದ 40 ಸ್ಕ್ರ್ಯಾಪ್ ಗೋಡೌನ್‌ಗಳಿದ್ದು, ಬೆಂಕಿಯಿಂದ ರಕ್ಷಿಸಿಕೊಳ್ಳಲು ಯಾವುದೇ ಸುರಕ್ಷತಾ ಕ್ರಮ ಕೈಗೊಂಡಿಲ್ಲವಾದ್ದರಿಂದ ಗೋದಾಮು ಮಾಲೀಕರು ಮತ್ತು ಬಾಡಿಗೆದಾರರಿಗೆ ಅಗತ್ಯ ಕ್ರಮಕೈಗೊಳ್ಳುವಂತೆ ಎಚ್ಚರಿಕೆ ನೀಡಲಾಗಿದೆ ಎಂದು ಇನ್ಸ್‌ಪೆಕ್ಟರ್ ಕುಮಾರ್ ತಿಳಿಸಿದ್ದಾರೆ. ಘಟನೆಯಿಂದ ಲಕ್ಷಾಂತರ ರೂ. ಬೆಲೆಬಾಳುವ ವಸ್ತುಗಳು ಸುಟ್ಟು ಭಸ್ಮವಾಗಿವೆಯಾದರೂ, ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ಕಳೆದ ಎರಡು ವರ್ಷಗಳ ಹಿಂದೆ ಅದೇ ಸ್ಥಳದಲ್ಲಿ ಬೆಂಕಿ ಅವಘಡ ಸಂಭವಿಸಿ ಭಾರೀ ನಷ್ಟ ಉಂಟಾಗಿದ್ದನ್ನು ಇಲ್ಲಿ ಸ್ಮರಿಸಬಹುದಾಗಿದೆ.

ಏಕಾಏಕಿ ಎಫ್‌ಐಆರ್, ಬಂಧನಕ್ಕೆ ಬ್ರೇಕ್

ಆಗಿರಬೇಕು. ಸಂಬಂಧವಿಲ್ಲದ ಮೂರನೇ ವ್ಯಕ್ತಿ ನೀಡುವ ದೂರುಗಳನ್ನು (ಗಂಭೀರ ಅಪರಾಧಗಳನ್ನು ಹೊರತುಪಡಿಸಿ) ಸ್ವೀಕರಿಸಬಾರದು. ದೂರಿನಲ್ಲಿ ಉಲ್ಲೇಖಿಸ ಲಾದ ವಿಷಯವು ಮೇಲ್ನೋಟಕ್ಕೆ ಅಪ ರಾಧವೇ ಎಂಬುದನ್ನು ಖಚಿತಪಡಿಸಿ ಕೊಳ್ಳಲು ಎಫ್‌ಐಆರ್ ದಾಖಲಿಸುವ ಮುನ್ನ ಕಡ್ಡಾಯವಾಗಿ ಪ್ರಾಥಮಿಕ ವಿಚಾರಣೆ ನಡೆಸಬೇಕು.

ದ್ವೇಷ ಬಿತ್ತುವುದು, ಸಾರ್ವಜನಿಕ ಸುವ್ಯವಸ್ಥೆಗೆ ಭಂಗ ತರುವುದು ಅಥವಾ ದೇಶದ್ರೋಹದಂತಹ ಆರೋಪಗಳಿದ್ದಾಗ, ಹಿಂಸಾಚಾರಕ್ಕೆ ಪ್ರಚೋದನೆ ನೀಡುವಂತಹ ಸ್ಪಷ್ಟ ಸಾಕ್ಷ್ಯಗಳಿದ್ದರೆ ಮಾತ್ರ ಪ್ರಕರಣ ದಾಖಲಿಸಬೇಕು. ಕೇದಾರನಾಥ್ ಸಿಂಗ್ ಮತ್ತು ಶ್ರೇಯಾ ಸಿಂಘಾಲ್ ಪ್ರಕರಣದ ತೀರ್ಪುಗಳನ್ನು ಇಲ್ಲಿ ಪರಿಗಣಿಸಬೇಕು. ಕಟುವಾದ ಅಥವಾ ಆಕ್ಷೇಪಾರ್ಹ ರಾಜಕೀಯ ಭಾಷಣ/ಪೋಸ್ಟ್‌ಗಳಿಗೆ ಯಾಂತ್ರಿಕವಾಗಿ ಕೇಸ್ ದಾಖಲಿಸ ಬಾರದು. ಸಂವಿಧಾನದ 19(1)(ಎ) ಅಡಿಯಲ್ಲಿರುವ ವಾಕ್ ಸ್ವಾತಂತ್ರ್ಯವನ್ನು ಗೌರವಿಸಬೇಕು.

ಪೋಸ್ಟ್‌ನಿಂದ ಸಾರ್ವಜನಿಕ ಶಾಂತಿಗೆ ತಕ್ಷಣದ ಅಪಾಯವಿದ್ದರೆ ಮಾತ್ರ ಕಾನೂನು ಕ್ರಮ ಕೈಗೊಳ್ಳಬೇಕು. ಸುಪ್ರೀಂ ಕೋರ್ಟ್‌ನ ಅರ್ನೇಶ್ ಕುಮಾರ್ ಪ್ರಕರಣದ ಮಾರ್ಗಸೂಚಿಯಂತೆ, ಅನಗತ್ಯವಾಗಿ ಅಥವಾ ಯಾಂತ್ರಿಕವಾಗಿ ಯಾರನ್ನೂ ಬಂಧಿಸಬಾರದು ಎಂದು ಮಾರ್ಗಸೂಚಿಯಲ್ಲಿ ತಿಳಿಸಲಾಗಿದೆ.

ಮೂಲದ ಯುವಕನ ಹತ್ಯೆ

ದುಷ್ಕರ್ಮಿಗಳು ಗುಂಡಿನ ದಾಳಿ ನಡೆಸಿದ್ದಾರೆ. ಹಲವು ಗುಂಡುಗಳು ಚಂದನ್ ದೇಹವನ್ನು ಹೊಕ್ಕಿವೆ. ಘಟನಾ ಸ್ಥಳದಲ್ಲೇ ಚಂದನ್ ಸಾವನ್ನಪ್ಪಿದ್ದಾರೆ. ಚಂದನ್ ಬ್ರಾಂಪ್ಟನ್‌ನಲ್ಲಿರುವ ಶಿರಡಿ ಸಾಯಿಬಾಬಾ ದೇವಾಲಯದ ಸಕ್ರಿಯ ಸದಸ್ಯರಾಗಿದ್ದರು. ಲಭ್ಯವಿರುವ ಮಾಹಿತಿಯ ಪ್ರಕಾರ, ಚಂದನ್ ಕುಮಾರ್ ಅವರು ತಮ್ಮ ಕಾರಿನಲ್ಲಿ ತೆರಳುತ್ತಿದ್ದ ವೇಳೆ ಈ ಘಟನೆ ನಡೆದಿದೆ ಎನ್ನಲಾಗಿದೆ. ವರದಿ ಯಲ್ಲಿ ಲಭ್ಯವಾಗಿರುವ ದೃಶ್ಯಾವಳಿಗಳ ಪ್ರಕಾರ, ಚಂದನ್ ಅವರ ಕಾರಿನ ಮುಂಭಾಗದ ಗಾಜಿನ ಮೇಲೆ ಗುಂಡು ಹೊಕ್ಕಿರುವ ಗುರುತುಗಳು ಸ್ಪಷ್ಟವಾಗಿ ಕಂಡುಬಂದಿವೆ. ಇದು ಪಾಯಿಂಟ್ ಬ್ಲಾಂಕ್ ರೇಂಜ್‌ನಲ್ಲಿ ಅಥವಾ ಸಮೀಪದಿಂದ ನಡೆಸಲಾದ ದಾಳಿ ಇರಬಹುದೆಂದು ಶಂಕಿಸಲಾಗಿದೆ.

ಮಗನ ಹತ್ಯೆಯ ವಿಷಯ ತಿಳಿಯುತ್ತಿದ್ದಂತೆಯೇ ಚಂದನ್ ಅವರ ನಿವಾಸದಲ್ಲಿ ಶೋಕ ಮಡುಗಿದೆ. ಪೋಷಕರು ಮತ್ತು ಸಂಬಂಧಿಕರು ಮಗನನ್ನು ಕಳೆದುಕೊಂಡ ದುಃಖದಲ್ಲಿ ಕಣ್ಣೀರಿಡುತ್ತಿದ್ದಾರೆ. ಮಗನ ಶವವನ್ನು ತವರಿಗೆ ತರಲು ಸರ್ಕಾರ ಸಹಾಯ ಮಾಡಬೇಕು ಎಂದು ಮನವಿ ಮಾಡಿದ್ದಾರೆ.

ಸದ್ಯ ಕೆನಡಾ ಪೊಲೀಸರು ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದು, ಹತ್ಯೆಗೆ ನಿಖರವಾದ ಕಾರಣವೇನು ಎಂಬುದು ತನಿಖೆಯ ನಂತರವಷ್ಟೇ ತಿಳಿದುಬರಬೇಕಿದೆ. ಚಂದನ್ ಕನ್ನಡ ಸಮುದಾಯದಲ್ಲಿಯೂ ಸಕ್ರಿಯರಾಗಿದ್ದರು.

ಅವರು ನಿಜವಾಗಿಯೂ ದಯಾಳು ಮತ್ತು ವಿನಮ್ರ ವ್ಯಕ್ತಿಯಾಗಿದ್ದರು, ಹಲವಾರು ಸಮುದಾಯ ಸಾಮಾಜಿಕ ಕಾರ್ಯಕ್ರಮಗಳನ್ನು ಬೆಂಬಲಿಸಲು ಮತ್ತು ಭಾಗವಾಗಲು ಸಿದ್ಧರಿದ್ದರು ಎಂದು ಅವರ ಸ್ನೇಹಿತರು ಬರೆದುಕೊಂಡಿದ್ದಾರೆ.

ಬಿಪಿ ಹೆಚ್ಚಾಗಿ ಯುವಕ ಸಾವು..!

ನಿವಾಸಿಯಾಗಿರುವ ಪ್ರಾಪರ್ಟಿ ಡೀಲರ್ ಫಾರುಕ್ ಅವರ ಏಕೈಕ ಪುತ್ರನಾಗಿದ್ದು, ಕಳೆದ ನಾಲ್ಕು ತಿಂಗಳಿನಿಂದ ಆನ್‌ಲೈನ್ ಗೇಮಿಂಗ್‌ಗೆ ಅಡಿಕ್ಟ್ ಆಗಿದ್ದ ಎಂದು ತಿಳಿದುಬಂದಿದೆ.

ಯುವಕ ಶುಕ್ರವಾರ ತಡರಾತ್ರಿಯವರೆಗೂ ಪಬ್‌ಜಿ ಗೇಮ್ ಆಡಿದ್ದು, ಇದ್ದಕ್ಕಿದ್ದಂತೆ ಕುಸಿದು ಬಿದ್ದಿದ್ದಾನೆ. ಈ ನಡುವೆ ಶಬ್ದ ಕೇಳಿ ಮನೆಯವರು ರೂಮಿಗೆ ಧಾವಿಸಿದಾಗ ಕೈಫ್ ಪ್ರಜ್ಞಾಹೀನಾ ಸ್ಥಿತಿಯಲ್ಲಿ ಬಿದ್ದಿರುವುದು ಕಂಡು ಬಂದಿದೆ. ಕೂಡಲೇ ಪೋಷಕರು ಆತನನ್ನು ಆಸ್ಪತ್ರೆಗೆ ದಾಖಲಿಸಿದ್ದಾರೆ. ಪರೀಕ್ಷೆ ವೇಳೆ ರಕ್ತದೊತ್ತಡ 300ಕ್ಕೆ ದಾಟಿರುವುದು ಕಂಡುಬಂದಿದೆ. ತಕ್ಷಣವೇ ಆತನನ್ನು ದೆಹಲಿಯ ಆಸ್ಪತ್ರೆಗೆ ರವಾನಿಸಿದ್ದು, 2 ದಿನಗಳ ಜೀವನ್ಮರಣ ಹೋರಾಟ ನಡೆಸಿ ಭಾನುವಾರ ಕೊನೆಯುಸಿರೆಳೆದಿದ್ದಾನೆ.

ತೀವ್ರ ಮಾನಸಿಕ ಒತ್ತಡ, ನಿದ್ರಾಹೀನತೆಯಿಂದ ರಕ್ತದೊತ್ತಡ ಹೆಚ್ಚಿದ್ದು, ಮೆದುಳಿನ ರಕ್ತಸ್ರಾವಕ್ಕೆ ಕಾರಣವಾಗಿದೆ. ಇದರಿಂದ ಯುವಕ ಮೃತಪಟ್ಟಿದ್ದಾನೆ ಎಂದು ವೈದ್ಯರು ತಿಳಿಸಿದ್ದಾರೆ.

ಮೈಸೂರು ಸ್ಯಾಂಡಲ್ ರಾಯಭಾರಿ

ತಲುಪಲು ವ್ಯಾಪಕ ಪ್ರಚಾರ ಆಂದೋಲನವನ್ನು ನಡೆಸಲಾಗುತ್ತಿದೆ. ಇದಕ್ಕಾಗಿ, ಸೋಷಿಯಲ್ ಮೀಡಿಯಾದಲ್ಲಿ 30 ಲಕ್ಷಕ್ಕೂ ಹೆಚ್ಚು ಫಾಲೋವರ್ಸ್ ಹೊಂದಿರುವ ತಾರಾ ವರ್ಚಸ್ಸಿನ ನಟಿ ತಮನ್ನಾ ಅವರನ್ನ ನೇಮಿಸಿಕೊಳ್ಳಲಾಗುತ್ತಿದೆ. ಈ ಮೂಲಕ ಉತ್ತರ ಭಾರತದಲ್ಲಿ ಕೂಡ ಪ್ರತಿಷ್ಠಿತ ಮೈಸೂರು ಸ್ಯಾಂಡಲ್ ಸೋಪ್ ಸಹಿತ ನಮ್ಮ ಸಂಸ್ಥೆಯ ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ಸೃಷ್ಟಿಸಿಕೊಳ್ಳಲಾಗುವುದು ಎಂದಿದ್ದಾರೆ. ಕೆಎಸ್‌ಡಿಎಲ್ ಸಂಸ್ಥೆಗೆ ಶತಮಾನಕ್ಕೂ ಮೀರಿದ ಭವ್ಯ ಪರಂಪರೆ ಇದೆ. ಇದು ಮೈಸೂರು ಸಂಸ್ಥಾನದ ಮಹಾರಾಜರಾಗಿದ್ದ ನಾಲ್ವಡಿ ಕೃಷ್ಣರಾಜ ಒಡೆಯರ್, ದಿವಾನರಾಗಿದ್ದ ಸರ್ ಎಂ.ವಿಶ್ವೇಶ್ವರಯ್ಯ ಮತ್ತು ಕೈಗಾರಿಕಾ ರಸಾಯನಶಾಸ್ತ್ರಜ್ಞ ಎಸ್.ಜಿ ಶಾಸ್ತ್ರಿ (ಸೋಪ್ ಶಾಸ್ತ್ರಿ) ಅವರ ದೂರದೃಷ್ಟಿಯಿಂದ ಅಸ್ತಿತ್ವಕ್ಕೆ ಬಂದ ಉದ್ಯಮವಾಗಿದೆ. ಒಳ್ಳೆಯ ವಹಿವಾಟು ಮತ್ತು ಲಾಭವನ್ನ ಕಾಣುತ್ತಿರುವ ಸಂಸ್ಥೆಯು ಹೋದ ತಿಂಗಳು ಸಾಬೂನು, ಮಾರ್ಜಕ ಮತ್ತು ಸೌಂದರ್ಯವರ್ಧಕ ಈ ಮೂರು ವಿಭಾಗಗಳಲ್ಲೂ ಸಾರ್ವಕಾಲಿಕ ಉತ್ಪಾದನೆ ಮಾಡಿದೆ ಎಂದು ಅವರು ಹೇಳಿದ್ದಾರೆ.

ಪ್ರತ್ಯೇಕ ಪ್ರಕರಣ: ಮಗು ಸೇರಿದಂತೆ ಐವರ ಆತ್ಮಹತ್ಯೆ

ಮಂಡ್ಯ, ಫೆ.9– ಪ್ರತ್ಯೇಕ ಪ್ರಕರಣಗಳಲ್ಲಿ ಜಿಲ್ಲೆಯ ವಿವಿಧೆಡೆ ಮಗು ಸೇರಿದಂತೆ ಐವರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಜಿಲ್ಲೆಯ ಪಾಂಡವಪುರ ತಾಲೂಕಿನ ಕೆಂಚನಹಳ್ಳಿಯಲ್ಲಿ ಸಾಲಬಾಧೆ ತಾಳಲಾರದೇ ರೈತ ಆತ್ಮಹತ್ಯೆ ಮಾಡಿಕೊಂಡರೇ, ಹಲಗೂರು ಬಳಿಯ ದಳವಾಯಿ ಕೋಡಿಹಳ್ಳಿಯಲ್ಲಿ ವ್ಯಕ್ತಿ ಬೆದರಿಕೆ ಹಾಗೂ ಕಿರುಕುಳದಿಂದಾಗಿ ತಾಯಿ, ಮಗಳು ಹಾಗೂ ನಾಗಮಂಗಲ ತಾಲೂಕಿನ ಚೀಣ್ಯದಲ್ಲಿ ಕೌಟುಂಬಿಕ ಕಲಹದಿಂದಾಗಿ ಮಗುವಿನೊಂದಿಗೆ ತಾಯಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ.

ಪಾಂಡವಪುರ: ಸಾಲಬಾಧೆ ತಾಳಲಾರದೇ ರೈತರೊಬ್ಬರು ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ತಾಲೂಕಿನ ಕೆಂಚನಹಳ್ಳಿ ಗ್ರಾಮದಲ್ಲಿ ಸೋಮವಾರ ನಡೆದಿದೆ.



ಮಂಚೇಗೌಡ

ಗ್ರಾಮದ ನಿವಾಸಿ ಲೇ.ಅಂಕೇಗೌಡರ ಪುತ್ರ ಮಂಚೇಗೌಡ(58) ಆತ್ಮಹತ್ಯೆ ಮಾಡಿಕೊಂಡವರು. ಈತ ತನ್ನ 30 ಗುಂಟೆ ಜಮೀನಿನಲ್ಲಿ ಬೇಸಾಯ ಮಾಡುತ್ತಿದ್ದರು. ಆದರೆ ಬೆಳೆಗೆ ಬೆಂಬಲ ಬೆಲೆ ಸಿಗದೇ ಕೆಲ ವರ್ಷಗಳಿಂದ ನಷ್ಟಕ್ಕೆ ಒಳಗಾಗಿದ್ದರು. ವ್ಯವಸಾಯಕ್ಕೆ 8 ಲಕ್ಷಕ್ಕೂ ಹೆಚ್ಚು ಸಾಲ ಮಾಡಿದ್ದರು ಎನ್ನಲಾಗಿದೆ. ಇತ್ತೀಚೆಗೆ ಸಾಲಗಾರರ ಕಾಟ ಹೆಚ್ಚಾದ ಹಿನ್ನೆಲೆಯಲ್ಲಿ ಮನನೊಂದು ಜಮೀನಿನ ಬಳಿ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಪೊಲೀಸರು ಪರಿಶೀಲನೆ ನಡೆಸಿ ಶವವನ್ನು ಪಾಂಡವಪುರ ಸಾರ್ವಜನಿಕ ಆಸ್ಪತ್ರೆಗೆ ರವಾನಿಸಿದರು. ಈ ವೇಳೆ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅವರು ಮೃತ ರೈತನ ಅಂತಿಮ ದರ್ಶನ ಪಡೆದು ಕುಟುಂಬದವರಿಗೆ ಸಾಂತ್ವನ ಹೇಳಿದರು. ಈ ಸಂಬಂಧ ಪಾಂಡವಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ನಾಗಮಂಗಲ: ಕೌಟುಂಬಿಕ ಕಲಹದಿಂದ ಬೇಸತ್ತ ಗೃಹಿಣಿಯೊಬ್ಬರು ಮಗುವಿನೊಂದಿಗೆ ಬಾವಿಗೆ ಬಿದ್ದು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ತಾಲೂಕಿನ ಚೀಣ್ಯ ಗ್ರಾಮದಲ್ಲಿ ಸಂಭವಿಸಿದೆ.

ಗ್ರಾಮದ ನಿವಾಸಿ ರೋಹಿತ್ ಅವರ ಪತ್ನಿ ಪುಷ್ಪಲತಾ(23), ಪುತ್ರಿ ದಿಶಾನಿ(2) ಬಾವಿಗೆ ಬಿದ್ದು ಸಾವನ್ನಪ್ಪಿದ ತಾಯಿ ಮತ್ತು ಮಗು. ಗಂಡನ ಮನೆಯವರ ಕಿರುಕುಳದಿಂದ ಬೇಸತ್ತು ಆತ್ಮಹತ್ಯೆ ಮಾಡಿಕೊಂಡಿರಬಹುದೆಂದು ಶಂಕಿಸಲಾಗಿದೆ.

ತಾಲೂಕಿನ ತೆಂಗಿನ ಭಾಗ ಗ್ರಾಮದ ಭಾಗ್ಯಮ್ಮ ಮತ್ತು ಯೋಗೇಶ್ ದಂಪತಿ ಪುತ್ರಿ ಪುಷ್ಪಲತಾಳನ್ನು ಕಳೆದ 3 ವರ್ಷಗಳ ಹಿಂದೆ ಚೀಣ್ಯ ಗ್ರಾಮದ ಸುನಂದಾ ಮತ್ತು ಮಹೇಶ್ ದಂಪತಿ ಪುತ್ರ ರೋಹಿತ್ ಅವರಿಗೆ ಮದುವೆ ಮಾಡಿಕೊಡಲಾಗಿತ್ತು. ಕೆಲ ದಿನಗಳಿಂದ ಸಣ್ಣಪುಟ್ಟ ವಿಚಾರಕ್ಕೆ ಸೊಸೆಯೊಂದಿಗೆ ಜಗಳವಾಡುತ್ತಿದ್ದ ಮನೆಯವರು, ಕಿರುಕುಳ ನೀಡುತ್ತಿದ್ದರು. ಈ ಬಗ್ಗೆ ಒಂದೆರಡು ಬಾರಿ ಹಿರಿಯರ ಸಮ್ಮುಖದಲ್ಲಿ ನ್ಯಾಯ ಪಂಚಾಯಿತಿ ಮಾಡಿ ತಿಳಿ ಹೇಳಲಾಗಿತ್ತು. ಶನಿವಾರ ರಾತ್ರಿ ಸಹ ಕ್ಷುಲ್ಲಕ ಕಾರಣಕ್ಕೆ ನನ್ನ ಮಗಳೊಂದಿಗೆ ಜಗಳವಾಡಿ ಹಲ್ಲೆ ಮಾಡಿದ್ದಾರೆಂದು ಮೃತ ಪುಷ್ಪಲತಾ ತಾಯಿಯಿಂದ ಆರೋಪ ಕೇಳಿ ಬಂದಿದೆ.

ಭಾನುವಾರ ಬೆಳಗ್ಗೆ ಪುಷ್ಪಲತಾ ಮತ್ತು ಮಗು ದಿಶಾನಿ ಮನೆಯಲ್ಲಿ ಇಲ್ಲದಿರುವುದನ್ನು ಕಂಡು ಹುಡುಕಾಟ ನಡೆಸುತ್ತಿದ್ದ ವೇಳೆ ಗ್ರಾಮದೊಳಗಿರುವ ನೀರು ಸೇದುವ ಬಾವಿಯೊಂದರಲ್ಲಿ ಪುಷ್ಪಲತಾ ಮೃತದೇಹ ಪತ್ತೆಯಾಗಿದೆ. ನೀರಿನಲ್ಲಿದ್ದ ಮೃತದೇಹ ಹೊರ ತೆಗೆಯುವ ವೇಳೆ ಮಗುವಿನ ಮೃತ ದೇಹ ಸಹ ಸಿಕ್ಕಿದೆ. ಸುದ್ದಿ ತಿಳಿಯುತ್ತಿದ್ದಂತೆ ದೌಡಾಯಿಸಿ ಬಂದ ಮೃತಳ ಪೋಷಕರು ಮತ್ತು ಸಂಬಂಧಿಕರ ಆಕ್ರಂದನ ಮುಗಿಲು ಮುಟ್ಟಿತ್ತು.

ವಿಷಯ ತಿಳಿದು ನಾಗಮಂಗಲ ಗ್ರಾಮಾಂತರ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ಕೊಟ್ಟರಾದರೂ ಘಟನೆ ಬಗ್ಗೆ ಯಾವುದೇ ದೂರು ನೀಡುವುದಿಲ್ಲ. ಗ್ರಾಮದ ಮುಖ್ಯಸ್ಥರ ಸಮ್ಮುಖದಲ್ಲಿ ಸಮಸ್ಯೆ ಬಗೆಹರಿಸಿಕೊಂಡು ಮೃತದೇಹಗಳ ಅಂತ್ಯಕ್ರಿಯೆ ಮಾಡುವುದಾಗಿ ಕುಟುಂಬಸ್ಥರು ತಿಳಿಸಿದ್ದಾರೆಂದು ಹೇಳಲಾಗಿದೆ. ಹಾಗಾಗಿ ಘಟನೆ ಸಂಬಂಧ ಪೊಲೀಸ್ ಠಾಣೆಯಲ್ಲಿ ಯಾವುದೇ ದೂರು ದಾಖಲಾಗಿಲ್ಲ.

ಹಲಗೂರು: ವ್ಯಕ್ತಿಯೊಬ್ಬ ಬೆದರಿಕೆ ಹಾಕಿ ಕಿರುಕುಳ ನೀಡಿದ್ದರಿಂದ ಬೇಸತ್ತ ತಾಯಿ ಮತ್ತು ಮಗಳು ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಸಮೀಪದ ದಳವಾಯಿ ಕೋಡಿಹಳ್ಳಿ ಗ್ರಾಮದಲ್ಲಿ ಜರುಗಿದೆ. ಗ್ರಾಮದ ನಿವಾಸಿ ಎಂ. ಮಹೇಶ್ ಎಂಬುವರ ಪತ್ನಿ ಶಕುಂತಲಾದೇವಿ (46) ಹಾಗೂ ಪುತ್ರಿ ಪ್ರಿಯ(19) ಎಂಬುವರೇ ಆತ್ಮಹತ್ಯೆ ಮಾಡಿಕೊಂಡವರು.



ಪ್ರಿಯ ಶಕುಂತಲಾದೇವಿ

ಮೃತರ ಪಕ್ಕದ ಮನೆ ನಿವಾಸಿ ವಿವಾಹಿತ ಮುತ್ತುರಾಜು ಎಂಬಾತ ಪ್ರಿಯಳನ್ನು ಪರಿಚಯ ಮಾಡಿಕೊಂಡು ನಿನ್ನನ್ನು ಮದುವೆ ಮಾಡಿಕೊಳ್ಳುತ್ತೇನೆ ಎಂದು ಪುಸಲಾಯಿಸಿದ್ದು, ಇದಕ್ಕೆ ಒಪ್ಪದ ಶಕುಂತಲಾ ಮತ್ತು ಮಹೇಶ್ ಅವರು ನಿನಗೆ ಈಗಾಗಲೇ ಮದುವೆಯಾಗಿದೆ. ಹೆಂಡತಿ ಮತ್ತು ಮಕ್ಕಳಿದ್ದಾರೆ. ಮತ್ತೆ ಮದುವೆ ಸಾಧ್ಯವಿಲ್ಲ ಎಂದು ಬುದ್ಧಿ ಹೇಳಿದ್ದಾರೆ.

ಈ ವೇಳೆ ಪ್ರಿಯಳಿಗೆ ಆಕೆಯ ಪೋಷಕರು ಮದುವೆ ಮಾಡಲು ಸಿದ್ಧತೆ ಮಾಡಿಕೊಳ್ಳುತ್ತಿರುವ ವಿಷಯ ತಿಳಿದ ಮುತ್ತುರಾಜು ಶಕುಂತಲಾಗೆ ಕರೆ ಮಾಡಿ ಪ್ರಿಯಳನ್ನು ಬೇರೆಯವರಿಗೆ ಮದುವೆ ಮಾಡಿದರೆ ನಿಮ್ಮನ್ನು ಕೊಲೆ ಮಾಡುವುದಾಗಿ ಬೆದರಿಕೆ ಹಾಕಿದ್ದಾನೆ. ಇದರಿಂದ ಮನನೊಂದ ಶಕುಂತಲಾ ಮತ್ತು ಪ್ರಿಯ ಇಬ್ಬರು ಭಾನುವಾರ ಮನೆಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಶಕುಂತಲಾ ಪತಿ ಮಹೇಶ್ ದೂರಿನಲ್ಲಿ ತಿಳಿಸಿದ್ದಾರೆ. ಈ ಸಂಬಂಧ ಹಲಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಹರಿಪ್ರಿಯ ಹೋಟೆಲ್ ಮಾಲೀಕ ರಮೇಶ್ ಆಚಾರ್ ನಿಧನ



ಮಂಡ್ಯ, ಫೆ.9– ನಗರದ ಪ್ರತಿಷ್ಠಿತ ಹರಿಪ್ರಿಯ ಹೋಟೆಲ್ ಮಾಲೀಕ ಹಾಗೂ ಉದ್ಯಮಿ ಕೆ.ರಮೇಶ್ ಆಚಾರ್(77) ಅವರು ಸೋಮವಾರ ಬೆಳಗ್ಗೆ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು.

ಮೃತರು ಪತ್ನಿ, ಓರ್ವ ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಮಂಡ್ಯದಲ್ಲಿ ಹೋಟೆಲ್ ಉದ್ಯಮಕ್ಕೆ ಹೊಸ ಆಯಾಮ ಸೃಷ್ಟಿಸಿದ ರಮೇಶ್ ಆಚಾರ್ ಅವರು, ಹರಿಪ್ರಿಯ, ವಿಶ್ರಾಂತ್, ಗಾಯತ್ರಿ ಹೋಟೆಲ್‌ಗಳನ್ನು ಸ್ಥಾಪಿಸಿದ್ದರು. ಹರಿಬೆಲ್ಟ್ ಅಂಡ್ ಕನ್ವೆಯರ್ಸ್ ಕೈಗಾರಿಕೆಗಳನ್ನು ಪ್ರಾರಂಭಿಸಿದ್ದರು. ಮಾಜಿ ಸಿಎಂ ಎಸ್.ಎಂ.ಕೃಷ್ಣ ಸೇರಿದಂತೆ ಮಂಡ್ಯದ ಬಹುತೇಕ ರಾಜಕಾರಣಿಗಳೊಂದಿಗೆ ಸ್ನೇಹದಿಂದಿದ್ದರು. ನಗರಸಭಾ ಸದಸ್ಯ, ಮಂಡ್ಯ ಜಿಲ್ಲಾ ಬ್ರಾಹ್ಮಣ ಸಭಾ ಅಧ್ಯಕ್ಷರು ಸೇರಿದಂತೆ ಹಲವು ಸಂಘ ಸಂಸ್ಥೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದರಲ್ಲದೆ, ಅತ್ಯುತ್ತಮ ತೆರಿಗೆದಾರ ಎಂದು ಕರ್ನಾಟಕ ಸರ್ಕಾರದ ಗೌರವಕ್ಕೆ ಪಾತ್ರರಾಗಿದ್ದರು.

ಮಾಜಿ ಸಚಿವರಾದ ಎಂ.ಎಸ್.ಆತ್ಮಾನಂದ, ಸಿ.ಎಸ್.ಪುಟ್ಟರಾಜು ಸೇರಿದಂತೆ ಅನೇಕ ಗಣ್ಯರು ಮೃತರ ಅಂತಿಮ ದರ್ಶನ ಪಡೆದರು. ನಗರದ ಹಾಲಹಳ್ಳಿಯಲ್ಲಿರುವ ಬ್ರಾಹ್ಮಣ ರುದ್ರಭೂಮಿಯಲ್ಲಿ ಮಧ್ಯಾಹ್ನ ಅಂತ್ಯಕ್ರಿಯೆ ನಡೆಯಿತು.

ಕರ್ನಾಟಕ ಕಂಡಂತಹ ಅತ್ಯಂತ ಪುಕ್ಕಲ, ಹೇಡಿ ಮುಖ್ಯಮಂತ್ರಿ ಸಿದ್ದರಾಮಯ್ಯ

ಮಾಜಿ ಸಂಸದ ಪ್ರತಾಪ್ ಸಿಂಹ ಟೀಕಾಪ್ರಹಾರ

ಮೈಸೂರು,ಫೆ.9(ಪಿಎಂ)– ಕರ್ನಾಟಕ ಕಂಡಂತಹ ಅತ್ಯಂತ ಪುಕ್ಕಲ, ಹೇಡಿ ಮುಖ್ಯಮಂತ್ರಿ ಸಿದ್ದರಾಮಯ್ಯ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ಟೀಕಾಪ್ರಹಾರ ನಡೆಸಿದರು.

ದಾವಣಗೆರೆ ಜಿಲ್ಲೆಯ ಹರಿಹರದ ವಾಲ್ಮೀಕಿ ಮಠದಲ್ಲಿ ಮಾಧ್ಯಮದವರೊಂದಿಗೆ ಅವರು ಮಾತನಾಡಿದರು. ಮೆಟ್ರೋ ಪ್ರಯಾಣ ದರ ಸಂಬಂಧ ರಾಜ್ಯ ಸರ್ಕಾರದ ವಿರುದ್ಧ ಪ್ರತಿಭಟನೆಗೆ ಮುಂದಾಗಿದ್ದ ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಅವರನ್ನು ಪೊಲೀಸರು, ವಶಕ್ಕೆ ಪಡೆದಿದ್ದ ಕ್ರಮವನ್ನು ಅವರು ತೀವ್ರವಾಗಿ ಖಂಡಿಸಿದರು.

ಬಿಜೆಪಿ ಯುವ ಮೋರ್ಚಾ ರಾಷ್ಟ್ರೀಯ ಅಧ್ಯಕ್ಷರೂ ಆದ ತೇಜಸ್ವಿ ಸೂರ್ಯ ಅವರು ಬೆಂಗಳೂರಿನ ಒಬ್ಬ ಜನಪ್ರತಿನಿಧಿಯಾಗಿ ಕಳೆದ ಒಂದು ವರ್ಷದಿಂದ 2ನೇ ಬಾರಿಗೆ ಮೆಟ್ರೋ ಪ್ರಯಾಣ ದರವನ್ನು ಯದ್ವಾತದ್ವಾ ಏರಿಸಿರುವುದರ ವಿರುದ್ಧ ಸತತವಾಗಿ ಧ್ವನಿ ಎತ್ತುತ್ತಿದ್ದಾರೆ. ತಾಳ್ಮೆಯನ್ನು ಈ ಸರ್ಕಾರ ಪರೀಕ್ಷೆ ಮಾಡುತ್ತಿದ್ದು, ಇನ್ನು ಮುಂದೆ ಇದನ್ನು ತಡೆದುಕೊಳ್ಳಲು ಸಾಧ್ಯವಿಲ್ಲವೆಂದು ಪ್ರತಿರೋಧವೊಡ್ಡಿ ಹೋರಾಟಕ್ಕೆ ಮುಂದಾಗಿದ್ದಾರೆ ಎಂದರು. ಬಿಎಂಆರ್‌ಸಿಎಲ್‌ನವರು ದರವನ್ನು ಶೇ.5ರಷ್ಟು ಹೆಚ್ಚಳ ಮಾಡಿದ್ದರು. ಅದನ್ನು ತಡೆಹಿಡಿಯುವಲ್ಲಿ ತೇಜಸ್ವಿ ಸೂರ್ಯ ಸಫಲರಾಗಿದ್ದಾರೆ. ಅದಕ್ಕಾಗಿ ಅವರು ಒಳ್ಳೆಯ ಹೋರಾಟ ಮಾಡಿದ್ದಾರೆ. ಒಬ್ಬ ಜನಪ್ರತಿನಿಧಿಯಾಗಿ ಮೆಟ್ರೋ



ಅಭಿವೃದ್ಧಿಗೆ ಕೇಂದ್ರ ಸರ್ಕಾರದ ಸ್ಪಂದನೆ ಕೊಡಿಸುವ ಜೊತೆಗೆ ರಾಜ್ಯ ಸರ್ಕಾರ ಬಜೆಟರಿ ಸಹಕಾರ ಕೊಡದೆಯೇ ಪ್ರಯಾಣಿಕರ ಮೇಲೆ ಬರೆ ಎಳೆಯುತ್ತಿರುವಂತಹ ಒಂದು ಧೋರಣೆ ವಿರುದ್ಧ, ಜನರ ಪರವಾಗಿ ನಿಂತು ಹೋರಾಟ ಮಾಡಿ ನ್ಯಾಯ ಕೊಡಿಸುವ ಕೆಲಸ ಮಾಡಿದ್ದಾರೆ.

ಆದರೆ ಇವತ್ತು ಈ ರಾಜ್ಯ ಸರ್ಕಾರದ ಖಜಾನೆ ಖಾಲಿಯಾಗಿದೆ. ಹಾಗಾಗಿ ಖಾಲಿ ಡಬ್ಬ ಅಲ್ಲಾಡಿಸುತ್ತಿದ್ದಾರೆಂದು ಸಾಂಕೇತಿಕವಾಗಿ ಖಾಲಿ ಟ್ರಂಕ್ ಹಿಡಿದು ಅವರು ಪ್ರತಿಭಟನೆ ವ್ಯಕ್ತಪಡಿಸಿದ್ದಾರೆ. ರಾಜ್ಯ ಸರ್ಕಾರದ ತಾರ್ಕಿಕ, ವೈಚಾರಿಕ, ಬೌದ್ಧಿಕವಾಗಿ ದಿವಾಳಿಯಾಗಿರುವುದನ್ನು ತೆರೆದಿಡಲು ಮುಂದಾದವರನ್ನು ಯಾವ ರೀತಿ ಅಣಿಯಲಾಗುತ್ತದೆ ಎಂಬುದಕ್ಕೆ ತೇಜಸ್ವಿ ಸೂರ್ಯ ಅವರನ್ನು ಬಂಧಿಸಿರುವುದು ಒಂದು ಉದಾಹರಣೆ. ತೇಜಸ್ವಿ ಸೂರ್ಯ ಸಮಸ್ತ ಬೆಂಗಳೂರಿಗರ ಪರವಾಗಿ, ಮೆಟ್ರೋ ಪ್ರಯಾಣಿಕರ ಪರವಾಗಿ ಹೋರಾಟ ಮಾಡಿದ್ದಾರೆ. ಪ್ರಯಾಣಿಕರ ಮೇಲೆ ನಡೆಯುತ್ತಿರುವ ದೌರ್ಜನ್ಯದ ವಿರುದ್ಧ ಅವರು ಹೋರಾಟ ಮಾಡಿದ್ದಾರೆ.

ಸಿದ್ದರಾಮಯ್ಯನವರೇ ನೀವೊಬ್ಬ ಯಂಗ್‌ಸ್ಟರ್ ಆಗಿ 1983ರಲ್ಲಿ ಬಂದವರು. 17 ಬಜೆಟ್ ಮಂಡಿಸಿ ಈಗ 18ನೇ ಬಜೆಟ್ ಮಂಡಿಸಲು ಸಿದ್ಧತೆ ಮಾಡುತ್ತಿದ್ದೀರಿ. ನೀವು ವಿಶ್ವವಿಖ್ಯಾತ ಅರ್ಥಶಾಸ್ತ್ರಜ್ಞರಾಗಿದ್ದೀರಿ. ಆದರೆ ಖಜಾನೆ ಖಾಲಿಯಾಗಿ ಅಭಿವೃದ್ಧಿ ಕಾರ್ಯಗಳಿಗೆ ಕಾಸು ಕೊಡಲಿಕ್ಕೂ ನಿಮ್ಮ ಬಳಿ ಹಣ ಇಲ್ಲದ ಪರಿಸ್ಥಿತಿ ಬಂದಿದೆ. ಬರೀ ಸಭೆ–ಸಮಾರಂಭದಲ್ಲಿ ಎಲ್ಲರ ಮೇಲೆ ಉಡಾಫೆ, ತಾತ್ಸಾರ, ಏಕವಚನದ ನಿಂದನೆ–ಸಂಬೋಧನೆ ಮಾಡುವುದು ಬಿಟ್ಟರೆ ನಿಮ್ಮ ಹತ್ತಿರ ಏನಿದೆ ಎಂದು ಪ್ರಶ್ನಿಸಿದರು.

17 ಬಜೆಟ್ ಮಂಡಿಸಿದ್ದೇನೆ ಎಂದು ಹೇಳುತ್ತೀರಲ್ಲಾ ನಿಮಗೆ ಅರ್ಥವ್ಯವಸ್ಥೆ ಬಗ್ಗೆ ಏನು ಗಂಧಗಾಳಿ ಗೊತ್ತಿದೆ ಹೇಳಿ ಎಂದು ಸಿದ್ದರಾಮಯ್ಯರ ವಿರುದ್ಧ ಕಿಡಿಕಾರಿದರು. ಒಬ್ಬ ಯುವ ಸಂಸದ ಪ್ರಶ್ನೆ ಮಾಡಿದ ಕೂಡಲೇ ಅವರನ್ನು ಬಂಧನ ಮಾಡಿಸುತ್ತೀರಿ ಎಂದರೆ ನಿಮ್ಮ ತರದ ಪುಕ್ಕಲ, ಹೇಡಿ ಮುಖ್ಯಮಂತ್ರಿಯನ್ನು ನಾನು ಈವರೆಗೆ ನೋಡಿಲ್ಲ ಎಂದು ಪ್ರತಾಪ್ ಸಿಂಹ ಟೀಕಾಪ್ರಹಾರ ನಡೆಸಿದರು.

ಹಳೆ ಮೀಸಲಾತಿ ಪದ್ಧತಿ ಅನ್ವಯ ಬಲಗೈ ಸಮುದಾಯಕ್ಕೆ ಶಿಕ್ಷಣ, ಉದ್ಯೋಗ ಮೀಸಲಾತಿಗೆ ಆಗ್ರಹ

● ನ್ಯಾ.ನಾಗಮೋಹನ್ ದಾಸ್ ಆಯೋಗದ ವರದಿ ಅವೈಜ್ಞಾನಿಕ ● ಹಳೆ ಮೀಸಲಾತಿ ಪದ್ಧತಿ ಅನ್ವಯಗೊಳಿಸುವಂತೆ ಆಗ್ರಹಿಸಿ ಇಂದು ಪಾದಯಾತ್ರೆ

ಮೈಸೂರು, ಫೆ.9(ಎಂಟಿವೈ)– ನ್ಯಾಯಮೂರ್ತಿ ಡಾ.ಹೆಚ್.ಎನ್.ನಾಗಮೋಹನ್ ದಾಸ್ ಆಯೋಗ ನೀಡಿರುವ ಒಳಮೀಸಲಾತಿ ವರದಿ ಅವೈಜ್ಞಾನಿಕವಾಗಿದ್ದು, ಇದರಿಂದ ಬಲಗೈ ಸಮುದಾಯದ ವಿದ್ಯಾರ್ಥಿಗಳು ಶಿಕ್ಷಣ ಮತ್ತು ಉದ್ಯೋಗಾವಕಾಶಗಳಿಂದ ವಂಚಿತರಾಗುವಂತೆ ಹುನ್ನಾರ ನಡೆಸಲಾಗುತ್ತಿದ್ದು, ಸರ್ಕಾರ ಹಳೆ ಪದ್ಧತಿ ಅನುಸರಿಸಿ ಶಿಕ್ಷಣ ಹಾಗೂ ಉದ್ಯೋಗದ ಮೀಸಲಾತಿ ಮುಂದುವರೆಸಬೇಕು ಎಂದು ಪರಿಶಿಷ್ಟ ಜಾತಿ ಬಲಗೈ ವಿದ್ಯಾರ್ಥಿಗಳ ಒಕ್ಕೂಟದ ಪದಾಧಿಕಾರಿ ಡಾ.ಬಿ.ಕೆ. ಜ್ಞಾನಪ್ರಕಾಶ್ ಒತ್ತಾಯಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಪರಿಶಿಷ್ಟ ಜಾತಿಗಳಿಗೆ ಶಿಕ್ಷಣ ಮತ್ತು ಉದ್ಯೋಗಕ್ಕೆ ಸಂಬಂಧಿಸಿದ ಒಳ ಮೀಸಲಾತಿ ವರದಿಯ ಗೊಂದಲ ಬಗೆಹರಿಯುವ ತನಕ ರಾಜ್ಯ ಸರ್ಕಾರ ಪ್ರಸ್ತುತ ಶೈಕ್ಷಣಿಕ ವಲಯ ಮತ್ತು ಉದ್ಯೋಗಕ್ಕೆ ಅನ್ವಯಿಸುತ್ತಿರುವ ಒಳ ಮೀಸಲಾತಿ ಕಾರ್ಯ ಚಟುವಟಿಕೆಗೆ ತಡೆ ನೀಡಬೇಕು. ನ್ಯಾ.ನಾಗಮೋಹನ ದಾಸ್ ವರದಿಯಲ್ಲಿ ಇದುವರೆಗೂ ಮೂಲ ಜಾತಿಗಳನ್ನೇ ಗುರುತಿಸಿಲ್ಲ. ಹೀಗಾಗಿ ಹಲವು ಜಾತಿಗಳನ್ನು ಎಲ್ಲಿ ಗುರುತಿಸಬೇಕು ಎಂಬ ಗೊಂದಲವುಂಟಾಗಿದೆ. ಇದರಿಂದ ಬಲಗೈ ಸಮುದಾಯಕ್ಕೆ ಶೈಕ್ಷಣಿಕ ಹಾಗೂ ಔದ್ಯೋಗಿಕ ಮೀಸಲಾತಿ ನೀಡುವ ವೇಳೆ ಅನ್ಯಾಯ ಮಾಡಲಾಗುತ್ತಿದೆ.

ಆದರೆ ತಮಗೆ ದೊರೆತ ಮೀಸಲಾತಿ ಸೌಲಭ್ಯ ಬಳಸಿಕೊಳ್ಳಲು ವಿಫಲರಾದವರು ಬಲಗೈ ಸಮುದಾಯದ ವಿರುದ್ಧ ಅಪಪ್ರಚಾರ ಮಾಡುತ್ತಿದ್ದಾರೆ. ಇವರು ಪದೇ ಪದೇ ನಮ್ಮನ್ನು ತುಳಿಯುವ ಪ್ರಯತ್ನ ಮಾಡಲಾಗುತ್ತಿದೆ. ರಾಜ್ಯದಲ್ಲಿ ಬಲಗೈ ಮತ್ತು ಸಂಬಂಧಿತ ಜಾತಿಗೆ ಸೇರಿದ 41 ಲಕ್ಷ ಜನಸಂಖ್ಯೆ ಇದೆ. ಆದರೆ, ಒಳಮೀಸಲಾತಿ ವರದಿಯಲ್ಲಿ ಬಲಗೈ ಸಮುದಾಯದ 33 ಲಕ್ಷ, ಆದಿಕರ್ನಾಟಕ 4 ಲಕ್ಷ , ಛಲವಾದಿ 4 ಲಕ್ಷ ಎಂದು ವಿಂಗಡಣೆ ಮಾಡಲಾಗಿದೆ. ಆದರೆ ಎಡಗೈ ಸಮುದಾಯ 36 ಲಕ್ಷ ಜನಸಂಖ್ಯೆ ಇದೆ ಎಂದು ತೋರಿಸಿದ್ದಾರೆ. ಇದು ನಮ್ಮ ಹಕ್ಕನ್ನು ಕಸಿದುಕೊಳ್ಳುವ ಹುನ್ನಾರ ಎಂದು ಕಿಡಿಕಾರಿದರು.

ಒಕ್ಕೂಟದ ಸಂಚಾಲಕ ಡಾ.ಕೆ.ಪಿ. ರಮೇಶ್ ಮಾತನಾಡಿ, ಒಳ ಮೀಸಲಾತಿ ಗೊಂದಲ ಬಗೆಹರಿಯುವವರೆಗೂ ಹೊಸ ಜಾತಿ ಪ್ರಮಾಣಪತ್ರ ನೀಡುವುದನ್ನು ಕೂಡಲೇ ನಿಲ್ಲಿಸಬೇಕು. ಹಳೇ ಜಾತಿ ಪ್ರಮಾಣಪತ್ರ ಮುಂದುವರಿಸಬೇಕು. ಒಳ ಮೀಸಲಾತಿಗೆ ಅನ್ವಯಿಸಿರುವ ರೋಸ್ಟರ್ ಬಿಂದು ಪರಿಷ್ಕರಿಸಬೇಕು. ಈ ಗೊಂದಲ ಪರಿಹಾರವಾಗುವವರೆಗೂ ಹಳೇ ಮೀಸಲಾತಿ ಅನ್ವಯಿಸಿ ಖಾಲಿ ಹುದ್ದೆ ಭರ್ತಿ ಮಾಡಬೇಕು. ವಿಶ್ವವಿದ್ಯಾನಿಲಯಗಳು, ಅನುದಾನಿತ ಸಂಸ್ಥೆ, ಪ್ರಾಧಿಕಾರಗಳಲ್ಲಿ ಬ್ಯಾಕ್‌ಲಾಗ್ ಮತ್ತು ಬಡ್ತಿಗೆ ಸಂಬಂಧಿಸಿದಂತೆ ಒಂದು ಮತ್ತು ಎರಡು ಹುದ್ದೆಗಳಿದ್ದಾಗ ಮೀಸಲಾತಿ ನಿಗದಿಪಡಿಸುವ ಹೊಣೆ ಸಮಾಜ ಕಲ್ಯಾಣ ಇಲಾಖೆಗೆ ವಹಿಸಬೇಕು. ಜಾತಿ ಪ್ರಮಾಣಪತ್ರ ವಿತರಣೆ ಸರಳೀಕರಣಗೊಳ್ಳಬೇಕು. ಜಾತಿ ಪ್ರಮಾಣಪತ್ರ ತಂತ್ರಾಂಶ ಸರಿಪಡಿಸಬೇಕು. ಹೊಸ ಜಾತಿ ಪ್ರಮಾಣ ಪತ್ರ ಮಾಡಿಸದ ವಿದ್ಯಾರ್ಥಿಗಳಿಗೆ ಯಾವುದೇ ರೀತಿ ಶೈಕ್ಷಣಿಕ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದು ಒತ್ತಾಯಿಸಿದರು.

ಇಂದು ಪಾದಯಾತ್ರೆ: ಒಳಮೀಸಲಾತಿ ವರದಿ ತಿರಸ್ಕರಿಸಿ, ಹಳೆ ಮೀಸಲಾತಿ ಪದ್ಧತಿಯಲ್ಲಿಯೇ ಮೀಸಲಾತಿ ಸೌಲಭ್ಯ ಮುಂದುವರೆಸುವಂತೆ ಆಗ್ರಹಿಸಿ ನಾಳೆ ಬೆಳಗ್ಗೆ 10 ಕ್ಕೆ ಮಾನಸಗಂಗೋತ್ರಿ ಡಾ.ಅಂಬೇಡ್ಕರ್ ಪ್ರತಿಮೆ ಮುಂಭಾಗದಿಂದ ಸಿದ್ಧಾರ್ಥನಗರ ದಲ್ಲಿರುವ ಜಿಲ್ಲಾಧಿಕಾರಿ ಕಚೇರಿವರೆಗೆ ಪ್ರತಿಭಟನಾ ಪಾದಯಾತ್ರೆ ಹಮ್ಮಿಕೊಂಡು ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸುವುದಾಗಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಒಕ್ಕೂಟದ ಸಂಚಾಲಕರಾದ ಲಿಂಗರಾಜ್, ಕಾರ್ತಿಕ್, ಶಿವಶಂಕರ್, ವಿಶ್ವಪ್ರಸಾದ್, ನಾಗೇಶ್ ಗಾಗೇನಹಳ್ಳಿ ಇದ್ದರು.

ಫೆ.21ಕ್ಕೆ ದೇಶದ ಅತಿ ದೊಡ್ಡ ಯುವ ಸಮಾಗಮ 'ಸೋಲ್ವ್‌ಕಾನ್'

ಬೆಂಗಳೂರು, ಫೆ.9– ಯುವ ಪೀಳಿಗೆ ಬದಲಾವಣೆ ಉದ್ದೇಶದೊಂದಿಗೆ ಸೋಲ್ವ್ ನಿಂಜಾಸ್(Solve Ninjas) ಚಳವಳಿ ರೂಪಿಸಿರುವ ರೀಫ್ ಬೆನಿಫಿಟ್ ಸಂಸ್ಥೆ ವತಿಯಿಂದ 'ಸೋಲ್ವ್‌ಕಾನ್' ಬೃಹತ್ ಸಮಾವೇಶವನ್ನು ಫೆ.21ರಂದು ನಗರದ ಪಿಇಎಸ್ ವಿಶ್ವವಿದ್ಯಾಲಯದಲ್ಲಿ ಆಯೋಜಿಸಲಾಗಿದೆ.

ಈ ರಾಷ್ಟ್ರೀಯ ಸಮಾವೇಶದಲ್ಲಿ 1,500ಕ್ಕೂ ಹೆಚ್ಚು ಯುವಕರು ಮತ್ತು 80ಕ್ಕೂ ಹೆಚ್ಚು ಸಂಸ್ಥೆಗಳು ಭಾಗವಹಿಸಲಿವೆ. ಸೋಲ್ವ್‌ಕಾನ್ ಏಕದಿನ ಸಮಾವೇಶವು ಯುವಜನರ ನೇತೃತ್ವದಲ್ಲಿ ನಡೆಯುವ ಕಲಿಕಾ ಹಬ್ಬವಾಗಿದೆ. ನಾಗರಿಕ ಕರ್ತವ್ಯ, ಹವಾಮಾನ, ಮಾನಸಿಕ ಆರೋಗ್ಯ, ವಿಜ್ಞಾನ, ಕಲೆ ಮತ್ತು ಸಮುದಾಯ ಆಧಾರಿತ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಕೇಂದ್ರೀಕೃತವಾದ ಸಂವಹನಾತ್ಮಕ ಹಾಗೂ ಸೃಜನಾತ್ಮಕ ಕಾರ್ಯಕ್ರಮಗಳನ್ನು ಜೋಡಿಸಲಾಗಿದೆ. ಸಮಾವೇಶದಲ್ಲಿ ಕೈಲಾಶ್ ನಾಥ್, ರೋಹಿಣಿ ನಿಲೇಕಣಿ, ಅಶ್ವಿನಿ, ದೀಪಕ್ ಧನಂಜಯ ಸೇರಿದಂತೆ ಹಲವು ವಕ್ತಾರರು ಭಾಗವಹಿಸಿ, ಯುವಜನತೆಗೆ ಮಾರ್ಗದರ್ಶನ ನೀಡಲಿದ್ದಾರೆ.

ಸಂಪರ್ಕ, ಕಲಿಕೆ ಮತ್ತು ನಾಯಕತ್ವ ಎಂಬ ಮೂರು ಸರಳ ಆಲೋಚನೆಗಳಡಿ ಆಯೋಜಿಸಿರುವ ಈ ಕಾರ್ಯಕ್ರಮವು, ಯುವಕರು ತಮ್ಮಂತೆಯೇ ಯೋಚಿಸುವವರನ್ನು ಭೇಟಿಯಾಗಿ ಕಲಿಯಲು, ನೈಜ ಸಮಸ್ಯೆಗಳಿಗೆ ಪರಿಹಾರ ಹುಡುಕಲು, ತಮ್ಮ ಸಮುದಾಯಗಳಲ್ಲಿ ನಾಯಕತ್ವ ವಹಿಸಲು ಸಹಾಯ ಮಾಡುತ್ತದೆ. ಈ ಆವೃತ್ತಿಯಲ್ಲಿ ಸಾವಿರಾರು ಸೋಲ್ವ್ ನಿಂಜಾಸ್‌ಗಳೊಂದಿಗೆ ರೀಪ್ ಬೆನೆಫಿಟ್ ಸಂಭ್ರಮ ಹಂಚಿಕೊಳ್ಳಲಿದೆ. ತಮ್ಮ ನಗರಗಳು ಮತ್ತು ನೆರೆಹೊರೆಯಲ್ಲಿ ನಿರಂತರ ಬದಲಾವಣೆ ತಂದ ಯುವಕರನ್ನು ಗುರುತಿಸಿ ಗೌರವಿಸಲಾಗುತ್ತದೆ.

ಈವರೆಗಿನ 9 ಆವೃತ್ತಿಗಳಲ್ಲಿ ವಿವಿಧ ನಗರಗಳಿಂದ 1,700ಕ್ಕೂ ಹೆಚ್ಚು ಯುವಕರು, 40ಕ್ಕೂ ಹೆಚ್ಚು ಚಟುವಟಿಕೆಗಳಲ್ಲಿ ಪಾಲ್ಗೊಂಡಿದ್ದಾರೆ. 40ಕ್ಕೂ ಹೆಚ್ಚು ಯುವ ಬದಲಾವಣೆಯ ಹರಿಕಾರರು ಮಾರ್ಗದರ್ಶನ ನೀಡಿದ್ದಾರೆ. ಸುಮಾರು 20 ಸಂಸ್ಥೆಗಳು ಯುವ ಜನತೆಯೊಂದಿಗೆ ಕೆಲಸ ಮಾಡಿವೆ. ಪ್ರಸಕ್ತ ಫೆ.21ರಂದು ಆಯೋಜಿಸಿರುವ 10ನೇ ಆವೃತ್ತಿ ಬಗ್ಗೆ ಲಕ್ಷಾಂತರ ಜನ ಮಾಹಿತಿ ಪಡೆದಿದ್ದಾರೆ. ವಿವಿಧ ಮಳಿಗೆಗಳು, ಕರಕುಶಲ ಕಲಿಕಾ ಕೇಂದ್ರಗಳು ಹಾಗೂ ಅನುಭವ ಹಂಚಿಕೆಯೊಂದಿಗೆ ಕಲಿಕಾ ಚಿಂತನೆ ಮೂಡಿಸುವ ವಲಯಗಳು ಇರಲಿವೆ. ಕಾರ್ಯಕ್ರಮದ ಕಡೆಯಲ್ಲಿ ಯುವ ನಾಯಕತ್ವ ವೇದಿಕೆ ಮತ್ತು ಯುವ ಧ್ವನಿಗಳು ಹಾಗೂ ಸೃಜನಶೀಲತೆಯನ್ನು ಸಂಭ್ರಮಿಸುವ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ.

ಹೆಚ್ಚಿನ ಮಾಹಿತಿಗೆ https://www.reapbenefit.org/solvecon2026 ಜಾಲವನ್ನು ಸಂಪರ್ಕಿಸುವಂತೆ ರೀಪ್ ಬೆನೆಫಿಟ್ ಸಹ–ಸ್ಥಾಪಕ ಮತ್ತು ಸಿಇಓ ಕುಲದೀಪ್ ದಂಟೇವಾಡಿಯಾ ತಿಳಿಸಿದ್ದಾರೆ.

ಎಸ್‌ಬಿಎಂ ಮಂಜುಗೆ ಅಭಿನಂದನೆ



ಮೈಸೂರು ನಗರ ಜೆಡಿಎಸ್ ಅಧ್ಯಕ್ಷರಾಗಿ ನೇಮಕಗೊಂಡ ಎಸ್‌ಬಿಎಂ ಮಂಜು ಅವರನ್ನು ಅಭಿನಂದಿಸಲಾಯಿತು. ಈ ವೇಳೆ ಮುಖಂಡರಾದ ಮಾದೇವ ನಾಯಕ, ಗಣೇಶ್, ರಾಮಕೃಷ್ಣ, ಶ್ರೀನಿವಾಸ್, ಗೋಪಾಲ ನಾಯಕ್, ಶ್ರೀನಿವಾಸ್, ಮರಿಸ್ವಾಮಿ, ರವಿಚಂದ್ರ, ವೆಂಕಟೇಶ್, ಕಾಂತರಾಜ್, ಉಮೇಶ್ ಶಿವಣ್ಣ, ಪ್ರಕಾಶ್, ಶ್ರೀನಿವಾಸ್, ಕಿರಣ್ ಇನ್ನಿತರರು ಉಪಸ್ಥಿತರಿದ್ದರು.

ಪೌಷ್ಟಿಕಾಂಶದ ಬಗ್ಗೆ ಅರಿವು



ಮೈಸೂರಿನ ಸಿಎಸ್‌ಐ ಗರ್ಲ್ಸ್ ಬೋರ್ಡಿಂಗ್ ಹೋಮ್‌ನ ವಿದ್ಯಾರ್ಥಿಗಳಿಗೆ ಡ್ರೈ ಫ್ರೂಟ್ಸ್, ಹಣ್ಣು–ಹಂಪಲು ವಿತರಿಸಿ ಪೌಷ್ಟಿಕಾಂಶದ ಬಗ್ಗೆ ಜಾಗೃತಿ ಮೂಡಿಸಲಾಯಿತು. ಈ ವೇಳೆ ಎನ್‌ಆರ್‌ಐ ರವಿ ಮಹದೇವ್, ಜೆಡಿಎಸ್ ಕಾರ್ಯಾಧ್ಯಕ್ಷ ಪ್ರಕಾಶ್ ಪ್ರಿಯದರ್ಶನ್, ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಹೋಮದೇವ್, ಮಹಾದೇವ್, ರಾಜೇಶ್‌ಕುಮಾರ್, ಮಹೇಶ್, ಗೀತಾ, ದತ್ತ ಇನ್ನಿತರರಿದ್ದರು.

ಡಾ.ಶಿವಕುಮಾರ್‌ಗೆ ಅಭಿನಂದನೆ



ರೋಟರಿ ಮೈಸೂರು ಅಂಬಾರಿ ವತಿಯಿಂದ ನಗರದ ಕಾರ್ಮಿಕರ ರಾಜ್ಯ ವಿಮಾ ಆಸ್ಪತ್ರೆಯ ಅಧೀಕ್ಷಕರಾಗಿ ಹಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಡಾ.ಶಿವಕುಮಾರ್ ಅವರಿಗೆ ರೋಟರಿ ಮೈಸೂರು ಅಂಬಾರಿ ಅಧ್ಯಕ್ಷ ಹರೀಶ್, ಕಾರ್ಯದರ್ಶಿ ಮಂಜುನಾಥ್, ಮಾಜಿ ಅಧ್ಯಕ್ಷ ಜಗದೀಶ್ ಆರ್.ಯದುಕೃಷ್ಣ, ಎಲ್.ಜಗದೀಶ್, ಭರತ್, ಚಂದ್ರಹಾಸ, ಲೋಕೇಶ್, ಡಾ.ಲಕ್ಷ್ಮೀಶ್, ಡಾ.ನವೀನ್, ಡಾ.ಅನಿತಾ, ಡಾ.ರಾಜೇಶ್, ಡಾ.ಚಂದ್ರಕಲಾ ಸನ್ಮಾನಿಸಿ, ನೆನಪಿನ ಕಾಣಿಕೆ ನೀಡಿ ಅಭಿನಂದಿಸಿದರು.

ಫೆ.15ರಂದು ಮಾಂಸ ಮಾರಾಟ ನಿಷೇಧ

ಮೈಸೂರು,ಫೆ.9–ಮೈಸೂರು ಮಹಾನಗರ ಪಾಲಿಕೆಗೆ ಸೇರಿದ ಕುರಿ, ಮೇಕೆಗಳ ಕಸಾಯಿಖಾನೆ ಮತ್ತು ಇತರೆ ಎಲ್ಲಾ ಮಾಂಸದ ಅಂಗಡಿಗಳನ್ನು ಫೆ.15 ರಂದು ಮಹಾ ಶಿವರಾತ್ರಿ ಪ್ರಯುಕ್ತ ಮುಚ್ಚಲಾಗುತ್ತದೆ. ಕುರಿ–ಮೇಕೆ, ಕೋಳಿ, ಹಂದಿ ಮಾಂಸ ಮತ್ತು ಮೀನು ವ್ಯಾಪಾರವನ್ನು ಮೈಸೂರು ನಗರದಲ್ಲಿ ಕಡ್ಡಾಯವಾಗಿ ನಿಷೇಧಿಸಲಾಗುತ್ತದೆ. ಆದುದರಿಂದ ಮೈಸೂರು ಪಾಲಿಕೆ ವ್ಯಾಪ್ತಿಯಲ್ಲಿರುವ ವಿವಿಧ ಮಾಂಸದ ಅಂಗಡಿಗಳನ್ನು ಮುಚ್ಚಲು ಆದೇಶ ನೀಡಲಾಗಿರುತ್ತದೆ ಎಂದು ಪ್ರಕಟಣೆ ತಿಳಿಸಿದೆ.

ಮಾರಿಷಸ್‌ನಲ್ಲಿ ಜೆಎಸ್‌ಎಸ್ ವೈದ್ಯಕೀಯ ಶಾಲೆ ಸ್ಥಾಪನೆ

ದೇಶದ ಆರೋಗ್ಯ ಕ್ಷೇತ್ರದಲ್ಲಿ ಮೈಲಿಗಲ್ಲು: ಧರ್ಮಬೀರ್ ಗೋಖೂಲ್

ಮೈಸೂರು, ಫೆ. 9– ಮಾರಿಷಸ್‌ನಲ್ಲಿ ಜೆಎಸ್‌ಎಸ್ ಸಂಸ್ಥೆ ವೈದ್ಯಕೀಯ ಶಾಲೆ ಸ್ಥಾಪಿಸಿರುವುದು ದೇಶದ ಆರೋಗ್ಯ ಕ್ಷೇತ್ರದಲ್ಲಿ ಒಂದು ಮೈಲಿಗಲ್ಲು ಎಂದು ಮಾರಿಷಸ್ ಗಣರಾಜ್ಯದ ಅಧ್ಯಕ್ಷ ಧರ್ಮಬೀರ್ ಗೋಖೂಲ್ ಅಭಿಪ್ರಾಯಪಟ್ಟಿದ್ದಾರೆ.

ಮಾರಿಷಸ್‌ನಲ್ಲಿ ಸ್ಥಾಪಿಸಲಾಗಿರುವ ಜೆಎಸ್‌ಎಸ್ ಸ್ಕೂಲ್ ಆಫ್ ಮೆಡಿಸಿನ್ ಅನ್ನು ಉದ್ಘಾಟಿಸಿ, ಮಾತನಾಡಿದರು.

ಇಂತಹ ವೈದ್ಯಕೀಯ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸುವುದರಿಂದ ಆರೋಗ್ಯ ರಕ್ಷಣಾ ಸಾಮರ್ಥ್ಯ ಹೆಚ್ಚುವುದರ ಜೊತೆಗೆ ಭಾರತ ಮತ್ತು ಮಾರಿಷಸ್ ದೇಶಗಳ ಶೈಕ್ಷಣಿಕ ಸಂಬಂಧಗಳನ್ನು ಬಲಪಡಿಸುತ್ತವೆ. ಜೆಎಸ್‌ಎಸ್ ವೈದ್ಯಕೀಯ ಕಾಲೇಜಿನ ಪ್ರಾರಂಭವು ಕೇವಲ ಶೈಕ್ಷಣಿಕ ಮೈಲಿಗಲ್ಲು ಮಾತ್ರವಲ್ಲ. ಇದು ಮಾರಿಷಸ್‌ನಲ್ಲಿ ಆರೋಗ್ಯ ರಕ್ಷಣೆಯ ಶ್ರೇಷ್ಠತೆ ಮತ್ತು ಮಾನವ ಸಂಪನ್ಮೂಲದ ಅಭಿವೃದ್ಧಿಗೆ ಬಲವಾದ ಅಡಿಪಾಯ ಹಾಕುತ್ತದೆ ಎಂದು ಹೇಳಿದರು.

ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರು ಆರೋಗ್ಯ, ಶಿಕ್ಷಣವು ಜ್ಞಾನ, ಚಾರಿತ್ರ್ಯ, ಕರುಣೆ ಮತ್ತು ಸೇವೆಯ ಗುಣಗಳನ್ನು ಬೆಳೆಸಬೇಕಾದ ಪವಿತ್ರ ಜವಾಬ್ದಾರಿಯನ್ನು ಹೊಂದಿರುತ್ತದೆ. ಭಾರತ–ಮಾರಿಷಸ್ ಸಂಬಂಧಗಳನ್ನು ಬಲಪಡಿಸಲು ಮಾರಿಷಸ್‌ನಲ್ಲಿ ಭಾರತದ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿಯವರ ದೃಷ್ಟಿಕೋನದಿಂದ ಪ್ರೇರಿತರಾಗಿ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಯ ಪ್ರಯಾಣವು 2002ರಲ್ಲಿ ಪ್ರಾರಂಭಿಸಲಾಯಿತು. ಈಗ ವೈದ್ಯಕೀಯ ಶಾಲೆ ಪ್ರಾರಂಭವಾಗುತ್ತಿರುವುದು ಎರಡೂ ದೇಶಗಳ ಬಾಂಧವ್ಯವನ್ನು ಮತ್ತಷ್ಟು ಗಟ್ಟಿಗೊಳಿಸಿದೆ ಎಂದು ತಿಳಿಸಿದರು.



ಮಾರಿಷಸ್‌ನಲ್ಲಿ ಸ್ಥಾಪಿಸಲಾಗಿರುವ ಜೆಎಸ್‌ಎಸ್ ಸ್ಕೂಲ್ ಆಫ್ ಮೆಡಿಸಿನ್ ಅನ್ನು ಮಾರಿಷಸ್ ಗಣರಾಜ್ಯದ ಅಧ್ಯಕ್ಷ ಧರ್ಮಬೀರ್ ಗೋಖೂಲ್ ಉದ್ಘಾಟಿಸಿದರು. ಈ ವೇಳೆ ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಆರೋಗ್ಯ ಸಚಿವ ಅನಿಲ್‌ಕುಮಾರ್ ಬಚೂ, ಡಾ.ಕವಿರಾಜ್ ಶರ್ಮಾ ಇನ್ನಿತರರು ಉಪಸ್ಥಿತರಿದ್ದರು.

ಆರೋಗ್ಯ ಸಚಿವ ಅನಿಲ್‌ಕುಮಾರ್ ಬಚೂ ಅವರು ಜೆಎಸ್‌ಎಸ್ ಸಂಸ್ಥೆಯು ಮಾರಿಷಸ್‌ನಲ್ಲಿ ಎಂಬಿಬಿಎಸ್ ಕೋರ್ಸ್ ಆರಂಭಿಸಿರುವುದು ಭವಿಷ್ಯದಲ್ಲಿ ದೇಶದ ಆರೋಗ್ಯ ಕ್ಷೇತ್ರಕ್ಕೆ ಹೆಚ್ಚು ಸಹಕಾರಿಯಾಗಲಿದೆ. ವಿಶೇಷವಾಗಿ ಸಾಂಕ್ರಾಮಿಕವಲ್ಲದ ರೋಗಗಳು ಮತ್ತು ಮುಂಬರುವ ಆರೋಗ್ಯದ ಸವಾಲುಗಳನ್ನು ಪರಿಹರಿಸುವಲ್ಲಿ ಹೆಚ್ಚಿನ ಅನುಕೂಲವಾಗಲಿದೆ ಎಂದರು.

ಶಿಕ್ಷಣ, ವಿಜ್ಞಾನ ಮತ್ತು ಸಂಶೋಧನಾ ಸಚಿವ ಡಾ.ಕವಿರಾಜ್ ಶರ್ಮಾ ಸುಕೋನ್, ಈಗ ಆರಂಭಿಸಿರುವ ಕೋರ್ಸ್ ಅಂತಾರಾಷ್ಟ್ರೀಯ ಶಿಕ್ಷಣ ಕೇಂದ್ರವಾಗಿರುವ ಮಾರಿಷಸ್‌ನ ದೃಷ್ಟಿಕೋನಕ್ಕೆ ಹೊಂದಿಕೆಯಾಗುತ್ತದೆ. ಜೆಎಸ್‌ಎಸ್ ಎಹೆಚ್ ಇಆರ್ ಗುಣಮಟ್ಟದ ಶಿಕ್ಷಣ ಮತ್ತು ಸಂಶೋಧನೆಗಳನ್ನು ಹೊಂದಿರುವ ಅಂತಾರಾಷ್ಟ್ರೀಯ ಮಾನದಂಡವನ್ನು ಹೊಂದಿರುವ ಸಂಸ್ಥೆಯಾಗಿದೆ ಎಂದು ಶ್ಲಾಘಿಸಿದರು.

ಮಾರಿಷಸ್‌ನ ಭಾರತದ ಹೈಕಮಿಷನರ್ ಅನುರಾಗ್ ಶ್ರೀವಾಸ್ತವ, ಮಾರಿಷಸ್ ದೇಶದಲ್ಲಿ ಜೆಎಸ್‌ಎಸ್ ಸಂಸ್ಥೆಯ ವೈದ್ಯಕೀಯ ಕಾಲೇಜಿನ ಸ್ಥಾಪನೆಯು ಎರಡೂ ದೇಶಗಳ ನಡುವೆ ಆಳವಾಗಿ ಬೇರೂರಿರುವ ಸಂಬಂಧವನ್ನು ಮತ್ತಷ್ಟು ಬಲಪಡಿಸುತ್ತದೆ. ಪ್ರಾದೇಶಿಕ ಶಿಕ್ಷಣ ಕೇಂದ್ರವಾಗಿ ಮಾರಿಷಸ್ ದೇಶವು ಹೊರಹೊಮ್ಮುತ್ತಿದೆ. ಶೈಕ್ಷಣಿಕ ಸಹಯೋಗ ಭಾರತದ ಹೈಕಮಿಷನ್‌ನ ನಿರಂತರ ಬೆಂಬಲ ನೀಡುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜೆಎಸ್‌ಎಸ್ ಎಹೆಚ್‌ಇಆರ್ ಮಾರಿಷಸ್ ವಿಷನ್ 203 ಸಂಚಿಕೆ ಬಿಡುಗೊಳಿಸಲಾಯಿತು. ಡಾ.ಸಿ.ಜಿ.ಬೆಟಸೂರಮಠ, ಡಾ.ಬಿ. ಸುರೇಶ್ ಮಾತನಾಡಿದರು.

ಬೃಂದಾ ಗೋಖೂಲ್, ಎಸ್.ಪಿ. ಮಂಜುನಾಥ್ ಉಪಸ್ಥಿತರಿದ್ದರು. ಮಾರಿಷಸ್ ಜೆಎಸ್‌ಎಸ್ ಎಹೆಚ್‌ಇಆರ್‌ನ ಕುಲಪತಿ ಡಾ.ಪ್ರವೀಣ್ ಮೊಹದೇಬ್ ಸ್ವಾಗತಿಸಿದರು. ಕುಲಸಚಿವ ಕೆ.ಪಿ.ನವೀನ್ ವಂದಿಸಿದರು. ಪ್ರಿಯಾ ಬನ್ಸಿ ನಿರೂಪಿಸಿದರು.

ನಿವೃತ್ತ ದಿನಗೂಲಿ ನೌಕರರಿಗೆ ಪಿಂಚಣಿ ಕಲ್ಪಿಸುವಂತೆ ಆಗ್ರಹ

ಮೈಸೂರು,ಫೆ.9(ಎಂಟಿವೈ)– ವಿವಿಧ ಇಲಾಖೆಗಳಲ್ಲಿ 30–40 ವರ್ಷ ಸೇವೆ ಸಲ್ಲಿಸಿ ನಿವೃತ್ತಿಯಾದ ಕ್ಷೇಮಾಭಿವೃದ್ಧಿ ದಿನಗೂಲಿ ನೌಕರರಿಗೆ ರಾಜ್ಯ ಸರ್ಕಾರ ಪಿಂಚಣಿ ಸೌಲಭ್ಯ ಒದಗಿಸುವಂತೆ ಕ್ಷೇಮಾಭಿವೃದ್ಧಿ ನಿವೃತ್ತ ದಿನಗೂಲಿ ನೌಕರರ ಸಂಘದ ರಾಜ್ಯಾಧ್ಯಕ್ಷ ಅಬ್ದುಲ್ ಕರೀಂ ಒತ್ತಾಯಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರದ ಅರಣ್ಯ ಇಲಾಖೆ, ರೇಷ್ಮೆ ಇಲಾಖೆ, ಕಂದಾಯ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳಲ್ಲಿ ದಿನಗೂಲಿ ನೌಕರರಾಗಿ 3–4 ದಶಕ ಸೇವೆ ಸಲ್ಲಿಸಿ ನಿವೃತ್ತಿಯಾಗಿರುವ ದಿನಗೂಲಿ ನೌಕರರು ಸಂಕಷ್ಟದ ಪರಿಸ್ಥಿತಿಯಲ್ಲಿ ದಿನ ದೂಡುವಂತಾಗಿದೆ. ಈ ದಿನಗೂಲಿ ನೌಕರರನ್ನು 2012ರಲ್ಲಿ ಕ್ಷೇಮಾಭಿವೃದ್ಧಿ ದಿನಗೂಲಿ ನೌಕರರೆಂದು ಪರಿಗಣಿಸಲಾಯಿತು. ಆದರೆ ನಿವೃತ್ತಿಯಾದ ದಿನಗೂಲಿ ನೌಕರರಿಗೆ ನ್ಯಾಯಯುತ ಸೌಲಭ್ಯ ಒದಗಿಸದೇ ಇರುವುದರಿಂದ ನಿವೃತ್ತಿ ಜೀವನದಲ್ಲಿ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಕಿಡಿಕಾರಿದರು.

ವಿವಿಧ ಇಲಾಖೆಯಲ್ಲಿ ಕಡಿಮೆ ವೇತನಕ್ಕೆ ನಿಸ್ವಾರ್ಥ ಸೇವೆ ಸಲ್ಲಿಸಿರುವ ಕ್ಷೇಮಾಭಿವೃದ್ಧಿ ದಿನಗೂಲಿ ನೌಕರರು ನಿವೃತ್ತಿಯಾದಾಗ ಅಲ್ಪಮೊತ್ತದ ಹಣ ನೀಡಿ ಕೈ ತೊಳೆದುಕೊಳ್ಳಲಾಗಿದೆ. ಆದರೆ, ನಿವೃತ್ತಿಯಾದ ನೌಕರರ ಬದುಕು ಸಂಕಷ್ಟಕ್ಕೆ ಸಿಲುಕಿದೆ. ಇಲಾಖೆಯಲ್ಲಿ ಸೇವೆ ಸಲ್ಲಿಸಿದವರು ಇದೀಗ ಆರೋಗ್ಯ ಕಾಪಾಡಿಕೊಳ್ಳುವುದಕ್ಕೂ ಕಷ್ಟದ ಪರಿಸ್ಥಿತಿ ಎದುರಾಗಿದೆ. ರಾಜ್ಯದಲ್ಲಿ ಸುಮಾರು 6 ಸಾವಿರ ಕ್ಷೇಮಾಭಿವೃದ್ಧಿ ನಿವೃತ್ತ ದಿನಗೂಲಿ ನೌಕರರಿದ್ದಾರೆ. ರಾಜ್ಯ ಸರ್ಕಾರ ಈ ನೌಕರರಿಗೆ ಪಿಂಚಣಿ ನೀಡುವ ವ್ಯವಸ್ಥೆ ಆರಂಭಿಸಬೇಕು. ಬೇರೆ ಬೇರೆ ಯೋಜನೆಗೆ ಖರ್ಚು ಮಾಡುವ ಸರ್ಕಾರ ನಿವೃತ್ತ ನೌಕರರಿಗೆ ಕನಿಷ್ಠ ಪಿಂಚಣಿ ವ್ಯವಸ್ಥೆ ಜಾರಿಗೊಳಿಸಿದರೆ, ವೃದ್ಧಾಪ್ಯದಲ್ಲಿರುವ ನಿವೃತ್ತ ದಿನಗೂಲಿ ನೌಕರರಿಗೆ ನೆರವಾಗುತ್ತದೆ ಎಂದರು.

ನಿವೃತ್ತ ನೌಕರರ ಸಂಘದ ಕಾರ್ಯದರ್ಶಿ ಪಿ.ಆರ್.ವಾಲಿ ಮಾತನಾಡಿ, ಪಿಂಚಣಿ ಸೌಲಭ್ಯ ಒದಗಿಸುವಂತೆ ಈಗಾಗಲೇ 5–6 ಬಾರಿ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ. ಇದುವರೆಗೂ ಸರ್ಕಾರ ಯಾವುದೇ ಕ್ರಮ ಕೈಗೊಂಡಿಲ್ಲ. ನಿವೃತ್ತ ನೌಕರರಲ್ಲಿ ಅನೇಕರು ವಿವಿಧ ಆರೋಗ್ಯ ಸಮಸ್ಯೆಗೆ ತುತ್ತಾಗಿ ಪರದಾಡುತ್ತಿದ್ದಾರೆ. ಕುಟುಂಬದ ಸದಸ್ಯರ ಮೇಲೆ ಅವಲಂಬಿಸಬೇಕಾದ ಅನಿವಾರ್ಯತೆ ಇದೆ. ಈ ಹಿನ್ನೆಲೆಯಲ್ಲಿ ಕ್ಷೇಮಾಭಿವೃದ್ಧಿ ನಿವೃತ್ತ ದಿನಗೂಲಿ ನೌಕರರಿಗೆ ಪಿಂಚಣಿ ನೀಡುವುದರಿಂದ ಸರ್ಕಾರದ ಮೇಲೆ ದೊಡ್ಡ ಮಟ್ಟದ ಹೊರೆಯಾಗುವುದಿಲ್ಲ. ಈ ಹಿನ್ನೆಲೆಯಲ್ಲಿ ಪಿಂಚಣಿ ನೀಡಬೇಕೆಂಬ ನಮ್ಮ ಬೇಡಿಕೆಯನ್ನು ಸರ್ಕಾರ ಪುರಸ್ಕರಿಸಬೇಕು ಎಂದು ಮನವಿ ಮಾಡಿದರು.

ಕ್ಷೇಮಾಭಿವೃದ್ಧಿ ದಿನಗೂಲಿ ನೌಕರರ ಸಂಘದ ಸಂಚಾಲಕ ರುದ್ರಪ್ಪ ಮಾತನಾಡಿ, ಕ್ಷೇಮಾಭಿವೃದ್ಧಿ ದಿನಗೂಲಿ ನೌಕರರಾಗಿ ಅರಣ್ಯ ಇಲಾಖೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತಿಯಾಗಿರುವ ಹಲವರ ಸ್ಥಿತಿ ಚಿಂತಾಜನಕವಾಗಿದೆ. ಆನೆ, ಹುಲಿ, ಚಿರತೆ ದಾಳಿಯಿಂದ ಒಳಗಾಗಿ ನಿವೃತ್ತಿಯಾಗಿರುವವರ ಸ್ಥಿತಿ ಹೇಳತೀರದಂತಿದೆ. ನಿವೃತ್ತಿ ವೇಳೆ ಯಾವುದೇ ಸೌಲಭ್ಯ ಸಿಗದ ಹಿನ್ನೆಲೆಯಲ್ಲಿ ಸಮಸ್ಯೆ ಉಲ್ಬಣಗೊಂಡಿದೆ. ಇದು ಕೇವಲ ಅರಣ್ಯ ಇಲಾಖೆ ನಿವೃತ್ತ ನೌಕರರು ಮಾತ್ರವಲ್ಲದೆ, ಎಲ್ಲಾ ಇಲಾಖೆಗಳಲ್ಲಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿರುವ ಕ್ಷೇಮಾಭಿವೃದ್ಧಿ ನೌಕರರ ಸಮಸ್ಯೆಯೂ ಆಗಿದೆ. ಈ ಹಿನ್ನೆಲೆಯಲ್ಲಿ ಇಳಿವಯಸ್ಸಿನಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಪಿಂಚಣಿ ವ್ಯವಸ್ಥೆಗಾಗಿ ಹೋರಾಟ ಮಾಡಬೇಕಾದ ಅನಿವಾರ್ಯತೆ ನಿರ್ಮಾಣವಾಗಿದೆ. ತಮ್ಮ ಹಕ್ಕುಗಳಿಗಾಗಿ ಹೋರಾಟ ಆರಂಭಿಸಲು ಉದ್ದೇಶಿಸಲಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಕ್ಷೇಮಾಭಿವೃದ್ಧಿ ನಿವೃತ್ತ ನೌಕರರ ಸಂಘದ ಪದಾಧಿಕಾರಿ ರಾಜೇಶ್ ಸೇರಿದಂತೆ ಇನ್ನಿತರರು ಇದ್ದರು.

ಐಟಿ ಇಲಾಖೆಯಿಂದ ರಾಯ್‌ಗೆ ಕಿರುಕುಳ ಇರಲಿಲ್ಲ: ಕಾನ್ಫಿಡೆಂಟ್ ಸಿಇಒ ಟಿ.ಎ.ಜೋಸೆಫ್



ತಿರುವನಂತಪುರ: ಕಾನ್ಫಿಡೆಂಟ್ ಗ್ರೂಪ್ ಮುಖ್ಯಸ್ಥ ಸಿ.ಜೆ.ರಾಯ್ ಅವರು ಆದಾಯ ತೆರಿಗೆ (ಐಟಿ) ಇಲಾಖೆ ಅಧಿಕಾರಿಗಳಿಂದ ಕಿರುಕುಳ ಎದುರಿಸುತ್ತಿರಲಿಲ್ಲ ಎಂದು ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಟಿ.ಎ.ಜೋಸೆಫ್ ಹೇಳಿದ್ದಾರೆ.

ಕೊಚ್ಚಿಯಲ್ಲಿ ಸುದ್ದಿಗಾರರೊಂದಿಗೆ ಸೋಮವಾರ ಮಾತನಾಡಿದ ಅವರು, ರಾಯ್ ಅವರಿಗೆ ಐಟಿ ಅಧಿಕಾರಿಗಳಿಂದ ಒತ್ತಡವಿತ್ತು ಎಂದು ಅವರ ಸಹೋದರ ಸಿ.ಜೆ.ಬಾಬು ಹೇಳಿದ್ದಾರೆ. ರಾಯ್ ಅವರ ನಿಧನದ ನಂತರ ಆಘಾತಕ್ಕೆ ಒಳಗಾಗಿ ಅವರು ಹೀಗೆ ಹೇಳಿರಬಹುದು. ಸತ್ಯ ಗೊತ್ತಿಲ್ಲದೆ ಯಾವುದೇ ಹೇಳಿಕೆ ನೀಡದಂತೆ ಅವರಿಗೆ ತಿಳಿಸಿದ್ದೇನೆ ಎಂದು ಹೇಳಿದರು. ರಾಯ್ ಅವರ ನಿಧನಕ್ಕೆ ಸಂಬಂಧಿಸಿದಂತೆ ಯಾವುದೇ ಹೇಳಿಕೆ ನೀಡದಂತೆ ಪ್ರಕರಣದ ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ತಂಡವು ಸೂಚನೆ ನೀಡಿದೆ ಎಂದೂ ತಿಳಿಸಿದರು.

ಆದಾಯ ತೆರಿಗೆ ಇಲಾಖೆಯು ಶೋಧ ನಡೆಸುವುದು ಸಾಮಾನ್ಯ ಸಂಗತಿ. ಇದಕ್ಕೂ ಮುನ್ನವೂ ನಮ್ಮ ಸಂಸ್ಥೆಯ ಮೇಲೆ ದಾಳಿ ನಡೆದಿತ್ತು. ಕೊಚ್ಚಿ ಕಚೇರಿಯಲ್ಲಿ ಇತ್ತೀಚೆಗೆ ಶೋಧ ನಡೆದಿತ್ತು. ಅಧಿಕಾರಿಗಳು ಗೌರವಯುತವಾಗಿಯೇ ನಡೆದುಕೊಂಡಿದ್ದರು. ಬೆಂಗಳೂರಿನ ಕಚೇರಿ ಮೇಲೆ ದಾಳಿ ನಡೆದಾಗಲೂ ಅವರು ಯಾವುದೇ ತೊಂದರೆ ನೀಡಿಲ್ಲ ಎಂಬ ಬಗ್ಗೆ ನನಗೆ ವಿಶ್ವಾಸವಿದೆ ಎಂದರು.

ಫೆ.12ರಂದು ವಿವಿಧೆಡೆ ವಿದ್ಯುತ್ ವ್ಯತ್ಯಯ



ಮೈಸೂರು,ಫೆ.9– ಜ್ಯೋತಿನಗರ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ಫೆ.12 ರಂದು ನಿರ್ವಹಣಾ ಕಾಮಗಾರಿ ಕೆಲಸದ ನಿಮಿತ್ತ ಬೆಳಿಗ್ಗೆ 10 ರಿಂದ ಸಂಜೆ 5.30 ಘಂಟೆಯವರೆಗೆ ಗಾಯತ್ರಿಪುರಂ, ಚಾಮುಂಡಿ ವಿಹಾರ ಬಡಾವಣೆ, ಗೋಪಾಲಗೌಡ ಆಸ್ಪತ್ರೆ, ಜಲಪುರಿ, ವಿದ್ಯಾಶಂಕರ ಬಡಾವಣೆ, ಯರಗನಹಳ್ಳಿ, ರಾಜ್‌ಕುಮಾರ್ ರಸ್ತೆ, ರಾಘವೇಂದ್ರನಗರ, ರಾಜೀವ್‌ನಗರ, ಶಕ್ತಿನಗರ, ಕೆ.ಎಂ.ಎಫ್, ಜಿಲ್ಲಾಧಿಕಾರಿಗಳ ಕಚೇರಿ, ಪಿ.ಎಫ್ ಆಫೀಸ್, ಗೌಸಿಯಾನಗರ, ಕ್ಯಾತಮಾರನಹಳ್ಳಿ, ರೇಣುಕಾದೇವಿ ಬ್ಲಾಕ್, ಟೆರಿಷಿಯನ್ ಕಾಲೇಜು, ಟೀಚರ್ಸ್ ಬಡಾವಣೆ, ಉದಯಗಿರಿ, ಸತ್ಯನಗರ, ಎ.ಟಿ ಬ್ಲಾಕ್, ಮಹದೇವಪುರ ರಸ್ತೆ, ಕ್ಯೂಬಾ ಮಸೀದಿ, ಟೀಚರ್ಸ್ ಕಾಲೋನಿ ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳು.

ಬನ್ನಿಮಂಟಪ ವಿದ್ಯುತ್ ವಿತರಣಾ ವ್ಯಾಪ್ತಿಯ ಎಸ್.ಎಸ್ ನಗರ, ಕಾವೇರಿ ನಗರ, ಸಿದ್ದಿಖಿನಗರ, ಬನ್ನಿಮಂಟಪ 'ಬಿ' ಬಡಾವಣೆ, ಹೈವೇ ವೃತ್ತ, ಮೇದರ್ ಬ್ಲಾಕ್, ಹನುಮಂತನಗರ, ಅಲೀಮ್‌ನಗರ, ಬಾಲ ಭವನ, ಜೆ.ಎಸ್.ಎಸ್ ದಂತ ವೈದ್ಯಕೀಯ ಕಾಲೇಜು, ಸಿದ್ದಲಿಂಗಪುರ, ಕಳಸ್ತವಾಡಿ, ಶ್ಯಾದನಹಳ್ಳಿ, ನಾಗನಹಳ್ಳಿ ಹಾಗೂ ಸುತ್ತಮುತ್ತ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಸೆಸ್ಕ್ ಪ್ರಕಟಣೆ ತಿಳಿಸಿದೆ.

ಎಫ್ ಎಂ 100.6 ಅನ್ನು ಆಲಿಸುತ್ತಿರುವ ವಿದ್ಯಾರ್ಥಿನಿಯರು



ಮೈಸೂರಿನ ಕುವೆಂಪು ನಗರದ 'ಎನ್' ಬ್ಲಾಕ್‌ನ ಹೋರಿ ಸುಬ್ಬೇಗೌಡ ಬೂಕನಕೆರೆ ಸ್ಮಾರಕ ಬಸ್ ನಿಲ್ದಾಣದಲ್ಲಿ ಅಳವಡಿಸಿರುವ ಎಫ್ ಎಂ 100.6 ಅನ್ನು ಬಸ್ ಬರುವ ನಿರೀಕ್ಷೆ ನಡುವೆ ಆಕಾಶವಾಣಿಯ ಕಾರ್ಯಕ್ರಮವನ್ನು ಆಸಕ್ತಿಯಿಂದ ಆಲಿಸುತ್ತಿರುವ ವಿದ್ಯಾರ್ಥಿನಿಯರು.

ಹನುಮಾನ್ ಚಾಲಿಸ್ ಪಾರಾಯಣದಲ್ಲಿ ಯುವ ಸಮೂಹ ಪಾಲ್ಗೊಳ್ಳಿ: ನಟ ವಸಿಷ್ಠ ಸಿಂಹ

ಮೈಸೂರು: ಅವಧೂತ ದತ್ತಪೀಠದ ಗಣಪತಿ ಸಚ್ಚಿದಾನಂದ ಸ್ವಾಮೀಜಿ ನೇತೃತ್ವದಲ್ಲಿ ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಫೆ.14ರಂದು ನಡೆಯುತ್ತಿರುವ ಶ್ರೀ ಹನುಮಾನ್ ಚಾಲಿಸ್ ಪಾರಾಯಣ ಮಹಾಯಜ್ಞದಲ್ಲಿ ಮೈಸೂರಿನ ಯುವ ಸಮೂಹ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಎಂದು ಕರೆ ನೀಡಿದರು.

ಖಾಸಗಿ ಕಾರ್ಯಕ್ರಮ ನಿಮಿತ್ತ ಮೈಸೂರಿಗೆ ಆಗಮಿಸಿದ್ದ ನಟ ವಸಿಷ್ಠ ಸಿಂಹ ಅವರನ್ನ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಭಕ್ತ ಸಮೂಹ ಹನುಮಾನ್ ಚಾಲೀಸ ಕಾರ್ಯಕ್ರಮಕ್ಕೆ ಆಹ್ವಾನಿಸಿದರು. ಇದೇ ಸಂದರ್ಭದಲ್ಲಿ ನಟ ವಸಿಷ್ಠ ಸಿಂಹ ಅವರು ಮಾತನಾಡಿ, ಅವಧೂತ ಗಣಪತಿ ಸಚ್ಚಿದಾನಂದ ಸ್ವಾಮೀಜಿಯವರ ಶಕ್ತಿ ಅಪಾರವಾದುದು, ಮೈಸೂರಿನ ಧಾರ್ಮಿಕ, ಆಧ್ಯಾತ್ಮಿಕ ಶಕ್ತಿಯನ್ನು ವಿಶ್ವದೆಲ್ಲೆಡೆ ವ್ಯಾಪಕವಾಗಿ ಪಸರಿಸಿದ್ದಾರೆ.



ನಟ ವಸಿಷ್ಠ ಸಿಂಹಗೆ ಹನುಮಾನ್ ಚಾಲಿಸ್ ಕಾರ್ಯಕ್ರಮಕ್ಕೆ ಆಹ್ವಾನ ನೀಡಲಾಯಿತು.

ನಾನು ಸಹ ಚಿಕ್ಕವಯಸ್ಸಿನಿಂದಲೂ ಗಣಪತಿ ಸಚ್ಚಿದಾನಂದ ಸ್ವಾಮೀಜಿಯವರ ಭಕ್ತನಾಗಿ ಶೈಕ್ಷಣಿಕ ದಿನಗಳಿಂದಲೂ ಸಹ ಕಾರ್ಯಸಿದ್ಧಿ ಆಂಜನೇಯನ ಬಳಿ ಕಾಯಿಯನ್ನ ಕಟ್ಟಿ ಸಂಕಲ್ಪ ಮಾಡಿ ಏಕಾಗ್ರತೆ ಸಿದ್ಧಿಸಿಕೊಂಡಿದ್ದೇನೆ. ತಪಸ್ಸು ಧ್ಯಾನ ಪ್ರಾರ್ಥನೆಯಿಂದ ಮನುಷ್ಯನ ಆರೋಗ್ಯ ಆಯಸ್ಸು ವೃದ್ಧಿಸುತ್ತದೆ. ಅಂದು ಲಕ್ಷಾಂತರ ಮಂದಿಯಿಂದ ನಡೆಯುವ ಶ್ರೀ ಹನುಮಾನ್ ಚಾಲೀಸ ಪಾರಾಯಣ ಮೈಸೂರಿನೆಲ್ಲೆಡೆ ಆಧ್ಯಾತ್ಮಿಕ ಶಕ್ತಿ ಸಂಚರಿಸಲಿದೆ ಯುವ ಸಮೂಹ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಎಂದು ಕರೆ ನೀಡಿದರು.

ಇದೇ ಸಂದರ್ಭದಲ್ಲಿ ನಟ ವಸಿಷ್ಠ ಸಿಂಹ, ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷ ವಿಕ್ರಂ ಅಯ್ಯಂಗಾರ್, ಆಧ್ಯಾತ್ಮಿಕ ವಿಶ್ಲೇಷಕ ವಿಕಾಸ್ ಶಾಸ್ತ್ರಿ, ನಿರೂಪಕ ಅಜಯ್ ಶಾಸ್ತ್ರಿ, ಭೈರತ್ತಿ ಲಿಂಗರಾಜು, ಅಮಿತ್, ಸಚ್ಚಿನ್, ಕುಮಾರ್, ಇನ್ನಿತರರು ಉಪಸ್ಥಿತರಿದ್ದರು.

ದೇಶ - ವಿದೇಶ

ಮೆಟ್ರೊದಲ್ಲಿ ನಿಲ್ದಾಣದಲ್ಲೇ ನಿಶ್ಚಿತಾರ್ಥ ಮಾಡಿದ ತಾಯಿ

ನವದೆಹಲಿ: ದೆಹಲಿಯ ಮೆಟ್ರೋ ನಿಲ್ದಾಣದಲ್ಲಿ ಗೆಳತಿ ಜೊತೆಗೆ ಸಿಕ್ಕಿಬಿದ್ದ ಪುತ್ರನಿಗೆ ಆತನ ತಾಯಿ ನಿಲ್ದಾಣದಲ್ಲಿಯೇ ನಿಶ್ಚಿತಾರ್ಥ ಮಾಡಿರುವ ವೀಡಿಯೋವೊಂದು ಸಾಮಾಜಿಕ ಜಾಲ ತಾಣಗಳಲ್ಲಿ ವೈರಲ್ ಆಗಿದೆ. ವೈರಲ್ ಆಗಿರುವ ವೀಡಿಯೋದಲ್ಲಿ ಮೆಟ್ರೊ ನಿಲ್ದಾಣವೊಂದರಲ್ಲಿ ಗೆಳತಿ ಜೊತೆಗೆ ಪುತ್ರ ಕುಳಿತಿರುವುದನ್ನು ನೋಡಿದ ಯುವಕನ ತಾಯಿ, ಕೆಲ ಕ್ಷಣ ಆತನೊಂದಿಗೆ ದಬಾಯಿಸಿರುವುದು ಕಂಡು ಬಂದಿದೆ. ಬಳಿಕ ಕೂಡಲೇ ತಾವು ತಂದಿದ್ದ ಹೂ–ಹಣ್ಣು ಸಿಹಿ ಮುಂತಾದವುಗಳನ್ನು ಯುವತಿಗೆ ಕೊಟ್ಟು ನಿಶ್ಚಿತಾರ್ಥ ಮಾಡಿಸಿದ್ದಾರೆ.

ಈ ವೇಳೆ ಯುವಕ ಗೊಣಗುತ್ತಾ ಅಮ್ಮಾ ಏನಮ್ಮಾ ಇದು ಎಂದು ಕೇಳಿದ್ದು, ನೀನು ಸುಮ್ಮನಿರು, ನೀವು ಫೋಟೊ ವಿಡಿಯೊ ತೆಗೆಯಿರಿ ಸರಿಯಾಗಿ ಎಂದು ಮತ್ತೊಬ್ಬ ವ್ಯಕ್ತಿಗೆ ಹೇಳಿದ್ದಾರೆ. ಬಳಿಕ ಯುವಕ–ಯುವತಿ ಮಹಿಳೆಯ ಕಾಲಿಗೆ ನಮಸ್ಕಾರ ಮಾಡಿ ಕೈ ಮುಗಿದು, ಆಶೀರ್ವಾದ ಪಡೆದಿರುವುದು ವೀಡಿಯೋದಲ್ಲಿ ಕಂಡು ಬಂದಿದೆ ಈ ಘಟನೆ ದೆಹಲಿ ಮೆಟ್ರೊ ನಿಲ್ದಾಣದಲ್ಲಿ ನಡೆದಿದೆ ಎಂದು ಹೇಳಲಾಗುತ್ತಿದದು, ಯಾವಾಗ ನಡೆದಿದೆ ಎಂಬುದು ಸ್ಪಷ್ಟವಾಗಿ ತಿಳಿದುಬಂದಿಲ್ಲ. ಈ ವೀಡಿಯೋ ಇದೀಗ ಸಾಮಾಜಿಕ ತಾಣಗಳಲ್ಲಿ ವೈರಲ್ ಆಗಿದೆ ದೆಹಲಿ ಮೆಟ್ರೊ ಅಧಿಕಾರಿಗಳು ಪ್ರತಿಕ್ರಿಯಿಸಿ, ಮೆಟ್ರೋದಲ್ಲಿ ಪ್ರಯಾಣಿಕರಿಗೆ ಅಸೌಕರ್ಯ ಉಂಟುಮಾಡುವ ಯಾವುದೇ ಚಟುವಟಿಕೆಗಳಿಗೆ ಅವಕಾಶ ಇಲ್ಲ. ಸಾರ್ವಜನಿಕ ಸ್ಥಳಗಳಲ್ಲಿ ಶಿಸ್ತು ಕಾಪಾಡುವುದು ಅಗತ್ಯ ಎಂದು ಹೇಳಿದ್ದಾರೆ.

ಭಾರತ vs ಪಾಕಿಸ್ತಾನ ಪಂದ್ಯಕ್ಕೆ ಗ್ರೀನ್ ಸಿಗ್ನಲ್!

ಇಸ್ಲಾಮಾಬಾದ್: ಟಿ20 ವಿಶ್ವಕಪ್ 2026 ಟೂರ್ನಿಗೆ ಸಂಬಂಧಿಸಿದಂತೆ ಭಾರತ ಮತ್ತು ಪಾಕಿಸ್ತಾನ ನಡುವೆ ವಿವಾದ ಜೋರಾಗಿತ್ತು. ಭಾರತ ವಿರುದ್ಧ ಆಡುವುದಿಲ್ಲ ಎಂದು ಪಾಕಿಸ್ತಾನ ಪಟ್ಟು ಹಿಡಿದಿತ್ತು. ಪಾಕಿಸ್ತಾನ ಕ್ರಿಕೆಟ್ ಬೋರ್ಡ್ ನಮ್ಮ ಸರ್ಕಾರ ನಿರ್ಧಾರಕ್ಕೆ ನಾವು ಬದ್ಧವಾಗಿದ್ದೇವೆ ಎಂದು ಹೇಳಿತ್ತು. ಐಸಿಸಿ ಕೂಡ ಎಲ್ಲಾ ರೀತಿಯಲ್ಲೂ ಪಾಕಿಸ್ತಾನ ಮನವೊಳಿಸಲು ಪ್ರಯತ್ನಿಸಿತು. ಇದೀಗ ಐಸಿಸಿ ಪ್ರಯತ್ನಕ್ಕೆ ಗೆಲುವು ಸಿಕ್ಕಿದೆ.

ಬಹುನಿರೀಕ್ಷೆಯಿಂದ ಕಾಯುತ್ತಿದ್ದ ಕ್ರಿಕೆಟ್ ಅಭಿಮಾನಿಗಳಿಗೆ ಕೂಡ ಭರ್ಜರಿ ಗುಡ್ ನ್ಯೂಸ್ ಸಿಕ್ಕಿದೆ. ಟಿ20 ವಿಶ್ವಕಪ್ 2026 ರಲ್ಲಿ ಫೆಬ್ರವರಿ 15 ರಂದು ನಿಗದಿಯಂತೆ ಭಾರತ ಮತ್ತು ಪಾಕಿಸ್ತಾನ ನಡುವಿನ ಹೈವೋಲ್ಟೇಜ್ ಪಂದ್ಯ ನಡೆಯಲಿದೆ.

ಆರಂಭದಲ್ಲಿ ಬಾಂಗ್ಲಾದೇಶವನ್ನು ಬೆಂಬಲಿಸಿದ ಪಾಕಿಸ್ತಾನವು ಟಿ20 ವಿಶ್ವಕಪ್‌ನಲ್ಲಿ ಭಾರತದ ವಿರುದ್ಧ ಆಡಲು ನಿರಾಕರಿಸಿತ್ತು. ಈ ಪಂದ್ಯ ನಡೆಯದಿದ್ದರೆ, ಐಸಿಸಿ ಭಾರಿ ನಷ್ಟ ಅನುಭವಿಸುತ್ತಿತ್ತು. ಪಿಸಿಬಿ ಜೊತೆ ಮಾತನಾಡಲು ಐಸಿಸಿ ತನ್ನ ಅಧಿಕಾರಿಗಳನ್ನು ಪಾಕಿಸ್ತಾನಕ್ಕೆ ಕಳುಹಿಸಿತು. ಬಾಂಗ್ಲಾದೇಶ ಕ್ರಿಕೆಟ್ ಮಂಡಳಿಯ ಅಧ್ಯಕ್ಷ ಅಮೀನುಲ್ ಇಸ್ಲಾಂ ಕೂಡ ಆ ಸಭೆಯಲ್ಲಿ ಭಾಗವಹಿಸಿದ್ದರು. ಈಗ ಕೊನೆಗೂ ಭಾರತ ವಿರುದ್ಧ ಆಡಲು ಪಾಕಿಸ್ತಾನ ಒಪ್ಪಿಕೊಂಡಿದೆ.

ಯುವತಿಗೆ ಗುಂಡು ಹಾರಿಸಿ ಕೊಂದು, ತಾನೂ ಆತ್ಮಹತ್ಯೆಗೆ ಶರಣಾದ ವಿದ್ಯಾರ್ಥಿ



ಚಂಡೀಗಢ: ಕಾನೂನು ವಿದ್ಯಾರ್ಥಿಯೊಬ್ಬ ಕ್ಲಾಸ್ ರೂಮ್‌ನಲ್ಲೇ ವಿದ್ಯಾರ್ಥಿನಿಯ ತಲೆಗೆ ಗುಂಡು ಹಾರಿಸಿ ಹತ್ಯೆ ಮಾಡಿರುವ ಘಟನೆ ಪಂಜಾಬ್‌ನ ತರ್ನ್ ತರಣ್ ಜಿಲ್ಲೆಯ ಉಸ್ಮಾ ಗ್ರಾಮದಲ್ಲಿ ನಡೆದಿದೆ. ಈ ಘಟನೆ ಕೇವಲ 3 ಸೆಕೆಂಡ್‌ಗಳಲ್ಲಿ ನಡೆದಿದ್ದು, ಸಿಸಿಟಿವಿಯಲ್ಲಿ ಸೆರೆಯಾಗಿದೆ. ಹತ್ಯೆಯಾದ ವಿದ್ಯಾರ್ಥಿನಿಯನ್ನು ಸಂದೀಪ್ ಕೌರ್ ಎಂದು ಗುರುತಿಸಲಾಗಿದೆ. ಹತ್ಯೆ ಮಾಡಿದ ಯುವಕನನ್ನು ಪ್ರಿನ್ಸ್ ರಾಜ್ ಎಂದು ಗುರುತಿಸಲಾಗಿದ್ದು, ಈತ ವಿದ್ಯಾರ್ಥಿನಿಯನ್ನು ಕೊಂದ ನಂತರ ತನ್ನ ಕಡೆಗೆ ಗನ್ ತಿರುಗಿಸಿಕೊಂಡು ಟ್ರಿಗರ್ ಒತ್ತಿ ಗುಂಡು ಹಾರಿಸಿಕೊಂಡಿದ್ದಾನೆ. ಗಂಭೀರವಾಗಿ ಗಾಯಗೊಂಡಿದ್ದ ಆತ ಆಸ್ಪತ್ರೆಗೆ ಸಾಗಿಸುವ ಮಾರ್ಗ ಮಧ್ಯೆ ಸಾವನ್ನಪ್ಪಿದ್ದಾನೆ. ಕಾಲೇಜು ಆವರಣದಲ್ಲಿ ಅಳವಡಿಸಲಾದ ಸಿಸಿಟಿವಿ ದೃಶ್ಯಾವಳಿಯಲ್ಲಿ ಪ್ರಿನ್ಸ್, ಸಂದೀಪ್ ಕೌರ್ ಮತ್ತು ಮತ್ತೊಬ್ಬ ವಿದ್ಯಾರ್ಥಿನಿ ತರಗತಿಯಲ್ಲಿ ಒಟ್ಟಿಗೆ ಇರುವುದು ಸೆರೆಯಾಗಿದೆ. ತರಗತಿಯಲ್ಲಿ ಇತರ ಕೆಲವು ವಿದ್ಯಾರ್ಥಿಗಳು ಸಹ ಇರುವುದನ್ನು ಕಾಣಬಹುದಾಗಿದ್ದು, ಇದ್ದಕ್ಕಿದ್ದಂತೆ, ಪ್ರಿನ್ಸ್ ತನ್ನ ಚೇರ್‌ನಿಂದ ಎದ್ದು ಸಂದೀಪ್ ಕೌರ್ ಮೇಲೆ ಗುಂಡು ಹಾರಿಸಿದ್ದಾನೆ. ನಂತರ ಅವನು ತಲೆಗೆ ಗುಂಡು ಹಾರಿಸಿಕೊಂಡಿರುವುದು ಸೆರೆಯಾಗಿದೆ.

ಚಂದ್ರಯಾನ–4 ಲ್ಯಾಂಡಿಂಗ್ ಸೈಟ್ ಘೋಷಿಸಿದ ಇಸ್ರೋ

ನವದೆಹಲಿ: ಚಂದ್ರಯಾನ–4 ಮಿಷನ್‌ಗಾಗಿ ಚಂದ್ರನ ದಕ್ಷಿಣ ಧ್ರುವದ ಬಳಿ ಲ್ಯಾಂಡಿಂಗ್ ಸ್ಥಳವನ್ನು ಇಸ್ರೋ ಗುರುತಿಸಿದೆ. ಚಂದ್ರಯಾನ–2 ಆರ್ಬಿಟರ್‌ನಿಂದ ಬಂದ ಚಿತ್ರಗಳ ಆಧಾರದ ಮೇಲೆ, ವಿಜ್ಞಾನಿಗಳು ಮಾನ್ಸ್ ಮೌಟನ್ (ಎಂಎಂ–4) ಪ್ರದೇಶವನ್ನು ಅತ್ಯಂತ ಸೂಕ್ತವಾದ ಲ್ಯಾಂಡಿಂಗ್ ತಾಣವೆಂದು ಗುರುತಿಸಿದ್ದಾರೆ. ಮಾನ್ಸ್ ಮೌಟನ್ ಚಂದ್ರನ ದಕ್ಷಿಣ ಧ್ರುವದ ಬಳಿ ಇರುವ ಸುಮಾರು 6,000 ಮೀಟರ್ ಎತ್ತರದ ಪರ್ವತವಾಗಿದೆ. ಇದರ ಶಿಖರವು ಹೆಚ್ಚಾಗಿ ಸಮತಟ್ಟಾಗಿದ್ದು, ಇಳಿಯಲು ಸೂಕ್ತವಾಗಿದೆ. ಆದರೆ, ಇಳಿಯುವ ಸ್ಥಳದ ಕುರಿತು ಅಂತಿಮ ನಿರ್ಧಾರವನ್ನು ಲಾಂಚಿಂಗ್‌ನ ಸಮೀಪದಲ್ಲಿ ತೆಗೆದುಕೊಳ್ಳಲಾಗುತ್ತದೆ.

ವಿಜ್ಞಾನಿಗಳ ಪ್ರಕಾರ, ಈ ಪ್ರದೇಶವು ದೀರ್ಘಕಾಲದವರೆಗೆ ಸೂರ್ಯನ ಬೆಳಕನ್ನು ಪಡೆಯುವುದರಿಂದ ಇದು ಮುಖ್ಯವಾಗಿದೆ. ಇದಲ್ಲದೆ, ಈ ಪ್ರದೇಶದಲ್ಲಿ ನೀರಿನ ಮಂಜುಗಡ್ಡೆ ಇರಬಹುದು ಎಂದು ನಂಬಲಾಗಿದೆ.

ಚಂದ್ರಯಾನ–2ರ ಚಿತ್ರಗಳಿಂದ ಸಹಾಯ: ಮಾಧ್ಯಮ ವರದಿಗಳ ಪ್ರಕಾರ, ವಿಜ್ಞಾನಿಗಳು ಈ ಅಧ್ಯಯನವನ್ನು ಚಂದ್ರ ಮತ್ತು ಗ್ರಹ ವಿಜ್ಞಾನ ಸಮ್ಮೇಳನದಲ್ಲಿ ಮಂಡಿಸಿದರು. ಚಂದ್ರಯಾನ–2 ಆರ್ಬಿಟರ್‌ನಲ್ಲಿರುವ ಆರ್ಬಿಟರ್ ಹೈ ರೆಸಲ್ಯೂಷನ್ ಕ್ಯಾಮೆರಾದ ಚಿತ್ರಗಳನ್ನು ಲ್ಯಾಂಡಿಂಗ್ ಸೈಟ್ ಅನ್ನು ನಿರ್ಧರಿಸಲು ಬಳಸಲಾಯಿತು. ಈ ಕ್ಯಾಮೆರಾ ಚಂದ್ರನ ಮೇಲ್ಮೈಯನ್ನು ಪ್ರತಿ ಪಿಕ್ಸೆಲ್‌ಗೆ ಸರಿಸುಮಾರು 32 ಸೆಂಟಿಮೀಟರ್‌ಗಳ ರೆಸಲ್ಯೂಶನ್‌ನಲ್ಲಿ ಚಿತ್ರಿಸುತ್ತದೆ.

ಕುಡಿದ ಮತ್ತಿನಲ್ಲಿ ಲ್ಯಾಂಬೋರ್ಗಿನಿ ಚಲಾಯಿಸಿ ಜನರು, ವಾಹನಗಳಿಗೆ ಗುದ್ದಿದ ತಂಬಾಕು ಉದ್ಯಮಿ ಪುತ್ರ



ಲಕ್ನೋ: ತಂಬಾಕು ಉದ್ಯಮಿ ಕೆ.ಕೆ ಮಿಶ್ರಾ ಅವರ ಮಗ ಚಲಾಯಿಸುತ್ತಿದ್ದ ಲ್ಯಾಂಬೋರ್ಗಿನಿ ರೆವೆಲ್ಟೊ ಕಾರು ಕಾನ್ಪುರದ ವಿಐಪಿ ರಸ್ತೆಯಲ್ಲಿ ಪಾದಚಾರಿಗಳು ಮತ್ತು ಹಲವು ವಾಹನಗಳಿಗೆ ಡಿಕ್ಕಿ ಹೊಡೆದ ಘಟನೆ ಕಾನ್ಪುರದಲ್ಲಿ ನಡೆದಿದೆ.

ಅಪಘಾತದಲ್ಲಿ ಆರು ಜನರು ಗಾಯಗೊಂಡಿದ್ದಾರೆ. ಪೊಲೀಸರು ಕಾರನ್ನು ವಶಪಡಿಸಿಕೊಂಡಿದ್ದಾರೆ. ಆ ಸಮಯದಲ್ಲಿ ಕುಡಿದ ಮತ್ತಿನಲ್ಲಿದ್ದ ಶಿವಂ ಮಿಶ್ರಾ ಸೂಪರ್ ಕಾರನ್ನು ಅತಿ ವೇಗದಲ್ಲಿ ಚಲಾಯಿಸುತ್ತಿದ್ದರು ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ. ವೇಗವಾಗಿ ಬಂದ ಕಾರು ಮೊದಲು ಆಟೋ ರಿಕ್ಷಾಗೆ ಡಿಕ್ಕಿ ಹೊಡೆದು ನಂತರ ನಿಲ್ಲಿಸಿದ್ದ ರಾಯಲ್ ಎನ್‌ಫೀಲ್ಡ್ ಬೈಕ್‌ಗೆ ಗುದ್ದಿದೆ. ಮೋಟಾರ್ ಸೈಕಲ್ ಕಾರಿನ ಮುಂಭಾಗದ ಕೆಳಗೆ ಸಿಲುಕಿಕೊಂಡು ಸ್ವಲ್ಪ ದೂರ ಎಳೆದುಕೊಂಡು ಹೋಗಿ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದು ನಿಂತಿತು. ಅಪಘಾತದಲ್ಲಿ ಗಾಯಗೊಂಡವರಲ್ಲಿ ಒಬ್ಬನನ್ನು ತೌಫಿಕ್ ಅಹ್ಮದ್ ಎಂದು ಗುರುತಿಸಲಾಗಿದ್ದು, ಅವರ ಕಾಲಿಗೆ ಗಂಭೀರ ಗಾಯಗಳಾಗಿವೆ. ಇತರರಿಗೆ ಮೂಳೆ ಮುರಿತ ಉಂಟಾಗಿವೆ.

ಮೈಸೂರು ಮಿತ್ರ ಮಂಗಳವಾರ 10 ಫೆಬ್ರವರಿ 2026

ಕೌಟುಂಬಿಕ ಹಾಕಿ ಫೈನಲ್‌ಗೆ ಕೇಂದ್ರ ಕ್ರೀಡಾ ಸಚಿವ ಡಾ.ಮಾನ್ಸೂಖ್ ಮಾಂಡವೀಯಗೆ ಆಹ್ವಾನ



ಹಾಕಿ ಫೈನಲ್‌ಗೆ ಕೇಂದ್ರ ಕ್ರೀಡಾ ಸಚಿವರನ್ನು ನಿಯೋಗ ಆಹ್ವಾನಿಸಿತು.

ಮಡಿಕೇರಿ, ಫೆ.9–ಚೇನಂಡ ಕೊಡವ ಕೌಟುಂಬಿಕ ಹಾಕಿ ಪಂದ್ಯಾವಳಿಯ ಫೈನಲ್‌ಗೆ ಮೇ.2ರಂದು ನಾಪೋಕ್ಲುವಿಗೆ ಅತಿಥಿಯಾಗಿ ಬರಲು ಕೇಂದ್ರ ಕ್ರೀಡಾ ಸಚಿವ ಡಾ.ಮಾನ್ಸೂಖ್ ಲಕ್ಷ್ಮಣ ಭಾಯ್ ಮಾಂಡವೀಯ ಸಮ್ಮತಿ ವ್ಯಕ್ತಪಡಿಸಿದ್ದಾರೆ.

ಚೇನಂಡ ಕೊಡವ ಹಾಕಿ ಪಂದ್ಯಾವಳಿ ಸಮಿತಿಯ ಪ್ರಮುಖರ ನಿಯೋಗ ಇಂದು ನವದೆಹಲಿಯಲ್ಲಿ ಸಂಸದ ಯದುವೀರ್ ನೇತೃತ್ವದಲ್ಲಿ ಕೇಂದ್ರ ಕ್ರೀಡಾ ಸಚಿವ ಮಾನ್ಸೂಖ್ ಮಾಂಡವೀಯ ಅವರನ್ನು ಭೇಟಿಯಾಗಿ ಕೊಡವ ಕೌಟುಂಬಿಕ ಹಾಕಿ ಪಂದ್ಯಾವಳಿಗೆ ಆಹ್ವಾನ ನೀಡಿದಾಗ ಇದಕ್ಕೆ ಸಚಿವರು ಸಮ್ಮತಿ ಸೂಚಿಸಿ ದ್ದಾರೆ. ಕೊಡವ ಕುಟುಂಬಗಳ ನಡುವಿನ 26ನೇ ವರ್ಷದ ಹಾಕಿ ಪಂದ್ಯಾವಳಿಗೆ ಖಂಡಿತಾ ಬರುವು ದಾಗಿ ಹೇಳಿದ ಸಚಿವರು, ಕುಟುಂಬಗಳ ನಡುವೆ ಹಾಕಿ ಪಂದ್ಯಾವಳಿಯನ್ನು ಒಗ್ಗಟ್ಟು, ಬೆಸುಗೆಯಾಗಿ ರೂಪಿಸಿರುವುದು ಮಾದರಿಯಾಗಿದೆ ಎಂದು ಹೆಮ್ಮೆ ವ್ಯಕ್ತಪಡಿಸಿದರು. ಇದೇ ಸಂದರ್ಭ ಚೇನಂಡ ಹಾಕಿ ಪಂದ್ಯಾವಳಿಯ ಬ್ರೋಷರನ್ನು ಸಚಿವರಿಗೆ ನೀಡಲಾಯಿತು.

ನಿಯೋಗದಲ್ಲಿ ಸಮಿತಿ ಅಧ್ಯಕ್ಷ ಕರುಂಬಯ್ಯ, ಕಾರ್ಯಾಧ್ಯಕ್ಷ ದೀನಾ ಚೇನಂಡ, ವಿವೇಕ್ ಪೂಣಚ್ಚ, ಬ್ರಿಗೇಡಿಯರ್ ಚೀಯಣ್ಣ, ದ್ರೋಣಾಚಾರ್ಯ ಪ್ರಶಸ್ತಿ ವಿಜೇತ ವಿಶುಕುಟ್ಟಪ್ಪ ಹಾಜರಿದ್ದರು.

ಅಭಿವೃದ್ಧಿ ಕಾರ್ಯಗಳ ಬಗ್ಗೆ ಅರಿವು ಮೂಡಿಸಿ

ಮಡಿಕೇರಿ, ಫೆ.9–ರಾಜ್ಯ ಸರಕಾರದ ಅಭಿವೃದ್ಧಿ ಕಾರ್ಯಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸಿ ಪಕ್ಷ ಸಂಘಟನೆಗೆ ಮುಂದಾಗಬೇಕು ಎಂದು ಶಾಸಕ ಎ.ಎಸ್.ಪೊನ್ನಣ್ಣ ತಿಳಿಸಿದ್ದಾರೆ.

ಶಾದಿ ಮಹಲ್ ಸಮುದಾಯ ಭವನದಲ್ಲಿ ನಡೆದ ಚೆಟ್ಟಿಮಾನಿ ಕುಂದಚೇರಿ ವಲಯ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು ಜಿಲ್ಲೆಯಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯಗಳು ನಡೆಯುತ್ತಿವೆ. ಗ್ರಾ.ಪಂ ಚುನಾವಣೆ ಸಮೀಪಿಸುತ್ತಿದ್ದು, ಸರ್ವರು ಒಗ್ಗೂಡಿ ಕಾಂಗ್ರೆಸ್ ಪಕ್ಷವನ್ನು ಬಲಪಡಿಸಬೇಕೆಂದು ಹೇಳಿದರು.

ಕೆಪಿಸಿಸಿ ಸದಸ್ಯ ಬೇಕಲ್ ರಮಾನಾಥ್ ಮಾತನಾಡಿ ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯ ಕುರಿತು ಕೇಂದ್ರ ಸರ್ಕಾರ ತೆಗೆದುಕೊಂಡಿರುವ ಧೋರಣೆಯನ್ನು ಖಂಡಿಸಿ ವಲಯ, ಬ್ಲಾಕ್ ಮತ್ತು ಜಿಲ್ಲಾ ಮಟ್ಟದಲ್ಲಿ ಪ್ರತಿಭಟನೆ ನಡೆಸಿ ಕೇಂದ್ರದ ನಿಲುವನ್ನು ವಿರೋಧಿಸಬೇಕು ಎಂದರು.

ಚೆಟ್ಟಿಮಾನಿ ಕುಂದಚೇರಿ ವಲಯ ಕಾಂಗ್ರೆಸ್ ಅಧ್ಯಕ್ಷ ಕೆ.ಎಂ.ಹರೀಶ್ ಪಕ್ಷ ಸಂಘಟನೆಗೆ ಎಲ್ಲರೂ ಕೈಜೋಡಿಸಬೇಕು ಎಂದು ತಿಳಿಸಿದರು. ಡಿಸಿಸಿ ಸದಸ್ಯ ಹ್ಯಾರಿಸ್ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಕೊಡಗಿನ ಜಮ್ಮಾಬಾಣೆ ಸಮಸ್ಯೆಗೆ ಪರಿಹಾರ ಸೂಚಿಸಿದ ಮತ್ತು ಅಭಿವೃದ್ಧಿ ಕಾರ್ಯಗಳಿಗೆ ಆದ್ಯತೆ ನೀಡುತ್ತಿರುವ ಹಿನ್ನೆಲೆ ಶಾಸಕ ಪೊನ್ನಣ್ಣ ಹಾಗೂ ನಿರ್ಗಮಿತ ಅಧ್ಯಕ್ಷ ಕೆದಂಬಾಡಿ ಹರೀಶ್ ಅವರನ್ನು ಹಿರಿಯರಾದ ಕೆದಂಬಾಡಿ ರಮೇಶ್ ಗೌರವಿಸಿದರು.



ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಗೊಂಡವರನ್ನು ಶಾಸಕ ಪೊನ್ನಣ್ಣ ಪಕ್ಷದ ಬಾವುಟ ನೀಡಿ ಬರಮಾಡಿಕೊಂಡರು.

ಕಾಂಗ್ರೆಸ್‌ಗೆ ಸೇರ್ಪಡೆ: ಶಾಸಕರ ಕಾರ್ಯ ವೈಖರಿಯನ್ನು ಮೆಚ್ಚಿ ಹಿರಿಯರಾದ ಇಂದೂಮತಿ ರಾಣಿ, ಪಂಚಾಯ್ತಿ ಮಾಜಿ ಅಧ್ಯಕ್ಷೆ ಹೆಚ್.ಜೆ.ಲಲಿತ, ವಿಎಸ್ ಎಸ್‌ಎನ್ ನಿರ್ದೇಶಕಿ ಲೋಲಾಕ್ಷಿ ರೀನಾ, ಪ್ರಮುಖರಾದ ದಿನೇಶ್, ಕೊಟ್ಟು ಕತ್ತಿರ ಪೊನ್ನಣ್ಣ, ಪೊನ್ನೇಟಿ ಗೋವರ್ಧನ್, ಅಲ್ಲಂಗಡ ಸದಾ ಬೋಪಯ್ಯ, ಅಲ್ಲಂಗಡ ಪಟ್ಟು ಪೊನ್ನಪ್ಪ ಅವರುಗಳು ಪಕ್ಷಕ್ಕೆ ಸೇರ್ಪಡೆಗೊಂಡರು. ಶಾಸಕ ಪೊನ್ನಣ್ಣ ಹಾಗೂ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಧರ್ಮಜ ಉತ್ತಪ್ಪ ಅವರು ಪಕ್ಷದ ಬಾವುಟ ನೀಡಿ ಬರಮಾಡಿಕೊಂಡರು.

ಕಾಡಾನೆ ಹಿಂಡು ದಾಳಿ: ಬೈಕ್ ಸವಾರ ಅಚ್ಚರಿ ಪಾರು



ಚಿಕಿತ್ಸೆ ಪಡೆಯುತ್ತಿರುವ ಭರತ್ ಕುಮಾರ್.

ನಾಪೋಕ್ಲು, ಫೆ.9–ಇಲ್ಲಿಗೆ ಸಮೀಪದ ಮದೆನಾಡು ಗ್ರಾಮದಲ್ಲಿ ಕಾಡಾನೆ ಹಿಂಡು ದಾಳಿ ಮಾಡಿ ಬೈಕ್ ಸವಾರ ತೀವ್ರವಾಗಿ ಗಾಯಗೊಂಡು ಪ್ರಾಣಾಪಾಯದಿಂದ ಪಾರಾದ ಘಟನೆ ಭಾನುವಾರ ಸಂಜೆ ನಡೆದಿದೆ.


ಮದೆನಾಡು ಗ್ರಾಮದ ನಿವಾಸಿ ದಿವಂಗತ ಪಟ್ಟಡ ಅಯ್ಯಪ್ಪ ಎಂಬವರ ಮಗ ಭರತ್ ಕುಮಾರ್ (50) ಕಾಡಾನೆ ದಾಳಿಗೊಳಗಾಗಿ ಅಪಾಯದಿಂದ ಪಾರಾದವರಾಗಿದ್ದಾರೆ.

ರೆಸಾರ್ಟ್ ಒಂದರಲ್ಲಿ ಕೆಲಸ ಮಾಡುತ್ತಿರುವ ಭರತ್ ಕುಮಾರ್ ಎಂದಿನಂತೆ ತಮ್ಮ ಬೈಕಿನಲ್ಲಿ ಮದನಾಡು– ಬೆಟ್ಟ ತ್ತೂರು ರಸ್ತೆಯಲ್ಲಿ ಸಂಚರಿಸುತ್ತಿರುವ ಸಂದರ್ಭ ಸಾಲಪು ಎಂಬಲ್ಲಿ ರಸ್ತೆಯ ಮಧ್ಯೆ ದಿಢೀರನೆ ಪ್ರತ್ಯಕ್ಷವಾದ ಕಾಡಾನೆಗಳ ಹಿಂಡು ದಾಳಿ ಮಾಡಿ ಸೊಂಡಿಲಿನಲ್ಲಿ ಎಸೆದ ಪರಿಣಾಮ ಕಾಲು ಮುರಿತಗೊಂಡು ತಲೆಗೂ ಗಾಯಗಳಾಗಿದ್ದು ಬೈಕ್ ಜಖಂಗೊಂಡಿದೆ.

ಸಮೀಪದ ಮನೆಯವರ ಬೊಬ್ಬೆ ಕೇಳಿ ಗಾಪಂ ಸದಸ್ಯ ಬಿ.ಸಿ ಸಜ್ಜನ್ ವೈನೆರವನ ಪರಶುರಾಮ ತೀವ್ರವಾಗಿ ಗಾಯಗೊಂಡಿದ್ದ ಭರತ್ ಕುಮಾರ್‌ರನ್ನು ಕರೆದೊಯ್ದು ಜಿಲ್ಲಾ ಆಸ್ಪತ್ರೆಗೆ ದಾಖಲು ಮಾಡಿದ್ದಾರೆ.

ಮದೆನಾಡು ಗ್ರಾಮದಲ್ಲಿ ನಿರಂತರವಾಗಿ ಆನೆ ಹಾವಳಿ ಮುಂದುವರೆದಿದ್ದು ಈ ಘಟನೆ ಗ್ರಾಮಸ್ಥರಲ್ಲಿ ತೀವ್ರ ಆತಂಕ ಮೂಡಿಸಿದೆ. ಈಗಾಗಲೇ ಆನೆಗಳಿಂದ ಅಪಾರ ಕೃಷಿ ನಷ್ಟ ಹೊಂದಿರುವ ಜನರು ಈಗ ಜೀವ ಉಳಿಸಿಕೊಳ್ಳಲು ಪರದಾಡಬೇಕಾದ ಸ್ಥಿತಿ ಬಂದಿದೆ. ಇನ್ನಾದರೂ ಅರಣ್ಯ ಇಲಾಖೆ ಮತ್ತು ಸಂಬಂಧಪಟ್ಟವರು ಸೂಕ್ತ ಕ್ರಮ ಕೈಗೊಂಡು ಆನೆಗಳನ್ನು ಶಾಶ್ವತವಾಗಿ ಕಾಡಿಗಟ್ಟುವ ಕೆಲಸ ಮಾಡಬೇಕೆಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

ವಿರಾಜಪೇಟೆ ಸೇರಿ ವಿವಿಧೆಡೆ ಇಂದು ವಿದ್ಯುತ್ ವ್ಯತ್ಯಯ



ಮಡಿಕೇರಿ ಫೆ.9– ವಿರಾಜಪೇಟೆ ವಿದ್ಯುತ್ ವಿತರಣಾ ಉಪ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೆತ್ತಿಕೊಳ್ಳುತ್ತಿರುವುದರಿಂದ ಇದೇ ಫೆ.10 ರ ಬೆಳಗ್ಗೆ 10 ರಿಂದ ಸಂಜೆ 5 ಗಂಟೆವರೆಗೆ ಪಾರಾಣೆ, ನಾಪೋಕ್ಲು, ಮೂರ್ನಾಡು, ಮರಗೋಡು, ಹಾಕತ್ತೂರು, ಹೊಸ್ಕೇರಿ, ಹೊದ್ದೂರು, ನರಿಯಂದಡ, ನಾಪೋಕ್ಲು, ಕುಂಜಿಲ, ಎಮ್ಮೆಮಾಡು, ಬಲ್ಲಮಾವಟಿ ಹಾಗೂ ಸುತ್ತಮುತ್ತಲಿನ ಪ್ರದೇಶ, ಹಾಗೆಯೇ ವಿರಾಜಪೇಟೆ ಪಟ್ಟಣ, ಬಿಟ್ಟಂಗಾಲ, ಬಿ ಶೆಟ್ಟಿಗೇರಿ, ಕೆದಮುಳ್ಳೂರು, ಕಾಕೋಟು ಪರಂಬು, ಕದನೂರು, ಆರ್ಜಿ, ಬೇಟೋಳಿ, ಸಿದ್ದಾಪುರ ಪಟ್ಟಣ, ಮಾಲ್ದಾರೆ, ಗುಹ್ಯ, ಅಮ್ಮತ್ತಿ, ಚೆಂಬೆಬೆಳ್ಳೂರು, ಹಾಲುಗುಂದ, ಕಣ್ಣಂಗಾಲ ಹಾಗೂ ಸುತ್ತಮುತ್ತಲಿನ ಪ್ರದೇಶದಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಇಂಜಿನಿಯರ್ ರಾಮಚಂದ್ರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಐಗೂರಿನಲ್ಲಿ ನಡೆದ ತಾಲೂಕು 9ನೇ ಕನ್ನಡ ಸಾಹಿತ್ಯ ಸಮ್ಮೇಳನ

ಮಡಿಕೇರಿ, ಫೆ.9–ಸೋಮವಾರಪೇಟೆ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಐಗೂರು ಗ್ರಾಮದಲ್ಲಿ 9ನೇ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನ ಅರ್ಥಪೂರ್ಣವಾಗಿ ವಿಜೃಂಭಣೆಯಿಂದ ನಡೆಯಿತು.

ಬೆಳಿಗ್ಗೆ 6.30ಕ್ಕೆ ಶಾಲಾ ಮೈದಾನದಲ್ಲಿ ತಹಸೀಲ್ದಾರ್ ಕೆ.ಕೆ.ಕೃಷ್ಣಮೂರ್ತಿ ರಾಷ್ಟ್ರಧ್ವಜಾರೋಹಣ ನೆರವೇರಿಸುವ ಮೂಲಕ ಕಾರ್ಯಕ್ರಮಕ್ಕೆ ಅಧಿಕೃತ ಚಾಲನೆ ನೀಡಿದರು. ನಂತರ ಪರಿಷತ್ ಜಿಲ್ಲಾ ಅಧ್ಯಕ್ಷ ಎಂ.ಪಿ.ಕೇಶವ ಕಾಮತ್ ಕನ್ನಡ ಧ್ವಜಾರೋಹಣ ನೆರವೇರಿಸಿದರು. ಬೆಳಿಗ್ಗೆ 9 ಗಂಟೆಗೆ ಐಗೂರು ಕಬ್ಬಿಣ ಸೇತುವೆಯಿಂದ ಸಮ್ಮೇಳನಾಧ್ಯಕ್ಷರ ಭವ್ಯ ಮೆರವಣಿಗೆಗೆ ತಾಪಂ ಕಾರ್ಯ ನಿರ್ವಾಹಕ ಅಧಿಕಾರಿ ಪರಮೇಶ ಕುಮಾರ್ ಉದ್ಘಾಟಿಸಿದರು. ತೆರೆದ ವಾಹನದಲ್ಲಿ ಸಮ್ಮೇಳನಾಧ್ಯಕ್ಷೆ ಸಾಹಿತಿ ಜಲಜಾ ಶೇಖರ್ ಅವರನ್ನು ಜಿಲ್ಲಾಧ್ಯಕ್ಷ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಎಂ.ಪಿ.ಕೇಶವ ಕಾಮತ್, ತಾಲೂಕು ಅಧ್ಯಕ್ಷ ಎಸ್.ಡಿ. ವಿಜೇತರೊಂದಿಗೆ ಮೆರವಣಿಗೆಯಲ್ಲಿ ಕರೆತರಲಾಯಿತು.

ಸಾಂಪ್ರದಾಯಿಕ ವಾದ್ಯಗಳು, ಜನಪದ ಕಲಾವಿದರ ನೃತ್ಯ, ಕನ್ನಡ ಧ್ವಜಗಳು ಮತ್ತು ಘೋಷಣೆಗಳೊಂದಿಗೆ ನಡೆದ ಮೆರವಣಿಗೆಗೆ ಗ್ರಾಮಸ್ಥರು ಸಾಕ್ಷಿಯಾದರು. ಕಬ್ಬಿಣ ಸೇತುವೆಯಿಂದ, ಯಡವಾರೆ ಮಾರ್ಗವಾಗಿ ಕಾಜೂರು ಸರ್ಕಾರಿ ಕಾಲೇಜು ಮೂಲಕ ಸಭಾಂಗಣದವರೆಗೆ ಮೆರವಣಿಗೆ ಸಾಗಿತು.



ತಾಲೂಕು ಸಾಹಿತ್ಯ ಸಮ್ಮೇಳನಾಧ್ಯಕ್ಷರನ್ನು ಮೆರವಣಿಗೆಯಲ್ಲಿ ಕರೆದೊಯ್ಯಲಾಯಿತು.

ದಿವಂಗತ ಕೆ.ಟಿ.ಪೂವಯ್ಯ, ದಿವಂಗತ ಗುಂಡುಕುಟ್ಟಿ ಮಂಜುನಾಥಯ್ಯ, ದಿ.ಮಲ್ಲಚೀರ ಪಟೇಲ್ ಸೋಮಯ್ಯ, ಮಲ್ಲಪ್ಪ, ಲಿಂಗಪ್ಪ, ಬೆಳ್ಳಿಯಪ್ಪ, ಚಂಗಪ್ಪ, ಎಂ.ಬಿ. ಸುರೇಶ್, ಎಂ.ಬಿ.ದೇವರಾಜ್, ಎಂ.ಎಲ್. ಅಪ್ಪಚ್ಚು, ಎಂ.ಎಲ್.ಕೃಪಾಲ್, ಸಂಪಿಗೆ ಕೊಲ್ಲಿ ದಿ.ಡಿ.ಎಸ್.ದೇವಯ್ಯ ಮತ್ತು ದಿ.ಪೂವಮ್ಮ, ಮೂಲೆಮಜಲು ದಿ. ಸೋಮಣ್ಣ ತಂಗಮ್ಮ, ದಿ.ನಂಗಾರು ಬೋಪಯ್ಯ, ಸೀತಮ್ಮ ದಂಪತಿಗಳು ಹಾಗು ನಂಗಾರು ಗೋಪಾಲ ಮಾಸ್ಟರ್, ಚಿಣ್ಣಪ್ಪ, ದಿ.ಮುಕ್ಕಾಟಿರ ಮಾದಪ್ಪ ಹಾಗು ದಿ.ಮಚ್ಚಂಡ ನಾಚಪ್ಪ ದಿ.ಕಾಳೇರಮ್ಮೆರ ಅಯ್ಯಣ್ಣ, ನಾಣಯ್ಯ, ಗೋಪಾಲ ಮತ್ತು ಪಾಲಾಕ್ಷ, ದಿ.ಸಿ.ಕೆ.ಕಾಳಪ್ಪ, ದಿ.ಮಣವಟ್ಟಿರ ಅಪ್ಪಯ್ಯ ಅಕ್ಕವ್ವ ದಂಪತಿಗಳು ಹಾಗು ಅಯ್ಯಣ್ಣ, ಮಂದಣ್ಣ, ಬೆಳ್ಳಿಯಪ್ಪ ದಿ. ಎ.ಎಂ.ಬೆಳ್ಳಿಯಪ್ಪ, ದಿ.ಎ.ಕೆ.ಸುಬ್ಬಯ್ಯ ಮತ್ತು ದಿ.ಈಶ್ವರಿ ಮೇದಪ್ಪ, ದಿ.ದಳವಾಯಿ ಹನುಮರಾಜೇ ಅರಸ್ ಅವರುಗಳ ನೆನಪಿನ ದ್ವಾರಗಳನ್ನು ಅವರುಗಳ ಕುಟುಂಬಸ್ಥರು ಉದ್ಘಾಟಿಸಿದರು.

ಆರೋಗ್ಯ ಇಲಾಖೆಯಿಂದ ರಕ್ತದಾನ ಶಿಬಿರ ಹಾಗೂ ಅಂಗಾಂಗ ದಾನದ ಬಗ್ಗೆ ಜಾಗೃತಿ ಮೂಡಿಸಿದರು.

ಸಾಹಿತಿ ಕೋವರ್‌ಕೊಲ್ಲಿ ದಿ. ಕರುಣಾಕರ ಪುಸ್ತಕ ಮಳಿಗೆಯನ್ನು ಜಿ.ಕೆ.ವಿನೋದ್ ಉದ್ಘಾಟಿಸಿದರು.

ಹುಲಿ ದಾಳಿಗೆ ಎರಡು ಹಸು ಬಲಿ: ಆಕ್ರೋಶ

ಗೋಣಿಕೊಪ್ಪ, ಫೆ.9–ಪೊನ್ನಂಪೇಟೆ ತಾಲೂಕಿನ ಬೆಸಗೂರು ಗ್ರಾಮದಲ್ಲಿ ಹುಲಿ ಎರಡು ಹಸುವಿನ ಮೇಲೆ ದಾಳಿ ನಡೆಸಿ ಕೊಂದು ಹಾಕಿರುವ ಘಟನೆ ನಡೆದಿದೆ.

ಇಲ್ಲಿನ ಬಾಚಮಾಡ ಪ್ರಕಾಶ್ ರಾಜಪ್ಪ ಎಂಬವರು ಹಸುವನ್ನು ಮೇಯಲು ಬಿಟ್ಟಿದ್ದ ವೇಳೆ ಹುಲಿ ದಾಳಿ ನಡೆಸಿ ಕೊಂದು ಅರ್ಧಭಾಗ ತಿಂದು ಹೋಗಿದೆ. ಎರಡು ವರ್ಷಗಳಿಂದ ಇವರ 4 ಹಸುಗಳನ್ನು ಕೊಂದು ಹಾಕಿದೆ, ಬೆಸಗೂರು ವ್ಯಾಪ್ತಿಯಲ್ಲಿ 15 ದಿನಗಳಲ್ಲಿ 3 ಹಸುಗಳನ್ನು ಬಲಿ ಪಡೆದುಕೊಂಡಿದ್ದರೂ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿ ಬೇಜವಾಬ್ದಾರಿ ಕಾರ್ಯಾಚರಣೆ ನಡೆಸುತ್ತಿದ್ದಾರೆ ಎಂದು ಗ್ರಾಮಸ್ಥರು ಅರಣ್ಯ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.



ಸ್ಥಳಕ್ಕೆ ಅರಣ್ಯ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು, ಸ್ಥಳದಲ್ಲಿ ಟ್ರ್ಯಾಪ್ ಕ್ಯಾಮರಾ, ಬೋನ್ ಇರಿಸಿ ಹುಲಿಯನ್ನು ಸೆರೆಹಿಡಿಯಲು ಅರಣ್ಯ ಇಲಾಖೆ ಮುಂದಾಗಿದೆ.

ಹೆಲ್ಮೆಟ್ ಧರಿಸದವರಿಗೆ ಸಂಚಾರಿ ಪೊಲೀಸರ ನೀತಿ ಪಾಠ

ಮಡಿಕೇರಿ, ಫೆ.9–ಕಡ್ಡಾಯವಾಗಿ ಹೆಲ್ಮೆಟ್ ಧರಿಸುವಂತೆ ದ್ವಿಚಕ್ರ ವಾಹನ ಸವಾರರಿಗೆ ಕುಶಾಲನಗರ ಗ್ರಾಮಾಂತರ ಸಂಚಾರ ಪೊಲೀಸ್ ಠಾಣೆಯ ಪೊಲೀಸರು ಸೋಮವಾರ ಜಾಗೃತಿ ಮೂಡಿಸಿದರು. ಕೆಲ ಸವಾರರು ಹೆಲ್ಮೆಟನ್ನು ತಲೆಗೆ ಧರಿಸದೆ ಕೈಯಲ್ಲಿ ಇಲ್ಲವೇ ಬೈಕ್ ಹಿಂಬದಿಯಲ್ಲಿಟ್ಟು ಸಂಚಾರ ಮಾಡುತ್ತಿದ್ದು, ವ್ಯಕ್ತಿಗಳು ತಮ್ಮ ಪ್ರಾಣ ಹಾಗೂ ತಮ್ಮ ಕುಟುಂಬದ ಭದ್ರತೆಗಾಗಿ ಕಡ್ಡಾಯವಾಗಿ ಹೆಲ್ಮೆಟ್ ಧರಿಸುವಂತೆ ಠಾಣಾಧಿಕಾರಿ ಶ್ರೀನಿವಾಸ್ ತಿಳಿಹೇಳಿದರು. ಇದೇ ವೇಳೆ ಹೆಲ್ಮೆಟ್ ಧರಿಸದಿದ್ದವರಿಗೆ ದಂಡ ವಿಧಿಸುವ ಮೂಲಕ ಸವಾರರಿಗೆ ಬಿಸಿ ಮುಟ್ಟಿಸಿದರು. ಸರಕು ಸಾಗಾಣಿಕೆ ವಾಹನಗಳು, ಆಟೋ ರಿಕ್ಷಾ ಸಹಿತ ಎಲ್ಲಾ ಮಾದರಿ ವಾಹನಗಳ ದಾಖಲಾತಿಗಳನ್ನು ಪರಿಶೀಲನೆ ನಡೆಸಿದರು. ಪರಿಶೀಲನೆ ವೇಳೆ ಸಮರ್ಪಕ ದಾಖಲಾತಿ ಹೊಂದಿರದ ವಾಹನಗಳ ಚಾಲಕರಿಗೂ ದಂಡದ ಬಿಸಿ ಮುಟ್ಟಿಸಿದರು.

ಠಾಣಾಧಿಕಾರಿ ಶ್ರೀನಿವಾಸ್ ಮಾತನಾಡಿ, ವಾಹನ ಚಲಾಯಿಸುವಾಗ ಚಾಲಕರು ತಮ್ಮ ರಕ್ಷಣೆ ಮಾತ್ರವಲ್ಲದೆ ತಮ್ಮ ಇಡೀ ಕುಟುಂಬದ ರಕ್ಷಣೆಯ ಜವಾಬ್ದಾರಿ ತಮ್ಮ ಮೇಲೆ ಇರುತ್ತದೆ ಎಂಬುದನ್ನು ಅರಿಯಬೇಕು. ರಸ್ತೆ ನಿಯಮಗಳನ್ನು ಉಲ್ಲಂಘಿಸುವ ವಾಹನಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದಲ್ಲದೆ ದಂಡ ವಿಧಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.



ದೊಡ್ಡ ಬೆಕ್ಕು (ಬಿಗ್ ಕ್ಯಾಟ್) ಜಾತಿಯ ಪ್ರಾಣಿಗಳ ಸಂರಕ್ಷಣೆಯಲ್ಲಿ

ಭಾರತದ ಕ್ರಮ ವಿಶ್ವದ ಹಲವು ರಾಷ್ಟ್ರಗಳ ಗಮನ ಸೆಳೆದಿದೆ

ಅಂತಾರಾಷ್ಟ್ರೀಯ ಬಿಗ್ ಕ್ಯಾಟ್ ಅಲೆಯನ್ಸ್ ಮಹಾ ನಿರ್ದೇಶಕ ಡಾ.ಎಸ್.ಪಿ.ಯಾದವ್ ಅಭಿಪ್ರಾಯ

ಚಾಮರಾಜನಗರ, ಫೆ.9(ಎಂಟಿವೈ, ಎಸ್‌ಎಸ್)–ದೊಡ್ಡ ಬೆಕ್ಕು (ಬಿಗ್ ಕ್ಯಾಟ್) ಜಾತಿಯ ಹುಲಿ, ಸಿಂಹ, ಚಿರತೆ, ಹಿಮ ಚಿರತೆ, ಚೀತಾ ಸಂರಕ್ಷಣೆಯಲ್ಲಿ ಭಾರತ ಕೈಗೊಂಡಿರುವ ಕ್ರಮ ವಿಶ್ವದ ಹಲವು ರಾಷ್ಟ್ರಗಳ ಗಮನ ಸೆಳೆದಿದೆ ಎಂದು ಅಂತಾರಾಷ್ಟ್ರೀಯ ಬಿಗ್‌ಕ್ಯಾಟ್ ಅಲೆಯನ್ಸ್ ಮಹಾ ನಿರ್ದೇಶಕ ಡಾ. ಎಸ್. ಪಿ. ಯಾದವ್ ಅಭಿಪ್ರಾಯ ಪಟ್ಟಿದ್ದಾರೆ.

ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಪ್ರಸಿದ್ಧ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಮೇಲುಕಾಮನಹಳ್ಳಿ ಸಫಾರಿ ಕೇಂದ್ರದ ಆವರಣದಲ್ಲಿ ಸೋಮವಾರ ವಿದೇಶಾಂಗ ವ್ಯವಹಾರಗಳ ಸಚಿವಾಲಯ, ಅಂತಾರಾಷ್ಟ್ರೀಯ ಬಿಗ್ ಕ್ಯಾಟ್ಸ್ ಅಲೆಯನ್ಸ್, ರಾಷ್ಟ್ರೀಯ ಹುಲಿ ಸಂರಕ್ಷಣಾ ಪ್ರಾಧಿಕಾರ ಹಾಗೂ ಕರ್ನಾಟಕ ಅರಣ್ಯ ಇಲಾಖೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ 2ನೇ ಆವೃತ್ತಿಯ ಅಂತಾರಾಷ್ಟ್ರೀಯ ಬಿಗ್ ಕ್ಯಾಟ್ಸ್ ಅಲೆಯನ್ಸ್ ಶೃಂಗಸಭೆಯಲ್ಲಿ ಮಾತನಾಡಿದ ಅವರು, ವಿಶ್ವದ 95 ರಾಷ್ಟ್ರಗಳಲ್ಲಿ ಬಿಗ್ ಕ್ಯಾಟ್ ನೆಲೆಯೂರಿದ್ದವು. ಅದರಲ್ಲಿ ಬಹುಪಾಲು ಬಿಗ್ ಕ್ಯಾಟ್ ಜಾತಿಯ ಪ್ರಾಣಿಗಳು ಭಾರತದಲ್ಲಿಯೇ ಕಂಡು ಬರುತ್ತಿದ್ದು, ಇದು ವಿಶ್ವದ ಗಮನ ಸೆಳೆದಿದೆ. ವಿಶ್ವದಲ್ಲಿ 7 ಬಗೆಯ ಬಿಗ್ ಕ್ಯಾಟ್‌ಗಳಾದ ಹುಲಿ, ಸಿಂಹ, ಚಿರತೆ, ಹಿಮ ಚಿರತೆ, ಚೀತಾ, ಜಾಗ್ವರ್, ಪೂಮ ಸೇರಿವೆ. ಅದರಲ್ಲಿ 5 ಬಗೆಯ ಬಿಗ್ ಕ್ಯಾಟ್‌ಗಳು ಭಾರತದಲ್ಲಿಯೇ ಕಂಡು ಬರುತ್ತಿರುವುದು ವಿಶೇಷ. ವಿಶ್ವದ ಹುಲಿ ಸಂಖ್ಯೆಯಲ್ಲಿ ಭಾರತ ಬಹುಪಾಲು ಹುಲಿಗಳನ್ನು ಹೊಂದಿದೆ. ಅದರಲ್ಲೂ 40 ರಿಂದ 50 ಸಾವಿರ ಚಿರತೆಗಳು ಭಾರತದಲ್ಲಿದ್ದು, ಅಧಿಕ ಹಿಮ ಚಿರತೆ ಹೊಂದಿದ ದೇಶದಲ್ಲಿ ಭಾರತ 3ನೇ ಸ್ಥಾನ ಪಡೆದಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಈ ಹಿಂದೆ ಭಾರತದಲ್ಲಿ ಚೀತಾ ಸಂಖ್ಯೆ ಉತ್ತಮವಾಗಿತ್ತು. ಕಾರಣಾಂತರಗಳಿಂದ ಭಾರತ ಚೀತಾ ಸಂತತಿಯನ್ನು ಕಳೆದುಕೊಳ್ಳಬೇಕಾದ ಸ್ಥಿತಿ ಒದಗಿ ಬಂದಿತು. 1952ರಲ್ಲಿ ನಡೆದ ಸಮ್ಮೇಳನದಲ್ಲಿ ಭಾರತ ಅಧಿಕೃತವಾಗಿ ಚೀತಾ ಸಂತತಿಯನ್ನು ಕಳೆದು ಕೊಂಡಿರುವುದಾಗಿ ಘೋಷಿಸಿತು. ಇದೀಗ ಭಾರತದಲ್ಲಿ ಚೀತಾ ಸಂತತಿಯನ್ನು ಉತ್ತೇಜಿಸಲು 70 ವರ್ಷದ ನಂತರ ಕೀನ್ಯಾ ಮತ್ತು ಇತರ ದೇಶದಿಂದ ತಂದಂ ತಹ ಚೀತಾವನ್ನು ಭಾರತದ ಅರಣ್ಯದಲ್ಲಿ ಬಿಡುಗಡೆ ಮಾಡಿ ಅವುಗಳ ಮೇಲೆ ನಿಗಾ ಇಡಲಾಗಿತ್ತು. ಇದೀಗ ಚೀತಾ ಮರು ಪರಿಚಯ (ರಿ ಇಂಟ್ರೊಡ್ಯೂಸ್) ಯೋಜನೆಯಡಿ ತಂದು ಬಿಡಲಾಗಿದ್ದ ಚೀತಾಗಳ ಸಂಖ್ಯೆ ಆರೋಗ್ಯಕರ ಸಂಖ್ಯೆಯಲ್ಲಿ ಸುಧಾರಿಸಿದೆ. ಇದು ಒಳ್ಳೆಯ ಬೆಳವಣಿಗೆಯಾಗಿದೆ. ಬಿಗ್ ಕ್ಯಾಟ್ಸ್ ದೊಡ್ಡ ಜಾತಿಯ ಪ್ರಾಣಿಗಳ ಸಂರಕ್ಷಣೆಯಲ್ಲಿ ಭಾರತದಲ್ಲಿ ಕೈಗೊಂಡ ಕ್ರಮಗಳನ್ನು ಇತರ ದೇಶಗಳು ಅನುಸರಿಸುವಂತಾಗಿದೆ. ಏಷ್ಯಾದ ಸಿಂಹ (ಏಷ್ಯಾಟೀಕ್ ಲಯನ್) ಸಂತತಿ ಗಿರ್ ಅರಣ್ಯ ಪ್ರದೇಶದಲ್ಲಿ ಉತ್ತಮ ಸಂಖ್ಯೆಯಲ್ಲಿ ನೆಲೆಯೂರಿರುವುದು ವಿಶ್ವದ ಗಮನ ಸೆಳೆದಿದೆ. ಅದರಲ್ಲೂ ಕರ್ನಾಟಕದ ಬಂಡೀಪುರ ಮತ್ತು ನಾಗರಹೊಳೆ ಅರಣ್ಯದಲ್ಲಿ ಹುಲಿ, ಆನೆ, ಚಿರತೆ ಸೇರಿದಂತೆ ವನ್ಯಜೀವಿಗಳ ಸಂರಕ್ಷಣೆಗೆ ಕೈಗೊಂಡಿರುವ ಉತ್ತಮ ಕಾರ್ಯ'ಳಿಂದಾಗಿ ಇಂದು ಅಂತಾ ರಾಷ್ಟ್ರೀಯ ಬಿಗ್ ಕ್ಯಾಟ್ಸ್ ಅಲೆಯನ್ಸ್ ಶೃಂಗಸಭೆಯನ್ನು ಇಲ್ಲಿ ಆಯೋಜಿಸಲಾಗಿದೆ ಎಂದರು.



ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಅಂತಾರಾಷ್ಟ್ರೀಯ ಬಿಗ್ ಕ್ಯಾಟ್ಸ್ ಅಲೆಯನ್ಸ್ ಶೃಂಗಸಭೆ ನಡೆಯಿತು. ಈ ಸಮ್ಮೇಳನದಲ್ಲಿ ವಿವಿಧ ದೇಶಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

ಶೃಂಗಸಭೆಯಲ್ಲಿ 23 ದೇಶಗಳ 39 ಪ್ರತಿನಿಧಿಗಳು ಭಾಗಿ

ಶೃಂಗಸಭೆಯಲ್ಲಿ ವಿಶ್ವದಲ್ಲಿ ಹುಲಿ ಸಂತತಿ ಹೊಂದಿರುವ ದೇಶಗಳಾದ ಅರ್ಮೇನಿಯಾ, ಭೂತಾನ್, ಕಾಂಬೋಡಿಯಾ, ಕಾಂಗೋ, ಗ್ವಾಟೆಮಾಲ, ಖಜಕಿಸ್ತಾನ್, ಕೀನ್ಯಾ, ಕಿರ್ಜಿಸ್ಥಾನ್, ಲೈಬೀರಿಯಾ, ಮಲಾವಿ, ಮಲೇಷಿಯಾ, ಮಾಲಿ, ಮೆಕ್ಸಿಕೋ, ಮಂಗೋಲಿಯಾ, ಮಯನ್ಮಾರ್, ನೇಪಾಳ, ನೈಜರ್, ಪನಾಮಾ, ಪೆರು, ರೊಮೇನಿಯಾ, ರಷ್ಯಾ, ಸೋಮಾಲಿಯಾ ಹಾಗೂ ಶ್ರೀಲಂಕಾ ಸೇರಿದಂತೆ 23 ದೇಶಗಳ 39 ಪ್ರತಿನಿಧಿಗಳು ಪಾಲ್ಗೊಂಡಿದ್ದಾರೆ.

ದೊಡ್ಡ ಬೆಕ್ಕುಗಳ ಸಂತತಿ ವೃದ್ಧಿ ಮತ್ತು ಸಂರಕ್ಷಣೆ ಮಾಡುವ ನಾಯಕತ್ವವನ್ನು ಭಾರತ ವಹಿಸಿಕೊಂಡಿದೆ. ಹುಲಿ, ಸಿಂಹ, ಚಿರತೆ, ಹಿಮ ಚಿರತೆ, ಜಾಗ್ವಾರ್, ಪೂಮ, ಚೀತಾದಂತಹ ಏಳು ದೊಡ್ಡ ಬೆಕ್ಕಿನ ರಕ್ಷಣೆ ಮಾಡುವ ನಿರ್ಣಯಕ್ಕೆ 24 ದೇಶಗಳು ಸಹಿ ಮಾಡಿವೆ ಎಂದು ತಿಳಿಸಿದರು.

ಸಭೆಯಲ್ಲಿ 23 ದೇಶಗಳ 39 ಪ್ರತಿನಿಧಿಗಳು ಭಾರತದಲ್ಲಿ ವನ್ಯಜೀವಿ ಸಂರಕ್ಷಣೆ ಬಗ್ಗೆ ಕೈಗೊಂಡಿರುವ ಕ್ರಮಗಳ ಬಗ್ಗೆ ವಿಚಾರ ವಿನಿಮಯ ಮಾಡಿಕೊಳ್ಳಲಿದ್ದಾರೆ. ಅಲ್ಲದೇ ದೊಡ್ಡ ಬೆಕ್ಕು ಜಾತಿಯ ಪ್ರಾಣಿಗಳ ಸಂರಕ್ಷಣೆಗೆ ಯಾವೆಲ್ಲಾ ಕ್ರಮ ಅನುಸರಿಸಬೇಕು. ಕೈಗೊಂಡಿರುವ ಕ್ರಮ, ಕೈಗೊಳ್ಳಬೇಕಾದ ಕ್ರಮ, ಎದುರಾಗುವ ಸವಾಲುಗಳು ಇನ್ನಿತರ ಮಹತ್ತರ ಚರ್ಚೆ ನಡೆಸಲಿದ್ದಾರೆ.

ಈ ಸಂದರ್ಭದಲ್ಲಿ ನಿವೃತ್ತ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ ಮತ್ತು ಕರ್ನಾಟಕದ ಚೀಫ್ ವೈಲ್ಡ್ ಲೈಫ್ ವಾರ್ಡನ್) ಸುಭಾಷ್ ಮಾಲ್ಖೇಡೆ, ಸಿಎಫ್‌ಓ ಬಿಶ್ವಜಿತ್ ಮಿಶ್ರಾ, ಎನ್‌ಟಿಸಿಎ ಡಿಐಜಿ ವೈಭವ್ ಮಾಥುರ್, ಎಪಿಸಿಸಿಎಫ್ ಮನೋರಂಜನ್, ಹುಲಿ ಯೋಜನೆ ಸಿಎಫ್ ಓ ಡಾ.ಪಿ. ರಮೇಶ್ ಕುಮಾರ್, ಚಾಮರಾಜನಗರ ವಲಯದ ಸಿಎಫ್ ಓ ಡಾ.ಮಾಲತಿ ಪ್ರಿಯ, ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ನಿರ್ದೇಶಕರಾದ ಎಸ್.ಪ್ರಭಾಕರನ್ ಕಾರ್ಯಕ್ರಮ ದಲ್ಲಿ ಉಪಸ್ಥಿತರಿದ್ದರು.

ಅಂತರಾಷ್ಟ್ರೀಯ ಬಿಗ್ ಕ್ಯಾಟ್ ಶೃಂಗಸಭೆ ಆಯೋಜನೆ ಸಂಬಂಧ ಮಾಹಿತಿ ನೀಡಿದ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ನಿರ್ದೇಶಕ ಎಸ್.ಪ್ರಭಾಕರನ್ ಅವರು ಶೃಂಗಸಭೆಯಲ್ಲಿ ಕಾರ್ಯಾಗಾರ ಹಾಗೂ ಕ್ಷೇತ್ರ ಭೇಟಿಯಂತಹ ಕಾರ್ಯಕ್ರಮಗಳಿವೆ. ದೊಡ್ಡ ಬೆಕ್ಕು ಜಾತಿಗೆ ಸೇರಿದ ಪ್ರಾಣಿಗಳ ಸಂರಕ್ಷಣೆ, ಮಾನವ ಸಂಘರ್ಷ ಸಮಸ್ಯೆಗಳಿಗೆ ಪರಿಹಾರ ಇನ್ನಿತರ ಮಹತ್ವದ ವಿಷಯಗಳ ಕುರಿತು ವಿವಿಧ ದೇಶಗಳಿಂದ ಆಗಮಿಸಿರುವ ಪ್ರತಿನಿಧಿಗಳೊಂದಿಗೆ ವಿಚಾರ ವಿನಿಮಯ ನಡೆಯಲಿದೆ. ಹುಲಿ ಸಂರಕ್ಷಣೆಗೆ ಕೈಗೊಂಡ ಪರಿಣಾಮಕಾರಿ ಕ್ರಮಗಳು ಹೊರ ದೇಶದವರು ಅಳವಡಿಸಿಕೊಂಡಿರುವ ಕ್ರಮಗಳ ಕುರಿತ ಮಾಹಿತಿ ವಿನಿಮಯ ಸಹ ನಡೆಯಲಿದೆ ಎಂದರು. ಈ ಶೃಂಗಸಭೆ ಫೆ.11ವರೆಗೆ ಬಂಡೀಪುರದಲ್ಲಿ ನಡೆಯಲಿದ್ದು, ಫೆ.11 ರಿಂದ 13ರವರೆಗೆ ನಾಗರಹೊಳೆ ಸಂರಕ್ಷಿತ ಪ್ರದೇಶದ ಕಬಿನಿ ಜಿಎಲ್‌ಆರ್ ಅಲ್ಲಿ ಮುಂದುವರೆಯಲಿದೆ.

ಅಂಬೇಡ್ಕರ್ ಅಪಮಾನಿಸುವವರ ವಿರುದ್ಧ ಕ್ರಮಕ್ಕೆ ಆಗ್ರಹ

ಚಾಮರಾಜನಗರ, ಫೆ.9– ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರನ್ನು ಅಪಮಾನಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ದಲಿತ ಮುಖಂಡರು ಆಗ್ರಹಿಸಿದರು.

ನಗರದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿ ಸಭಾಂಗಣದಲ್ಲಿ ಆಯೋಜಿಸಿದ್ದ ಎಸ್‌ಸಿ, ಎಸ್‌ಟಿ ಮುಖಂಡರ ಕುಂದು–ಕೊರತೆ ಸಭೆಯಲ್ಲಿ ಮಾತನಾಡಿದ ಮುಖಂಡ ಸಿ.ಕೆ.ಮಂಜುನಾಥ್, ಫೇಸ್‌ಬುಕ್‌ನಲ್ಲಿ ಗುಲಾಮರ ಅಪ್ಪ ಎಂಬ ನಕಲಿ ಖಾತೆ ಸೃಷ್ಟಿಸಿ ಅಂಬೇಡ್ಕರ್, ಸಂವಿಧಾನದ ಬಗ್ಗೆ ಅಪಮಾನ ಮಾಡಲಾಗುತ್ತಿದೆ. ಅಲ್ಲದೇ ಜಿಲ್ಲೆಯಲ್ಲಿ ನಕಲಿ ಖಾತೆಯನ್ನು ಫಾಲೋ ಹಾಗೂ ಶೇರ್ ಮಾಡುವವರಿದ್ದು, ಅವರ ವಿರುದ್ಧ ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು.

ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ಸಭೆ ಕರೆಯಬೇಕು. ಜನಾಂಗದ ಬಗ್ಗೆ ಕಾಳಜಿ ಇಲ್ಲದವರನ್ನು ಸಮಿತಿ ಸದಸ್ಯರನ್ನಾಗಿ ಮಾಡಿಕೊಂಡು ಸಭೆ ಕರೆಯಲಾಗುತ್ತಿದೆ. 3 ತಿಂಗಳಿಗೊಮ್ಮೆ ಸಭೆ ಕರೆದರೆ ಸಮಸ್ಯೆ ಬಗೆಹರಿಯಲಿದೆ ಎಂದರು.



ಚಾಮರಾಜನಗರದಲ್ಲಿ ಎಸ್‌ಸಿ, ಎಸ್‌ಟಿ ಮುಖಂಡರ ಕುಂದು–ಕೊರತೆ ಸಭೆ ನಡೆಯಿತು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮುತ್ತುರಾಜು ಮಾತನಾಡಿ, ಈ ಪ್ರಕರಣ ಸಂಬಂಧ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನೇತೃತ್ವದಲ್ಲಿ ವಿಶೇಷ ತನಿಖಾ ತಂಡ ನೇಮಿಸಿದ್ದು, ವರದಿ ಬಂದ ನಂತರ ಕ್ರಮ ವಹಿಸಲಾಗುವುದು ಎಂದರು.

ಮುಖಂಡ ಸಂಘಸೇನಾ ಮಾತನಾಡಿ, ಈ ಪ್ರಕರಣ ಸಂಬಂಧ ಸರಿಯಾಗಿ ತನಿಖೆ ನಡೆಯುತ್ತಿಲ್ಲ. ಇದರ ಹಿಂದೆ ಕೋಮುವಾದಿಗಳ ಕೈವಾಡವಿದೆ. ಈಗಾಗಲೇ ಬಂಧಿಸಿರುವವರನ್ನು ಮಂಪರು ಪರೀಕ್ಷೆಗೆ ಒಳಪಡಿಸಬೇಕು. ಅಲ್ಲದೇ ಸಿದ್ದಯ್ಯನಪುರ, ವೆಂಕಟಯ್ಯನಛತ್ರ, ಅಮಚವಾಡಿ ಗ್ರಾಮಗಳಲ್ಲೂ ಈ ರೀತಿಯ ಕೃತ್ಯ ನಡೆದಿದ್ದು, ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ನಡೆಯದಂತೆ ಕ್ರಮವಹಿಸಬೇಕು ಎಂದರು.

ಪೂರ್ವ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ನವೀನ್ ಮಾತನಾಡಿ, ಈಗಾಗಲೇ ಈ ಪ್ರಕರಣ ಸಂಬಂಧ ಆರೋಪಿಗೆ 52 ದಿನಗಳ ನ್ಯಾಯಾಂಗ ಬಂಧನವಾಗಿದೆ. ಪ್ರಾಥಮಿಕ ತನಿಖೆಯಲ್ಲಿ ಮಂಜುನಾಥ ಎಂಬ ವ್ಯಕ್ತಿ ಕೃತ್ಯ ಎಸಗಿರುವುದು ದೃಢಪಟ್ಟಿದೆ ಎಂದರು.

ಸಭೆಯಲ್ಲಿ ಎಎಸ್‌ಪಿ ಶಶಿಧರ್, ಡಿವೈಎಸ್‌ಪಿಗಳಾದ ಸ್ನೇಹರಾಜ್, ಧರ್ಮೇಂದ್ರ, ಮುಖಂಡರಾದ ರಾಜಣ್ಣ ಸೇರಿದಂತೆ ಇತರರಿದ್ದರು.

ಇಂದು ಜಿಲ್ಲಾಮಟ್ಟದ ಜಂತುಹುಳು ನಿವಾರಣಾ ದಿನಾಚರಣೆ

ಚಾಮರಾಜನಗರ, ಫೆ.9– ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ 2025–26ನೇ ಸಾಲಿನ ರಾಷ್ಟ್ರೀಯ ಜಂತುಹುಳು ನಿವಾರಣಾ ದಿನಾಚರಣೆ ಅಂಗವಾಗಿ ಫೆ10ರಂದು ಬೆಳಗ್ಗೆ 10 ಗಂಟೆಗೆ ಜಿಲ್ಲಾ ಮಟ್ಟದ ರಾಷ್ಟ್ರೀಯ ಜಂತುಹುಳು ನಿವಾರಣಾ ದಿನಾಚರಣೆ ಚಂದಕವಾಡಿ ಗ್ರಾಮದ ಕರ್ನಾಟಕ ಪಬ್ಲಿಕ್ ಶಾಲೆಯ ಹಿರಿಯ ಪ್ರಾಥಮಿಕ ಶಾಲಾ ವಿಭಾಗದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಬಜೆಟ್‌ನಲ್ಲಿ ವಿಶೇಷ ಪ್ಯಾಕೇಜ್‌ಗೆ ಒತ್ತಾಯಿಸಿ ತಮಟೆ ಚಳವಳಿ



ಆಯವ್ಯಯದಲ್ಲಿ ಜಿಲ್ಲೆಗೆ ವಿಶೇಷ ಪ್ಯಾಕೇಜ್ ಘೋಷಿಸಬೇಕು ಎಂದು ಒತ್ತಾಯಿಸಿ ತಮಟೆ ಚಳವಳಿ ನಡೆಯಿತು.

ಚಾಮರಾಜನಗರ, ಫೆ.9– ರಾಜ್ಯ ಸರ್ಕಾರ ಆಯವ್ಯಯದಲ್ಲಿ ಜಿಲ್ಲೆಗೆ ವಿಶೇಷ ಪ್ಯಾಕೇಜ್ ಘೋಷಿಸಬೇಕು ಎಂದು ಒತ್ತಾಯಿಸಿ ಕರ್ನಾಟಕ ಸೇನಾಪಡೆ ವತಿಯಿಂದ ನಗರದಲ್ಲಿ ತಮಟೆ ಚಳವಳಿ ನಡೆಸಲಾಯಿತು.

ನಗರದ ಜಿಲ್ಲಾಡಳಿತ ಭವನದ ಗೇಟ್ ಎದುರು ಜಮಾಯಿಸಿದ ಪ್ರತಿಭಟನಾನಿರತರು ಪ್ರತಿಭಟನೆ ನಡೆಸಿ, ಜಿಲ್ಲೆಯ ಅಭಿವೃದ್ಧಿಗೆ ವಿಶೇಷ ಪ್ಯಾಕೇಜ್ ಘೋಷಿಸಬೇಕು ಎಂದು ಒತ್ತಾಯಿಸಿದರು.

ಕರ್ನಾಟಕ ಸೇನಾಪಡೆ ಅಧ್ಯಕ್ಷ ಚಾ.ರಂ. ಶ್ರೀನಿವಾಸಗೌಡ ಮಾತನಾಡಿ, ಸಿಎಂ ಸಿದ್ದರಾಮಯ್ಯ ಅವರು ಅನೇಕ ಸಲ ಜಿಲ್ಲೆಗೆ ಭೇಟಿ ನೀಡಿ ಚಾಮರಾಜನಗರದ ಬಗ್ಗೆ ವಿಶೇಷ ಅಭಿಮಾನವನ್ನಿಟ್ಟುಕೊಂಡಿದ್ದಾರೆ. ಚಾಮರಾಜನಗರ ಗಡಿ ಜಿಲ್ಲೆಯಾಗಿದ್ದು, ಇಲ್ಲಿ ಬಡವರು, ಮಧ್ಯಮ ವರ್ಗದವರು, ಕಾರ್ಮಿಕರು, ರೈತರು ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಜಿಲ್ಲೆಯ ಸರ್ವತೋಮುಖ ಅಭಿವೃದ್ಧಿಗಾಗಿ ಈ ಸಾಲಿನ ರಾಜ್ಯ ಬಜೆಟ್‌ನಲ್ಲಿ 5 ಸಾವಿರ ಕೋಟಿ ವಿಶೇಷ ಪ್ಯಾಕೇಜ್ ಘೋಷಿಸಬೇಕು ಎಂದು ಆಗ್ರಹಿಸಿದರು.

ಜಿಲ್ಲೆಯಲ್ಲಿ ಬಿಸಿಲಿನ ತಾಪ ಹೆಚ್ಚಾಗಿದ್ದು, ಅಂತರ್ಜಲ ಕುಸಿಯುತ್ತಿದ್ದು ಕುಡಿಯುವ ನೀರಿನ ಸಮಸ್ಯೆ ಎದುರಾಗಿದೆ. ಹೀಗಾಗಿ ಕೆರೆಗಳಿಗೆ ನೀರು ತುಂಬಿಸುವ ಮೂಲಕ ರೈತರಿಗೆ, ಜನರಿಗೆ ಅನುಕೂಲ ಮಾಡಿಕೊಡಬೇಕು. ಜಿಲ್ಲೆಯ ಪ್ರವಾಸೋದ್ಯಮಕ್ಕೆ ವಿಶೇಷ ಗಮನ ಕೊಡಬೇಕು. ಶಿಕ್ಷಣ ಕ್ಷೇತ್ರಕ್ಕೆ ವಿಶೇಷ ಒತ್ತು ನೀಡಬೇಕು. ಚಾಮರಾಜನಗರ ವಿಶ್ವವಿದ್ಯಾನಿಲಯದ ಸಂಪೂರ್ಣ ಅಭಿವೃದ್ಧಿಗಾಗಿ 100 ಕೋಟಿ ನೀಡಬೇಕು. ಚಾಮರಾಜನಗರದ ಕುಡಿಯುವ ನೀರಿನ ಯೋಜನೆ ಮಂದಗತಿಯಲ್ಲಿ ಸಾಗುತ್ತಿದೆ. ಇದಕ್ಕೂ ಅನುದಾನ ನೀಡಬೇಕು. ಗಡಿ ಜಿಲ್ಲೆಯಲ್ಲಿ ಕನ್ನಡದ ಬೆಳವಣಿಗೆಗಾಗಿ ಕನ್ನಡ ಭವನವನ್ನು ರಾಜ್ಯ ಸರ್ಕಾರ ಬಜೆಟ್‌ನಲ್ಲಿ ಮಂಜೂರು ಮಾಡಿಕೊಡಬೇಕು ಎಂದು ಆಗ್ರಹಿಸಿದರು.

ಪ್ಯಾದ ಹುಂಡಿರಾಜು, ನಿಜಧ್ವನಿ ಗೋವಿಂದರಾಜು, ಮಹೇಶ್‌ಗೌಡ, ತಾಂಡವಮೂರ್ತಿ, ಸುರೇಶ್ ಶೆಟ್ಟಿ, ರಾಜು, ಹೊಮ್ಮ ಲೋಕೇಶ್ ಇತರರಿದ್ದರು.

ಮೈಸೂರು ಮಿತ್ರ

ಮಂಗಳವಾರ 10 ಫೆಬ್ರವರಿ 2026

ವಿಜೃಂಭಣೆಯಿಂದ ನಡೆದ ತೋಣಚಿಕೊಪ್ಪಲು ಶ್ರೀ ಬಿಸಿಲು ಮಾರಮ್ಮ ಜಾತ್ರೆ

● ಅಪಾರ ಸಂಖ್ಯೆಯ ಭಕ್ತರಿಂದ ತಾಯಿಯ ದರ್ಶನ ● ಭಕ್ತಿಯ ಪರಾಕಾಷ್ಠೆ ಮೆರೆದ ಭಕ್ತ ಸಮೂಹ ● ರಾತ್ರಿ ವೇಳೆಗೆ ಜರುಗಿದ ಅದ್ದೂರಿ ಪಲ್ಲಕ್ಕಿ ಉತ್ಸವ



ಮೈಸೂರಿನ ತೋಣಚಿಕೊಪ್ಪಲಿನ ಶ್ರೀ ಬಿಸಿಲು ಮಾರಮ್ಮ ದೇವಸ್ಥಾನದ ಆವರಣದಲ್ಲಿ ಜಾತ್ರೆ ಪ್ರಯುಕ್ತ ಸೋಮವಾರ ಅಪಾರ ಸಂಖ್ಯೆಯಲ್ಲಿ ನೆರೆದಿದ್ದ ಭಕ್ತರನ್ನು ಚಿತ್ರದಲ್ಲಿ ಕಾಣಬಹುದು.



ಸೋಮವಾರ ರಾತ್ರಿ ಉತ್ಸವ ಮೂರ್ತಿಯ ಪಲ್ಲಕ್ಕಿ ಉತ್ಸವದ ಮೆರವಣಿಗೆ ಅದ್ದೂರಿಯಾಗಿ ನಡೆಯಿತು.

ಮೈಸೂರು,ಫೆ.9(ಪಿಎಂ)– ಪ್ರತಿವರ್ಷದಂತೆ ಮೈಸೂರಿನ ತೋಣಚಿಕೊಪ್ಪಲು ಶ್ರೀ ಬಿಸಿಲು ಮಾರಮ್ಮ ಜಾತ್ರೆ ಮಹೋತ್ಸವ ಸೋಮವಾರ ಅತ್ಯಂತ ವಿಜೃಂಭಣೆಯಿಂದ ನಡೆಯಿತು. ಅಪಾರ ಸಂಖ್ಯೆಯ ಭಕ್ತರು ಜಾತ್ರೆಯಲ್ಲಿ ಪಾಲ್ಗೊಂಡು ಭಕ್ತಿಯ ಪರಾಕಾಷ್ಠೆ ಮೆರೆದರು.

ಜಾತ್ರೆಯ ಕೇಂದ್ರಬಿಂದುವಾದ ತೋಣಚಿಕೊಪ್ಪಲಿನ ಶ್ರೀ ಬಿಸಿಲು ಮಾರಮ್ಮ ದೇವಸ್ಥಾನಕ್ಕೆ ಬೆಳಗ್ಗೆಯಿಂದ ಭಕ್ತರ ಸಾಗರ ಹರಿದು ಬಂದಿತ್ತು. ಮನೆಗಳನ್ನು ಶುಚಿಗೊಳಿಸಿ, ಸುಣ್ಣ ಬಣ್ಣ ಮಾಡಿಸಿ ಸಿದ್ಧತೆ ಮಾಡಿಕೊಂಡಿದ್ದ ತೋಣಚಿಕೊಪ್ಪಲು ಗ್ರಾಮಸ್ಥರು, ಸೋಮವಾರ ಉತ್ಸಾಹದಿಂದ ಜಾತ್ರೆಯಲ್ಲಿ ಪಾಲ್ಗೊಂಡಿದ್ದರು.

ಗೋಪುರ ಸೇರಿದಂತೆ ಮಾರಮ್ಮನ ದೇವಸ್ಥಾನವು ಹೂವಿನ ಅಲಂಕಾರ ಹಾಗೂ ವಿದ್ಯುತ್ ದೀಪಾಲಂಕಾರದಿಂದ ಕಂಗೊಳಿಸಿತು. ಬಿಸಿಲು ಮಾರಮ್ಮ ದೇವಸ್ಥಾನದಲ್ಲಿ ಸೋಮವಾರ ಬೆಳಗಿನ ಜಾವ 2 ಗಂಟೆಗೆ ಹೋಮ ಸೇರಿದಂತೆ ಪೂಜಾ ಕೈಂಕರ್ಯ ನೆರವೇರಿಸಲಾಯಿತು. ಆ ಬಳಿಕ ಭಕ್ತರು ಮಾರಮ್ಮನ ದರ್ಶನ ಪಡೆಯಲು ಮತ್ತು ಪೂಜೆ ಸಲ್ಲಿಸಲು ಅವಕಾಶ ಕಲ್ಪಿಸಲಾಯಿತು.

ನಂತರ ತೋಣಚಿಕೊಪ್ಪಲು ಗ್ರಾಮದ ಹುಚ್ಚಮ್ಮತಾಯಿ ದೇವಸ್ಥಾನದಿಂದ ತಂಪಿನ ಮೆರವಣಿಗೆ ನಡೆಯಿತು. ಹೊಂಬಾಳೆ ಮತ್ತು ತಂಬಿಟ್ಟು ಹೊತ್ತ ಮಹಿಳೆಯರು ಮೆರವಣಿಗೆಯಲ್ಲಿ ಸಾಗಿದರು. ಮಧ್ಯಾಹ್ನದ ವೇಳೆಗೆ ಮೆರವಣಿಗೆಯು ಬಿಸಿಲು ಮಾರಮ್ಮನ ದೇವಸ್ಥಾನಕ್ಕೆ ಆಗಮಿಸಿತು. ಭಾನುವಾರವೇ ಗ್ರಾಮದ ಹುಚ್ಚಮ್ಮತಾಯಿ ದೇವಸ್ಥಾನದಿಂದ ಬಿಸಿಲು ಮಾರಮ್ಮನ ಉತ್ಸವಮೂರ್ತಿ ತಂದು, ಬಿಸಿಲು ಮಾರಮ್ಮ ದೇವಸ್ಥಾನದ ಗರ್ಭಗುಡಿಯ ಉದ್ಭವಮೂರ್ತಿ ಮುಂದೆ ಪ್ರತಿಷ್ಠಾಪಿಸಲಾಗಿತ್ತು. ಸೋಮವಾರ ರಾತ್ರಿ ಉತ್ಸವಮೂರ್ತಿಯ ಪಲ್ಲಕ್ಕಿ ಉತ್ಸವಕ್ಕೆ ಬಿಸಿಲು ಮಾರಮ್ಮ ದೇವಸ್ಥಾನದ ಆವರಣದಲ್ಲಿ ಚಾಲನೆ ದೊರೆಯಿತು.

ಇಲ್ಲಿಂದ ಹೊರಟ ಉತ್ಸವ ಮೂರ್ತಿಯ ಪಲ್ಲಕ್ಕಿ ಉತ್ಸವವು ಗಂಗೋತ್ರಿ ಬಡಾವಣೆ ಹಾಗೂ ತೋಣಚಿಕೊಪ್ಪಲಿನ ಪ್ರಮುಖ ಬೀದಿಯಲ್ಲಿ ಸಾಗಿತು. ಅಂತಿಮವಾಗಿ ತೋಣಚಿಕೊಪ್ಪಲಿನ ಹುಚ್ಚಮ್ಮತಾಯಿ ದೇವಸ್ಥಾನಕ್ಕೆ ತಲುಪಿ ಅಂತ್ಯಗೊಂಡಿತು. ಇದೇ ವೇಳೆ ಉತ್ಸವಮೂರ್ತಿಯನ್ನು ಹುಚ್ಚಮ್ಮ ತಾಯಿ ದೇವಸ್ಥಾನದಲ್ಲಿ ಇರಿಸಲಾಯಿತು. ವರ್ಷಪೂರ್ತಿ ಇದೇ ದೇವಸ್ಥಾನದಲ್ಲಿ ಬಿಸಿಲು ಮಾರಮ್ಮನ ಉತ್ಸವ ಮೂರ್ತಿ ಇರಿಸುವ ಪದ್ಧತಿ ನಡೆದು ಬಂದಿದೆ.

ಬಿಸಿಲು ಮಾರಮ್ಮ ದೇವಸ್ಥಾನದ ಗುಡ್ಡಪ್ಪ ಶಿವಬೀರಪ್ಪ ನೇತೃತ್ವದಲ್ಲಿ ಜಾತ್ರೆಯ ವಿವಿಧ ಪೂಜಾ ಕೈಂಕರ್ಯಗಳು ನೆರವೇರಿದವು. ಶ್ರೀ ಬೀರೇಶ್ವರಸ್ವಾಮಿ ಟ್ರಸ್ಟ್ ವತಿಯಿಂದ ಪ್ರತಿವರ್ಷದಂತೆ ಈ ಬಾರಿಯೂ ಯಶಸ್ವಿಯಾಗಿ ಜಾತ್ರೆ ಜರುಗಿತು. ಟ್ರಸ್ಟ್ ಅಧ್ಯಕ್ಷ ಸಿ.ಜವರಪ್ಪ, ಕಾರ್ಯದರ್ಶಿ ಜೆ.ಕಾಳಪ್ಪ, ಖಜಾಂಚಿ ರವಿಗೌಡ ಸೇರಿದಂತೆ 21 ಮಂದಿ ನಿರ್ದೇಶಕರು ಹಾಗೂ ಗ್ರಾಮದ ಮುಖಂಡರು ಜಾತ್ರೆಗೆ ಸಂಬಂಧಿಸಿದ ಎಲ್ಲಾ ವ್ಯವಸ್ಥೆ ಕೈಗೊಂಡಿದ್ದರು.

ಶಿವರಾತ್ರಿ ಹಬ್ಬದಂದು ಅನ್ನಸಂತರ್ಪಣೆ: ಫೆ.15ರಂದು ಶಿವರಾತ್ರಿ ಹಬ್ಬದ ದಿನದಂದು ಊರಿನ ಎಲ್ಲಾ ದೇವಸ್ಥಾನಗಳ ದೇವರ ಉತ್ಸವ ಮೂರ್ತಿಗಳು ಹಾಗೂ ದೇವರ ಸಾಮಗ್ರಿಗಳನ್ನು ಪೆಟ್ಟಿಗೆಗಳಲ್ಲಿ ತುಂಬಿಕೊಂಡು ಪಾದಯಾತ್ರೆ ಮೂಲಕ ಕಾವೇರಿ ತೀರದ ಪವಿತ್ರ ಯಾತ್ರಾಸ್ಥಳವಾದ ಬಲಮುರಿಗೆ ಗ್ರಾಮದ ನೂರಾರು ಮಂದಿ ತೆರಳಲಿದ್ದಾರೆ. ಅಲ್ಲಿ ಉತ್ಸವ ಮೂರ್ತಿಗಳು, ದೇವರ ಸಾಮಗ್ರಿಗಳನ್ನು ಶುಚಿಗೊಳಿಸಿ ನಂತರ ಅವುಗಳಿಗೆ ವಿಶೇಷ ಪೂಜೆ ಮತ್ತು ಹೋಮ ನೆರವೇರಿಸಿ ಕಾಲ್ನಡಿಗೆ ಮೂಲಕವೇ ಅದೇ ದಿನ ಮಧ್ಯಾಹ್ನದ ವೇಳೆಗೆ ತೋಣಚಿಕೊಪ್ಪಲಿನ ಬಿಸಿಲು ಮಾರಮ್ಮ ದೇವಸ್ಥಾನಕ್ಕೆ ಮರಳಲಾಗುತ್ತದೆ. ಬಳಿಕ ಇದೇ ದೇವಸ್ಥಾನದ ಆವರಣದಲ್ಲಿ ಅನ್ನಸಂತರ್ಪಣೆಗೆ ಚಾಲನೆ ನೀಡಲಾಗುತ್ತದೆ.

ಚಾಕು ಹಿಡಿದು ಬಡಿದಾಡಿಲೆತ್ನಿಸಿದ ಮಕ್ಕಳ ವೀಡಿಯೊ ವೈರಲ್

ಅದು ಪ್ಲಾಸ್ಟಿಕ್ ಚಾಕು ; ಪೋಲೀಸರ ಸ್ಪಷ್ಟನೆ


ಮೈಸೂರು,ಫೆ.9(ಪಿಎಂ)– ಕೆಲ ಚಿಕ್ಕ ಮಕ್ಕಳು ಚಾಕು ಹಿಡಿದು ಬಡಿದಾಡಲೆತ್ನಿಸುವ ದೃಶ್ಯವೊಂದು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದ್ದು, ಇದನ್ನು ಕಂಡು ಸಾರ್ವಜನಿಕರು ಆತಂಕ ವ್ಯಕ್ತಪಡಿಸಿದ್ದಾರೆ. ಆದರೆ ಈ ದೃಶ್ಯದಲ್ಲಿ ಕಂಡುಬಂದಿರುವ ಚಾಕು ನೈಜವಾದುದಲ್ಲ. ಅದು ಕೇಕ್ ಕತ್ತರಿಸುವ ಪ್ಲಾಸ್ಟಿಕ್ ಚಾಕು ಅಷ್ಟೇ. ವಿಚಾರಣೆ ಬಳಿಕ ಈ ನೈಜ ಸಂಗತಿ ಗೊತ್ತಾಯಿತು ಎಂದು ಪೊಲೀಸರು ಸ್ಪಷ್ಟಪಡಿಸಿದ್ದಾರೆ.

ಈ ದೃಶ್ಯ ಸಿಸಿಟಿವಿ ಕ್ಯಾಮರಾದಲ್ಲಿ ಸೆರೆಯಾಗಿದೆ. ಚಾಕು ಹಿಡಿದು ಒಬ್ಬ ಬಾಲಕ ಕೆಲ ಮಕ್ಕಳ ಮೇಲೆರಗುವ, ಹೆದರಿಸುವ ದೃಶ್ಯ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಈ ಸಂಬಂಧ ಕೆಲ ದೃಶ್ಯ ಮಾಧ್ಯಮಗಳೂ ವರದಿ ಮಾಡಿದವು. ಮೈಸೂರಿನ ಉದಯಗಿರಿ ಪೊಲೀಸ್ ಠಾಣೆ ವ್ಯಾಪ್ತಿಯ ಶಾಂತಿನಗರದಲ್ಲಿ ಈ ಘಟನೆ ನಡೆದಿದೆ ಎಂದು ವರದಿಯಾಗಿದೆ. ಈ ದೃಶ್ಯದಲ್ಲಿ ಕಂಡುಬಂದಿರುವ ಮಕ್ಕಳು ಸುಮಾರು 6ರಿಂದ 8 ವರ್ಷ ವಯೋಮಾನದ ಮಕ್ಕಳು.

ದೃಶ್ಯ ನೋಡಿದರೆ, 'ಚಿಕ್ಕ ಮಕ್ಕಳ ನಡುವೆಯೇ ಗ್ಯಾಂಗ್ ವಾರ್' ನಡೆಯುತ್ತಿದೆಯೇ ಎನ್ನುವಂತಿದ್ದು, ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿರುವ ವೀಡಿಯೊ ಮೈಸೂರು ನಗರದ್ದು ಎಂದು ಉಲ್ಲೇಖಿಸಿರುವ ಕಾರಣ ಸಾಂಸ್ಕೃತಿಕ ನಗರಿಯ ಜನತೆಯಲ್ಲಿ ಆತಂಕ ಮೂಡಿಸಿದೆ.

ಪೊಲೀಸರ ಸ್ಪಷ್ಟನೆ: ಚಿಕ್ಕ ಮಕ್ಕಳು ಕೇಕ್ ಕತ್ತರಿಸುವ ಪ್ಲಾಸ್ಟಿಕ್ ಚಾಕು ಹಿಡಿದು ಈ ರೀತಿ ವರ್ತಿಸಿದ್ದಾರೆ. ಅದು ನೈಜ ಚಾಕು ಅಲ್ಲ. ಈ ಸಂಬಂಧ ವಿಚಾರಣೆ ನಡೆಸಿ ಮಕ್ಕಳ ಪೋಷಕರೊಂದಿಗೆ ಮಾತುಕತೆ ನಡೆಸಿ ಮಕ್ಕಳಿಗೆ ತಿಳಿಹೇಳುವಂತೆ ಸೂಚಿಸಲಾಗಿದೆ. ಹಾಗಾಗಿ ಈಗ ಬಿಂಬಿತವಾಗಿರುವಂತೆ ಇದು ಆಘಾತಕಾರಿ ಘಟನೆ ಏನಲ್ಲವೆಂದು ಉದಯಗಿರಿ ಪೊಲೀಸರು ಸ್ಪಷ್ಟಪಡಿಸಿದ್ದಾರೆ.

ಶ್ರೀ ದಂಡಿಮಾರಮ್ಮನ ಜಾತ್ರೆಯಲ್ಲಿ ಎಂಕೆಎಸ್ ಭಾಗಿ...



ಮೈಸೂರಿನ ಶ್ರೀರಾಂಪುರದ ಶಿವಪುರ ಗ್ರಾಮದ ಶ್ರೀ ದಂಡಿಮಾರಮ್ಮನ ಜಾತ್ರಾ ಮಹೋತ್ಸವದಲ್ಲಿ ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಭಾಗವಹಿಸಿದ್ದರು. ಈ ವೇಳೆ ಮುಖಂಡ ಮಲ್ಲಿಕಾರ್ಜುನಸ್ವಾಮಿ (ಬಸವರಾಜು), ಯಜಮಾನರಾದ ಗಣೇಶ್, ಮಾದಪ್ಪ, ಭರತ್, ಗಂಗಾಧರ್, ಮಲ್ಲು, ಪುಟ್ಟಮಾದು, ಆಶ್ರಯ ಸಮಿತಿ ಸದಸ್ಯ ಗುಣಶೇಖರ್ ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

ಉತ್ತರಪ್ರದೇಶದಲ್ಲಿ ಗುಂಪು ಕಟ್ಟಿಕೊಂಡು ಬಂದು ಹಿಂದೂ ದೇವಾಲಯದ ಗೋಡೆ ಕೆಡವಿದ ಮುಸ್ಲಿಂ ಮಹಿಳೆಯರು



ಪ್ರತಾಪಗಢ(ಉತ್ತರ ಪ್ರದೇಶ): ಉತ್ತರಪ್ರದೇಶದ ರಾಣಿಗಂಜ್‌ನಲ್ಲಿ ನಿರ್ಮಾಣ ಹಂತದಲ್ಲಿದ್ದ ಹಿಂದೂ ದೇವಾಲಯದ ಗೋಡೆಯನ್ನು ಮುಸ್ಲಿಂ ಮಹಿಳೆಯರು ಕೆಡವಿದ ವೀಡಿಯೊ ವೈರಲ್ ಆಗಿದೆ. ಮುಸ್ಲಿಂ ಮಹಿಳೆಯರ ಗುಂಪು ಹಿಂದೂ ದೇವಾಲಯದ ಗೋಡೆಯನ್ನು ಕೆಡವಿದ್ದ ಈ ವೀಡಿಯೊ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದ್ದು ಹಿಂದೂ ಕಾರ್ಯಕರ್ತರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ಘಟನೆ ಸಂಬಂಧ ಕೋಹಾಂಡೋರ್ ಪೊಲೀಸರು ಮೂವರು ಮಹಿಳೆಯರು ಹಾಗೂ ಓರ್ವ ವ್ಯಕ್ತಿಯನ್ನು ಬಂಧಿಸಿದ್ದಾರೆ.

ಮೈಸೂರಿನ ಕಟ್ಟಡ ತ್ಯಾಜ್ಯ ವೈಜ್ಞಾನಿಕ ಸಂಸ್ಕರಣೆ ಘಟಕ ನಿರ್ಮಾಣ ಕಾಮಗಾರಿ ಅಂತೂ ಆರಂಭ

● ವರ್ಷಾಂತ್ಯಕ್ಕೆ ಪೂರ್ಣಗೊಳಿಸುವ ವಿಶ್ವಾಸ ● 9 ಎಕರೆ ಪ್ರದೇಶದಲ್ಲಿ 11 ಕೋಟಿ ವೆಚ್ಚದಲ್ಲಿ ನಿರ್ಮಾಣ ● ಉಪ ಉತ್ಪನ್ನಗಳ ಮೂಲಕ ವ್ಯವಸ್ಥಿತ ನಿರ್ವಹಣೆ ಉದ್ದೇಶ



ಇನ್ನು ಮುಂದೆ ಎಲ್ಲೆಂದರಲ್ಲಿ ಕಟ್ಟಡ ತ್ಯಾಜ್ಯ ಸುರಿಯಬಾರದು

ಸಿ ಅಂಡ್ ಡಿ ಘಟಕ ನಿರ್ಮಾಣವಾದ ನಂತರ ಯಾರೂ ಕೂಡ ಕಟ್ಟಡ ತ್ಯಾಜ್ಯವನ್ನು ಎಲ್ಲೆಂದರಲ್ಲಿ ಸುರಿಯಬಾರದು. ಸಂಗ್ರಹವಾಗುವ ಕಟ್ಟಡ ತ್ಯಾಜ್ಯವನ್ನು ಸಿ ಅಂಡ್ ಡಿ ಘಟಕಕ್ಕೆ ತರಬೇಕು. ಇದರಿಂದ ಮೈಸೂರು ನಗರದಲ್ಲಿ ಸ್ವಚ್ಛತೆಯನ್ನು ಕಾಪಾಡಿದಂತಾಗುತ್ತದೆ. ಅಲ್ಲದೆ ಕಟ್ಟಡ ತ್ಯಾಜ್ಯ ಸಂಸ್ಕರಣೆಯಿಂದ ಹಲವು ಉಪ ಉತ್ಪನ್ನವನ್ನು ಕೂಡ ತಯಾರಿಸಬಹುದು. ಸಿ ಅಂಡ್ ಡಿ ಘಟಕ ನಿರ್ಮಾಣವಾದ ನಂತರ ಅದರ ನಿರ್ವಹಣೆಯನ್ನು ಪಿಪಿಪಿ ಮಾಡೆಲ್‌ನಲ್ಲಿ ಕೈಗೊಳ್ಳಲು ತೀರ್ಮಾನ ಮಾಡಲಾಗಿದೆ. ಸಿವಿಲ್ ಕಾಮಗಾರಿ ಮುಗಿದ ನಂತರ ಟೆಂಡರ್ ಸೇರಿದಂತೆ ಇತರೆ ಪ್ರಕ್ರಿಯೆ ಆರಂಭಿಸಲಾಗುವುದು.

– **ಮೃತ್ಯುಂಜಯ,** ಅಸಿಸ್ಟೆಂಟ್ ಎಕ್ಸಿಕ್ಯೂಟಿವ್ ಇಂಜಿನಿಯರ್, ಮೈಸೂರು ಮಹಾನಗರ ಪಾಲಿಕೆ.

ಮೈಸೂರು, ಫೆ.9(ಬಿಎಲ್‌ಯು)– ಮೈಸೂರಿನಲ್ಲಿ ಕಟ್ಟಡ ತ್ಯಾಜ್ಯವನ್ನು ವೈಜ್ಞಾನಿಕವಾಗಿ ಸಂಸ್ಕರಣೆ ಮಾಡುವ ಘಟಕದ ನಿರ್ಮಾಣ ಕಾಮಗಾರಿ ಅಂತೂ ಆರಂಭಗೊಂಡಿದೆ.

ಮೈಸೂರಿನ ಸಾತಗಳ್ಳಿ–ಹಂಚ್ಯಾ ವ್ಯಾಪ್ತಿಯ ಸುಮಾರು 9 ಎಕರೆ ಪ್ರದೇಶದಲ್ಲಿ 11 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಕಟ್ಟಡ ತ್ಯಾಜ್ಯ(ಸಿ ಅಂಡ್ ಡಿ ವೇಸ್ಟ್) ಸಂಸ್ಕರಣಾ ಘಟಕದ ನಿರ್ಮಾಣ ಕಾಮಗಾರಿಯನ್ನು ಮೈಸೂರು ಮಹಾನಗರ ಪಾಲಿಕೆ ಕೈಗೆತ್ತಿಕೊಂಡಿದೆ. 10 ದಿನಗಳ ಹಿಂದೆಯೇ ಕಾಮಗಾರಿಗೆ ಚಾಲನೆ ದೊರೆತಿದ್ದು, ಪ್ರಸಕ್ತ ವರ್ಷಾಂತ್ಯದಲ್ಲಿ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ.

ಗಂಭೀರ ಸಮಸ್ಯೆಗೆ ಪರಿಹಾರ: ಮೈಸೂರು ನಗರದಲ್ಲಿ ಸಿ ಅಂಡ್ ಡಿ ವೇಸ್ಟ್ ಸಮಸ್ಯೆ ಗಂಭೀರವಾಗಿದೆ. ರಿಂಗ್ ರಸ್ತೆಯ ಇಕ್ಕೆಲಗಳಲ್ಲಿ, ಬತ್ತಿರುವ ಕೆರೆ–ಹೊಂಡಗಳಲ್ಲಿ ಮಾತ್ರವಲ್ಲದೆ ಪ್ರಮುಖ ಬಡಾವಣೆಗಳ ಖಾಲಿ ಜಾಗ, ರಸ್ತೆ, ರಸ್ತೆ ಬದಿಯಲ್ಲೂ ಕಟ್ಟಡ ತ್ಯಾಜ್ಯ ಕಣ್ಣಿಗೆ ರಾಚುತ್ತದೆ. ಎಲ್ಲೆಂದರಲ್ಲಿ ಕಟ್ಟಡ ತ್ಯಾಜ್ಯ ಸುರಿಯದಂತೆ ತಡೆಯಲು ಸ್ಥಳೀಯ ಆಡಳಿತ ಸಂಸ್ಥೆಗಳು ಇನ್ನಿಲ್ಲದ ಪ್ರಯತ್ನ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ. ಯಾವ ಎಚ್ಚರಿಕೆಗೂ ಬಗ್ಗದ ಜನ, ಕಟ್ಟಡಗಳನ್ನು ನೆಲಸಮಗೊಳಿಸಿದ ನಂತರ ಇಟ್ಟಿಗೆ, ಕಾಂಕ್ರೀಟ್, ಮಣ್ಣು ಅನುಪಯುಕ್ತ ಮರ, ಕಬ್ಬಿಣ ಇನ್ನಿತರ ತ್ಯಾಜ್ಯವನ್ನು ಎಲ್ಲೆಂದರಲ್ಲಿ ಸುರಿಯುತ್ತಿದ್ದಾರೆ.

ಈ ಸಂಬಂಧ ಮೈಸೂರು ನಗರ ಪಾಲಿಕೆ ಹಾಗೂ ಮುಡಾ(ಇಂದಿನ ಎಂಡಿಎ) ಸಭೆಯಲ್ಲಿ ಸಾಕಷ್ಟು ಚರ್ಚೆ ನಡೆಸಿ, ಕಟ್ಟಡ ತ್ಯಾಜ್ಯ ಸುರಿಯುವುದಕ್ಕೆ ಕಡಿವಾಣ ಹಾಕಲು ದಂಡ ಪ್ರಯೋಗವನ್ನೂ ಮಾಡಲಾಯಿತು. ಆದರೆ, ದಿನದ 24 ಗಂಟೆಯೂ ಕಾವಲಿರಲು ಸಾಧ್ಯವಿಲ್ಲದ ಕಾರಣ, ದಂಡಾಸ್ತ್ರ ಫಲಿಸಲಿಲ್ಲ. ಆದ್ದರಿಂದ ನಗರ ಪಾಲಿಕೆ ಕಸದಿಂದ ರಸ ತೆಗೆಯುವ ತತ್ವದಡಿ ಈ ವೈಜ್ಞಾನಿಕ ಮಾರ್ಗೋಪಾಯವನ್ನು ಕಂಡುಕೊಂಡಿದೆ.

ಕಟ್ಟಡ ತ್ಯಾಜ್ಯ ಸಂಸ್ಕರಣಾ ಘಟಕದ ಮೂಲಕ ಗಂಭೀರ ಸಮಸ್ಯೆ ಪರಿಹರಿಸುವ ಪ್ರಯತ್ನ ಆರಂಭಿಸಿದ್ದು, ಮುಂದಿನ ವರ್ಷ ಕಾರ್ಯಾರಂಭಿಸುವ ಸಾಧ್ಯತೆ ಇದೆ. ಸಿವಿಲ್ ಕಾಮಗಾರಿ ಪೂರ್ಣಗೊಂಡ ನಂತರ ದೆಹಲಿಯಿಂದ ಯಂತ್ರಗಳನ್ನು ತರಿಸಲು ಸಂಬಂಧಪಟ್ಟ ಕಂಪನಿಯೊಂದಿಗೆ ಸಮಾಲೋಚನೆ ನಡೆದಿದೆ. ಹೀಗೆ ಕಟ್ಟಡ ತ್ಯಾಜ್ಯವನ್ನು ವೈಜ್ಞಾನಿಕಾಗಿ ಸಂಸ್ಕರಿಸಿದ ನಂತರ ಅದರಿಂದ ಟೈಲ್ಸ್, ಇಟ್ಟಿಗೆ ಸೇರಿದಂತೆ ಕಟ್ಟಡ ನಿರ್ಮಾಣದ ಇತರೆ ವಸ್ತುಗಳನ್ನು ತಯಾರಿಸುವ ಯೋಜನೆ ರೂಪಿಸಲಾಗಿದೆ.



ಟಿ-20 ಮಹಾಸಮರ

ಜಿಂಬಾಬ್ವೆಗೆ ಸುಲಭ ತುತ್ತಾದ ಒಮನ್



ಕೊಲಂಬೊ, ಫೆ.9– ಬೌಲರ್‌ಗಳ ಕರಾರುವಾಕ್ ಬೌಲಿಂಗ್ ದಾಳಿ ನೆರವಿನಿಂದ ಒಮನ್ ವಿರುದ್ಧ ಜಿಂಬಾಬ್ವೆ 8 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ. ಇದರೊಂದಿಗೆ ಬಿ ಗುಂಪಿನಲ್ಲಿ ಶ್ರೀಲಂಕಾವನ್ನು ಹಿಂದಿಕ್ಕಿ ಜಿಂಬಾಬ್ವೆ ಅಗ್ರಸ್ಥಾನ ಪಡೆಯಿತು.

ಇಲ್ಲಿನ ಸಿಂಹಳೀಸ್ ಸ್ಪೋರ್ಟ್ಸ್ ಕ್ಲಬ್‌ನಲ್ಲಿ ಸೋಮವಾರ ನಡೆದ ಐಸಿಸಿ ಟಿ20 ವಿಶ್ವಕಪ್ ಟೂರ್ನಿಯ 8ನೇ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಒಮನ್ ಪರ ಸುಫ್ಯಾನ್ ಮೆಹಮೂದ್ 25, ವಿನಾಯಕ ಶುಕ್ಲಾ 28 ಹಾಗೂ ನದೀಂ ಖಾನ್ 20 ರನ್ ಗಳಿಸಿದ್ದು ಬಿಟ್ಟರೇ ಉಳಿದವರಿಂದ ನಿರೀಕ್ಷಿತ ಪ್ರದರ್ಶನ ಮೂಡಿ ಬರಲಿಲ್ಲ. ಬದಲಿಗೆ ಎರಡಂಕಿ ಮೊತ್ತ ದಾಖಲಿಸಲು ಸಾಧ್ಯವಾಗದೇ ಪೆವಿಲಿಯನ್ ಪರೇಡ್ ನಡೆಸಿದರು. ಅಂತಿಮವಾಗಿ ಒಮನ್ 19.5 ಓವರ್‌ಗಳಲ್ಲಿ 103 ರನ್‌ಗಳಿಗೆ ಆಲೌಟಾಯಿತು. ಜಿಂಬಾಬ್ವೆ ಪರ ಬ್ಲೆಸ್ಸಿಂಗ್ ಮುಜರಬಾನಿ, ರಿಚರ್ಡ್ ನ್ಗಾರವಾ ಮತ್ತು ಬ್ರಾಡ್ ಇವಾನ್ಸ್ ತಲಾ 3 ವಿಕೆಟ್ ಪಡೆದು ಮಿಂಚಿದರು.

ಒಮನ್ ನೀಡಿದ 104 ರನ್‌ಗಳ ಗೆಲುವಿನ ಗುರಿ ಬೆನ್ನತ್ತಿದ ಜಿಂಬಾಬ್ವೆ ಕೇವಲ 13.3 ಓವರ್‌ಗಳಲ್ಲೇ 2 ವಿಕೆಟ್ ನಷ್ಟಕ್ಕೆ ಗುರಿ ತಲುಪಿ ಗೆಲುವು ಸಾಧಿಸಿತು. ತಂಡದ ಪರ ಬ್ರಿಯಾನ್ ಬೆನೆಟ್ 48 ರನ್ ಗಳಿಸಿ ಅಜೇಯರಾಗಿ ಉಳಿದರು. ಬ್ರೆಂಡನ್ ಟೇಲರ್ 31, ತದಿವನಾಶೆ ಮರುಮಾನಿ 21 ರನ್ ಗಳಿಸುವ ಮೂಲಕ ಜಿಂಬಾಬ್ವೆಗೆ ಗೆಲುವಿನ ಕಾಣಿಕೆ ನೀಡಿದರು. ಒಮನ್ ಪರ ಸುಫ್ಯಾನ್ ಮೆಹಮೂದ್ 2 ವಿಕೆಟ್ ಉರುಳಿಸಿದರು. ಬ್ಲೆಸ್ಸಿಂಗ್ ಮುಜರಬಾನಿ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು.

ಕೆನಡಾ ಮಣಿಸಿ ದ.ಆಫ್ರಿಕಾ ಶುಭಾರಂಭ

ಅಹಮದಾಬಾದ್, ಫೆ.9– ಐಡೆನ್ ಮಾರ್ಕ್ರಾಮ್ ಅವರ ಬಿರುಸಿನ ಅರ್ಧಶತಕ ಹಾಗೂ ಲುಂಗಿ ಎನ್‌ಗಿಡಿ ಅವರ ಮಾರಕ ಬೌಲಿಂಗ್ ದಾಳಿ ನೆರವಿನಿಂದ ಕೆನಡಾ ವಿರುದ್ಧ ದಕ್ಷಿಣ ಆಫ್ರಿಕಾ 57 ರನ್‌ಗಳ ಅಮೋಘ ಜಯ ಸಾಧಿಸಿದೆ. ಇದರೊಂದಿಗೆ ಟಿ20 ವಿಶ್ವಕಪ್ ಪಂದ್ಯಾವಳಿಯ 'ಡಿ' ಗುಂಪಿನಲ್ಲಿ 2 ಅಂಕ ಹಾಗೂ ಉತ್ತಮ ರನ್ ರೇಟ್‌ನೊಂದಿಗೆ ಅಗ್ರಸ್ಥಾನ ಅಲಂಕರಿಸಿ ಟೂರ್ನಿಯಲ್ಲಿ ಶುಭಾರಂಭ ಮಾಡಿತು.

ಇಲ್ಲಿನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ದಕ್ಷಿಣ ಆಫ್ರಿಕಾ ನಿಗದಿತ 20 ಓವರ್‌ಗಳಲ್ಲಿ 4 ವಿಕೆಟ್ ನಷ್ಟಕ್ಕೆ 213 ರನ್‌ಗಳ ಬೃಹತ್ ಮೊತ್ತ ದಾಖಲಿಸಿತು. 214 ರನ್‌ಗಳ ಗೆಲುವಿನ ಗುರಿ ಬೆನ್ನತ್ತಿದ ಕೆನಡಾ ನಿಗದಿತ 20 ಓವರ್‌ಗಳಲ್ಲಿ 8 ವಿಕೆಟ್ ನಷ್ಟಕ್ಕೆ 156 ರನ್ ಗಳಿಸಲಷ್ಟೇ ಶಕ್ತವಾಗಿ ಸೋಲು ಅನುಭವಿಸಿತು.

ಕೆನಡಾ ಪರ ನವನೀತ್ ಧಲಿವಾಲ್ 49 ಎಸೆತಗಳಲ್ಲಿ 1 ಸಿಕ್ಸರ್, 7 ಬೌಂಡರಿ ಒಳಗೊಂಡ ಆಕರ್ಷಕ 64 ರನ್ ಗಳಿಸಿದರು. ಉಳಿದಂತೆ ಹರ್ಷ್ ಠಾಕರ್ ತಲ್ 2 ಸಿಕ್ಸರ್, ಬೌಂಡರಿ ಒಳಗೊಂಡ 33, ಸಾದ್ ಬಿನ್ ಜಾಫರ್ 11 ರನ್ ಗಳಿಸಿದ್ದು ಬಿಟ್ಟರೇ ಉಳಿದವರಿಂದ ನಿರೀಕ್ಷಿತ ಪ್ರದರ್ಶನ ಮೂಡಿ ಬರಲಿಲ್ಲ. ದಕ್ಷಿಣ ಆಫ್ರಿಕಾ ಪರ ಮಾರಕ ಬೌಲಿಂಗ್ ದಾಳಿ ನಡೆಸಿದ ಲುಂಗಿ ಎನ್‌ಗಿಡಿ 4, ಮಾರ್ಕೊ ಯಾನ್ಸನ್ 2, ಕಗಿಸೋ ರಬಾಡ ಹಾಗೂ ಕಾರ್ಬಿನ್ ಬಾಷ್ ತಲಾ ಒಂದೊಂದು ವಿಕೆಟ್ ಕಬಳಿಸಿದರು.



ವಿಕೆಟ್ ಕಬಳಿಸಿದ ಸಂಭ್ರಮದಲ್ಲಿ ದ.ಆಫ್ರಿಕಾ ಆಟಗಾರರು

ಇದಕ್ಕೂ ಮುನ್ನಾ, ಮೊದಲು ಬ್ಯಾಟಿಂಗ್ ಮಾಡಿದ ದಕ್ಷಿಣ ಆಫ್ರಿಕಾಗೆ ಐಡೆನ್ ಮಾರ್ಕ್ರಾಮ್ ಹಾಗೂ ಕ್ವಿಂಟನ್ ಡಿಕಾಕ್ ಮೊದಲ ವಿಕೆಟ್‌ಗೆ 70 ರನ್ ಜೊತೆಯಾಟವಾಡುವ ಮೂಲಕ ಉತ್ತಮ ಆರಂಭ ಒದಗಿಸಿದರು. ಈ ವೇಳೆ 25 ರನ್ ಗಳಿಸಿದ್ದ ಡಿಕಾಕ್ ವಿಕೆಟ್ ಒಪ್ಪಿಸಿದರು. ಮತ್ತೊಂದೆಡೆ ಬಿರುಸಿನ ಬ್ಯಾಟಿಂಗ್ ಐಡೆನ್ ಮಾರ್ಕ್ರಾಮ್ ರಿಯಾನ್ ರಿಕಲ್ಟನ್ ಜೊತೆಗೂಡಿ 2ನೇ ವಿಕೆಟ್‌ಗೆ 56 ರನ್ ಜೊತೆಯಾಟವಾಡುವ ಮೂಲಕ ತಂಡದ ಬೃಹತ್ ಮೊತ್ತಕ್ಕೆ ಕಾರಣರಾದರು. ಈ ವೇಳೆ ಉತ್ತಮವಾಗಿ ಆಡುತ್ತಿದ್ದ ಐಡೆನ್ ಮಾರ್ಕ್ರಾಮ್ 32 ಎಸೆತಗಳಲ್ಲಿ 10 ಬೌಂಡರಿ, 1 ಸಿಕ್ಸರ್ ಒಳಗೊಂಡ 59 ರನ್ ಗಳಿಸಿ ನಿರ್ಗಮಿಸಿದರು. ಇವರ ಹಿಂದೆಯೇ ರಯಾನ್ ರಿಕಲ್ಟನ್ 33 ಸಹ ವಿಕೆಟ್ ಒಪ್ಪಿಸಿದರು. ನಂತರ ಡೇವಾಲ್ಡ್ ಬ್ರೇವಿಸ್ 6 ರನ್ ಗಳಿಸಿ ನಿರ್ಗಮಿಸಿದರು. ಇನ್ನಿಂಗ್ಸ್‌ನ ಕೊನೆಯಲ್ಲಿ ಬಿರುಸಿನ ಬ್ಯಾಟಿಂಗ್ ಮಾಡಿದ ಡೇವಿಡ್ ಮಿಲ್ಲರ್ 3 ಸಿಕ್ಸರ್, 1 ಬೌಂಡರಿ ಒಳಗೊಂಡ 39, ಟ್ರಿಸ್ಟನ್ ಸ್ಟಬ್ಸ್ ತಲಾ 2 ಸಿಕ್ಸರ್, ಬೌಂಡರಿ ಒಳಗೊಂಡ 34 ರನ್ ಗಳಿಸಿ ತಂಡದ ಮೊತ್ತವನ್ನು 200 ರನ್ ಗಡಿ ದಾಟಿಸಿದರು. ಕೆನಡಾ ಪರ ಅಂಶ್ ಪಟೇಲ್ 2, ದಿಲ್‌ಪ್ರೀತ್ ಬಾಜ್ವಾ ಒಂದು ವಿಕೆಟ್ ಉರುಳಿಸಿದರು. ಲುಂಗಿ ಎನ್‌ಗಿಡಿ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಇಟಲಿ ವಿರುದ್ಧ ಭರ್ಜರಿ ಜಯ ಸಾಧಿಸಿದ ಸ್ಕಾಟ್ಲೆಂಡ್

ಕೋಲ್ಕತ್ತಾ, ಫೆ.9– ಜಾರ್ಜ್ ಮುನ್ಸಿ ಅವರ ಆಕರ್ಷಕ ಅರ್ಧಶತಕ ಹಾಗೂ ಮೈಕಲ್ ಲೀಸ್ಕ್ ಅವರ ಮಾರಕ ಬೌಲಿಂಗ್ ದಾಳಿ ನೆರವಿನಿಂದ ಇಟಲಿ ವಿರುದ್ಧ ಸ್ಕಾಟ್ಲೆಂಡ್ 73 ರನ್‌ಗಳ ಭರ್ಜರಿ ಜಯ ಸಾಧಿಸಿದೆ.

ಇಲ್ಲಿನ ಈಡನ್ ಗಾರ್ಡನ್ ಮೈದಾನದಲ್ಲಿ ನಡೆದ 'ಸಿ' ಗುಂಪಿನ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಸ್ಕಾಟ್ಲೆಂಡ್ 20 ಓವರ್ ಗಳಲ್ಲಿ 4 ವಿಕೆಟ್ ನಷ್ಟಕ್ಕೆ 207 ರನ್ ಕಲೆ ಹಾಕಿತು. ಈ ಗುರಿ ಬೆನ್ನಟ್ಟಿದ ಇಟಲಿ 16.4 ಓವರ್‌ಗಳಲ್ಲಿ 134 ರನ್‌ಗಳಿಗೆ ಆಲೌಟ್ ಆಗುವ ಮೂಲಕ ಸೋಲೊಪ್ಪಿಕೊಂಡಿತು.

ತಂಡದ ಪರ ಇನ್ನಿಂಗ್ಸ್ ಆರಂಭಿಸಿದ ಜಾರ್ಜ್ ಮುನ್ಸಿ ಮತ್ತು ಮೈಕೆಲ್ ಜೋನ್ಸ್ ಮೊದಲ ವಿಕೆಟ್‌ಗೆ 126 ರನ್‌ಗಳ ಜೊತೆಯಾಟವಾಡುವ ಮೂಲಕ ತಂಡಕ್ಕೆ ಉತ್ತಮ ಆರಂಭ ಒದಗಿಸಿದರು. ಈ ವೇಳೆ 54 ಎಸೆತಗಳಲ್ಲಿ 13 ಬೌಂಡರಿ, 2 ಸಿಕ್ಸರ್ ಒಳಗೊಂಡ 84 ರನ್ ಗಳಿಸಿದ್ದ ಜಾರ್ಜ್ ಮುನ್ಸಿ ವಿಕೆಟ್ ಒಪ್ಪಿಸಿದರು. ಇವರ ಹಿಂದೆಯೇ ಮತ್ತೋರ್ವ ಆರಂಭಿಕ ಆಟಗಾರ ಮೈಕೆಲ್ ಜೋನ್ಸ್ 37 ರನ್ ಗಳಿಸಿ ಔಟಾದರೆ ನಂತರ ಬಂದ ಬ್ರಾಂಡನ್ ಮೆಕ್‌ಮುಲ್ಲೆನ್ 18 ಎಸೆತಗಳಲ್ಲಿ 4 ಸಿಕ್ಸರ್ ಒಳಗೊಂಡ ಬಿರುಸಿನ ಅಜೇಯ 41 ರನ್ ಗಳಿಸಿ ತಂಡದ ಮೊತ್ತವನ್ನು 200ರ ಗಡಿ ದಾಟಿಸಿದರು. ಉಳಿದಂತೆ ಮೈಕೆಲ್ ಲೀಸ್ಕ್ 22, ರಿಚಿ ಬೇರಿಂಗ್ಟನ್ 15 ರನ್ ಗಳಿಸಿದರು. ಇಟಲಿ ಪರ ಅಲಿ ಹಸನ್, ಗ್ರಾಂಟ್ ಸ್ಟೀವರ್ಟ್, ಥಾಮಸ್ ಡ್ರಾಕಾ ಹಾಗೂ ಜೆಜೆ ಸ್ಮಟ್ಸ್ ತಲಾ ಒಂದೊಂದು ವಿಕೆಟ್ ಕಬಳಿಸಿದರು.



ಸ್ಕಾಟ್ಲೆಂಡ್ ನೀಡಿದ 208 ರನ್‌ಗಳ ಬೃಹತ್ ಗುರಿ ಬೆನ್ನತ್ತಿದ ಇಟಲಿ ತಂಡದ ಮೊತ್ತ 40 ರನ್ ಆಗುವಷ್ಟರಲ್ಲಿ ಜಸ್ಟಿನ್ ಮೊಸ್ಕಾ 0, ಆಂಟೋನಿ ಮೊಸ್ಕಾ 13, ಜೆಜೆ ಸ್ಮಟ್ಸ್ 22 ರನ್ ಅವರ ವಿಕೆಟ್‌ಗಳನ್ನು ಕಳೆದು ಕೊಂಡು ಸಂಕಷ್ಟಕ್ಕೆ ಸಿಲುಕಿತು. ಈ ವೇಳೆ ಜೊತೆಯಾದ ಹ್ಯಾರಿ ಮಾನೆಂಟಿ ಹಾಗೂ ಬೆನ್ ಮಾನೆಂಟಿ 73 ರನ್ ಜೊತೆ ಯಾಟವಾಡುವ ಮೂಲಕ ತಂಡಕ್ಕೆ ಚೇತರಿಕೆ ನೀಡಿದರು. ಈ ವೇಳೆ 37 ರನ್ ಗಳಿಸಿದ್ದ ಹ್ಯಾರಿ ಮಾನೆಂಟಿ ವಿಕೆಟ್ ಒಪ್ಪಿಸಿದರೇ, ಬೆನ್ ಮಾನೆಂಟಿ 31 ಎಸೆತಗಳಲ್ಲಿ 5 ಬೌಂಡರಿ, 1 ಸಿಕ್ಸರ್ ಒಳಗೊಂಡ 52 ರನ್ ಗಳಿಸಿ ನಿರ್ಗಮಿಸಿದರು. ನಂತರ ಬಂದ ಆಟಗಾರರು ಎರಡಂಕಿ ಮೊತ್ತ ದಾಖಲಿಸಲು ಸಾಧ್ಯವಾಗದೇ ಪೆವಿಲಿಯನ್ ಪರೇಡ್ ನಡೆಸಿದರು. ಸ್ಕಾಟ್ಲೆಂಡ್ ಪರ ಮೈಕೆಲ್ ಲೀಸ್ಕ್ 4, ಮಾರ್ಕ್ ವ್ಯಾಟ್ 2, ಬ್ರಾಡ್ ಕ್ಯೂರಿ, ಬ್ರಾಡ್ ವೀಲ್, ಆಲಿವರ್ ಡೇವಿಡ್ಸನ್ ತಲಾ ಒಂದೊಂದು ವಿಕೆಟ್ ಉರುಳಿಸಿದರು. ಮೈಕೆಲ್ ಲೀಸ್ಕ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಮೈಸೂರು ಮಿತ್ರ

ಮಂಡನಹಳ್ಳಿಯಲ್ಲಿ ಜೋಡಿಲಿಂಗ ಮಹದೇಶ್ವರ ಸ್ವಾಮಿ ದೇವಾಲಯ ಲೋಕಾರ್ಪಣೆ

ದೇವಸ್ಥಾನಗಳು ಹೆಚ್ಚಾಗುತ್ತಿವೆ, ಸಂಸ್ಕಾರ ಮರೆಯಾಗುತ್ತಿದೆ: ಶ್ರೀಶಿವಸಿದ್ದೇಶ್ವರ ಸ್ವಾಮಿ

"ರಾಜಕಾರಣಿಗಳು ಯಾರೇ ಆಗಲಿ ಚಿಕ್ಕ ಗ್ರಾಮದ ವೋಟ್‌ಗಳು ಕಮ್ಮಿ ಇವೆ ಎಂಬ ಭಾವನೆ ಹೊಂದಿ ಯಾವುದೇ ಸಮುದಾಯವನ್ನು ನಿರ್ಲಕ್ಷ್ಯ ಮಾಡಬಾರದು. ಲಿಂಗಾಯಿತ ಸಮುದಾಯ ಇದೆಲ್ಲವನ್ನೂ ಸೂಕ್ಷ್ಮವಾಗಿ ಗಮನಿಸುತ್ತಿದೆ. ಈ ನಾಡಿನ ಲಿಂಗಾಯಿತ ಮಠಾಧೀಶರು ಮನಸ್ಸು ಮಾಡಿದರೆ ಸರ್ಕಾರಗಳನ್ನೇ ಅಲುಗಾಡಿಸುವಷ್ಟು ಶಕ್ತಿ ಹೊಂದಿದ್ದಾರೆ. ತಮಗಿಷ್ಟವಾದವರಿಗೆ ಅಧಿಕಾರ ನೀಡುವ ಶಕ್ತಿಯನ್ನು ಹೊಂದಿದ್ದಾರೆ. ಮಠಾಧೀಶರು ಸಮಾಜವನ್ನು ತಿದ್ದುವ ಕೆಲಸ ಮಾಡುತ್ತಿದ್ದು, ಪೂಜ್ಯ ಸಂತರ ಭಾವನೆಗಳಿಗೆ ಹೆಚ್ಚಿನ ಬೆಲೆ ಕೊಡಬೇಕು. ಧಾರ್ಮಿಕ ಭಾವನೆಗಳ ಜೊತೆ ರಾಜಕೀಯ ಮಾಡಬಾರದು.

– ಮಾವಿನಹಳ್ಳಿ ಸಿದ್ದೇಗೌಡರು.

ಜಮೀನು ಮಾರಿ ದೇವಸ್ಥಾನ ಕಟ್ಟಿಸಿದ ಮಾವಿನಹಳ್ಳಿ ಸಿದ್ದೇಗೌಡರಿಗೆ ಸನ್ಮಾನ




ಮೈಸೂರು ತಾಲೂಕು ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಮಂಡನಹಳ್ಳಿಯಲ್ಲಿ ಜಮೀನು ಮಾರಿ ಶ್ರೀ ಜೋಡಿಲಿಂಗ ಮಹದೇಶ್ವರಸ್ವಾಮಿ ದೇವಾಲಯ ಕಟ್ಟಿಸಿಕೊಟ್ಟ ಮಾವಿನಹಳ್ಳಿ ಸಿದ್ದೇಗೌಡ ಮತ್ತು ಅವರ ಪತ್ನಿ, ಮಗನನ್ನು ಗ್ರಾಮಸ್ಥರು ಸನ್ಮಾನಿಸಿದರು. ಎಡಚಿತ್ರದಲ್ಲಿ ಜೋಡಿಲಿಂಗ ಮಹದೇಶ್ವರ ಸ್ವಾಮಿಯನ್ನು ಕಾಣಬಹುದು.

ಜಿಟಿಡಿ ಜೆಡಿಎಸ್ ಬಿಟ್ಟರೆ ನಾನು ಜೆಡಿಎಸ್ ಸೇರುವೆ

ಚಾಮುಂಡೇಶ್ವರಿ ಕ್ಷೇತ್ರಕ್ಕೆ 2028 ಕ್ಕೆ ಜೆಡಿಎಸ್‌ನಿಂದ ಅಭ್ಯರ್ಥಿಯಾರಾಗಬೇಕೆಂದು ಜೆಡಿಎಸ್ ರಾಜ್ಯಾಧ್ಯಕ್ಷರಾದ ಕುಮಾರಣ್ಣ ಅವರು ನಿರ್ಧಾರ ಮಾಡುತ್ತಾರೆ. ಶಾಸಕ ಜಿ.ಟಿ. ದೇವೇಗೌಡರ ಪಕ್ಷ ನಿಷ್ಠೆಯ ಬಗ್ಗೆ ಕುಮಾರಸ್ವಾಮಿಯವರಿಗೆ ಬೇಸರವಿದೆ. ಹಾಲಿ ಶಾಸಕರು ಜೆಡಿಎಸ್ ಬಿಟ್ಟರೆ ನಾನು ಜೆಡಿಎಸ್ ಸೇರುತ್ತೇನೆ. ಅವರು ಜೆಡಿಎಸ್ ನಲ್ಲೇ ಇದ್ದರೆ ನಾನು ಕಾಂಗ್ರೆಸ್‌ನಲ್ಲಿಯೇ ಇರುತ್ತೇನೆ. ಶಾಸಕರನ್ನು ಜೆಡಿಎಸ್ ಪಕ್ಷದಿಂದ ಉಚ್ಚಾಟನೆ ಮಾಡುವ ಸಂಭವವಿದೆ. ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಜೆಡಿಎಸ್ ಅಭ್ಯರ್ಥಿ ಬದಲಾಗಲಿದ್ದಾರೆ. ಸಾ.ರಾ ಮಹೇಶ್ ಅಣ್ಣ, ನಿಖಿಲ್ ಕುಮಾರ ಸ್ವಾಮಿ,ನಾನು ಸೇರಿದಂತೆ ಯಾರೇ ಅಭ್ಯರ್ಥಿಯಾದರೂ ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಜೆಡಿಎಸ್ ಚಾಮುಂಡೇಶ್ವರಿ ಕ್ಷೇತ್ರ ಗೆಲ್ಲಲಿದೆ. –ಮಾವಿನಹಳ್ಳಿ ಸಿದ್ದೇಗೌಡ

ಮೈಸೂರು, ಫೆ9– ಮೈಸೂರು ತಾಲೂಕು ಜಯಪುರ ಹೋಬಳಿ ಮಂಡನಹಳ್ಳಿ ಗ್ರಾಮದಲ್ಲಿ 2.25 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಿರುವ ಶ್ರೀ ಜೋಡಿಲಿಂಗ ಮಹದೇಶ್ವರಸ್ವಾಮಿ ದೇವಾಲಯವು ವಿವಿಧ ಮಠಗಳ ಶ್ರೀಗಳು ಮತ್ತು ಸಾವಿರಾರು ಮಂದಿ ಗ್ರಾಮಸ್ಥರ ಸಮ್ಮುಖದಲ್ಲಿ ಲೋಕಾರ್ಪಣೆಗೊಂಡಿತು.

ಈ ವೇಳೆ ಧಾರ್ಮಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿ ಆಶೀರ್ವಚನ ನೀಡಿದ ತುಮಕೂರು ಸಿದ್ದಗಂಗಾ ಮಠದ ಕಿರಿಯ ಶ್ರೀಗಳಾದ ಶ್ರೀ ಶಿವಸಿದ್ದೇಶ್ವರ ಸ್ವಾಮಿಗಳು, ದೇಶಾದ್ಯಂತ ದೇವಾಲಯಗಳ ಸಂಖ್ಯೆ ಹೆಚ್ಚಾಗುತ್ತಿದೆ. ಆದರೆ, ಸಂಸ್ಕಾರವಂತಿಕೆ ಕಡಿಮೆಯಾಗುತ್ತಿದೆ ಎಂದು ಬೇಸರ ವ್ಯಕ್ತ ಪಡಿಸಿದರು.

ಯುವಕರಲ್ಲಿ ಸಂಸ್ಕಾರ ಮರೆಯಾಗುತ್ತಿದೆ. ಪರಮಾತ್ಮನಿಗೆ ಭಕ್ತಿಯ ರೂಪದಲ್ಲಿ ನೈವೇದ್ಯ ಸಲ್ಲಿಸಬೇಕು. ಬಸವಣ್ಣನವರು ಹಾಕಿಕೊಟ್ಟ ಕಾಯಕವೇ ಕೈಲಾಸ ಮಾರ್ಗದಲ್ಲಿ ನಡೆದು, ಕಷ್ಟಪಟ್ಟು ದುಡಿಯಬೇಕೆ ವಿನಃ ಉಚಿತವಾಗಿ ಸಿಗುವುದಕ್ಕೆ ಆಸೆ ಪಡಬಾರದು ಎಂದು ಅವರು ತಿಳುವಳಿಕೆ ನೀಡಿದರು.

ದೇವಾಲಯ ನಿರ್ಮಿಸುವುದೇ ನಾವೆಲ್ಲರೂ ಒಂದೇ ಎಂಬ ಜಾತ್ಯಾತೀತ ಭಾವನೆ ಹೊಂದುವುದಾಗಿದೆ. ದೇವಾಲಯಗಳು ಧಾರ್ಮಿಕ ಶ್ರದ್ಧಾಭಕ್ತಿಯ ಕೇಂದ್ರಗಳಾಗಿವೆ. ಅವುಗಳ ಪಾವಿತ್ರ್ಯತೆ ಉಳಿಸುವ ಕೆಲಸವಾಗಬೇಕು. ಜಾತ್ರೆಗಳಲ್ಲಿ ಕೊಂಡವನ್ನು ಹಾಯುವಾಗ ನಮ್ಮಲ್ಲಿರುವ ದುರ್ಗುಣಗಳನ್ನು ಅಗ್ನಿಯಲ್ಲಿ ನಾಶಪಡಿಸಬೇಕು. ಉತ್ತಮ ನಾಗರಿಕ ಸಮಾಜ ನಿರ್ಮಿಸುವಲ್ಲಿ ಎಲ್ಲರ ಪಾತ್ರ ಬಹುದೊಡ್ಡದಿದೆ ಎಂದು ಶಿವಸಿದ್ದೇಶ್ವರ ಮಹಾಸ್ವಾಮಿಗಳು ತಿಳಿಸಿದರು.

ವಿಶೇಷವಾಗಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ಹೆಚ್ಚು ಸಂಸ್ಕಾರವಂತಿಕೆಯನ್ನು ಕಾಣಬಹುದಾಗಿದ್ದು, ಮಂಡನಹಳ್ಳಿ ಗ್ರಾಮದಲ್ಲಿ ಉದ್ಭವಿಸಿರುವ ಜೋಡಿಲಿಂಗ ಮಹದೇಶ್ವರ ಸ್ವಾಮಿ ಗ್ರಾಮಸ್ಥರಿಗೆ ಒಳಿತು ಮಾಡಲಿ ಎಂದು ಆಶೀರ್ವಚನ ನೀಡಿದರು.

ಮೈಮುಲ್ ಮಾಜಿ ಅಧ್ಯಕ್ಷ ಮಾವಿನಹಳ್ಳಿ ಎಸ್.ಸಿದ್ದೇಗೌಡರು ಮಾತನಾಡಿ ಬಹಳ ವರ್ಷಗಳ ಹಿಂದೆ ಮಂಡನಹಳ್ಳಿ ಗ್ರಾಮದಲ್ಲಿ ಜೋಡಿಲಿಂಗ ಮಹದೇಶ್ವರ ಸ್ವಾಮಿ ಲಿಂಗಗಳು ಗೋಚರವಾಗಿದ್ದವು. ಗ್ರಾಮಸ್ಥರು ಚಿಕ್ಕದಾಗಿ ಗುಡಿ ಕಟ್ಟಿ ಪೂಜಿಸುತ್ತಿದ್ದರು. ಪ್ರತಿ ವರ್ಷ ಮಾರ್ಚ್ ತಿಂಗಳಲ್ಲಿ ಜಾತ್ರೆ ಮತ್ತು ಕೊಂಡೋತ್ಸವ ನಡೆಯುತ್ತಿತ್ತು. ಅಮಾವಾಸ್ಯೆ ವಿಶೇಷ ದಿನಗಳಲ್ಲಿ ವಿಶೇಷ ಪೂಜೆ ನಡೆದು ಕಜ್ಜಾಯದ ಊಟ, ಅನ್ನಸಂತರ್ಪಣೆ ನಡೆಯುತ್ತಿತ್ತು ಎಂದು ನಮ್ಮ ಹಿರಿಯರು ತಿಳಿಸುತ್ತಾರೆ ಎಂದರು.

ನಿಮ್ಮನ್ನು ನಂಬಿದ್ದೀವಿ: ಚಾಮುಂಡೇಶ್ವರಿ ಕ್ಷೇತ್ರದ ಶಾಸಕರು ಈ ದೇವಾಲಯವನ್ನು ಕಟ್ಟಿಸುತ್ತೇನೆ ಎಂದು ಮುಂದೆ ಬಂದು ಭೂಮಿಪೂಜೆ ಮಾಡಿ ಹೋದರು. ಆದರೆ ಅವರು ಕಟ್ಟಲಾಗದೆ ಹಿಂದೆ ಸರಿದರು. ದೇವಸ್ಥಾನದ ಕೆಲಸ ಅರ್ಧಕ್ಕೆ ನಿಂತು ಹೋಯಿತು. ಆಗ ಗ್ರಾಮಸ್ಥರು ನನಗೆ, ನಿಮ್ಮನ್ನು ನಾವು ನಂಬಿ ದೇವಾಲಯ ಒಡೆದು ಹಾಕಿದ್ದೇವೆ. ವಿನಃ ಜಿ.ಟಿ.ದೇವೇಗೌಡರಾಗಲಿ, ಸಿದ್ದರಾಮಯ್ಯನವರನ್ನಾಗಲಿ ನಂಬಿ ದೇವಾಲಯ ಒಡೆದಿಲ್ಲ, ಹೇಗಾದರೂ ಮಾಡಿ ನೀವೇ ಮುಂದೆ ನಿಂತು ದೇವಾಲಯ ಕಟ್ಟಿ ಪೂರ್ಣಗೊಳಿಸಿಕೊಡಬೇಕು ಎಂದು ನನ್ನ ತೋಟದ ಮನೆಗೆ ಬಂದು ಮನವಿ ಮಾಡಿಕೊಂಡರು.

ಜಮೀನು ಮಾರಿ ದೇವಸ್ಥಾನ ಕಟ್ಟಿಸಿದೆ: ಈ ವೇಳೆ ನಿಮ್ಮ ಭಾಗಕ್ಕೆ ನಾನಿದ್ದೇನೆ, ಎಷ್ಟೇ ಕೋಟಿ ಖರ್ಚಾದರೂ ನಾನು ದೇವಾಲಯ ಕಟ್ಟೆಯೇ ಕಟ್ಟುತ್ತೇನೆ, ನೀವು ಹೆದರಬೇಡಿ ಎಂದು ಹೇಳಿ ಧೈರ್ಯ ತುಂಬಿ ಕಳಿಸಿದೆ. ನಾನು 2023ರಲ್ಲಿ ಚಾಮುಂಡೇಶ್ವರಿ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿ ಕಡಿಮೆ ಅಂತರದಿಂದ ಸೋತಿದ್ದೆ. ದುಡ್ಡಿರಲಿಲ್ಲ. ಕೊಟ್ಟ ಮಾತು ತಪ್ಪಬಾರದೆಂದು ಸ್ವಂತ ಮೂರೂವರೆ ಎಕರೆ ಜಮೀನು ಮಾರಾಟ ಮಾಡಿ 2.25ಕೋಟಿಯಲ್ಲಿ ದೇವಾಲಯ ನಿರ್ಮಾಣ ಮಾಡಿಸಿಕೊಟ್ಟು, ಕೊಟ್ಟ ಮಾತು ಉಳಿಸಿಕೊಂಡಿದ್ದೇನೆ ಎಂದರು.

ಈ ದೇವಾಲಯ ನಿರ್ಮಾಣ ವಿಚಾರವಾಗಿ ನನಗೂ ಶಾಸಕ ಜಿ.ಟಿ.ದೇವೇಗೌಡರವರಿಗೂ ಮನಸ್ತಾಪ ಉಂಟಾಯಿತು. ಗ್ರಾಮದಲ್ಲಿ ಲಿಂಗಾಯಿತ ಸಮುದಾಯದ 800 ಮತಗಳಿದ್ದು, ಯಾರ ಮನಸ್ಸಿಗೂ ನೋವು ಮಾಡಬಾರದೆಂದು ದೇವಾಲಯ ಕಟ್ಟಿಸಿಕೊಟ್ಟೆ, ನನಗೆ ಮಂಡನಹಳ್ಳಿ ಗ್ರಾಮ ಕಂಡರೆ ವಿಶೇಷ ಪ್ರೀತಿ.ಕಾರಣ ಇಲ್ಲಿನ ಜನರ ಒಗ್ಗಟ್ಟಿನಿಂದ ಕೋಟ್ಯಂತರ ರೂಪಾಯಿ ವೆಚ್ಚದಲ್ಲಿ ದೇವಸ್ಥಾನ ಕಟ್ಟಿಕೊಡಲು ಸಾಧ್ಯವಾಗಿದೆ. ನನ್ನ ಮನಸ್ಸು ಪೂರ್ತಿಯಾಗಿ ಈ ದೇವಾಲಯಕ್ಕೆ ಹೆಚ್ಚಿನದಾಗಿ ಸೇವೆ ಮಾಡುವುದೇ ನನ್ನಾಸೆ ಎಂದರು.

ಸದಾ ನಿಮ್ಮ ಜೊತೆ ಇರುವೆ: ಇಂದು ನೂತನ ದೇವಾಲಯ ಉದ್ಘಾಟನೆಯಿಂದ ಗ್ರಾಮಸ್ಥರಲ್ಲಿ ಹೊಸ ಆಶಾ ಭಾವನೆ ಮೂಡಿದೆ. ನಿಮ್ಮ ಯಾವುದೇ ಕೆಲಸ ಕಾರ್ಯಗಳನ್ನು ಮಾಡಲು ನಾನು ಸಿದ್ಧನಿದ್ದೇನೆ. ನಿಮ್ಮ ಪ್ರೀತಿ ವಿಶ್ವಾಸಕ್ಕೆ ಬೆಲೆ ಕೊಟ್ಟು ಸದಾ ನಿಮ್ಮ ಬೆನ್ನೆಲುಬಾಗಿ ಇರುತ್ತೇನೆ. ಮಾದಪ್ಪನ ಸೇವೆ ಮಾಡಿ, ಸ್ವಾಮೀಜಿಗಳ ಆಶೀರ್ವಾದ ಪಡೆದು ಯಾರು ಕೆಟ್ಟಿಲ್ಲ, ಜೋಡಿಲಿಂಗ ಮಹದೇಶ್ವರ ಒಳ್ಳೆಯವರಿಗೆ ಒಳ್ಳೆಯದನ್ನು ನೀಡುತ್ತಾನೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಪುರ ಮಠದ ಚಂದ್ರಶೇಖರ ಮೂರ್ತಿ ಸ್ವಾಮೀಜಿಯವರು ಹಗಲು ರಾತ್ರಿ ಶ್ರಮಿಸಿ ನೂತನ ದೇವಾಲಯ ನಿರ್ಮಾಣದಲ್ಲಿ ದಿವ್ಯ ನೇತೃತ್ವ ವಹಿಸಿ, ದೇವಾಲಯ ಉದ್ಘಾಟನೆ ಮತ್ತು ಧಾರ್ಮಿಕ ಸಭೆ ಯಶಸ್ವಿಯಾಗಿ ನೆರವೇರಲು ಕಾರಣಕರ್ತರಾಗಿದ್ದಾರೆ ಎಂದರು.

ಮಾದಪ್ಪ ವಾಪಸ್ ಕೊಡುತ್ತಾನೆ: ಷಟ್ಸ್ಥಲ ಬ್ರಹ್ಮಶ್ರೀ ಸ್ವಾಮೀಜಿಯವರು ಮಾತನಾಡಿ, ಮಾವಿನಹಳ್ಳಿ ಸಿದ್ದೇಗೌಡರು ತಮ್ಮ ಮೂರೂವರೆ ಜಮೀನು ಮಾರಾಟ ಮಾಡಿ ಮಂಡನಹಳ್ಳಿ ಜೋಡಿಲಿಂಗ ಮಹದೇಶ್ವರ ದೇವಸ್ಥಾನ ಕಟ್ಟಿಕೊಟ್ಟಿದ್ದಾರೆ. ಆ ಜೋಡಿಲಿಂಗ ಮಹದೇಶ್ವರ ಸ್ವಾಮಿ ತಾನು ಭಕ್ತರಿಂದ ಮಾಡಿಸಿಕೊಂಡಿರುವ ಸೇವೆಯನ್ನು ಇಟ್ಟುಕೊಳ್ಳದೆ ವಾಪಸ್ಸು ನೀಡೇ ನೀಡುತ್ತಾನೆ. ಮೂರೂವರೆ ಎಕರೆ ಜಮೀನಿಗೆ ಬದಲಾಗಿ 36 ಎಕರೆ ಕೊಂಡುಕೊಳ್ಳುವ ಶಕ್ತಿ ದಯಪಾಲಿಸುವುದರ ಜೊತೆಗೆ ರಾಜಕೀಯದಲ್ಲಿ ಉನ್ನತ ಅಧಿಕಾರ ನೀಡುತ್ತಾನೆ ಎಂದರು.

ಬರಡನಪುರ ಮಹಾಂತೇಶ್ವರ ಮಠದ ಶ್ರೀ ಪರಶಿವಮೂರ್ತಿ ಸ್ವಾಮೀಜಿ, ಕುಂದೂರು ಮಠದ ಶರತ್ ಚಂದ್ರ ಸ್ವಾಮೀಜಿ ಸೇರಿ ಹರಗೂರು ಚರಮೂರ್ತಿಗಳು ಧಾರ್ಮಿಕ ಪ್ರವಚನ ನೀಡಿದರು.

ಕಂಗೊಳಿಸಿದ ದೇವಾಲಯ: ಭಾನುವಾರ ರಾತ್ರಿ ಹೋಮ ಹವನಗಳು ನಡೆದವು. ಸೋಮವಾರ ಮುಂಜಾನೆ ಹುಲಿ ವಾಹನೋತ್ಸವ ಮೆರವಣಿಗೆ ನಡೆಯಿತು. ಭಕ್ತರು ಈಡುಗಾಯಿ ಒಡೆದು ಭಕ್ತಿ ಭಾವ ಮೆರೆದರು. ಸೋಮವಾರ ಮುಂಜಾನೆ ದೇವಾಲಯ ಗೋಪುರಕ್ಕೆ ಕಳಸ ಪ್ರತಿಷ್ಠಾಪನೆ ಮಾಡಲಾಯಿತು. ಮಹಾ ಮಂಗಳಾರತಿ ನೆರವೇರಿಸಲಾಯಿತು. ಭಕ್ತರು ನಂದಿಧ್ವಜ ಕಂಬ ಹೊತ್ತು ಕುಣಿದರು. ದೇವಾಲಯಕ್ಕೆ ಬಂದ ಹರಗೂರು ಚರಮೂರ್ತಿಯವರಿಗೆ ಚೆಂಡುಮಲ್ಲಿಗೆ ಹೂವಿನ ಹಾಸು ಹಾಸಿ ಸ್ವಾಗತ ಕೋರಲಾಯಿತು. ಭಕ್ತರು ಸರತಿ ಸಾಲಿನಲ್ಲಿ ನಿಂತು ಜೋಡಿಲಿಂಗ ದರ್ಶನ ಪಡೆದರು. ದೇವಾಲಯವನ್ನು ತಳಿರು ತೋರಣ ಕಟ್ಟಿ, ವಿಶೇಷ ವಿದ್ಯುತ್ ದೀಪಾಲಂಕಾರ ವ್ಯವಸ್ಥೆ ಮಾಡಿದ್ದರು. ಭಕ್ತರಿಗೆ ಮಹಾಪ್ರಸಾದ ವಿನಿಯೋಗ ಮತ್ತು ಅನ್ನಸಂತರ್ಪಣೆ ಮಾಡಲಾಯಿತು. ಮಹಾದೇವ ತಾತ ಅವರ ಗದ್ದುಗೆ ಗುಡಿಗೆ ಅಲಂಕರಿಸಿ ವಿಶೇಷ ಪೂಜೆ ಸಲ್ಲಿಸಿದರು.

ಸಿದ್ದೇಗೌಡರಿಗೆ ಸನ್ಮಾನ: ಧಾರ್ಮಿಕ ಕಾರ್ಯಕ್ರಮದಲ್ಲಿ 2.25 ಕೋಟಿ ವೆಚ್ಚದಲ್ಲಿ ಜೋಡಿಲಿಂಗ ಮಹದೇಶ್ವರ ದೇವಾಲಯ ನಿರ್ಮಿಸಿಕೊಟ್ಟ ಮಾವಿನಹಳ್ಳಿ ಎಸ್.ಸಿದ್ದೇಗೌಡರು ಮತ್ತು ಅವರ ಪತ್ನಿ ಕಮಲಮ್ಮ, ಪುತ್ರರಾದ ಸಂದೀಪ್ ಗೌಡರನ್ನು ಸ್ವಾಮೀಜಿಯವರು ಮತ್ತು ಗ್ರಾಮಸ್ಥರು ಫಲಪುಷ್ಪ ತಾಂಬೂಲದ ಜೊತೆಗೆ ಸ್ಮರಣಿಕೆ ನೀಡಿ ಸನ್ಮಾನಿಸಿದರು. ಧಾರ್ಮಿಕ ಕಾರ್ಯಕ್ರಮದಲ್ಲಿ ಪುರ ಮಠದ ಚಂದ್ರಶೇಖರ ಸ್ವಾಮೀಜಿ, ಚನ್ನಬಸವ ಸ್ವಾಮೀಜಿ, ಮಹಾಂತಸ್ವಾಮೀಜಿ, ಗುರುಶಾಂತ ಸ್ವಾಮೀಜಿ, ಮಹದೇವಸ್ವಾಮೀಜಿ, ಸಾಂಬಶಿವ ಸ್ವಾಮೀಜಿ, ಶಿವಬಸವ ಸ್ವಾಮೀಜಿ, ಮಹೇಶ್ವರ ಸ್ವಾಮೀಜಿ, ತೋಂಟದಾರ್ಯ ಸ್ವಾಮೀಜಿ, ಗಣೇಶ ಮೂರ್ತಿ ಸ್ವಾಮೀಜಿ, ನಾಗೇಂದ್ರ ಆರಾಧ್ಯ, ಹೆಚ್.ಆರ್.ವೆಂಕಟೇಶ್ ಪ್ರಸಾದ್ ಮತ್ತು ಗ್ರಾಮಸ್ಥರು ಭಾಗವಹಿಸಿದ್ದರು.

ಮೈಸೂರು ಜಿಲ್ಲಾ ಹಾಪ್‌ಕಾಮ್ಸ್‌ಗೆ ನೇತ್ರಾವತಿ ಆಯ್ಕೆ



ಹಾಪ್‌ಕಾಮ್ಸ್‌ಗೆ ಆಯ್ಕೆಯಾಗಿರುವ ಪಿಲ್ಲಹಳ್ಳಿ ನೇತ್ರಾವತಿ ರಾಮಚಂದ್ರು ಅಭಿನಂದಿಸಲಾಯಿತು.

ತಿ.ನರಸೀಪುರ ಫೆ 9– ಮೈಸೂರು ಜಿಲ್ಲಾ ಹಾಪ್ ಕಾಮ್ಸ್‌ಗೆ ಬಿಜೆಪಿ ಬೆಂಬಲಿತ ಅಭ್ಯರ್ಥಿ ಪಿಲ್ಲಹಳ್ಳಿ ನೇತ್ರಾವತಿ ರಾಮಚಂದ್ರ ಅವರು 512 ಮತಗಳನ್ನು ಪಡೆದು ಪ್ರಥಮ ಬಾರಿಗೆ ನಿರ್ದೇಶಕರಾಗಿ ಆಯ್ಕೆಯಾಗಿದ್ದಾರೆ.

ವರುಣ ವಿಧಾನಸಭಾ ಕ್ಷೇತ್ರದ ಪಿಲ್ಲಹಳ್ಳಿ ಗ್ರಾಮದಲ್ಲಿ ನಡೆದ ಸರಳ ಸಮಾರಂಭದಲ್ಲಿ ರೈತ ಮೋರ್ಚಾ ಅಧ್ಯಕ್ಷ ಪುಟ್ಟೇಗೌಡ ನಹುಂಡಿ ಮಹೇಶ್ ಅವರು ನೇತ್ರಾವತಿ ಅವರನ್ನು ಅಭಿನಂದಿಸಿ ಮಾತನಾಡಿ, ಹಾಪ್ ಕಾಮ್ಸ್‌ಗೆ ನೂತನವಾಗಿ ಆಯ್ಕೆಯಾಗಿರುವ ನೇತ್ರಾವತಿ ರಾಮಚಂದ್ರ ಅವರು ಪ್ರಥಮ ಬಾರಿಗೆ ಆಯ್ಕೆಯಾಗಿದ್ದೀರಿ. ನೀವು ಮೊದಲು ರೈತರಿಗೆ ಸರ್ಕಾರದಿಂದ ಬರುವಂತಹ ಸೌಲಭ್ಯಗಳನ್ನು ತಲುಪಿಸುವ ಕೆಲಸ ಮಾಡಬೇಕು ಎಂದರು.

ನೂತನವಾಗಿ ಹಾಪ್ ಕಾಮ್ಸ್ ಆಯ್ಕೆಯಾದ ನೇತ್ರಾವತಿ ರಾಮಚಂದ್ರ ಅವರು ನನ್ನ ಮೇಲೆ ಭರವಸೆ ಇಟ್ಟು ರೈತರು ಗೆಲ್ಲಿಸಿದ್ದೀರಾ. ನಿಮಗೆ ಚ್ಯುತಿ ಬಾರದಂತೆ ಕೆಲಸ ನಿರ್ವಹಿಸಿ ಸರ್ಕಾರದಿಂದ ಬರುವಂತಹ ಸೌಲಭ್ಯಗಳನ್ನು ನೇರವಾಗಿ ರೈತರಿಗೆ ತಲುಪಿಸುವ ನಿಟ್ಟಿನಲ್ಲಿ ಕೆಲಸ ಮಾಡಿಕೊಡುತ್ತೇನೆ ಎಂದು ಭರವಸೆ ನೀಡಿದರು.

ಇದೇ ಸಂದರ್ಭದಲ್ಲಿ ಮಾಜಿ ಜಿಪಂ ಸದಸ್ಯ ಎಎಂ ಗುರುಸ್ವಾಮಿ ರವರು ಸನ್ಮಾನಿಸಿ ಅಭಿನಂದಿಸಿದರು, ವರುಣ ವಿಧಾನಸಭಾ ಕ್ಷೇತ್ರದ ಅಧ್ಯಕ್ಷ ಎ.ಎನ್ ಮಹದೇವಸ್ವಾಮಿ, ಪ್ರಧಾನ ಕಾರ್ಯದರ್ಶಿ ಹದಿನಾರು ನಂಜುಂಡಸ್ವಾಮಿ, ಮಹಾಶಕ್ತಿ ಅಧ್ಯಕ್ಷ ದಂಡಿಕೆರೆ ಶ್ರೀಧರ್, ಹೊಸಕೋಟೆ ಮಹಾಶಕ್ತಿ ಕೇಂದ್ರದ ಅಧ್ಯಕ್ಷ ಮಹದೇವಯ್ಯ, ಪ್ರಧಾನ ಕಾರ್ಯದರ್ಶಿ ಎಂ.ಬಿ.ಹಳ್ಳಿ ನಾಗರಾಜು, ಪಿಲ್ಲಹಳ್ಳಿ ಗೌಡಿಕೆ ವೀರಣ್ಣ, ನಿಂಗರಾಜಪ್ಪ, ಚಾಮುಂಡಪ್ಪ, ಬೂತ್ ಅಧ್ಯಕ್ಷ ರವೀಶ್, ವೆಂಕಟೇಶ್, ಮೂರ್ತಪ್ಪ, ಆರ್‌ಎಸ್‌ಎಸ್ ಕಾರ್ಯಕರ್ತ ಎಂ.ಪ್ರಕಾಶ್, ಚೋರನಹಳ್ಳಿ ಗುರುಮೂರ್ತಿ, ಅಂಗಡಿ ನಿಂಗಪ್ಪ ಹಾಗೂ ಗ್ರಾಮಸ್ಥರು ಹಾಜರಿದ್ದರು.

ಮಾ.30, ನಂ.ಗೂಡಲ್ಲಿ ಶ್ರೀ ಕಂಠೇಶ್ವರಸ್ವಾಮಿ ದೊಡ್ಡ ಜಾತ್ರೆ

ಸಕಲ ಸಿದ್ದತೆಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಶಾಸಕರ ಸೂಚನೆ



ದಾಸೋಹ ಭವನದಲ್ಲಿ ದೊಡ್ಡಜಾತ್ರಾ ಮಹೋತ್ಸವದ ಪೂರ್ವಭಾವಿ ಸಭೆ ನಡೆಯಿತು.

ನಂಜನಗೂಡು: ನಂಜನಗೂಡಿನ ಶ್ರೀಕಂಠೇಶ್ವರಸ್ವಾಮಿ ದೇವಾಲಯದಲ್ಲಿ ಮಾ.30 ರಂದು ನಡೆಯಲಿರುವ ದೊಡ್ಡ ಜಾತ್ರಾ ಮಹೋತ್ಸವವನ್ನು ವ್ಯವಸ್ಥಿತ ರೀತಿಯಲ್ಲಿ ಹಾಗೂ ಅಚ್ಚುಕಟ್ಟಾಗಿ ನಡೆಸಲು ಈಗಿನಿಂದಲೇ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಶಾಸಕ ದರ್ಶನ್ ಧ್ರುವನಾರಾಯಣ ಸೂಚನೆ ನೀಡಿದ್ದಾರೆ.

ಸೋಮವಾರ ದೇವಾಲಯದ ದಾಸೋಹ ಭವನದ ಆವರಣದಲ್ಲಿ ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ ಸಮ್ಮುಖದಲ್ಲಿ ನಡೆದ ಜಾತ್ರಾ ಮಹೋತ್ಸವದ ಪೂರ್ವಭಾವಿ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು.

ಒಂದೂವರೆ ತಿಂಗಳು ಮುಂಚಿತವಾಗಿ ಜಾತ್ರೆಯ ಪೂರ್ವಭಾವಿ ಸಭೆಯನ್ನು ಆಯೋಜಿಸಲಾಗಿದ್ದು ಜಾತ್ರೆಯನ್ನು ವೈಭವಯುತವಾಗಿ ಆಚರಿಸಲು ಸೂಕ್ತ ಕ್ರಮ ಕೈಗೊಳ್ಳಬೇಕು. ಜೊತೆಗೆ ಜಾತ್ರೆಯ ಕುರಿತು ರಾಜ್ಯ ವ್ಯಾಪಿ ಪ್ರಚಾರ ನೀಡಲು ಈಗಿನಿಂದಲೇ ಕ್ರಮ ವಹಿಸಬೇಕು. ಇನ್ನು ಕಪಿಲಾ ನದಿಯಲ್ಲಿ ನೀರಿನ ಹರಿವಿನ ಪ್ರಮಾಣ ಸದ್ಯ ತೀರಾ ಕಡಿಮೆಯಿರುವುದರಿಂದ ಯಂತ್ರಗಳನ್ನು ಬಳಸಿಕೊಂಡು ತೆರವುಗೊಳಿಸಲು ನೀರಾವರಿ ಇಲಾಖೆ ಅಧಿಕಾರಿಗಳು ಮುಂದಾಗಬೇಕು. ಜೊತೆಗೆ ಜಾತ್ರೆಯ ಸಮಯದಲ್ಲಿ ದೇಗುಲದ ಅಂಗಳ ಹಾಗೂ ರಥ ಬೀದಿಯಲ್ಲಿ ಸ್ವಚ್ಛತೆ ಕಾಪಾಡಿಕೊಳ್ಳುವ ಸಲುವಾಗಿ ನಗರ ಸಭೆಯಿಂದ ಹೆಚ್ಚುವರಿಯಾಗಿ ಪೌರ ಕಾರ್ಮಿಕ ರನ್ನು ನಿಯೋಜಿಸಿಕೊಳ್ಳುವಂತೆ ಸಲಹೆ ನೀಡಿದರು.

ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ ಮಾತನಾಡಿ, ರಥೋತ್ಸವದ ಸಮಯದಲ್ಲಿ ರಥವನ್ನೆಳೆಯುವವರನ್ನು ಹೊರತುಪಡಿಸಿ ಸಾರ್ವಜನಿಕರು ರಥದ ಸಮೀಪಕ್ಕೆ ತೆರಳದಂತೆ ಮುನ್ನೆಚ್ಚರಿಕೆ ವಹಿಸಬೇಕು. ಜೊತೆಗೆ ಜಾತ್ರಾ ಮಹೋತ್ಸವದ ಸಮಯದಲ್ಲಿ ಸಿಕ್ಕಸಿಕ್ಕವರೆಲ್ಲರೂ ಡ್ರೋನ್‌ಗಳನ್ನು ಹಾರಿಸುತ್ತಾರೆ. ಭದ್ರತೆಯ ಸಲುವಾಗಿ ಡ್ರೋನ್‌ಗಳನ್ನು ಹಾರಿಸುವುದನ್ನು ನಿಯಂತ್ರಿಸಲು ಸೂಚನೆ ನೀಡಿದರು.

ಜಾತ್ರಾ ಮಹೋತ್ಸವದ ನೋಡೆಲ್ ಅಧಿಕಾರಿಯನ್ನಾಗಿ ಅಪರ ಜಿಲ್ಲಾಧಿಕಾರಿ ಶಿವರಾಜು ಅವರನ್ನು ನಿಯೋಜಿಸಲಾಗುತ್ತಿದ್ದು ಜಾತ್ರೆಯ ಒಂದು ವಾರ ಮೊದಲೇ ನಂಜನಗೂಡಿಗೆ ಆಗಮಿಸಿ ಅವರು ಪ್ರತಿದಿನ ಜಾತ್ರಾ ಮಹೋತ್ಸವ ಆಚರಣೆ ಸಂಬಂಧ ಅಧಿಕಾರಿಗಳೊಡನೆ ಸಭೆಗಳನ್ನು ನಡೆಸಲಿದ್ದಾರೆ.

ಸಭೆಯಲ್ಲಿ ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ಎಡಿಸಿ ಶಿವರಾಜು, ಎಸಿ ಆಶಪ್ಪ ಪೂಜಾರಿ, ತಹಶೀಲ್ದಾರ್ ಸ್ಮಿತಾ, ಡಿವೈಎಸ್ಪಿ ರಘು, ದೇವಸ್ಥಾನದ ಇಒ ಕೃಷ್ಣ, ದೇವಾಲಯದ ಆಗಮಿಕ ನಾಗಚಂದ್ರ ದೀಕ್ಷಿತ್, ನಗರಸಭೆ ಮಾಜಿ ಅಧ್ಯಕ್ಷ ಶ್ರೀಕಂಠಸ್ವಾಮಿ, ಜಗದೀಶ್, ಮಂಜುನಾಥ್, ಸಿ.ಎಂ.ಶಂಕರ್, ಶ್ರೀಧರ್, ದಸಂಸ ಸಂಚಾಲಕ ಶಂಕರಪುರ ಸುರೇಶ್, ಎಂ.ಡಿ.ಬಾಲರಾಜು ಇದ್ದರು.

ಜಾತ್ರೆ ವೇಳೆ ಕುಡಿದು ಗಲಾಟೆ ಮಾಡಿದರೆ, ಹೆಣ್ಣುಮಕ್ಕಳ ವಿಡಿಯೋ ತೆಗೆದರೆ 30 ಸಾವಿರ ರೂ. ದಂಡ

ಸಾಮಾಜಿಕ ಜಾಲತಾಣದಲ್ಲಿ ಡಂಗೂರ ಬಾರಿಸಿ ಎಚ್ಚರಿಕೆ ನೀಡುತ್ತಿರುವ ವಿಡಿಯೋ ವೈರಲ್



ನಂಜನಗೂಡು: ಗ್ರಾಮ ದೇವತೆ ಹಬ್ಬದ ಜಾತ್ರೆಯಲ್ಲಿ ಕುಡಿದು ಗಲಾಟೆ ಮಾಡಿದ್ರೆ, ಹೆಣ್ಣು ಮಕ್ಕಳ ವಿಡಿಯೋ ಮಾಡಿದ್ರೆ 30 ಸಾವಿರ ದಂಡ ವಿಧಿಸಲಾಗುವುದು ಎಂದು ಡಂಗೂರ ಬಾರಿಸಿ ಎಚ್ಚರಿಕೆ ನೀಡಿರುವ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ.

ತಾಲೂಕು ಗೋಳೂರು ಗ್ರಾಮದಲ್ಲಿ ಫೆ.10ರ ಮಂಗಳವಾರದಿಂದ ಮೂರು ದಿನಗಳ ಕಾಲ ಗ್ರಾಮದೇವತೆ ಮಾರಮ್ಮನವರ ಹಬ್ಬದ ಜಾತ್ರಾ ಮಹೋತ್ಸವ ಜರುಗಲಿದೆ. ಗ್ರಾಮ ದೇವತೆಯ ಹಬ್ಬದ ಜಾತ್ರೆಯ ವೇಳೆ ಕುಡಿದು ಗಲಾಟೆ ನಡೆಸುವುದು ಮತ್ತು ಹೆಣ್ಣುಮಕ್ಕಳ ವಿಡಿಯೋ ತೆಗೆಯುವುದನ್ನು ಮಾಡಬಾರದು. ಒಂದು ವೇಳೆ ತಪ್ಪು ಮಾಡಿದ್ದಲ್ಲಿ 30 ಸಾವಿರ ದಂಡ ವಿಧಿಸುವುದಾಗಿ ಗ್ರಾಮದ ಯಜಮಾನರು ಮತ್ತು ಮುಖಂಡರು ತೀರ್ಮಾನಿಸಿರುವುದಾಗಿ ಗ್ರಾಮದ ಚಿಕ್ಕ ಜವರ ಎಂಬುವರು ಟಾಮ್ ಟಾಮ್ ಹೊಡೆದು ಡಂಗೂರ ಸಾರುವ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಗ್ರಾಮದ ಗ್ರಾಪಂ ಮಾಜಿ ಸದಸ್ಯ ಮುದ್ದು ಮಾದಶೆಟ್ಟಿ ಮಾತನಾಡಿ, ಹಿಂದಿನಿಂದಲೂ ಸಹ ಗ್ರಾಮದೇವತೆ ಮಾರಮ್ಮನವರ ಹಬ್ಬವನ್ನು ಭಯ ಭಕ್ತಿಯಿಂದ ಕಟ್ಟುನಿಟ್ಟಾಗಿ ಆಚರಣೆ ನಡೆಸಿಕೊಂಡು ಬರಲಾಗುತ್ತಿದೆ. ಗ್ರಾಮದಲ್ಲಿ 30 ದಿನಗಳ ಕಾಲ ಮಾಂಸಹಾರ ಸೇವನೆ ಹಾಗೂ ಒಗ್ಗರಣೆ ಹಾಕುವುದನ್ನು ನಿಷಿದ್ಧವಾಗಿದೆ. ಇದು ನಮ್ಮ ಹಿರಿಯರು ಮಾಡಿರುವ ಸಂಪ್ರದಾಯವಾಗಿದೆ ಎಂದು ಹೇಳಿದರು.

ಮಗ, ಮನೆ, ಮಠ ಕಳೆದುಕೊಂಡು ಬೀದಿಗೆ ಬಿದ್ದ ಕುಟುಂಬ

ಜೀವನ ನಿರ್ವಹಣೆಗಾಗಿ ಟೀ ಅಂಗಡಿ ಇಟ್ಟುಕೊಟ್ಟ ಶಾಸಕರು



ಟೀ ಅಂಗಡಿಯನ್ನು ಶಾಸಕ ಜಿ.ಡಿ.ಹರೀಶ್‌ಗೌಡರ ಪತ್ನಿ ವರ್ಷ ಹರೀಶ್‌ಗೌಡ ಉದ್ಘಾಟಿಸಿದರು.

ಹುಣಸೂರು, ಫೆ9– ಅನಾರೋಗ್ಯ ಪೀಡಿತ ಮಗನನ್ನು ಉಳಿಸಿಕೊಳ್ಳಲು ಮನೆ ಮಠ ಮಾರಿ ಚಿಕಿತ್ಸೆ ಕೊಡಿಸಿದರೂ ಮಗ ಉಳಿಯಲಿಲ್ಲ. ಎಲ್ಲಾ ಕಳೆದುಕೊಂಡು ಬೀದಿಗೆ ಬಿದ್ದ ಕುಟುಂಬಕ್ಕೆ ಶಾಸಕ ಜಿ.ಡಿ.ಹರೀಶ್ ಗೌಡ ಮತ್ತು ಜೆಡಿಎಸ್ ಮುಖಂಡರು ನೆರವಿಗೆ ದಾವಿಸಿ ಜೀವನ ನಿರ್ವಹಣೆ ಗಾಗಿ ಟೀ ಅಂಗಡಿಯೊಂದನ್ನು ಇಟ್ಟುಕೊಟ್ಟಿದ್ದಾರೆ.

ಈ ಟೀ ಅಂಗಡಿಯನ್ನು ಶಾಸಕ ಜಿ.ಡಿ. ಹರೀಶ್‌ಗೌಡ ಪತ್ನಿ ಶ್ರೀಮತಿ ವರ್ಷ ಹರೀಶ್ ಗೌಡ ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ಅವರು ಜೀವನದಲ್ಲಿ ಕಷ್ಟ ಮನುಷ್ಯನಿಗೆ ಬಾರದೆ, ಮರಕ್ಕೆ ಬರುವುದೇ. ಬಂದ ಕಷ್ಟವನ್ನು ಆತ್ಮಸ್ಥೈರ್ಯದಿಂದ ಎದುರಿಸಿ ಮುನ್ನಡೆದಿದ್ದೀರಿ. ಮುಂದೆಯೂ ನಿಮಗೆ ಒಳಿತಾಗಲಿದೆ ಎಂದರು.

ತಾಲೂಕಿನ ವಿರಾಜಪೇಟೆ ಹುಣಸೂರು ಮುಖ್ಯ ರಸ್ತೆ ಮುತ್ತುರಾಯನ ಹೊಸಹಳ್ಳಿ ಗೇಟ್ ಬಳಿ ನೂತನವಾಗಿ ಆರಂಭವಾದ ಎಸ್‌ವಿಎಸ್ ಗೌಡ ಟೀ ಕ್ಯಾಂಟೀನ್ ಉದ್ಘಾಟಿಸಿ ಮಾತನಾಡಿದ ಅವರು, ಸೋಮಶೇಖರ್ ಮತ್ತು ಸವಿತ ದಂಪತಿಗಳಿಗೆ ನೆರವು ನೀಡಲು ಮುಂದಾಗಿ ಅವರ ಬದುಕಿಗೆ ಆಸರೆಯಾಗಿದ್ದು, ನನಗೆ ಖುಷಿ ತಂದಿದೆ. ತಾಲೂಕಿನಲ್ಲಿ ನೊಂದ ಕುಟುಂಬ ಯಾವುದೇ ಇರಲಿ ಅವರೊಂದಿಗೆ ನಮ್ಮ ಕುಟುಂಬವಿದೆ ಎಂದರು.

ವೇದಿಕೆಯಲ್ಲಿ ಗ್ರಾಪಂ ಮಾಜಿ ಅಧ್ಯಕ್ಷ ಜಗದೀಶ್ ನಾಯಕ ಮಾತನಾಡಿ, ಇನ್ನು ಮುಂದೆ ಶಾಸಕ ಜಿ.ಡಿ.ಹರೀಶ್ ಗೌಡರು ಬ್ಯುಸಿ ಇರುತ್ತಾರೆ. ಆದ್ದರಿಂದ ತಾಲೂಕಿನಲ್ಲಿ ಯಾವುದೇ ಸಭೆ, ಸಮಾರಂಭ ಕಷ್ಟ–ಸುಖ, ಮದುವೆ, ಶುಭ ಸಮಾರಂಭಗಳಿಗೆ ಬಂದು ಕಾರ್ಯಕ್ರಮದಲ್ಲಿ ಭಾಗವಹಿಸುವ ಮೂಲಕ ಕಾರ್ಯಕರ್ತರಿಗೆ ಬಲ ತುಂಬಬೇಕು ಎಂದು ಮನವಿ ಮಾಡಿದಾಗ ಇದು ನನ್ನ ಮೊದಲ ಕಾರ್ಯಕ್ರಮವಾಗಿದೆ. ಇನ್ನೂ ಮುಂದೆ ಅವರು ಇಲ್ಲದಾಗ ನಿಮ್ಮೊಂದಿಗೆ ನಾ ಇರುವೆ ಎಂದು ವರ್ಷ ಹರೀಶ್ ಗೌಡ ಭರವಸೆ ನೀಡಿದರು.

ನಂತರ ಮಾತನಾಡಿದ ಶಶಿಕಲಾ ಬಸವಲಿಂಗಯ್ಯ ಈ ಬಡ ಕುಟುಂಬದ ಬದುಕಿಗೆ ಆಶ್ರಯ ನೀಡಿದ ಶಾಸಕ ಜಿ.ಡಿ.ಹರೀಶ್ ಗೌಡರೇ ಕ್ಯಾಂಟೀನ್ ಉದ್ಘಾಟಿಸಬೇಕಿತ್ತು. ಆದರೆ ಅವರ ಅನುಪಸ್ಥಿತಿಯಲ್ಲಿ ಅವರ ಪತ್ನಿ ವರ್ಷ ಅವರು ಉದ್ಘಾಟಿಸಿರುವುದು ಸಂತಸ ತಂದಿದೆ ಎಂದರು. ಕಾರ್ಯಕ್ರಮದಲ್ಲಿ ಉದ್ಯಮಿ ಹರವೆ ಶ್ರೀಧರ್, ಹರೀನಹಳ್ಳಿ ಆನಂದ್, ವೀರಭದ್ರ ಚಾರ್, ಹಿರಿಯ ದಲಿತ ಮುಖಂಡ ಬಸವಲಿಂಗಯ್ಯ, ವೆಂಕಟೇಶ್, ಹೆಗ್ಗಂದೂರು ರಾಜೇಗೌಡ ಇದ್ದರು.

ಶ್ರೀ ಇಂದ್ರಾಣಮ್ಮ ಪೂಜಾ ಮಹೋತ್ಸವ



ಸರಗೂರು: ಪಟ್ಟಣದ 5ನೇ ವಾರ್ಡ್‌ನಲ್ಲಿ ಶ್ರೀ ಇಂದ್ರಾಣಮ್ಮ ಅವರ 26ನೇ ವರ್ಷದ ಪೂಜಾ ಮಹೋತ್ಸವ ಸೋಮವಾರ ವಿಜೃಂಭಣೆಯಿಂದ ನಡೆಯಿತು.

ಮಹೋತ್ಸವದ ಅಂಗವಾಗಿ ಪಟ್ಟಣದ ಪ್ರಮುಖ ಬೀದಿಗಳಲ್ಲಿ ತಳಿರು ತೋರಣ ಕಟ್ಟಿ, ರಂಗೋಲಿ ಬಿಡಿಸಿ, ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿತ್ತು. ದೇವಾಲಯದಲ್ಲಿ ಮುಂಜಾನೆಯಿಂದಲೇ ಹೋಮ–ಹವನ ನಡೆಸಿ, ಗಣಪತಿ ಹೋಮ ಪುಣ್ಯಾಹ, ಕಳಸ ಪ್ರತಿಷ್ಠಾಪನೆ, ನವಗ್ರಹ ಹೋಮ, ದುರ್ಗಾಹೋಮ, ಕುಂಕುಮಾರ್ಚನೆ ಸೇರಿದಂತೆ ವಿವಿಧ ಪೂಜಾ ಕೈಂಕರ್ಯಗಳು ಜರುಗಿದವು.

ಕಪಿಲಾ ನದಿಗೆ ತೆರಳಿ ಗಂಗೆ ಪೂಜೆ ನಡೆಸಿ, ಪೂರ್ಣಕುಂಭ ಕಳಶದೊಂದಿಗೆ ಪಟ್ಟಣದ ಪ್ರಮುಖ ರಸ್ತೆಯ ಮೂಲಕ ಮಂಗಳವಾದ್ಯ, ನಂದಿಕಂಬ, ಸತ್ತಿಗೆ, ಬ್ಯಾಂಡ್‌ಸೆಟ್, ಚಂಡೆ, ಹಳೇ ಹೆಗ್ಗುಡಿಲು ನೀಲಕಂಠ ತಂಡದಿಂದ ವೀರಗಾಸೆ ಕುಣಿತ ಸೇರಿದಂತೆ ವಿವಿಧ ಕಲಾತಂಡಗಳ ಜತೆಯಲ್ಲಿ ಮೆರವಣಿಗೆ ನಡೆಸಲಾಯಿತು. ಉತ್ಸವ ಮೂರ್ತಿಯು ದೇವಾಲಯಕ್ಕೆ ತಲುಪಿದ ನಂತರ ವಿಶೇಷ ಪೂಜೆ ನಡೆಸಿ, ಮಹಾಮಂಗಳಾರತಿ ಮಾಡಿ ಪ್ರಸಾದ ವಿನಿಯೋಗ ಮಾಡಲಾಯಿತು. ನಂತರ ಅನ್ನ ಸಂತರ್ಪಣೆ ನಡೆಸಲಾಯಿತು.

ಮೆರವಣಿಗೆಯಲ್ಲಿ ಹೆಣ್ಣು ಮಕ್ಕಳು 101 ಪೂರ್ಣಕುಂಭ ಕಳಸಹೊತ್ತು ಹರಕೆ ತೀರಿಸಿದರು. ಹೋಮ ಹವನ ಪೂಜಾ ಕೈಂಕರ್ಯಗಳನ್ನು ಪುರೋಹಿತ್ ಹರೀಶ್, ಹಾಗೂ ಮಹದೇವಣ್ಣ, ವಿನಯ್ ಶಾಸ್ತ್ರಿ ನೆರವೇರಿಸಿದರು.

ಪಟ್ಟಣ ಪಂಚಾಯಿತಿ ಸದಸ್ಯ ನೂರಾಳಸ್ವಾಮಿ ಗೋಬಿರಂಗಸ್ವಾಮಿ, ಯಜಮಾನರಾದ ತಮ್ಮಣ್ಣ, ನರಸಿಂಹೇಗೌಡ್ರು, ಅಲಂಕಾರ ಸಮಿತಿ ಅಧ್ಯಕ್ಷ ರವಿಗೌಡ್ರು, ಮುಖಂಡರಾದ ನವೀನ್ ಕುಮಾರ್, ಬಜರಂಗಿ ರಾಮು, ರಾಜೇಶ್, ಲೋಕೇಶ್, ಶಶಿ, ಸುನೀಲ್. ಅನಿಲ್ ಮೆಡಿಕಲ್ ಹಾಗೂ 5ನೇ ವಾರ್ಡಿನ ಯುವಕ ಸಂಘದ ಪದಾಧಿಕಾರಿಗಳು ಹಾಜರಿದ್ದರು.

ನಾನು ರಾಜಕೀಯದ ಕೊನೆ ಘಟ್ಟದಲ್ಲಿದ್ದೇನೆ

ಇನ್ನೂ ಎರಡೂವರೆ ವರ್ಷ ತಾಲೂಕು ಅಭಿವೃದ್ಧಿ ಮಾಡಿ ನಮ್ಮ ಹಿತೈಷಿಗಳಿಗೆ ಬೆಂಬಲ ನೀಡುವೆ



ಬೆಟ್ಟದಪುರ: ಪಿರಿಯಾಪಟ್ಟಣ ತಾಲೂಕಿನ ಮರದೂರು, ವಡ್ಡರಹಳ್ಳಿ, ಮೇಲೂರು, ಕೊತ್ತುವಳ್ಳಿ ಗ್ರಾಮಗಳಲ್ಲಿ ಸುಮಾರು 10 ಕೋಟಿ ರೂ. ವೆಚ್ಚದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಸಚಿವ ಕೆ ವೆಂಕಟೇಶ್ ಗುದ್ದಲಿ ಪೂಜೆ ನೆರವೇರಿಸಿದರು.

ಈ ವೇಳೆ ಮಾತನಾಡಿದ ಅವರು ನಾನು ರಾಜಕೀಯದ ಕೊನೆಯ ಘಟ್ಟಕ್ಕೆ ಬಂದು ನಿಂತಿದ್ದೇನೆ. ಇನ್ನು ಎರಡೂವರೆ ವರ್ಷದಲ್ಲಿ ತಾಲೂಕಿಗೆ ಬೇಕಾದ ಅಭಿವೃದ್ಧಿಗಳನ್ನು ಮಾಡಿ ಜನಮನದಲ್ಲಿ ಉಳಿಯಬೇಕೆಂದಿದ್ದೇನೆ. ಆದುದರಿಂದ ಇನ್ನು ಎರಡೂವರೆ ವರ್ಷಗಳ ಕಾಲ ಅಭಿವೃದ್ಧಿ ಮಾಡಿ ಮುಂದಿನ ದಿನಗಳಲ್ಲಿ ಯಾರು ನಮ್ಮ ಹಿತೈಷಿಗಳು ಅವರನ್ನು ಬೆಂಬಲಿಸಿ, ನಮ್ಮಂತೆ ಸಹಕರಿಸಬೇಕೆಂದು ತಿಳಿಸಿದರು. ನಂತರ ಬೆಟ್ಟದಪುರದಲ್ಲಿ ಅವರು ಈ ವರ್ಷದ ರಾಗಿ ಖರೀದಿ ಕೇಂದ್ರವನ್ನು ಉದ್ಘಾಟಿಸಿದರು

ಸಚಿವರಿಗೆ ರೈತ ಸಂಘದ ರಾಜ್ಯ ಯುವ ಘಟಕದ ಅಧ್ಯಕ್ಷ ಕೊಮಲಾಪುರ ಸ್ವಾಮಿಗೌಡ ಹಾಗೂ ತಾಲೂಕು ರೈತ ಸಂಘದ ಅಧ್ಯಕ್ಷ ಕೂಣಸೂರು ಆನಂದ್ ಮನವಿ ಸಲ್ಲಿಸಿ, ಖರೀದಿ ಕೇಂದ್ರದಲ್ಲಿ ರೈತರ ಮೇಲೆ ದಬ್ಬಾಳಿಕೆಗಳು ನಡೆಯುತ್ತಿದೆ ಜೊತೆಗೆ ಅಕ್ರಮವಾಗಿ ಹಣ ವಸೂಲಿ ದೌರ್ಜನ್ಯಗಳು ನಡೆಯುತ್ತಿದೆ. ಕೂಡಲೇ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು. ಇದಕ್ಕೆ ಸ್ಪಂದಿಸಿದ ಸಚಿವರು ಈ ಬಾರಿ ಪ್ರತಿ ಖರೀದಿ ಕೇಂದ್ರದಲ್ಲಿ ನಾಲ್ವರು ಪೊಲೀಸರನ್ನು ಪ್ರತಿದಿನ ನೇಮಿಸುವಂತೆ, ಮೇಲಾಧಿಕಾರಿಗಳು ಸ್ಥಳದಲ್ಲೇ ವಾಸ್ತವ್ಯವಿದ್ದು ಪ್ರತಿದಿನ ರೈತರಿಗೆ ತೊಂದರೆ ಆಗದಂತೆ ಖರೀದಿ ಮಾಡಬೇಕೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಗ್ಯಾರಂಟಿ ಸಮಿತಿ ಅಧ್ಯಕ್ಷರಾದ ನಿತಿನ್ ವೆಂಕಟೇಶ್, ಸ್ವಾಮಿಗೌಡ, ರಹಮದ್ ಜಾನ್‌ಬಾಬು, ಹೊಲದಪ್ಪ, ಈಚೂರು ಲೋಕೇಶ್, ಚಿಕ್ಕೇಗೌಡ, ವಿಜಯರಾಜ ಅರಸ್, ದಿಲೀಪ್ ಗೌಡ ಇದ್ದರು.

ಕುಪ್ಪೆ ಡೇರಿಗೆ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ

ಚುಂಚನಕಟ್ಟೆ: ಸಾಲಿಗ್ರಾಮ ತಾಲೂಕಿನ ಕುಪ್ಪೆ ಹಾಲು ಉತ್ಪಾದಕರ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಕೆ.ಟಿ. ವಿರೂಪಾಕ್ಷ, ಮತ್ತು ಉಪಾಧ್ಯಕ್ಷರಾಗಿ ಕೆ.ಆರ್.ಕವಿತಾ ಅಶೋಕ್ ಅವಿರೋಧವಾಗಿ ಆಯ್ಕೆಯಾದರು.

ಸಂಘದ ಕಚೇರಿಯಲ್ಲಿ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಕೆ.ಟಿ.ವಿರುಪಾಕ್ಷ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ಕವಿತಾ ಅಶೋಕ್ ಅವರನ್ನು ಹೊರತು ಪಡಿಸಿ ಬೇರೆಯಾರು ನಾಮಪತ್ರ ಸಲ್ಲಿಸದ ಕಾರಣ ಅವಿರೋಧವಾಗಿ ಆಯ್ಕೆಯಾದರು. ಚುನಾವಣಾಧಿಕಾರಿಯಾಗಿ ಕೆ.ಆರ್.ನಗರ ಸಹಕಾರ ಇಲಾಖೆಯ ಸಿಡಿಓ ಎಸ್.ರವಿ ಕಾರ್ಯ ನಿರ್ವಹಿಸಿದರು. ಚುನಾವಣಾ ಸಭೆಯಲ್ಲಿ ಟಿ.ರವೀಂದ್ರ, ಚಂದ್ರಶೇಖರಯ್ಯ, ಕಾಂತರಾಜು, ರಾಮು, ಲಕ್ಷ್ಮಮ್ಮ ಇತರರಿದ್ದರು.

ವಿಜೃಂಭಣೆಯ ಗೋಣಳ್ಳಿ ಮಾರಮ್ಮ ರಥೋತ್ಸವ



ವರುಣ ಕ್ಷೇತ್ರಕ್ಕೆ ಸೇರಿರುವ ನಂಜನಗೂಡು ತಾಲೂಕು ಗೋಣಹಳ್ಳಿ ಗ್ರಾಮದ ಶ್ರೀ ಆದಿಶಕ್ತಿ ಮಾರಮ್ಮ ರಥೋತ್ಸವ ವಿಜೃಂಭಣೆಯಿಂದ ಜರುಗಿತು. ಆದಿಶಕ್ತಿ ಮಾರಮ್ಮ ದೇವಸ್ಥಾನಕ್ಕೆ ಸೇರಿದ 33 ಹಳ್ಳಿಗಳ ಭಕ್ತರು ಭಾಗವಹಿಸಿದ್ದರು. ಮೈಸೂರು, ಮಂಡ್ಯ, ಚಾಮರಾಜನಗರ, ಬೆಂಗಳೂರು ಮುಂತಾದ ಜಿಲ್ಲೆಗಳಿಂದ ಲಕ್ಷಾಂತರ ಭಕ್ತಾದಿಗಳು ಈ ರಥೋತ್ಸವದಲ್ಲಿ ಭಾಗವಹಿಸಿದ್ದರು.

ದಸರಾ ವಸ್ತುಪ್ರದರ್ಶನ ಪಾರಂಪರಿಕ ಶೈಲಿಯ ಪ್ರವಾಸಿ ತಾಣವಾಗಲಿದೆ

● ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್ ಮಾಹಿತಿ ● ವರ್ಷವಿಡೀ ಒಂದಲ್ಲ ಒಂದು ಕಾರ್ಯಕ್ರಮ ಆಯೋಜಿಸುವ ಉದ್ದೇಶ ● ಅಧಿಕಾರ ಅವಧಿ ವಿಸ್ತರಣೆಗೊಂಡಿರುವ ಅಯೂಬ್‌ಖಾನ್‌ರಿಗೆ ಅಭಿನಂದನೆ

ಮೈಸೂರು, ಫೆ.9(ಎಂಕೆ)– ಮೈಸೂರು ದಸರಾ ವಸ್ತುಪ್ರದರ್ಶನವನ್ನು ದಸರಾ ಸಂದರ್ಭಕ್ಕೆ ಸೀಮಿತಗೊಳಿಸದೆ ಪಾರಂಪರಿಕ ಶೈಲಿಯಲ್ಲಿ ಪ್ರವಾಸಿಗರ ನೆಚ್ಚಿನ ತಾಣವನ್ನಾಗಿಸುವ ಉದ್ದೇಶವಿದೆ ಎಂದು ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್ ತಿಳಿಸಿದರು.



ಮೈಸೂರಿನ ವಿವಿಧ ಸಂಘ-ಸಂಸ್ಥೆ ಅಧ್ಯಕ್ಷರಿಂದ ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್ ಅವರನ್ನು ಸನ್ಮಾನಿಸಿ, ಅಭಿನಂದಿಸಲಾಯಿತು.

ಮೈಸೂರಿನ ವಿವಿಧ ಸಂಘ-ಸಂಸ್ಥೆ ಅಧ್ಯಕ್ಷರಿಂದ ಹಮ್ಮಿಕೊಂಡಿದ್ದ ಅಭಿನಂದನಾ ಕಾರ್ಯಕ್ರಮದಲ್ಲಿ ತಮ್ಮ ಅಧಿಕಾರ ಅವಧಿ ವಿಸ್ತರಿಸಿ ಆದೇಶಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ ಹಾಗೂ ಪ್ರವಾಸೋದ್ಯಮ ಸಚಿವ ಹೆಚ್.ಕೆ. ಪಾಟೀಲ್ ಅವರಿಗೆ ಕೃತಜ್ಞತೆ ಸಲ್ಲಿಸಿ ಮಾತನಾಡಿದ ಅವರು, ಮೈಸೂರಿನಲ್ಲಿ ಪ್ರವಾಸೋದ್ಯಮ ಕ್ಷೇತ್ರ ಬೆಳೆಯಬೇಕಾದರೆ ಪ್ರವಾಸಿತಾಣಗಳು ಹೆಚ್ಚಾಗಬೇಕು. ಈ ನಿಟ್ಟಿನಲ್ಲಿ ದಸರಾ ಸಂದರ್ಭಕ್ಕೆ ಸೀಮಿತವಾಗಿರುವ ವಸ್ತುಪ್ರದರ್ಶನ ಮೈದಾನವನ್ನು ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳ ಮೂಲಕ ಪ್ರವಾಸಿ ತಾಣವನ್ನಾಗಿಸುವ ಉದ್ದೇಶ ಹೊಂದಿದ್ದೇವೆ ಎಂದರು.

ಈಗಾಗಲೇ ಪಾರಂಪರಿಕ ಶೈಲಿಯಲ್ಲಿ ದಸರಾ ವಸ್ತುಪ್ರದರ್ಶನ ಆವರಣ ಅಭಿವೃದ್ಧಿಯಾಗಿದ್ದು, ಮುಂದಿನ ದಿನಗಳಲ್ಲಿ ಕೈಗಾರಿಕಾ ವಸ್ತುಪ್ರದರ್ಶನ ಆಯೋಜನೆ, ಗ್ಲೋ ಗಾರ್ಡನ್, ಡೈನೋಸಾರ್ ಪಾರ್ಕ್ ಅಭಿವೃದ್ಧಿ ಮಾಡಬೇಕೆನ್ನುವ ಯೋಜನೆ ಇದ್ದು, ಬಜೆಟ್‌ನಲ್ಲಿ ಅನುದಾನ ನೀಡುವಂತೆ ಸಿಎಂ ಮತ್ತು ಡಿಸಿಎಂಗೆ ಮನವಿ ಮಾಡಲಾಗುವುದು. ಮೈಸೂರಿಗೆ ಬರುವ ಪ್ರವಾಸಿಗರು ವಸ್ತುಪ್ರದರ್ಶನ ಆವರಣಕ್ಕೆ ಭೇಟಿ ನೀಡುವಂತಾಗಬೇಕು ಎಂಬ ಆಶಯ ವ್ಯಕ್ತಪಡಿಸಿದರು.

ದಸರಾ ವಸ್ತುಪ್ರದರ್ಶನ ಆವರಣದಲ್ಲಿ ಮನರಂಜನೆಯ ಜೊತೆಗೆ ಮಳಿಗೆಗಳ ನಿರ್ಮಾಣ, ಮ್ಯೂಸಿಕಲ್ ಫೌಂಟೇನ್, ಡ್ರ್ಯಾಗನ್ ಫೌಂಟೇನ್ ನಿರ್ಮಾಣ ಸೇರಿದಂತೆ ಹಲವು ಅಭಿವೃದ್ಧಿ ಕಾರ್ಯಗಳ ಮೂಲಕ ಸ್ವರೂಪವನ್ನೇ ಬದಲಾವಣೆ ಮಾಡಲಾಗಿದೆ. ಹಾಗೆಯೇ ಮೈಸೂರಿನ ನಂತರ ಮೊದಲ ಬಾರಿಗೆ ಬೇರೆ ನಗರದಲ್ಲೂ ವಸ್ತುಪ್ರದರ್ಶನ ಆಯೋಜಿಸಲಾಗಿದೆ ಎಂದರು.

ದಸರಾ ವಸ್ತುಪ್ರದರ್ಶನ ಪ್ರವಾಸಿಗರ ಆಕರ್ಷಣೆ ಜೊತೆಗೆ ಉದ್ಯಮಿಗಳು ಮತ್ತು ವ್ಯಾಪಾರಸ್ಥರ ವ್ಯವಹಾರಿಕ ಕೇಂದ್ರವಾಗಿ ಸಾವಿರಾರು ಜನರಿಗೆ ಉದ್ಯೋಗ ಕಲ್ಪಿಸುವ ತಾಣವೂ ಆಗಿದೆ. ಅದೇ ರೀತಿ ವರ್ಷಪೂರ್ತಿ ಒಂದಲ್ಲ ಒಂದು ಬಗೆಯ ಕಾರ್ಯಕ್ರಮಗಳು ಕೂಲಿ ಕಾರ್ಮಿಕರು ಮತ್ತು ಬಡವರ ಆರ್ಥಿಕ ಸ್ವಾವಲಂಬನೆಗೆ ನೆರವಾಗಬೇಕು ಎಂಬ ಉದ್ದೇಶವನ್ನು ಹೊಂದಿದ್ದೇವೆ ಎಂದು ತಿಳಿಸಿದರು.

ಸನ್ಮಾನ: ಬಳಿಕ ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್ ಅವರನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್, ಮೈಸೂರು ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಅಧ್ಯಕ್ಷ ಕೆ.ಬಿ.ಲಿಂಗರಾಜು, ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್, ಮೈಸೂರು ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ.ನಾರಾಯಣಗೌಡ, ಬಸವ ಬಳಗದ ಒಕ್ಕೂಟದ ಅಧ್ಯಕ್ಷ ಎಂ.ಚಂದ್ರಶೇಖರ್, ಸಮಾಜ ಸೇವಕ ರಘುರಾಂ ವಾಜಪೇಯಿ, ಕರ್ನಾಟಕ ಸುಗಮ ಸಂಗೀತ ಪರಿಷತ್ ಅಧ್ಯಕ್ಷ ನಾಗರಾಜ್ ವಿ.ಬೈರಿ ಹಾಗೂ ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷ ವಿಕ್ರಂ ಅಯ್ಯಂಗಾರ್ ಸನ್ಮಾನಿಸಿದರು. ನಗರ ಪಾಲಿಕೆ ಮಾಜಿ ಸದಸ್ಯ ರಘುರಾಜೇ ಅರಸ್, ರಾಕೇಶ್ ಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಭಾರತೀ ಟೀಚರ್(ಕ) + ಮನಶಂಕರ ವರಪ್ರಸಾದ್ (ತೆ)	1+3 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ರಕ್ಕಸಪುರದೋಳ್ (ಕ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಮರ್ದಾನಿ-3 (ಹಿ)	3 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
45 ಫೇಸ್ ದಿ ಇಯರ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಲ್ಯಾಂಡ್ ಲಾರ್ಡ್ (ಕ)	4 ಪ್ರದರ್ಶನಗಳು
ರಾಜಕಮಲ್	
ವಿತ್ ಲವ್ (ತ)	4 ಪ್ರದರ್ಶನಗಳು
ಸಂಗಂ	
ಕರಿಕಾಡ (ಕ) + ಜೆ.ಸಿ.(ಕ)	2+2 ಪ್ರದರ್ಶನಗಳು
ಲಿಡೋ	
ಕರಗ (ಕ) + ಶಿವಲೀಲಾ (ಕ)	3+1 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಮಾವುತ (ಕ)	4 ಪ್ರದರ್ಶನಗಳು

ತಾಯಿಯ ಖಾಸಗಿ ಫೋಟೋ ತೆಗೆದು ಲವರ್‌ಗೆ ಕಳುಹಿಸಿದ ಮಗಳು!

ಬೆಂಗಳೂರು: ತಾಯಿಯ ಒಪ್ಪಿಗೆ ಇಲ್ಲದೆ ಆಕೆಯ ಖಾಸಗಿ ಫೋಟೋಗಳನ್ನು ತನ್ನ ಲವರ್ ಗೆ ಕಳುಹಿಸಿದ 23 ವರ್ಷದ ಮಗಳ ವಿರುದ್ಧವೇ ಪೊಲೀಸರು ದೂರು ದಾಖಲಿಸಿದ್ದಾರೆ. ತನ್ನ ಒಪ್ಪಿಗೆಯಿಲ್ಲದೆ ಖಾಸಗಿ ಫೋಟೋಗಳನ್ನು ಶೇರ್ ಮಾಡಲಾಗಿದೆ ಎಂದು ತಾಯಿ ಆರೋಪಿಸಿದ್ದಾರೆ.

ವಿದ್ಯಾಭ್ಯಾಸಕ್ಕೆ ಅಗತ್ಯವಾಗಿದೆ ಎಂದು ಹೇಳಿ ಮಗಳು ಈ ಹಿಂದೆ ಪೋಷಕರಿಂದ ಮೊಬೈಲ್ ಪಡೆದಿದ್ದಳು ಎನ್ನಲಾಗಿದೆ. ಸುಮಾರು ಒಂದು ತಿಂಗಳಿನಿಂದ ಆಕೆ ಅಪರಿಚಿತ ವ್ಯಕ್ತಿಯೊಂದಿಗೆ ಮಾತನಾಡುತ್ತಿದ್ದನ್ನು ಕುಟುಂಬ ಪತ್ತೆ ಮಾಡಿದೆ.

ಮಗಳ ಫೋನ್ ಅನ್ನು ತಾಯಿ ಪರಿಶೀಲಿಸಿದಾಗ ಮತ್ತೊರ್ವ ಮಹಿಳೆ ಜೊತೆಗೆ ತನ್ನ ಖಾಸಗಿ ಫೋಟೋಗಳಿರುವುದು ಗೊತ್ತಾಗಿದೆ. ತನ್ನ ಒಪ್ಪಿಗೆ ಇಲ್ಲದೆ ಈ ಫೋಟೋಗಳನ್ನು ತೆಗೆದಿರುವುದಲ್ಲದೇ ಅದನ್ನು ತನ್ನ ಪ್ರಿಯಕರನೊಂದಿಗೆ ಹಂಚಿಕೊಂಡಿದ್ದಾಳೆ ಎಂದು ಅವರು ದೂರಿನಲ್ಲಿ ತಿಳಿಸಿದ್ದಾರೆ.

ಕೆಲವು ವಾರಗಳ ಹಿಂದೆ ಅದೇ ವ್ಯಕ್ತಿಯನ್ನು ಮದುವೆಯಾಗಿರುವುದಾಗಿ ಮಗಳು ಹೇಳಿದ್ದಳು ಎನ್ನಲಾಗಿದೆ. ದೂರಿನ ಮೇರೆಗೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದಾರೆ. ಮಗಳು ಮತ್ತು ಆಕೆಯ ಪತಿ ಇಬ್ಬರ ಫೋನ್‌ಗಳನ್ನು ವಶಕ್ಕೆ ಪಡೆದು ವಿಧಿವಿಜ್ಞಾನ ಪರೀಕ್ಷೆಗೆ ಕಳುಹಿಸಲಾಗಿದೆ.

ಎಲ್ಲ ಆಯಾಮಗಳಲ್ಲಿ ಪರಿಶೀಲನೆ ನಡೆಸುತ್ತಿದ್ದು, ಫೊರೆನ್ಸಿಕ್ ವರದಿ ಬಂದ ಬಳಿಕ ಸತ್ಯಾಂಶ ತಿಳಿಯಲಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

ಬಿಇಎಂಎಲ್ ಒಕ್ಕಲಿಗರ ಸಂಘದ ಸಮುದಾಯ ಭವನಕ್ಕೆ

ಆದಿಚುಂಚನಗಿರಿ ಶ್ರೀಗಳಿಂದ ಶಂಕು ಸ್ಥಾಪನೆ


ಬಿಇಎಂಎಲ್ ಒಕ್ಕಲಿಗರ ಸಂಘದ ನೂತನ ಸಮುದಾಯ ಭವನ ನಿರ್ಮಾಣಕ್ಕೆ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಗುದ್ದಲಿ ಪೂಜೆ ನೆರವೇರಿಸಿದರು.

ಮೈಸೂರು, ಫೆ.9(ಎಂಕೆ)– ಮೈಸೂರಿನ ಹೆಬ್ಬಾಳ ಮೊದಲ ಹಂತದಲ್ಲಿರುವ ಎಸ್‌ಬಿಐ ಬ್ಯಾಂಕ್ ಎದುರಿನ ಸಿಎ-06 ನಿವೇಶನದಲ್ಲಿ ಬಿಇಎಂಎಲ್(ಬೆಮೆಲ್) ಒಕ್ಕಲಿಗರ ಸಂಘದ ನೂತನ ಸಮುದಾಯ ಭವನ ನಿರ್ಮಾಣಕ್ಕೆ ಸೋಮವಾರ ಶಂಕುಸ್ಥಾಪನೆ ನೆರವೇರಿಸಲಾಯಿತು.

ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಹಾಗೂ ಮೈಸೂರು ಶಾಖಾ ಮಠದ ಶ್ರೀ ಸೋಮೇಶ್ವರನಾಥ ಸ್ವಾಮೀಜಿ ದಿವ್ಯ ಸಾನ್ನಿಧ್ಯದಲ್ಲಿ ಗುದ್ದಲಿ ಪೂಜೆ ನೆರವೇರಿಸಲಾಯಿತು.

ಬಳಿಕ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ಮಾತನಾಡಿದ ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಶ್ರೀ ನಿರ್ಮಲಾನಂದ ನಾಥ ಸ್ವಾಮೀಜಿ, ಸಂಘ-ಸಂಸ್ಥೆಗಳು ಸಮಾಜ ಉಳಿವಿಗಾಗಿ ಕೆಲಸ ಮಾಡಬೇಕು. ಈ ನಿಟ್ಟಿನಲ್ಲಿ ಬಿಇಎಂಎಲ್ ಒಕ್ಕಲಿಗರ ಸಂಘವು ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಪ್ರತಿಭಾವಂತರ ಗುರ್ತಿಸಿ ಅವರಿಗೆ ಸಹಾಯ ಮಾಡುವ ಮೂಲಕ ಅನೇಕ ಸಮಾಜಮುಖಿ ಕಾರ್ಯಗಳನ್ನು ಮಾಡುತ್ತಿರುವುದು ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಶಾಸಕ ಕೆ.ಹರೀಶ್‌ಗೌಡ, ಜಿ.ಡಿ.ಹರೀಶ್ ಗೌಡ, ಮಾಜಿ ಶಾಸಕ ಎಲ್.ನಾಗೇಂದ್ರ ಖ್ಯಾತ ವಾಗ್ಮಿ ಪ್ರೊ.ಕೃಷ್ಣೇಗೌಡ, ನಗರಪಾಲಿಕೆ ಮಾಜಿ ಸದಸ್ಯರಾದ ಪೈಲ್ವಾನ್ ಶ್ರೀನಿವಾಸ್, ಪ್ರೇಮಾ ಶಂಕರೇಗೌಡ, ಬಿಇಎಂಎಲ್ ಒಕ್ಕಲಿಗರ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಉದ್ಯೋಗಾವಕಾಶಕ್ಕಾಗಿ ವಿದ್ಯಾರ್ಥಿಗಳು ಸಂವಹನ ಕೌಶಲ ಮತ್ತು ನಾಯಕತ್ವದ ಗುಣವನ್ನು ಬೆಳೆಸಿಕೊಳ್ಳಬೇಕು

ಮೈಸೂರು, ಫೆ. 9– ಮೈಸೂರು ಸರಸ್ವತಿಪುರಂನ ಜೆಎಸ್‌ಎಸ್ ಮಹಿಳಾ ಕಾಲೇಜಿನ ನವಜ್ಯೋತಿ ಸಭಾಂಗಣದಲ್ಲಿ ವಾಣಿಜ್ಯ ಮತ್ತು ನಿರ್ವಹಣಾಶಾಸ್ತ್ರ ವಿಭಾಗದ ವತಿಯಿಂದ ಆವಿಷ್ಕಾರ 2026 ಆರೋಹಣ ರಾಜ್ಯ ಮಟ್ಟದ ಮ್ಯಾನ್ ಕಾಮ್ ಫೆಸ್ಟ್ ಸಮಾರೋಪ ಸಮಾರಂಭ ನಡೆಯಿತು.



ಸಮಾರೋಪ ಭಾಷಣದಲ್ಲಿ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನ ಕುಮಾರ್ ಮಾತನಾಡಿದರು

ಸಮಾರೋಪ ಭಾಷಣದಲ್ಲಿ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನ ಕುಮಾರ್ ಮಾತನಾಡಿ, ನಾಯಕತ್ವದ ಗುಣಗಳನ್ನು ಮತ್ತು ಸದೃಢವಾದ ವ್ಯಕ್ತಿತ್ವವನ್ನು ಬೆಳೆಸಿಕೊಳ್ಳಲು ಇಂತಹ ವೇದಿಕೆಗಳು ಪ್ರಧಾನ ಪಾತ್ರವನ್ನು ವಹಿಸುತ್ತವೆ ಎಂದು ಅಭಿಪ್ರಾಯಪಟ್ಟರು.

ಪ್ರಸ್ತುತ ಸಂದರ್ಭದಲ್ಲಿ ಹೆಚ್ಚಿನ ಉದ್ಯೋಗಾವಕಾಶಗಳು ದೊರೆಯುತ್ತವೆ. ದೇಶದ ಆರ್ಥಿಕ ಪ್ರಗತಿಯಲ್ಲಿ ಗಣನೀಯ ಪಾತ್ರ ವಹಿಸುತ್ತವೆ. ವಾಣಿಜ್ಯ ಶಾಸ್ತ್ರದ ವಿದ್ಯಾರ್ಥಿಗಳಿಗೆ ಒಂದು ವಸ್ತುವಿನ ಉತ್ಪಾದನೆ ಮತ್ತು ಮಾರಾಟ ಮಾಡುವ ಕುಶಲತೆ ಇರುತ್ತದೆ ಎಂದರು. ಭೂಮಿಯಿಂದ ಆಕಾಶದವರೆಗೆ ಮಹಿಳೆಯರು ಗಣನೀಯ ಸಾಧನೆ ಮಾಡಿದ್ದಾರೆ. ನೀವೂ ಕೌಶಲತೆಯನ್ನು ರೂಢಿಸಿಕೊಳ್ಳಿ ಎಂದರು.

ಬ್ಯಾಂಕ್ ಆಫ್ ಬರೋಡದ ಉಪ ಪ್ರಾದೇಶಿಕ ಮುಖ್ಯಸ್ಥ ವಿದ್ಯಾಸಾಗರ್ ಮರಾಲ ಮಾತನಾಡಿ, ಪ್ರಸ್ತುತ ಸಂದರ್ಭದಲ್ಲಿ ವಾಣಿಜ್ಯಶಾಸ್ತ್ರವು ಪ್ರಮುಖ ಜ್ಞಾನ ಶಾಖೆಯಾಗಿದೆ. ಇಂತಹ ವೇದಿಕೆಗಳನ್ನು ಬಳಸಿಕೊಂಡು ವಿದ್ಯಾರ್ಥಿಗಳು ಜೀವನದಲ್ಲಿ ಪ್ರಗತಿ ಸಾಧಿಸಿ ಎಂದರು. ವಿದ್ಯಾರ್ಥಿಗಳು ಉನ್ನತ ಶಿಕ್ಷಣದಲ್ಲಿ ಹೆಚ್ಚಿನ ಆಸಕ್ತಿ ವಹಿಸಿ ಎಂದು ಸಲಹೆ ನೀಡಿದರು.

ಮೇರಾ ಈವೆಂಟ್ಸ್ ಸ್ಥಾಪಕರು ಮತ್ತು ಹಿರಿಯ ವಿದ್ಯಾರ್ಥಿನಿಯಾದ ಶ್ರೀಮತಿ ಮೇಘನಾ ರವಿಕುಮಾರ್ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಿದರು.

ಅಧ್ಯಕ್ಷತೆ ವಹಿಸಿದ್ದ ಮೈಸೂರು ವಿಶ್ವವಿದ್ಯಾಲಯದ ಹಣಕಾಸು ಅಧಿಕಾರಿ ಶ್ರೀಮತಿ ಕೆ.ಎಸ್.ರೇಖಾ ಮಾತನಾಡಿ, ನಾಡಿಗೆ ಜೆಎಸ್‌ಎಸ್ ಸಂಸ್ಥೆಯ ಕೊಡುಗೆ ಅಪಾರ ಎಂದರು. ವಿದ್ಯಾರ್ಥಿಗಳು ಆಯ್ದುಕೊಳ್ಳುವ ಕ್ಷೇತ್ರದಲ್ಲಿ ಶ್ರದ್ಧೆಯಿಂದ ತೊಡಗಿಸಿಕೊಂಡು ಸಾಧನೆಯತ್ತ ಮುನ್ನುಗ್ಗಬೇಕು ಎಂದರು. ವಿದ್ಯಾರ್ಥಿಗಳು ಸಾಮಾಜಿಕ ಜವಾಬ್ದಾರಿಯನ್ನು ರೂಢಿಸಿಕೊಂಡು ದೇಶದ ಪ್ರಗತಿಗೆ ಕೈಜೋಡಿಸಬೇಕು ಎಂದರು.

ಪ್ರಾಂಶುಪಾಲರಾದ ಡಾ. ರೇಚಣ್ಣ ಅವರು ಡಾ. ಗಂಗಾಧರಸ್ವಾಮಿ ವಿ, ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರು ಮತ್ತು ಮ್ಯಾನ್ - ಕಾಮ್. ಫೆಸ್ಟ್‌ನ ಸಂಚಾಲಕರು ಕು. ಎಂ. ಕೆ. ಉಷಾರಾಣಿ ಮತ್ತು ಡಾ. ಎಸ್. ಗೀತಾ ಅವರು ಫೆಸ್ಟ್‌ನ ಸಹ-ಸಂಯೋಜಕರು ಉಪಸ್ಥಿತರಿದ್ದರು. ಕಾಲೇಜಿನ ಸಿಬ್ಬಂದಿ ವರ್ಗದ ಸದಸ್ಯರು ಮತ್ತು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಚಾಂಪಿಯನ್‌ಷಿಪ್ ಅನ್ನು ಮೈಸೂರಿನ ಸೇಫಿಯೆಂಟ್ ಕಾಲೇಜ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್‌ಮೆಂಟ್ ಪಡೆದರೆ, ಎಸ್‌ಬಿಆರ್‌ಆರ್ ಮಹಾಜನ ಪ್ರಥಮ ದರ್ಜೆ ಕಾಲೇಜು ರನ್ನರ್ ಅಪ್ ಪ್ರಶಸ್ತಿ ಪಡೆದುಕೊಂಡರು.

ನ್ಯಾ. ಮೈಕೆಲ್ ಡಿ. ಕುನ್ಹಾ ಶಿಫಾರಸು ಅನ್ವಯ

ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಆರ್‌ಸಿಬಿ ಆಡಲು ಅವಕಾಶ

ಗೃಹ ಸಚಿವ ಡಾ.ಪರಮೇಶ್ವರ್ ಮಾಹಿತಿ

ಬೆಂಗಳೂರು, ಫೆ.9(ಕೆಎಂಶಿ)–ಜಸ್ಟೀಸ್ ಮೈಕೆಲ್ ಡಿ. ಕುನ್ಹಾ ಶಿಫಾರಸುಗಳ ಪಾಲನೆ ಮಾಡಿದಲ್ಲಿ ಆರ್‌ಸಿಬಿ ತಂಡ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಐಪಿಎಲ್



ಪಂದ್ಯಗಳನ್ನು ಆಡಲು ಅವಕಾಶ ನೀಡಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಇಂದಿಲ್ಲಿ ತಿಳಿಸಿದ್ದಾರೆ. ಕೆಎಸ್‌ಸಿಎ ಅಧ್ಯಕ್ಷ ವೆಂಕಟೇಶ್ ಪ್ರಸಾದ್, ಆರ್‌ಸಿಬಿ ಪ್ರತಿನಿಧಿ ರಾಜೇಶ್ ಮೆನನ್ ನೇತೃತ್ವದ ನಿಯೋಗ ಸಚಿವರನ್ನು ಭೇಟಿ ಮಾಡಿ ಮಾತುಕತೆ ನಡೆಸಿತು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಡಾ.ಪರಮೇಶ್ವರ್, ಇದೇ 12ರಂದು ಮತ್ತೊಂದು ಸಭೆ ನಡೆಸಿ ಐಪಿಎಲ್ ಪಂದ್ಯಗಳನ್ನು ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಸುವ ಬಗ್ಗೆ ತೀರ್ಮಾನಿಸುತ್ತೇವೆ ಎಂದರು.

ಅದುವರೆಗೂ ಸರ್ಕಾರ ಯಾವುದೇ ನಿರ್ಧಾರವನ್ನು ತೆಗೆದುಕೊಳ್ಳಲು ಸಾಧ್ಯವಿಲ್ಲ, ಈ ಬಗ್ಗೆ ಮುಖ್ಯಮಂತ್ರಿ ಜೊತೆ ಮಾತನಾಡುತ್ತೇನೆ. ಅಲ್ಲದೆ, ನಮ್ಮ ಶಿಫಾರಸುಗಳನ್ನು ಅವರು ಎಷ್ಟರ ಮಟ್ಟಿಗೆ ಪಾಲಿಸಿದ್ದಾರೆ ಎಂಬುದನ್ನು ಪರಿಶೀಲಿಸಿ ತೀರ್ಮಾನಿಸಲಾಗುವುದು.

ಬೆಂಗಳೂರಿನಲ್ಲಿ ಐಪಿಎಲ್ ಪಂದ್ಯಗಳು ನಡೆಯಬೇಕು. ಆದರೆ, ಕ್ರೀಡಾಭಿಮಾನಿಗಳ ಸುರಕ್ಷತೆ ಮುಖ್ಯ. ಕಾಲ್ತುಳಿತದಂತಹ ದುರಂತಗಳು ಮರುಕಳಿಸಬಾರದು ಎಂದರು.

ಉಸಿರಾಟದ ತೊಂದರೆ: ಪುಣೆ ಆಸ್ಪತ್ರೆಗೆ ಶರದ್ ಪವಾರ್ ದಾಖಲು

ಪುಣೆ: ಮಾಜಿ ಕೇಂದ್ರ ಸಚಿವ ಹಾಗೂ ಎನ್‌ಸಿಪಿ(ಎಸ್‌ಪಿ) ಮುಖ್ಯಸ್ಥ ಶರದ್ ಪವಾರ್ ಅವರಿಗೆ ಸೋಮವಾರ ಗಂಟಲು ನೋವು ಮತ್ತು ತೀವ್ರ ಉಸಿರಾಟದ ತೊಂದರೆ ಕಾಣಿಸಿಕೊಂಡಿದ್ದು, ತಕ್ಷಣ ಅವರನ್ನು ಬಾರಾಮತಿಯಲ್ಲಿರುವ ಅವರ ನಿವಾಸದಿಂದ ಪುಣೆ ಆಸ್ಪತ್ರೆಗೆ ದಾಖಲಿಸಲಾಗಿದೆ. 85 ವರ್ಷದ ಹಿರಿಯ ನಾಯಕ ಶರದ್ ಪವಾರ್ ಅವರು ಗಂಟಲು ಸೋಂಕಿನಿಂದ ಬಳಲುತ್ತಿರುವ ಕಾರಣ ಅವರನ್ನು ರೂಬಿ ಹಾಲ್ ಚಿಕಿತ್ಸಾಲಯಕ್ಕೆ ಕರೆದೊಯ್ಯಲಾಗುತ್ತಿದೆ ಎಂದು ಆಪ್ತ ಸಹಾಯಕರೊಬ್ಬರು ತಿಳಿಸಿದ್ದಾರೆ.



ರೂಬಿ ಹಾಲ್ ಕ್ಲಿನಿಕ್‌ನ ಮುಖ್ಯ ಹೃದ್ರೋಗ ತಜ್ಞ ಮತ್ತು ವ್ಯವಸ್ಥಾಪಕ ಟ್ರಸ್ಟಿ ಡಾ. ಪರ್ವೇಜ್ ಗ್ರಾಂಟ್ ಅವರು ಶರದ್ ಪವಾರ್ ಆಸ್ಪತ್ರೆಗೆ ದಾಖಲಾಗಿರುವುದನ್ನು ಖಚಿತಪಡಿಸಿದ್ದಾರೆ. ವೈದ್ಯರ ತಂಡ ಶರದ್ ಪವಾರ್ ಅವರನ್ನು ತೀವ್ರ ತಪಾಸಣೆಗೆ ಒಳಪಡಿಸಿದ್ದು, ಅದಕ್ಕೆ ಅನುಗುಣವಾಗಿ ಮುಂದಿನ ಕ್ರಮವನ್ನು ನಿರ್ಧರಿಸಲಾಗುತ್ತದೆ ಎಂದು ಡಾ. ಗ್ರಾಂಟ್ ಹೇಳಿದ್ದಾರೆ.

ಬಜೆಟ್‌ನಲ್ಲಿ ಕಾಯಕ ಸಮಾಜಗಳ ಅಭಿವೃದ್ಧಿ ಪ್ರಾಧಿಕಾರ ರಚನೆ: ಸಾವಿರ ಕೋಟಿ ಮೀಸಲಿಡಲು ಆಗ್ರಹ

ಮೈಸೂರು,ಫೆ.9(ಎಂಟಿವೈ)– ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ಬಾರಿಯ ಬಜೆಟ್‌ನಲ್ಲಿ 'ಕಾಯಕ ಸಮಾಜಗಳ ಅಭಿವೃದ್ಧಿ ಪ್ರಾಧಿಕಾರ' ರಚಿಸಿ, ಒಂದು ಸಾವಿರ ಕೋಟಿ ರೂ. ಮೀಸಲಿಡಬೇಕು ಎಂದು ರಾಜ್ಯ ಕಾಯಕ ಸಮಾಜಗಳ ಒಕ್ಕೂಟದ ಅಧ್ಯಕ್ಷ ಕೆ.ಸಿ.ಪುಟ್ಟಸಿದ್ದಶೆಟ್ಟಿ ಒತ್ತಾಯಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂವಿಧಾನದ ಪರಿಚ್ಛೇದದ ಅಡಿಯಲ್ಲಿ ಕಾಯಕ ಸಮಾಜಗಳ 102 ಜಾತಿಗಳ ಜನರು ಸಾಮಾಜಿಕ, ಶೈಕ್ಷಣಿಕ, ಆರ್ಥಿಕವಾಗಿ ಹಿಂದುಳಿದಿದ್ದು ಬಹುತೇಕರು ಬಡತನ ರೇಖೆಗಿಂತ ಕೆಳಗಿದ್ದಾರೆ. ಆದಿವಾಸಿ, ಬುಡಕಟ್ಟು ಸಮುದಾಯದವರು ಈಗಲೂ ಬಹುತೇಕ ಅನಕ್ಷರಸ್ಥರಾಗಿದ್ದಾರೆ. ಇವರಿಗೆ ಮನೆ, ಉಳಲು ಭೂಮಿ ಇಲ್ಲ. ಕಾಡಿನಲ್ಲಿ ಸಿಗುವ ಹಣ್ಣು-ಹಂಪಲು, ಗೆಡ್ಡೆ-ಗೆಣಸು ತಿಂದು ಬದುಕುತ್ತಿದ್ದಾರೆ. ಆದರೆ ಅರಣ್ಯ ಇಲಾಖೆ ಇವರನ್ನು ಬಲವಂತವಾಗಿ ಕಾಡಿನಿಂದ ಹೊರದಬ್ಬಿ ಕಿರುಕುಳ ನೀಡಲಾಗುತ್ತಿದೆ. ಇವರಿಗೆ ಒದಗಿಸುತ್ತಿರುವ ಅನುದಾನ ಇತರರ ಪಾಲಾಗುತ್ತಿದೆ. ಅಲೆಮಾರಿ, ಅರೆ ಅಲೆಮಾರಿ ಸಮುದಾಯಗಳಿಗೆ ಸೇರಿದವರ ಪರಿಸ್ಥಿತಿ ಸಂಕಷ್ಟದಲ್ಲಿದೆ. ಶ್ರಮಿಕ ವರ್ಗಗಳೂ ಇದಕ್ಕೆ ಹೊರತಾಗಿಲ್ಲ. ಇವರ ಮೂಲ ಕಸುಬು ಮರೆಯಾಗುತ್ತಿದೆ. ಆದ್ದರಿಂದ ಈ ಎಲ್ಲಾ ವರ್ಗಗಳಿಗಾಗಿ ಸಣ್ಣ ಮತ್ತು ಅತೀ ಸಣ್ಣ ಕೈಗಾರಿಕೆಗಳ ಸ್ಥಾಪನೆಗೆ 5 ರಿಂದ 10 ಕೋಟಿ ಬ್ಯಾಂಕ್ ಸಾಲಕ್ಕೆ ಸರ್ಕಾರ ಗ್ಯಾರಂಟಿ ಕೊಡಬೇಕು. ಗುಡಿ ಕೈಗಾರಿಕೆ ಪುನಶ್ಚೇತನಗೊಳಿಸಬೇಕು. ಈ ವರ್ಗಗಳ ಸರ್ವತೋಮುಖ ಅಭಿವೃದ್ಧಿಗಾಗಿ ಕಾಯಕ ಸಮಾಜಗಳ ಪ್ರಾಧಿಕಾರ ಸ್ಥಾಪಿಸಿ, ಸುಮಾರು 1 ಸಾವಿರ ಕೋಟಿ ರೂ ಮೀಸಲಿಡಬೇಕು. ಬಜೆಟ್ ಪೂರ್ವ ಚರ್ಚೆಗೆ ಒಕ್ಕೂಟಕ್ಕೆ ಆಹ್ವಾನಿಸಬೇಕೆಂದು ಆಗ್ರಹಿಸಿದರು.

ಶ್ರಮಿಕ ವರ್ಗಗಳಾದ ಅಕ್ಕಸಾಲಿಗರು, ಬಡಗಿ, ಕಂಬಾರರು, ಗೆಜ್ಜೆಗಾರರು, ಶಿಲ್ಪಿಗಳು, ಗಾಣಿಗರು ಕುಂಬಾರರು, ಮಡಿವಾಳ, ಉಪ್ಪಾರ, ಯಾದವರು, ಕುರುಹೀನಶೆಟ್ಟಿ, ದೇವಾಂಗ, ಮಗ್ಗದಶೆಟ್ಟರು, ಬಳೆಶೆಟ್ಟರು, ಕೊರಮ, ಮೇದರು, ಸಾದರು, ಕುರುಬರು, ಈಡಿಗರು, ತಿಗಳರು, ಹೂವಾಡಿಗರು, ತೊರೆಯರು, ಪರಿವಾರದವರು, ಸವಿತ ಸಮಾಜ ಸೇರಿದಂತೆ ಇನ್ನಿತರ ಸಮುದಾಯದವರ ಬದುಕು ಹಸನುಗೊಳಿಸಲು ಬಜೆಟ್‌ನಲ್ಲಿ ಪೂರಕ ಯೋಜನೆ ಪ್ರಕಟಿಸಬೇಕು ಎಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ರಾಜ್ಯ ಕಾಯಕ ಸಮಾಜಗಳ ಒಕ್ಕೂಟದ ಪದಾಧಿಕಾರಿಗಳಾದ ಕೋಣಸೂರು ಶಿವರಾಜ್, ಎಸ್. ಯೋಗೀಶ್ ಉಪ್ಪಾರ್, ರಮೇಶ್, ಬೋರಪ್ಪಶೆಟ್ಟಿ ಇದ್ದರು.

ಮಾರಮ್ಮ ದೇವಸ್ಥಾನದ ಜಾತ್ರಾ ಮಹೋತ್ಸವ


ಕನ್ನೇಗೌಡನಕೊಪ್ಪಲು, ಚಿನ್ನಗಿರಿ ಕೊಪ್ಪಲು ಮಹಿಳೆಯರು ಮಾರಮ್ಮನಿಗೆ ವಿಶೇಷ ಪೂಜೆ, ತಂಬಿಟ್ಟಿನ ಆರತಿ ನೆರವೇರಿಸಿದರು. ಬಳಿಕ ಕೆ.ಜಿ ಕೊಪ್ಪಲಿನ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮುಂದುವರೆಯಿತು.

ಮೈಸೂರು, ಫೆ.9(ಎಸ್‌ಪಿಎನ್)– ಮೈಸೂರು ಚಾಮರಾಜಪುರಂನಲ್ಲಿರುವ (ಕನ್ನೇಗೌಡನಕೊಪ್ಪಲು) ಮಾರಮ್ಮ ದೇವಸ್ಥಾನದ ಜಾತ್ರಾ ಮಹೋತ್ಸವ ಸೋಮವಾರ ಭಕ್ತಿ-ಭಾವದಿಂದ ಜರುಗಿತು.

ಪ್ರತಿ ವರ್ಷ ಶಿವರಾತ್ರಿ ಹಬ್ಬದ ಮೊದಲ ಸೋಮವಾರದಂದು ಜರುಗುವ ಈ ಜಾತ್ರಾ ಮಹೋತ್ಸವವು ಸರಸ್ವತಿಪುರಂ, ಚಾಮರಾಜಪುರಂ, ಕನ್ನೇಗೌಡನ ಕೊಪ್ಪಲು, ಚಿನ್ನಗಿರಿ ಕೊಪ್ಪಲು ಮಹಿಳೆಯರು ಮಾರಮ್ಮನಿಗೆ ವಿಶೇಷ ಪೂಜೆ, ತಂಬಿಟ್ಟಿನ ಆರತಿ ನೆರವೇರಿಸಿದರು.

ಮಧ್ಯಾಹ್ನ 2 ಗಂಟೆಗೆ ಕೆ.ಜಿ.ಕೊಪ್ಪಲಿನ 3ನೇ ಕ್ರಾಸಿನಿಂದ ಆರಂಭವಾದ ಮಾರಮ್ಮದೇವಿಯ ಮೆರವಣಿಗೆ, ಜಯನಗರ, ಕೆ.ಜಿ.ಕೊಪ್ಪಲು, ಚಿನ್ನಗಿರಿ ಕೊಪ್ಪಲು, ಸರಸ್ವತಿಪುರಂ ಕೆಲ ಪ್ರದೇಶಗಳಲ್ಲಿ ಸಂಚರಿಸಿ, ಜಯನಗರ ರೈಲ್ವೆ ಸೇತುವೆ ಮುಖಾಂತರ ಹೊರಟು ಪ್ರಮುಖ ಬೀದಿಗಳಲ್ಲಿ ಸಂಚರಿಸಿತು.

ಈ ವೇಳೆ ಕನ್ನೇಗೌಡನ ಕೊಪ್ಪಲು ಮಾರಮ್ಮ ದೇವಸ್ಥಾನ ಟ್ರಸ್ಟ್‌ನ ಅಧ್ಯಕ್ಷ ರಾಮೇಗೌಡ, ಪ್ರಧಾನ ಕಾರ್ಯದರ್ಶಿ ಆರ್. ಬಸವರಾಜ್, ಖಜಾಂಚಿ ಆರ್. ಶಿವಕುಮಾರ್, ಶಿವಣ್ಣ, ಈಶ್ವರ್, ಕೃಷ್ಣಣ್ಣ, ರೈಲ್ವೆ ಗೋಪಿ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡು ಜಾತ್ರಾ ಮಹೋತ್ಸವದ ಯಶಸ್ಸಿಗೆ ಕಾರಣ ರಾದರು.

ಮೆರವಣಿಗೆಯಲ್ಲಿ ದೇವರ ಕುಣಿತ, ಕಂಸಾಳೆ, ಜಾನಪದ ನೃತ್ಯ ಹುಲಿವೇಷ, ನಗಾರಿ, ಡೊಳ್ಳು ಕುಣಿತ, ಅರಮನೆ ಬ್ಯಾಂಡ್, ಓಲಗ, ತಮಟೆ, ಸೇರಿದಂತೆ ಕಲಾತಂಡಗಳೊಂದಿಗೆ ಮಾರಮ್ಮ ದೇವಿ ಮೆರವಣಿಗೆಗೆ ಮೆರಗು ತಂದವು. ಈ ವೇಳೆ ಶಾಸಕರಾದ ಟಿ.ಎಸ್.ಶ್ರೀವತ್ಸ ನಮಿಸಿದರು.

ಕಿರಿಯರು, ಹಿರಿಯರು ಎನ್ನದೆ, ಬಾಯಿ ಬೀಗ ಹಾಕಿಕೊಂಡು ಹರಕೆ ತೀರಿಸಿದರಲ್ಲದೆ, ಬಾಯಿಬೀಗ ಹಾಕಿಕೊಂಡು ಮಾರಮ್ಮ ದೇವ ಸ್ಥಾನದವರೆಗೆ ಮೆರವಣಿಗೆಯಲ್ಲಿ ಸಾಗಿದರು.

ಮುದ್ರಣ ಮಾಧ್ಯಮ ಇಂದಿಗೂ ವಿಶ್ವಾಸಾರ್ಹತೆ ಉಳಿಸಿಕೊಂಡಿದೆ

● ಶಾಸಕ ಎ.ಆರ್.ಕೃಷ್ಣಮೂರ್ತಿ ಶ್ಲಾಘನೆ ● ಪತ್ರಕರ್ತರು, ವಿದ್ಯಾರ್ಥಿಗಳಿಗೆ ಸಾಧನಾ ಪ್ರಶಸ್ತಿ ಪ್ರದಾನ

ಮೈಸೂರು, ಫೆ.9(ಎಂಕೆ)– ವಿಶ್ವಮಾನವ ಮೈಸೂರು ವಿಶ್ವವಿದ್ಯಾನಿಲಯ ನೌಕರರ ವೇದಿಕೆ ಹಾಗೂ ನವ ವಿಶ್ವಮಾನವ ಟ್ರಸ್ಟ್ ಮೈಸೂರು ವತಿಯಿಂದ ಶ್ರೀ ರಾಜಶೇಖರ ಕೋಟಿ ಸ್ಮರಣಾರ್ಥ ಪತ್ರಕರ್ತರು, ಮೈಸೂರು ವಿವಿಯಿಂದ ಚಿನ್ನದ ಪದಕ ವಿಜೇತರು ಮತ್ತು ಪಿಹೆಚ್‌ಡಿ ಪದವಿ ಪಡೆದ ವಿದ್ಯಾರ್ಥಿಗಳಿಗೆ ಸಾಧನಾ ಪ್ರಶಸ್ತಿ ಪ್ರದಾನ ಮಾಡಲಾಯಿತು.



ವಿಶ್ವಮಾನವ ಮೈಸೂರು ವಿಶ್ವವಿದ್ಯಾನಿಲಯ ನೌಕರರ ವೇದಿಕೆ ಹಾಗೂ ನವ ವಿಶ್ವಮಾನವ ಟ್ರಸ್ಟ್ ಮೈಸೂರು ವತಿಯಿಂದ ಶ್ರೀ ರಾಜಶೇಖರ ಕೋಟಿ ಸ್ಮರಣಾರ್ಥ ಸೇವಾ ಪ್ರಶಸ್ತಿ ಪ್ರದಾನ ಮಾಡಲಾಯಿತು. ಶಾಸಕ ಎ.ಆರ್.ಕೃಷ್ಣಮೂರ್ತಿ, ನಿವೃತ್ತ ಪ್ರಾಧ್ಯಾಪಕ ಪ್ರೊ.ಎಸ್.ಶಿವರಾಜಪ್ಪ, ವೇದಿಕೆ ಅಧ್ಯಕ್ಷ ಆರ್.ವಾಸುದೇವ ಮತ್ತಿತರರಿದ್ದರು.

ಮೈಸೂರು ವಿಶ್ವವಿದ್ಯಾನಿಲಯ ಮಾನಸಗಂಗೋತ್ರಿಯಲ್ಲಿರುವ ಇಎಂಆರ್‌ಸಿ ಸಭಾಂಗಣದಲ್ಲಿ ಸೋಮವಾರ ಪತ್ರಕರ್ತರಾದ ಜೆ.ಶಿವಣ್ಣ, ಎಂ.ಮಹೇಶ್ ಭಗೀರಥ, ಡಿ.ಎನ್.ಮಹೇಂದ್ರ ದೇವನೂರು, ನಾಗರಾಜ್ ನವೀಮನೆ, ಎಂ.ಎನ್.ಬಸವರಾಜ್, ಸಿ.ದಿನೇಶ್, ವಿನೋದ್ ಮಹದೇವಪುರ, ಸತೀಶ್ ದೇಪುರ, ಮೋಹನ್ ಕಾಯಕ ಹಾಗೂ ಚಿರಂಜೀವಿ ಹುಲ್ಲಹಳ್ಳಿ ಅವರಿಗೆ ಶ್ರೀ ರಾಜಶೇಖರ ಕೋಟಿ ಸ್ಮರಣಾರ್ಥ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಇದಕ್ಕು ಮುನ್ನ ಕಾರ್ಯಕ್ರಮ ಉದ್ಘಾಟಿಸಿದ ಶಾಸಕ ಎ.ಆರ್.ಕೃಷ್ಣಮೂರ್ತಿ ಮಾತನಾಡಿ, ಮಾಧ್ಯಮ ಕ್ಷೇತ್ರ ಅತ್ಯಂತ ಸೂಕ್ಷ್ಮ ಕ್ಷೇತ್ರವಾಗಿದ್ದು, ಸಮಾಜಕ್ಕೆ ಒಳ್ಳೆಯ ಸಂದೇಶ ನೀಡುವ ಕೆಲಸ ಮಾಡಬೇಕಿದೆ. ಮಾಧ್ಯಮಗಳು ಸಮಾಜ ತಿದ್ದುವ ಜತೆಗೆ ಉತ್ತಮ ಮೌಲ್ಯ ಹಾಗೂ ನೈತಿಕತೆಯನ್ನು ಮೈಗೂಡಿಸಿಕೊಂಡು ಮುಂದೆ ಸಾಗಬೇಕು. ಈ ನಿಟ್ಟಿನಲ್ಲಿ ಮುದ್ರಣ ಮಾಧ್ಯಮ ಇಂದಿಗೂ ಓದುಗರ ವಿಶ್ವಾಸಾರ್ಹತೆ ಉಳಿಸಿಕೊಂಡಿದೆ ಎಂದು ಶ್ಲಾಘಿಸಿದರು.

ಪತ್ರಕರ್ತೆ ರಶ್ಮಿ ಕೋಟಿ ಮಾತನಾಡಿ, ಈಗ ಪ್ರತಿ ಕ್ಷೇತ್ರವೂ ತಲ್ಲಣಕ್ಕೆ ಒಳಗಾಗಿದೆ. ಟಿಆರ್‌ಪಿಯ ಭರದಲ್ಲಿ ವಿದ್ಯುನ್ಮಾನ ಮಾಧ್ಯಮ ವಿಶ್ವಾಸಾರ್ಹತೆ ಕಳೆದುಕೊಂಡಿದ್ದು, ಮುದ್ರಣ ಮಾಧ್ಯಮ ಮಾತ್ರ ವಿಶ್ವಾಸಾರ್ಹತೆ ಉಳಿಸಿಕೊಂಡಿದೆ. ನೈಜ ಪತ್ರಕರ್ತರ ಪಾತ್ರ ಹಿಂದೆಂದಿಗಿಂತಲೂ ಈಗ ಮುಖ್ಯವಾಗಿದೆ ಸಾಮಾಜಿಕ ಮಾಧ್ಯಮದಲ್ಲಿ ಬರುವುದೆಲ್ಲವನ್ನೂ ಫಾರ್ವರ್ಡ್ ಮಾಡದಿರುವ ಜವಾಬ್ದಾರಿಯನ್ನು ನಿರ್ವಹಿಸಬೇಕು ಎಂದು ಸಲಹೆ ನೀಡಿದರು.

ಮೈಸೂರು ವಿವಿ ಪ್ರಾಚ್ಯ ವಿದ್ಯಾ ಸಂಶೋಧನಾಲಯದ ವಿಶ್ರಾಂತ ನಿರ್ದೇಶಕ ಪ್ರೊ.ಎಸ್.ಶಿವರಾಜಪ್ಪ ಮಾತನಾಡಿ, ಶೋಷಿತರು ಹಾಗೂ ಜನಪರ ಕೆಲಸ ಮಾಡುತ್ತಾ ನೈಜ ಬದುಕು ನಡೆಸುವವರನ್ನು ಸಮಾಜ ಸದಾ ನೆನೆಯುತ್ತದೆ. ಅಂತಹ ಬದುಕು ರಾಜಶೇಖರ ಕೋಟಿ ಅವರದಾಗಿತ್ತು ಎಂದು ಸ್ಮರಿಸಿದರು.

ಕ್ಯಾಲೆಂಡರ್ ಬಿಡುಗಡೆ: ವಿಶ್ವಮಾನವ ಮೈಸೂರು ವಿಶ್ವವಿದ್ಯಾನಿಲಯ ನೌಕರರ ವೇದಿಕೆ ಹಾಗೂ ನವ ವಿಶ್ವಮಾನವ ಟ್ರಸ್ಟ್‌ನ 6ನೇ ವರ್ಷದ ಕ್ಯಾಲೆಂಡರ್ ಅನ್ನು ನಗರ ಉಪ ಪೊಲೀಸ್ ಆಯುಕ್ತ(ಡಿಸಿಪಿ) ಸುಂದರ್‌ರಾಜ್ ಬಿಡುಗಡೆ ಮಾಡಿದರು. ಹಾಗೆಯೇ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯು ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು.

ಹಿರಿಯ ಪತ್ರಕರ್ತ ಅಂಶಿ ಪ್ರಸನ್ನ ಕುಮಾರ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಮೈಸೂರು ವಿ.ವಿ. ಸಿಂಡಿಕೇಟ್ ಮಾಜಿ ಸದಸ್ಯ ಡಾ.ಈ.ಸಿ.ನಿಂಗರಾಜ್‌ಗೌಡ, ಮೈಸೂರು ವಕೀಲರ ಸಂಘದ ಮಾಜಿ ಕಾರ್ಯದರ್ಶಿ ಎಸ್. ಉಮೇಶ್, ಮೈಸೂರು ವಿವಿ ಸಮಾಜ ಕಾರ್ಯ ಅಧ್ಯಯನ ವಿಭಾಗದ ಪ್ರಾಧ್ಯಾಪಕಿ ಹೆಚ್.ಪಿ.ಜ್ಯೋತಿ, ದಿ ಮೈಸೂರು ಕೋ-ಆಪರೇಟಿವ್ ಬ್ಯಾಂಕ್ ಮಾಜಿ ನಿರ್ದೇಶಕ ಎಸ್.ಆರ್.ರವಿಕುಮಾರ್, ಡಾ.ಅಮ್ಮ ರಾಮಚಂದ್ರ ಡಾ.ಅಂಬಳೆ ಮಹದೇವ ಸ್ವಾಮಿ, ವಿಶ್ವಮಾನವ ಮೈಸೂರು ವಿಶ್ವವಿದ್ಯಾನಿಲಯ ನೌಕರರ ವೇದಿಕೆ ಅಧ್ಯಕ್ಷ ಆರ್.ವಾಸುದೇವ, ಉಪಾಧ್ಯಕ್ಷ ಭಾಸ್ಕರ್, ಕಾರ್ಯದರ್ಶಿ ವಿನೋದ್, ಖಜಾಂಚಿ ನವೀನ್‌ಕುಮಾರ್, ಯೋಗೇಶ್, ಎನ್.ಮಧುಸೂದನ್, ಚಿದಾನಂದ, ರವಿ, ಡಾ.ಬಿ.ಎಸ್. ದಿನಮಣಿ, ಮರಿಸ್ವಾಮಿ, ಸುಮಾರಾಣಿ ಮತ್ತಿತರರು ಉಪಸ್ಥಿತರಿದ್ದರು.

ನಮ್ಮ ಮೆಟ್ರೋ ಕೇಂದ್ರದ ಅಧೀನದಲ್ಲಿದೆ; ಅವರದೇ ದರ ಹೆಚ್ಚಳ ನಿರ್ಧಾರ

ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಪ್ರತಿಪಾದನೆ



ರಾಮಲಿಂಗಾರೆಡ್ಡಿ



ಬೆಂಗಳೂರು, ಫೆ.9(ಕೆಎಂಶಿ)– ಬೆಂಗಳೂರು ಮೆಟ್ರೋ ನಿಗಮ (ಬಿಎಂಆರ್‌ಸಿಎಲ್) ಕೇಂದ್ರ ಸರ್ಕಾರದ ಅಧೀನದಲ್ಲಿದ್ದು, ದರ ಹೆಚ್ಚಳ ತೀರ್ಮಾನ ಮಾಡಲು ಮೂರು ಜನರ ಒಂದು ಸಮಿತಿ ಇರುತ್ತದೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಇಂದಿಲ್ಲಿ ತಿಳಿಸಿದ್ದಾರೆ.

ಸಮಿತಿಗೆ ಕೇಂದ್ರದ ನಗರಾಭಿವೃದ್ಧಿ ಕಾರ್ಯದರ್ಶಿ ಮುಖ್ಯಸ್ಥರಾಗಿರುತ್ತಾರೆ. ಒಬ್ಬರು ರಾಜ್ಯ ಹಾಗೂ ಇಬ್ಬರು ಕೇಂದ್ರ ಸರ್ಕಾರದ ಅಧಿಕಾರಿಗಳು ಇರುತ್ತಾರೆ. ಸಮಿತಿ ಶಿಫಾರಸು ಮಾಡಿದ ಮೇಲೆ ಕೇಂದ್ರ ದರ ಏರಿಕೆ ಕುರಿತು ನಿರ್ಧಾರ ಮಾಡುತ್ತದೆ ಎಂದರು. ವಾಸ್ತವಾಂಶ ಹೀಗಿರುವಾಗ ಬಿಜೆಪಿಯವರು ಸುಳ್ಳು ಆರೋಪ ಮಾಡುತ್ತಾರೆ. ಬೆಂಗಳೂರಿನಿಂದ ಕೇಂದ್ರಕ್ಕೆ 3 ಲಕ್ಷ ಕೋಟಿ ರೂ. ಹೋಗುತ್ತದೆ.

ಮೆಟ್ರೋಗೆ ಕೇಂದ್ರ ಸಬ್ಸಿಡಿ ನೀಡಬೇಕು, ಈ ಕುರಿತು ಸಂಸತ್‌ನಲ್ಲಿ ಯಾವ ಸಂಸದರೂ ಮಾತನಾಡುವುದಿಲ್ಲ. ಕೇಂದ್ರ ಸರ್ಕಾರ ಮಾಡಿದ್ದೇ ಸರಿ ಎನ್ನುತ್ತಾರೆ. ಎಲ್ಲ ನಿರ್ಧಾರ ಅವರ ಕೈಯ್ಯಲ್ಲಿದೆ. ಒಳ್ಳೆಯ ಕೆಲಸವಾದರೆ ಪ್ರಧಾನಿ ನರೇಂದ್ರ ಮೋದಿ ಹೆಸರು ಹೇಳುತ್ತಾರೆ. ಆದರೆ, ಬೆಲೆ ಏರಿಕೆ ವಿಷಯ ಬಂದಾಗ ರಾಜ್ಯ ಸರ್ಕಾರ ಎನ್ನುತ್ತಾರೆ.

ಬಿಜೆಪಿಯವರು ಹುಟ್ಟು ಸುಳ್ಳುಗಾರರು, ಅವರಿಗೆ ತಿಂದ ಅನ್ನ ಅರಗುವುದಿಲ್ಲ. ಅವರುಗಳು ಡ್ರಾಮಾ ಮಾಸ್ಟರ್‌ಗಳು.

ನಮ್ಮ ಸಾಲದ ಬಗ್ಗೆ ಮಾತನಾಡುತ್ತಾರೆ. ಕೇಂದ್ರ ಸರ್ಕಾರದ ಸಾಲ ಎಷ್ಟಿದೆ. ಪ್ರತಿ ವರ್ಷ ಕೇಂದ್ರ ಸರ್ಕಾರ ಸಾಲ ಮಾಡುತ್ತಿದೆ. ಎರಡು ಲಕ್ಷ ಕೋಟಿ ಸಾಲವನ್ನ ಕೇಂದ್ರ ಮಾಡಿದೆ. ಖಜಾನೆ ಯಾರದು ಖಾಲಿಯಾಗಿದೆ ನೀವೇ ಹೇಳಿ ಎಂದು ಪ್ರಶ್ನಿಸಿದರು.

ಯುಜಿಡಿ ಕಾಮಗಾರಿಗೆ ಗುದ್ದಲಿ ಪೂಜೆ



ಕೆ.ಆರ್. ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಪಡುವಣ ರಸ್ತೆಯಿಂದ 5ನೇ ಕ್ರಾಸ್ ಮೂಲಕ ಹಾದುಹೋಗುವ ಸುಮಾರು 50 ಲಕ್ಷ ರೂ.ಗಳ ಯುಜಿಡಿ ಕಾಮಗಾರಿಗೆ ಶಾಸಕ ಟಿ.ಎಸ್. ಶ್ರೀವತ್ಸ ಗುದ್ದಲಿ ಪೂಜೆ ನೆರವೇರಿಸಿದರು. ಈ ವೇಳೆ ಕೆಆರ್ ಕ್ಷೇತ್ರದ ಅಧ್ಯಕ್ಷ ಯು.ಜಿ. ಗೋಪಾಲ್ ರಾಜೇ ಅರಸ್, ಪ್ರಧಾನ ಕಾರ್ಯದರ್ಶಿ ಜಯರಾಮ್, ನಗರ ಪಾಲಿಕೆ ಮಾಜಿ ಸದಸ್ಯ ಜಗದೀಶ್, ನಗರ ಬಿಜೆಪಿ ಪ್ರಧಾನ ಕಾರ್ಯದರ್ಶಿ ಬಿ.ಎಂ.ರಘು, ವಾರ್ಡಿನ ಬಿಜೆಪಿ ಅಧ್ಯಕ್ಷ ಶಿವಣ್ಣ ಚಂದ್ರಪ್ಪ, ಕೆಂಚ, ಮಧು, ರಮೇಶ್, ರಾಕೇಶ್ ಭಟ್, ಕವಿತಾ ಬಸವರಾಜು, ರಾಜಣ್ಣ ಹಾಗೂ ವಾರ್ಡಿನ ಪ್ರಮುಖ ಕಾರ್ಯಕರ್ತರು ಉಪಸ್ಥಿತರಿದ್ದರು.

ಸಾರ್ವಜನಿಕ ಪ್ರಕಟಣೆ

ಈ ಮೂಲಕ ಸಾರ್ವಜನಿಕರಲ್ಲಿ ತಿಳಿಯಪಡಿಸುವುದೇನೆಂದರೆ, ಬೆಂಗಳೂರು ನಗರ, ಹೆಚ್.ಬಿ.ಆರ್.ಲೇ ಔಟ್, 1ನೇ ಹಂತ, ಮನೆ ನಂಬರ್ 1027 ರಲ್ಲಿ ವಾಸವಾಗಿರುವ ಶ್ರೀ ಸಜ್ಜದ್ ಏಜಾಜ್ ಖಾನ್ ರವರ ಮಗನಾದ ಶ್ರೀ ಫಹದ್ ಸಜ್ಜದ್ ಖಾನ್ ರವರಿಗೆ ಸೇರಿದ ಷೆಡ್ಯೂಲ್ ಸ್ವತ್ತಾದ ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ಕಸಬಾ ಹೋಬಳಿ, ಸಿದ್ದಲಿಂಗಪುರ ಗ್ರಾಮದ, ಸರ್ವೆ ನಂಬರ್ 5 ರಲ್ಲಿ ವಿಸ್ತೀರ್ಣ 00 ಎಕರೆ 39 ಗುಂಟೆ ಖುಷ್ಕಿ ಜಮೀನನ್ನು ನನ್ನ ಕಕ್ಷಿದಾರರಾದ (1) ಶ್ರೀ ಫೈರೋಜ್ ಅಹಮದ್ ಬಿನ್ ಶ್ರೀ ಬಷೀರ್ ಅಹಮದ್, ಮನೆ ನಂಬರ್ 30/1, ನೆಲಮಹಡಿ, ರತನ್ ಸಿಂಗ್ ರಸ್ತೆ, ಫ್ರೇಸರ್ ಟೌನ್, ಬೆಂಗಳೂರು ಉತ್ತರ, ಬೆಂಗಳೂರು–560005, (ಮೋಬೈಲ್ ನ: 9880626969) (2) ಶ್ರೀ ಫಿರ್ದೋಸೆ ಇಸ್ಟೆಲ್ ಬಿನ್ ಶ್ರೀ ಎಸ್. ಇಸ್ಮಾಯಿಲ್, ನಂಬರ್ 18. ಮುರಗೇಶ್ ಮುದಲಿಯಾರ್ ರಸ್ತೆ, ಫ್ರೇಸರ್ ಟೌನ್, ಬೆಂಗಳೂರು ಉತ್ತರ, ಬೆಂಗಳೂರು–560005 ಹಾಗೂ (3) ಶ್ರೀ ಮೊಹಮದ್ ಆಮೀರ್ ಬೇಗ್ ಬಿನ್ ಮೊಹಮದ್ ಆಮೀರ್ ಬೇಗ್, ನಂಬರ್ 3/13. ಎಂ.ಐ.ಜಿ ಕಾಲೋನಿ, ಸಂಜೆಮ್ ಕೋ ಆಪರೇಟಿವ್ ಸೋಸೈಟಿ, ವಿನೋಬ ಭಾವೆ ನಗರ, ಪೈಪ್ ರಸ್ತೆ, ಮಹರಾಷ್ಟ್ರ –400070 (Mobile No: 9022641213) ರವರುಗಳು ಕ್ರಯಕ್ಕೆ ಪಡೆಯಲು ಇಚ್ಛಿಸಿರುತ್ತಾರೆ.

ಆದಾಗಿ, ಸದರಿ ಷೆಡ್ಯೂಲ್ ಸ್ವತ್ತಿಗೆ ಸಂಬಂಧಿಸಿದಂತೆ ಯಾರಿಗಾದರೂ ಹಕ್ಕು ಭಾದ್ಯತೆಗಳು, ಹಿತಾಸಕ್ತಿ ಅಥವಾ ಆಕ್ಷೇಪಣೆ ಇದ್ದಂತಹ ಪಕ್ಷದಲ್ಲಿ ಈ ಸಾರ್ವಜನಿಕ ತಿಳುವಳಿಕೆಯು ಪತ್ರಿಕೆಯಲ್ಲಿ ಪ್ರಕಟವಾದ ದಿನದಿಂದ 10 (ಹತ್ತು) ದಿನಗಳ ಒಳಗಾಗಿ ತಮ್ಮ ಆಕ್ಷೇಪಣೆಯನ್ನು ಲಿಖಿತವಾಗಿ ದಾಖಲೆ ಸಹಿತ ನಮ್ಮ ಕಕ್ಷಿದಾರರಿಗೆ ಅಥವಾ ನಮಗೆ ತಿಳಿಸತಕ್ಕದ್ದು, ಒಂದು ವೇಳೆ ಸದರಿ ಅವಧಿಯೊಳಗೆ ಯಾರಿಂದಲೂ ಯಾವುದೇ ವಿಧವಾದ ಆಕ್ಷೇಪಣೆ ಬಾರದಿದ್ದಂತಹ ಪಕ್ಷದಲ್ಲಿ ಸದರಿ ಷೆಡ್ಯೂಲ್ ಸ್ವತ್ತಿನಲ್ಲಿ ಬೇರೆ ಯಾರಿಗೂ ಯಾವುದೇ ಹಕ್ಕು ಭಾದ್ಯತೆಗಳು, ಹಿತಾಸಕ್ತಿ ಅಥವಾ ಆಕ್ಷೇಪಣೆ ಇಲ್ಲವೆಂದು ಭಾವಿಸಿ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಕ್ರಯಪತ್ರ ಬರೆಸಿಕೊಳ್ಳುತ್ತಾರೆ. ನಂತರ ಬಂದಂತಹ ಆಕ್ಷೇಪಣೆಗಳು ನನ್ನ ಕಕ್ಷಿದಾರರನ್ನು ಬದ್ಧಪಡಿಸುವುದಿಲ್ಲವೆಂದು ಹಾಗೂ ಅದರಿಂದ ಉಂಟಾಗುವ ನಷ್ಟಗಳಿಗೆ ನೀವುಗಳೇ ಜವಾಬ್ದಾರರಾಗಿರುತ್ತೀರಿ ಎಂದು ಈ ಮೂಲಕ ತಿಳಿಯಪಡಿಸಲಾಗಿದೆ.

ಷೆಡ್ಯೂಲ್ ಸ್ವತ್ತಿನ ವಿವರ

ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ಕಸಬಾ ಹೋಬಳಿ, ಸಿದ್ದಲಿಂಗಪುರ ಗ್ರಾಮದ, ಸರ್ವೆ ನಂಬರ್ 5 ರಲ್ಲಿ ವಿಸ್ತೀರ್ಣ 00 ಎಕರೆ 39 ಗುಂಟೆ ಖುಷ್ಕಿ ಜಮೀನಿಗೆ ಚಕ್ಕುಬಂದಿ:– ಪೂರ್ವಕ್ಕೆ : ಮೈಸೂರು–ಬೆಂಗಳೂರು ರಸ್ತೆ, ಪಶ್ಚಿಮಕ್ಕೆ: ಸರ್ವೆ ನಂಬರ್ 6, ಉತ್ತರಕ್ಕೆ: ಸರ್ವೆ ನಂಬರ್ 6, ದಕ್ಷಿಣಕ್ಕೆ : ಸರ್ವೆ ನಂಬರ್ 4

Sd/- MAHADEVASWAMY.P
B.A.L, LL.B, Advocate
BRUNDAVANA LAW ASSOCIATES
No: #58, 1st Floor, 6th Cross, 17th Main, Saraswathipuram, Mysore-570009,
Mob: 9739254292

ದಿನಾಂಕ: 09.02.2026

ಸಾರ್ವಜನಿಕ ಪ್ರಕಟಣೆ

ಕೆಳಕಂಡ ಸ್ವತ್ತಿಗೆ ಸಂಬಂಧಪಟ್ಟಂತೆ ನಮ್ಮ ಕಕ್ಷಿದಾರರುಗಳಾದ ಭಾಗ್ಯಮ್ಮ ಮತ್ತು ಇತರರು ಪ್ರತಿವಾದಿಗಳಾದ ರೇಟ್ ನಂಜಯ್ಯ ರವರ ಮಗನಾದ ಕೆಂಪರಾಜು ಮತ್ತು 2ನೇರವರಾದ ಚಿಕ್ಕಗಂಡು ಹಾಗೂ ಲೇಟ್ ಕುರಿಬೋಗಯ್ಯ ರವರ ಮಗನಾದ ನಂಜಯ್ಯರವರ ವಿರುದ್ಧ ಮೈಸೂರಿನ 7ನೇ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ, ಹಿರಿಯ ಶ್ರೇಣಿ ಅಸಲು ದಾವಾ ಸಂಖ್ಯೆ 179/2026 ರಲ್ಲಿ ವಿಭಾಗ ಮತ್ತು ಪ್ರತ್ಯೇಕ ಸ್ವಾಧೀನತೆ ಕೋರಿ ದಾವೆಯನ್ನು ಸಲ್ಲಿಸಿದ್ದು, ಸದರಿ ದಾವೆಗೆ ಸಂಬಂಧಿಸಿದಂತೆ ಘನ ನ್ಯಾಯಾಲಯವು ತಡೆಯಾಜ್ಞೆಯನ್ನು ನೀಡಿರುತ್ತದೆ. ಈ ಸಂಬಂಧ ಸದರಿ ಕೆಳಕಂಡ: ಸ್ವತ್ತಿಗೆ ಸಂಬಂಧಪಟ್ಟಂತೆ ನ್ಯಾಯಾಲಯದಲ್ಲಿ ದಾವೆ ಇರುವ ಕಾರಣ ಸದರಿ ಕೆಳಕಂಡ ಸ್ವತ್ತುಗಳಿಗೆ ಸಂಬಂಧಪಟ್ಟಂತೆ ಯಾರೂ ಸಹ ಕ್ರಯ ನೊಂದಣಿ ಇನ್ನಿತರೆ ಯಾವುದೇ ವ್ಯವಹಾರ ಮಾಡದಂತೆ ಈ ಮೂಲಕ ತಿಳಿಯತಕ್ಕದ್ದು.

ಷೆಡ್ಯೂಲ್ ಸ್ವತ್ತಿನ ವಿವರ

ಐಟಂ ನಂ. 1 ಮೈಸೂರು ತಾಲ್ಲೂಕು, ಜಯಪುರ ಹೋಬಳಿ, ದಡದಹಳ್ಳಿ ಗ್ರಾಮಕ್ಕೆ ಸೇರಿದ ಸರ್ವೆ ನಂ. 76/1 ಹೊಸ ಸರ್ವೆ ನಂ. 76/7 ರಲ್ಲಿ 2 ಎಕರೆ 09 ಗುಂಟೆ ಜಮೀನಿನ ಪೈಕಿ 0–20 ಗುಂಟೆ ಜಮೀನಿಗೆ ಚಕ್ಕುಬಂದಿ:– ಪೂರ್ವಕ್ಕೆ: ಸರ್ಕಾರಿ ವಾಡೆ ; ಪಶ್ಚಿಮಕ್ಕೆ: ಸರ್ಕಾರಿ ಓಣಿ ; ಉತ್ತರಕ್ಕೆ: ಪುಟ್ಟಮ್ಮ ರವರ ಜಮೀನು ; ದಕ್ಷಿಣಕ್ಕೆ: ಸರ್ವೆ ನಂ. 76/1ರ ಜಮೀನು.

ಐಟಂ ನಂ. 2: ಮೈಸೂರು ತಾಲ್ಲೂಕು, ಜಯಪುರ ಹೋಬಳಿ, ದಡದಹಳ್ಳಿ ಗ್ರಾಮಕ್ಕೆ ಸೇರಿದ ಸರ್ವೆ ನಂ. 76/1ರಲ್ಲಿ 0–10 ಗುಂಟೆ ಜಮೀನಿಗೆ ಚಕ್ಕುಬಂದಿ:– ಪೂರ್ವಕ್ಕೆ: ಸರ್ಕಾರಿ ವಾಡೆ ; ಪಶ್ಚಿಮಕ್ಕೆ: ಸರ್ಕಾರಿ ಓಣಿ ; ಉತ್ತರಕ್ಕೆ: ಪುಟ್ಟಶೆಟ್ಟಿರವರ ಜಮೀನು ; ದಕ್ಷಿಣಕ್ಕೆ: ಸರ್ವೆ ನಂ. 76/7 ರ ಜಮೀನು.

Sd/- S. Dinesh Gowda, B.A.L., LL.B., Advocate, KAR 1719/2009, No. 8, Block-13, Somanathanagara, Dattagalli, Mysuru-570 033. Mob: 9886809142
Date: 6-2-2026

ರಿಟರ್ನಿಂಗ್ ಆಫೀಸರ್, ಪದಕಿ ಸೌಹಾರ್ದ ಸಹಕಾರಿ ಸಂಘ ನಿಯಮಿತ,
ನಂ.19/3, 1 ನೇ ಮಹಡಿ, ಎನ್.ಎಸ್.ಪದಕಿ ಕಟ್ಟಡ, ಹನುಮಂತರಾವ್ ರಸ್ತೆ, ಮೈಸೂರು–570001.
ರವರ ಕಾರ್ಯಾಲಯ

ಪತ್ರಿಕಾ ಪ್ರಕಟಣೆ

ಪದಕಿ ಸೌಹಾರ್ದ ಸಹಕಾರಿ ಸಂಘ ನಿಯಮಿತ, ನಂ.19/3, 1 ನೇ ಮಹಡಿ, ಎನ್.ಎಸ್.ಪದಕಿ ಕಟ್ಟಡ, ಹನುಮಂತರಾವ್ ರಸ್ತೆ, ಮೈಸೂರು ಈ ಸಹಕಾರಿಯ ಆಡಳಿತ ಮಂಡಳಿಗೆ ಚುನಾವಣಾ ದಿನಾಂಕದಿಂದ ಮುಂದಿನ 5 ವರ್ಷಗಳ ಅವಧಿಗೆ ಚುನಾವಣೆ ನಡೆಸಲು ದಿನಾಂಕ:22.02.2026 ರ ಭಾನುವಾರ ಬೆಳಿಗ್ಗೆ 09–00 ಗಂಟೆಯಿಂದ ಸಂಜೆ 4–00 ಗಂಟೆಯವರೆಗೆ ಸಹಕಾರಿಯ ಕಛೇರಿಯಲ್ಲಿ ನಡೆಸಲು ನಿಗಧಿಪಡಿಸಲಾಗಿರುತ್ತದೆ. ಚುನಾವಣೆಯಲ್ಲಿ ಸ್ಪರ್ಧಿಸಲು ಇಚ್ಛಿಸುವವರು ಭರ್ತಿ ಮಾಡಿದ ನಾಮಪತ್ರಗಳನ್ನು ದಿನಾಂಕ: 09.02.2026 ರಿಂದ ದಿ:14.02.2026 ರವರೆಗೆ ಬೆಳಿಗ್ಗೆ 11–00 ಗಂಟೆಯಿಂದ ಮಧ್ಯಾಹ್ನ 3–00 ಗಂಟೆಯವರೆಗೆ ಸಹಕಾರಿಯ ಕಛೇರಿಯಲ್ಲಿ ರಿಟರ್ನಿಂಗ್ ಆಫೀಸರ್‌ರವರಿಗೆ ಸಲ್ಲಿಸುವುದು. ನಾಮಪತ್ರಗಳ ಪರಿಶೀಲನೆಯನ್ನು ದಿ:15.02.2026 ರಂದು ಬೆಳಿಗ್ಗೆ 11.00 ಗಂಟೆಗೆ ನಡೆಸಲಾಗುವುದು. ಚುನಾವಣಾ ವೇಳಾಪಟ್ಟಿಯನ್ನು ಎಲ್ಲಾ ಅರ್ಹ ಸದಸ್ಯರುಗಳಿಗೂ ಈಗಾಗಲೇ ಸಾಮಾನ್ಯ ಅಂಚೆ ಮೂಲಕ ಮತ್ತು ಮುದ್ದಾಂ ಕಳುಹಿಸಲಾಗಿದ್ದು, ಹೆಚ್ಚಿನ ವಿವರಗಳಿಗಾಗಿ ಸಹಕಾರಿಯ ಕಾರ್ಯದರ್ಶಿ / ರಿಟರ್ನಿಂಗ್ ಅಧಿಕಾರಿಯನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಲು ಕೋರಲಾಗಿದೆ.

ಸಹಿ/– ಆರ್.ಪೂರ್ಣಿಮ,
ರಿಟರ್ನಿಂಗ್ ಆಫೀಸರ್,
ಪದಕಿ ಸೌಹಾರ್ದ ಸಹಕಾರಿ ಸಂಘ ನಿ, ಮೈಸೂರು.